ಸಂಪುಟ: 05 ಸಂಚಿಕೆ: 74 ಪುಟಗಳು: 08 ಬುಧವಾರ 28 ಮೇ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ತನ್ನ ಮನಸ್ಸನ್ನು ಗೆದ್ದವನಿಗೆ, ಮನಸ್ಸೇ ಅತ್ಯುತ್ತಮ ಸ್ನೇಹಿ. ಆದರೆ ಮನಸ್ಸನ್ನು ಗೆಲ್ಲುವಲ್ಲಿ ವಿಫಲವಾದವನಿಗೆ, ಮನಸ್ಸೇ ಅತ್ಯಂತ ದೊಡ್ಡ ಶತ್ರು.

## ಬಿಜೆಪಿಗೆ ಚುರುಕು ಮುಟ್ಟಿಸಲು ರಾಧಾ ಮೋಹನ್ ಎಂಟ್ರಿ!

• ಉದಯವಾಹಿನಿ, ಬೆಂಗಳೂರು

ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಎರಡು ವರ್ಷಗಳು ತುಂಬಿದೆ. ಆದರೆ ಕಳೆದ ಎರಡು ವರ್ಷಗಳಲ್ಲಿ ವಿರೋಧ ಪಕ್ಷ ಬಿಜೆಪಿ ನಿರೀಕ್ಷಿತ ಮಟ್ಟದಲ್ಲಿ ಆಡಳಿತ ಪಕ್ಷಕ್ಕೆ ಬಿಸಿ ಮುಟ್ಟಿಸುವಲ್ಲಿ ಯಶಸ್ವಿ ಆಗಿಲ್ಲ ಎಂಬ ಆರೋಪಗಳು ಇವೆ. ಪಕ್ಷದಲ್ಲಿರುವ ಆಂತರಿಕ ಗೊಂದಲ, ನಾಯಕರ ನಡುವಿನ ಸಮನ್ವಯತೆಯ ಕೊರತೆ ಇದಕ್ಕೆ ಬಹುಮುಖ್ಯ ಕಾರಣವಾಗಿದೆ. ಇದೀಗ ರಾಷ್ಟ್ರೀಯ ನಾಯಕರು ಎಚ್ಚೆತ್ತುಕೊಂಡಿದ್ದು, ರಾಜ್ಯ ಬಿಜೆಪಿಯಲ್ಲಿ ಮತ್ತಷ್ಟು ಚುರುಕು ಮೂಡಿಸುವ ನಿಟ್ಟಿನಲ್ಲಿ ರಾಜ್ಯ ಬಿಜೆಪಿ ಉಸ್ತುವಾರಿ ರಾಧಾ ಮೋಹನ್ ಅಗರ್ವಾಲ್ ನೇತೃತ್ವದಲ್ಲಿ ಸರಣಿ ಸಭೆಗಳನ್ನು ಹಮ್ಮಿಕೊಳ್ಳಲಾಗಿದೆ. ರಾಜ್ಯ ಉಸ್ತುವಾರಿ ನೇತೃತ್ವದಲ್ಲಿ ಪಕ್ಷಕ್ಕೆ ಚುರುಕು ಮುಟ್ಟಿಸುವ ಹಾಗೂ ಮುಂದಿನ ಕಾರ್ಯಕ್ರಮಗಳನ್ನು ರೂಪಿಸುವ ನಿಟ್ಟಿನಲ್ಲಿ 3 ದಿನಗಳ ಕಾಲ ಸಭೆ ನಡೆಯಲಿದೆ. ಮಂಗಳವಾರ ರಾಜ್ಯ ಬಿಜೆಪಿ ನಾಯಕರ ಜೊತೆಗೆ ಅಗರ್ವಾಲ್ ಪ್ರತ್ಯೇಕ ಸಭೆಯನ್ನು ನಡೆಸಲಿದ್ದಾರೆ. ಪಕ್ಷದ ಮುಂದಿನ ಕಾರ್ಯಕ್ರಮಗಳು ಹಾಗೂ ಹಿಂದಿನ ವೈಫಲ್ಯಗಳ ಬಗ್ಗೆ ಅಭಿಪ್ರಾಯಗಳನ್ನು ಪಡೆದುಕೊಳ್ಳಲಿದ್ದಾರೆ.

## ಪಿಎಂ-ಇ ಡ್ರೈವ್ ವಾಹನಗಳಿಗೆ ಸಾರಿಗೆ ಇಲಾಖೆಯಿಂದಲೇ ನೇಮಕ

• ಉದಯವಾಹಿನಿ, ಬೆಂಗಳೂರು

ಪಿಎಂ ಇ-ಡ್ರೈವ್ ಯೋಜನೆಯಡಿ ಬೆಂಗಳೂರಿಗೆ ಬರಲಿರುವ ನಾಲ್ಕೂವರೆ ಸಾವಿರ ವಿದ್ಯುತ್ ಚಾಲಿತ ಬಸ್‌ಗಳಿಗೆ ಸಾರಿಗೆ ಇಲಾಖೆಯಿಂದಲೇ ಚಾಲಕ-ನಿರ್ವಾಹಕರನ್ನು ನೇಮಕ ಮಾಡುವಂತೆ ಕೇಂದ್ರ ಸರಕಾರಕ್ಕೆ ಮನವಿ ಮಾಡಲಾಗುವುದು ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹೇಳಿದರು. ಕರ್ನಾಟಕ ರಾಜ್ಯ ಸಾರಿಗೆ ಸಂಸ್ಥೆಯ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ನೌಕರರ ಸಂಘವು ಮಂಗಳವಾರ ಪುರಭವನದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಸಾಧಕರಿಗೆ ಡಾ.ಬಿ.ಆರ್. ಅಂಬೇಡ್ಕರ್ ಹಾಗೂ ಸಾರಿಗೆ ರತ್ನ ಪ್ರಶಸ್ತಿ ನೀಡಿ ಅವರು ಮಾತನಾಡಿದರು. ಈ ಹಿಂದೆ ಬಸ್‌ಗಳ ಖರೀದಿಗೆ ರಾಜ್ಯ ಸರಕಾರ ಶೇ. 25ರಷ್ಟು ಹಣ ಪಾವತಿಸಿದರೆ, ನೇರವಾಗಿ ಸಂಸ್ಥೆಗೆ ಬಸ್‌ಗಳನ್ನು ನೀಡಲಾಗುತ್ತಿತ್ತು. ಆದರೆ, ಸದ್ಯ ಬಸ್‌ಗಳದರ ಏರಿಕೆಯಿಂದ ಕೇಂದ್ರ ಸರಕಾರ ನಿಯಮಗಳಲ್ಲಿ ಬದಲಾವಣೆ ಮಾಡಿದೆ.

## ಅರಣ್ಯ ಇಲಾಖೆ ರಾಯಭಾರಿಯಾಗಿ ಅನಿಲ್ ಕುಂಬ್ಳೆ ನೇಮಕ

• ಉದಯವಾಹಿನಿ, ಬೆಂಗಳೂರು

'ಖ್ಯಾತ ಕ್ರೀಡಾಪಟು, ಮಾಜಿ ಕ್ರಿಕೆಟಿಗ ಅನಿಲ್ ಕುಂಬ್ಳೆ ಅವರನ್ನು ರಣ್ಯ ಮತ್ತು ವನ್ಯಜೀವಿ ರಾಯಭಾರಿಯಾಗಿ ನಾಮ ನಿರ್ದೇಶನ ಮಾಡಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ವರ್ಷ ತುಂಬಿದ ಸಂದರ್ಭದಲ್ಲಿ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆ ಕರ್ನಾಟಕ ವನ್ಯಜೀವಿ ಮಂಡಳಿಯ ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸಿದ ಅನುಭವ ಇರುವ ಅನಿಲ್ ಕುಂಬ್ಳೆ ವಿಶ್ವದಾದ್ಯಂತ ಖ್ಯಾತಿ ಹೊಂದಿದ್ದು, ಅರಣ್ಯ ಸಂರಕ್ಷಣೆ, ಅರಣ್ಯ ಸಂವರ್ಧನೆ, ವೃಕ್ಷ ಸಂರಕ್ಷಣೆ, ವನ್ಯಜೀವಿ ಸಂರಕ್ಷಣೆಯ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಿದ್ದಾರೆ ಎಂದರು. ಅನಿಲ್ ಕುಂಬ್ಳೆ ಅವರಿಗೆ ವನ್ಯಜೀವಿಗಳ ಬಗ್ಗೆ ಅಪಾರ ಕಾಳಜಿ ಇದೆ. ಅರಣ್ಯದ ಬಗ್ಗೆ ಪ್ರೀತಿ ಇದೆ. ಹೀಗಾಗಿ ಅವರು ಯಾವುದೇ ಸಂಭಾವನೆ ಪಡೆಯದೆ ರಾಯಭಾರಿ ಆಗಲು ಸಮ್ಮತಿಸಿದ್ದಾರೆ ಎಂದು ಈಶ್ವರ ಖಂಡ್ರೆ ಸ್ಪಷ್ಟಪಡಿಸಿದರು.


## ಆರೋಪ ಮುಕ್ತಿ ಕೋರಿದ್ದ 15 ಆರೋಪಿಗಳ ಅರ್ಜಿ ವಜಾ

• ಉದಯವಾಹಿನಿ, ಕಲಬುರಗಿ


ನಗರದ ಕೆಜಿ ಹಳ್ಳಿ ಮತ್ತು ಡಿಜೆ ಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ 2020ರ ಆ.11 ರಂದು ರಾತ್ರಿ ನಡೆದಿದ್ದ ಗಲಭೆಗೆ ಸಂಬಂಧಿಸಿದಂತೆ ಪ್ರಕರಣದಿಂದ ಮುಕ್ತಿ ಕೋರಿ 15 ಮಂದಿ ಆರೋಪಿಗಳು ಸಲ್ಲಿಸಿದ್ದ ಅರ್ಜಿಯನ್ನು ಕರ್ನಾಟಕ ಹೈಕೋರ್ಟ್ ವಜಾಗೊಳಿಸಿದೆ. ಆರೋಪಿಗಳಾದ ಸೈಯದ್ ಅಬ್ಬಾಸ್ ಸೇರಿ 14 ಮಂದಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಶ್ರೀನಿವಾಸ ಹರೀಶ್ ಕುಮಾರ್ ಮತ್ತು ಕೆ.ಎಸ್. ಹೇಮಲೇಖಾ ಅವರಿದ್ದ ವಿಭಾಗೀಯ ಪೀಠ ಈ ಆದೇಶ ಮಾಡಿದೆ. ಅಲ್ಲದೆ, ಅರ್ಜಿದಾರರು ತಮ್ಮ ವಿರುದ್ಧದ ಆರೋಪ ಕೈಬಿಡುವಂತೆ ಕೋರಿ ಸಲ್ಲಿಸಿದ್ದ ಅರ್ಜಿ ಕುರಿತಂತೆ ವಿಚಾರಣಾ ನ್ಯಾಯಾಲಯ ಮಧ್ಯಂತರ ಆದೇಶ ನೀಡಿದೆ. ಅಂತಹ ಆದೇಶ ಪ್ರಶ್ನಿಸಿ ಕ್ರಿಮಿನಲ್ ಮೇಲ್ಮನವಿ ಅರ್ಜಿ ಮೂಲಕ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಬಹುದು. ಅದಕ್ಕೆ ಬದಲಾಗಿ ಅರ್ಜಿದಾರರು ಅರ್ಜಿ ಸಲ್ಲಿಸಿದ್ದು, ಅದು ವಿಚಾರಣೆಗೆ ಅರ್ಹವಲ್ಲ ಎಂದು ಪೀಠ ತಿಳಿಸಿದೆ. ಆರೋಪ ಪಟ್ಟಿಯಲ್ಲಿನ ಸಾಕ್ಷ್ಯಾಧಾರಗಳನ್ನು ಪರಿಶೀಲಿಸಿದ ನ್ಯಾಯಪೀಠ, ಅರ್ಜಿದಾರರ ವಿರುದ್ಧದ ಆರೋಪವು ಸಾರ್ವಜನಿಕರಲ್ಲಿ ಭೀತಿಯನ್ನುಂಟು ಮಾಡುವ ಉದ್ದೇಶದಿಂದ ಜಾರಿ ಮಾಡಿರುವ ಯುಎಪಿಎ ಸೆಕ್ಷನ್ 15ರ ವ್ಯಾಪ್ತಿಗೆ ಬರಲಿದೆ. ಅರ್ಜಿದಾರರನ್ನು ಪ್ರಕರಣದಿಂದ ಬಿಡುಗಡೆ ಮಾಡಬೇಕಾದ ಸನ್ನಿವೇಶದಲ್ಲಿಆರೋಪಿಸಲಾದ ಸಾಕ್ಷ್ಯಾಧಾರಗಳನ್ನು ನ್ಯಾಯಾಲಯ ಪರಿಗಣಿಸುವುದಕ್ಕೆ ಅವಕಾಶವಿರಲಿದೆ. ಹಾಗಾಗಿ, ಅರ್ಜಿ ಸಂಬಂಧ ಮಧ್ಯಪ್ರವೇಶಿಸಬೇಕಾದ ಯಾವುದೇ ಅಪರೂಪದ ಸನ್ನಿವೇಶ ಎದುರಾಗಿರುವ ಕುರಿತು ಅರ್ಜಿದಾರರು ಕೋರಿಲ್ಲ, ಎಂದು ಸ್ಪಷ್ಟಪಡಿಸಿರುವ ಪೀಠ, ಅರ್ಜಿಯನ್ನು ವಜಾಗೊಳಿಸಿದೆ.

# ಹೆಬ್ಬಾರ್, ಎಸ್‌ಟಿಎಸ್ ಕಿಕ್‌ಔಟ್

■ ಎಸ್.ಟಿ.ಸೋಮಶೇಖರ್, ಶಿವರಾಮ್ ಹೆಬ್ಬಾರ್‌ಗೆ ಶಾಕ್ ■ ಬಿಜೆಪಿಯಿಂದ ಉಚ್ಚಾಟನೆ ■ ಪಕ್ಷ ವಿರೋಧಿ ಚಟುವಟಿಕೆಗಳ ಆರೋಪದ ಹಿನ್ನಲೆ ಬಿಜೆಪಿ ಹೈಕಮಾಂಡ್ ಕ್ರಮ ■ ಆರು ವರ್ಷಗಳ ಕಾಲ ಉಚ್ಚಾಟನೆ ಮಾಡಿ ಆದೇಶ ಹೊರಡಿಸಿದ ಹೈಕಮಾಂಡ್





• ಉದಯವಾಹಿನಿ, ಬೆಂಗಳೂರು

ಎಸ್.ಟಿ.ಸೋಮಶೇಖರ್ ಹಾಗೂ ಶಿವರಾಮ್ ಹೆಬ್ಬಾರ್ ಅವರನ್ನು ಬಿಜೆಪಿ ಪಕ್ಷದಿಂದ ಆರು ವರ್ಷಗಳ ಕಾಲ ಉಚ್ಚಾಟನೆ ಮಾಡಿದೆ. ಬಿಜೆಪಿ ಕೇಂದ್ರೀಯ ಶಿಸ್ತು ಸಮಿತಿ ನಿರ್ಧಾರ ಕೈಗೊಂಡಿದೆ.

ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ನೀಡುತ್ತಿದ್ದ ಮಾಜಿ ಸಚಿವ ಎಸ್.ಟಿ . ಸೋಮಶೇಖರ್ ಹಾಗೂ ಶಾಸಕ ಶಿವರಾಂ ಹೆಬ್ಬಾರ್ ಅವರನ್ನು ಬಿಜೆಪಿಯಿಂದ ಉಚ್ಚಾಟಿಸಿ ಆದೇಶ ಹೊರಡಿಸಲಾಗಿದೆ. ಇಬ್ಬರೂ ಸಹ ಹಲವು ದಿನಗಳಿಂದ ಕಾಂಗ್ರೆಸ್ ನಾಯಕರಿಗೆ ಬೆಂಬಲಿಸುವ ಹಾಗೂ ಬಿಜೆಪಿ ಪಕ್ಷವನ್ನು ನಿಂದಿಸುವ ಮೂಲಕ ಪಕ್ಷದ ಮುಜುಗರಕ್ಕೆ ಕಾರಣವಾಗಿದ್ದರು. ಕಳೆದ ವಿಧಾನ ಸಭಾ ಪರಿಷತ್ ಸದಸ್ಯರ ಚುನಾವಣೆ ವೇಳೆಯೂ ಸಹ ಇಬ್ಬರೂ ವಿಪ್ ಉಲ್ಲಂಘಿಸಿ ಕಾಂಗ್ರೆಸ್‌ಗೆ ಮತ ಹಾಕಿದ್ದರು. ಹೀಗಾಗಿ ಇವರ ವಿರುದ್ಧ ರಾಜ್ಯ ಬಿಜೆಪಿ ಹೈಕಮಾಂಡ್‌ಗೆ ದೂರು ನೀಡಿತ್ತು. ಒಂದು ವರ್ಷದ ಬಳಿಕ ದೂರನ್ನು ಪರಿಗಣಿಸಿರುವ ಬಿಜೆಪಿ ಇಬ್ಬರನ್ನೂಸಹ ಉಚ್ಚಾಟಿಸಿ ಆದೇಶ ಹೊರಡಿಸಿದೆ.

ಬೆಂಗಳೂರಿನ ಯಶವಂತ ಪುರ ಕ್ಷೇತ್ರದ ಶಾಸಕ ಎಸ್.ಟಿ. ಸೋಮಶೇಖರ್ ಹಾಗೂ ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ಕ್ಷೇತ್ರದ ಶಾಸಕ ಶಿವರಾಮ್ ಹೆಬ್ಬಾರ್ ಈ ಹಿಂದೆ ಕಾಂಗ್ರೆಸ್ ತೊರೆದು ಬಿಜೆಪಿ ಸೇರಿದ್ದರು. ಬಿಜೆಪಿ ಸರ್ಕಾರದ ಅವಧಿಯಲ್ಲಿ ಶಿವರಾಮ್ ಹೆಬ್ಬಾರ್ ಕಾರ್ಮಿಕ ಸಚಿವರಾಗಿ ಹಾಗೂ ಸೋಮಶೇಖರ್ ಸಹಕಾರ ಸಚಿವರಾಗಿ ಕಾರ್ಯನಿರ್ವಹಿಸಿದ್ದರು. 2023ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಯಿಂದ ಸ್ಪರ್ಧಿಸಿ ಗೆದ್ದಿದ್ದರು. ಆದರೆ ನಂತರದಲ್ಲಿ ಇಬ್ಬರೂ ಶಾಸಕರು ಕಾಂಗ್ರೆಸ್ ಪಕ್ಷದ ಜೊತೆ ಹೆಚ್ಚು ಗುರುತಿಸಿಕೊಳ್ಳುತ್ತಿದ್ದರು. ಇದು ರಾಜ್ಯ ಬಿಜೆಪಿ ನಾಯಕರ ಅಸಮಾಧಾನಕ್ಕೆ ಕಾರಣವಾಗಿತ್ತು. ಹೀಗಾಗಿ ಪಕ್ಷದಿಂದ ಉಚ್ಚಾಟಿಸುವಂತೆ ಕೇಂದ್ರ ಸಮಿತಿಗೆ ಬಿಜೆಪಿ ಶಿಸ್ತು ಸಮಿತಿ ವರದಿ ನೀಡಿತ್ತು.

**ಡಿಸಿಎಂ ಡಿಕೆಶಿ ವ್ಯಂಗ್ಯ!:** ಶಾಸಕರಾದ ಎಸ್.ಟಿ ಸೋಮಶೇಖರ್ ಹಾಗೂ ಶಿವರಾಮ್ ಹೆಬ್ಬಾರ್ ಅವರನ್ನು ಬಿಜೆಪಿ ಉಚ್ಚಾಟನೆ ಮಾಡಿರುವ ಬಗ್ಗೆ ಡಿಸಿಎಂ ಡಿ.ಕೆ.ಶಿವಕುಮಾರ್ ಪ್ರತಿಕ್ರಿಯಿಸಿ, 'ಅವರಿಬ್ಬರು ವಿಧಾನಸೌಧದಲ್ಲಿ ಯಾರನ್ನೂ ರೇಪ್ ಮಾಡಿರಲಿಲ್ಲ ಅಲ್ವಾ ಅವರೇನು ಯಾರಿಗೂ ಎಚ್‌ಐವಿ ಇಂಜೆಕ್ಷನ್ ಚುಚ್ಚಿರಲಿಲ್ಲ ಅಲ್ವಾ ಮುತ್ತು ರತ್ನಗಳನ್ನು ಪಕ್ಷದಲ್ಲಿ ಇಟ್ಟುಕೊಳ್ಳಲಿ ಎಂದು ಪರೋಕ್ಷವಾಗಿ ಮುನಿರತ್ನ ಏಕೆ ಉಚ್ಚಾಟನೆ ಆಗಿಲ್ಲ ಎಂದು ಪ್ರಶ್ನಿಸಿದರು. ಎಸ್ ಟಿ ಸೋಮಶೇಖರ್ ಹಾಗೂ ಶಿವರಾಂ ಹೆಬ್ಬಾರ್ ಬಿಜೆಪಿಯಿಂದ ಅಮಾನತು ಮಾಡಿದ ವಿಚಾರವಾಗಿ ಮಾತನಾಡಿದ ಈಶ್ವರ್ ಖಂಡ್ರೆ, ಬಿಜೆಪಿಗೆ ಸತ್ಯ ಹೇಳಿದರೆ ಆಗಿ ಬರಲ್ಲ. ಸರ್ಕಾರ ಒಳ್ಳೆ ಕೆಲಸ ಮಾಡಿದೆ ಎಂದು ಹೇಳಿದ್ದಾರೆ ಅದಕ್ಕೆ ಕ್ರಮ ಕೈಗೊಂಡಿದ್ದಾರೆ. ಮುನಿರತ್ನ ಅವರೇ ಬಿಜೆಪಿಗೆ ಮಾದರಿ ಎಂದರು.

### ಏನೆಲ್ಲಾ ಷರತ್ತು

- ■ ಪಕ್ಷದ ವಿಪ್ ಅಮಾನತುಗೊಂಡ ಶಾಸಕರಿಗೆ ಅನ್ವಯ ಆಗುವುದಿಲ್ಲ.
- ■ ಸದನದಲ್ಲಿ ಯಾರ ಪರವಾಗಿ ಮತ ಚಲಾಯಿಸಬಹುದು.
- ■ ಪಕ್ಷದ ಯಾವುದೇ ವೇದಿಕೆಯಲ್ಲಿ ಕಾಣಿಸಿಕೊಳ್ಳುವ ಹಾಗಿಲ್ಲ.
- ■ ಪಕ್ಷದ ಸಿಂಬಲ್ ಬಳಸುವಂತಿಲ್ಲ.
- ■ ಸದನದಲ್ಲಿ ಬಿಜೆಪಿ ಸದಸ್ಯರ ಸ್ಥಾನದಲ್ಲಿ ಕುಳಿತುಕೊಳ್ಳುವ ಬದಲಾಗಿ ಪ್ರತ್ಯೇಕವಾದ ಆಸನ ವ್ಯವಸ್ಥೆಗೆ ಅವಕಾಶ ಇದೆ.
- ■ ಒಂದು ಪಕ್ಷದ ಚಿಹ್ನೆ ಅಡಿಯಲ್ಲಿ ಗೆದ್ದಿರುವುದರಿಂದ ಪಕ್ಷೇತರ ಸದಸ್ಯರಾಗುವುದಿಲ್ಲ. ಅನ್ ಅಟಾಚಿಡ್ ಸದಸ್ಯರಾಗುತ್ತಾರೆ.
- ■ ಕಾಂಗ್ರೆಸ್ ಗೆ ಬೆಂಬಲ ಕೊಟ್ಟರೂ ಶೆಡ್ಯೂಲ್ಡ್ 10 ಇವರಿಗೆ ಅನ್ವಯ ಆಗುವುದಿಲ್ಲ.
- ■ ಬಿಜೆಪಿ ಯಾವುದೇ ಕ್ರಮ ಕೈಗೊಳ್ಳಲು ದೂರು ಕೊಡಲು ಅವಕಾಶ ಇಲ್ಲ.

### ಈ ಕೆಲಸ ಮಾಡಿದರೆ ಶಾಸಕ ಸ್ಥಾನವು ರದ್ದು!

ಶಾಸಕ ಸ್ಥಾನಕ್ಕೆ ಯಾವುದೇ ರೀತಿಯಲ್ಲಿ ಸಮಸ್ಯೆ ಆಗುವುದಿಲ್ಲ. ಆದರೆ, ಬಿಜೆಪಿ ಶಾಸಕಾಂಗ ಸಭೆಗೆ ಹಾಜರಾಗಲು ಅವಕಾಶ ಇಲ್ಲ. ಒಂದು ವೇಳೆ ಶಾಸಕ ಸ್ಥಾನ ಅವಧಿ ಮುಕ್ತಾಯಗೊಳ್ಳುವ ಮುನ್ನವೇ ಬೇರೆ ಪಕ್ಷವನ್ನು ಸೇರಿದರೆ ಆಗ ಶಾಸಕ ಸ್ಥಾನ ರದ್ದಾಗುತ್ತೆ. ಅಥವಾ ಶಾಸಕರ ಸ್ಥಾನಕ್ಕೆ ರಾಜೀನಾಮೆ ಕೊಟ್ಟು ಬೇರೆ ಪಕ್ಷವನ್ನು ಸೇರಬೇಕಿದೆ. ಬಿಜೆಪಿಯಿಂದ ಉಚ್ಚಾಟನೆ ಆದರೂ ತಾಂತ್ರಿಕವಾಗಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆ ಆಗುವ ಹಾಗಿಲ್ಲ. ಶಾಸಕ ಸ್ಥಾನದ ಅವಧಿ ಮುಗಿಯುವವರೆ ಅವರು ಕಾಯಲೇಬೇಕು.

### ಧನ್ಯವಾದ ತಿಳಿಸಿದ ಎಸ್‌ಟಿಎಸ್

ನನ್ನನ್ನು ಬಿಜೆಪಿ ಪಕ್ಷದಿಂದ ಉಚ್ಚಾಟನೆ ಮಾಡಿದ್ದಕ್ಕೆ ಹೈಕಮಾಂಡ್ ನಾಯಕರಿಗೆ ನಾನು ಧನ್ಯವಾದ ಸಲ್ಲಿಸುತ್ತೇನೆ. ಬಿಜೆಪಿಯಲ್ಲಿ ಎರಡಲ್ಲ ಹತ್ತಾರು ಗುಂಪುಗಳಿವೆ. ಆ ಗುಂಪುಗಾರಿಕೆಯಲ್ಲಿ ನಾವು ಇರೋದು ಕಷ್ಟ ಆಗ್ತಿತ್ತು. ನಾವು ನಿರೀಕ್ಷೆ ಮಾಡಿದಂತೆಯೇ ನಮ್ಮನ್ನು ಉಚ್ಚಾಟನೆ ಮಾಡಿದ್ದಾರೆ ಎಂದರು. ನಾವು ಯಾವುದೇ ಪಕ್ಷ ವಿರೋಧಿ ಚಟುವಟಿಕೆಯನ್ನು ಮಾಡಿಲ್ಲ. ಅಭಿವೃದ್ಧಿ ಕುರಿತು ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಅವರನ್ನು ಭೇಟಿ ಮಾಡಿದ್ರೆ ಅದು ತಪ್ಪು ಎಂದರೆ, ನಾವು ಏನು ಮಾಡೋಕೆ ಆಗುತ್ತದೆ ನಮ್ಮನ್ನು ಪಕ್ಷದಿಂದ ಉಚ್ಚಾಟನೆ ಅಷ್ಟೇ ಮಾಡಿದ್ದಾರೆ. ಆದರೆ ಶಾಸಕ ಸ್ಥಾನವನ್ನು ಏನು ಮಾಡಲು ಆಗುವುದಿಲ್ಲ, ಎಂದು ಶಾಸಕ ಎಸ್‌ಟಿ ಸೋಮಶೇಖರ್ ಹೇಳಿದರು.

### ಅಶೋಕ್‌ಗೆ ಎಚ್ಚರಿಕೆ



ಪ್ರತಿಪಕ್ಷ ನಾಯಕ ಆರ್ ಅಶೋಕ್ ವಿರುದ್ಧ ಕಿಡಿಕಾರಿದ ಸೋಮಶೇಖರ್, ಅಶೋಕ್ ಕಂಡರೆ ಬಿಜೆಪಿಯವರಿಗೆ ಆಗಲ್ಲ. ಅಸೆಂಬ್ಲಿಯಲ್ಲಿ ಅಶೋಕ್ ಎದ್ದು ನಿಂತರೆ ಅವರ ಹಿಂದೆ ಹೇಗೆಲ್ಲ ಕೆಟ್ಟದಾಗಿ ಮಾತಾಡುತ್ತಾರೆ ಎಂಬುದನ್ನು ಒಮ್ಮೆ ನೆನಪು ಮಾಡಿಕೊಳ್ಳಲಿ ಎಂದರು. ನಾನು ಬಿಜೆಪಿಗೆ ಬಂದ ಮೇಲೆ ಒಮ್ಮೆಯೂ ಅಶೋಕ್ ವಿರುದ್ಧ ಮಾತಾಡಿಲ್ಲ. ನನ್ನ ವಿರುದ್ಧ ಮಾತನಾಡಿದರೆ ಆಗಿನ ನಿಮ್ಮ ಹಿಸ್ಟರಿನೂ ನಾನು ತೆಗೆಯಬೇಕಾಗುತ್ತದೆ. ಯಾರ ಜೊತೆ ಏನು ಒಡಂಬಡಿಕೆ ಮಾಡಿಕೊಂಡಿದ್ದಾರೆ. ಅವೆಲ್ಲವನ್ನೂ ಹೇಳಬೇಕಾಗುತ್ತದೆ, ಎಂದು ಅಶೋಕ್‌ಗೆ ಎಚ್ಚರಿಕೆ ನೀಡಿದರು.

### 2028ರಲ್ಲಿ ಕಾಂಗ್ರೆಸ್‌ನಿಂದ ಸ್ಪರ್ಧೆ

ನಾವು 2028ರ ವರೆಗೆ ಶಾಸಕರಾಗಿಯೇ ಇರುತ್ತೇವೆ. 2028ಕ್ಕೆ ಮತ್ತೆ ಕಾಂಗ್ರೆಸ್ ನಿಂದಲೇ ಸ್ಪರ್ಧೆ ಮಾಡುತ್ತೇನೆ. ಅದು ಯಾವ ಬಿಜೆಪಿಯವರು ನನ್ನನ್ನು ಸೋಲಿಸಲು ಬರುತ್ತಾರೋ ನೋಡೋಣ ಎಂದು ಬಿಜೆಪಿ ಹೈಕಮಾಂಡ್ ಮತ್ತು ರಾಜ್ಯ ನಾಯಕರಿಗೆ ಎಸ್‌ಟಿ ಸೋಮಶೇಖರ್ ಇದೇ ಸಂದರ್ಭದಲ್ಲಿ ಸವಾಲು ಹಾಕಿದರು.

# ಕರ್ನಾಟಕದ 10 ಪ್ರಮುಖ ರೈಲುಗಳಿಗೆ ಹೆಚ್ಚುವರಿ ಬೋಗಿ ಸೇರ್ಪಡೆ

## ಮೈಸೂರು, ಬೆಂಗಳೂರು, ಹುಬ್ಬಳ್ಳಿ, ಯಶವಂತಪುರದಿಂದ ಹೊರಡುವ ರೈಲುಗಳಿಗೆ ವಿವಿಧ ದರ್ಜೆಯ ಬೋಗಿಗಳು ಸೇಪಡೆ



**ಜೂನ್ ಮೊದಲ ವಾರದಲ್ಲಿ ಅಳವಡಿಕೆ**

• ಉದಯವಾಹಿನಿ, ಬೆಂಗಳೂರು

ಪ್ರಯಾಣಿಕ ಅನುಕೂಲಕ್ಕಾಗಿ ಕರ್ನಾಟಕದಲ್ಲಿ ಸಂಚರಿಸುವ ಹಾಗೂ ಕರ್ನಾಟಕದ ಪ್ರಮುಖ ನಗರಗಳಿಂದ ಹೊರರಾಜ್ಯಕ್ಕೆ ಸಂಚರಿಸವ 10 ರೈಲುಗಳಿಗೆ ಹೆಚ್ಚುವರಿ ಬೋಗಿ ಜೋಡಣೆ ಮಾಡಲಾಗಿದೆ.

ಈ ಬಗ್ಗೆ ನೈರುತ್ಯ ರೈಲ್ವೆ ಮಾಹಿತಿ ನೀಡಿದ್ದು, ಪ್ರಯಾಣಿಕರ ಅನುಕೂಲಕ್ಕಾಗಿ ಮತ್ತು ಹೆಚ್ಚುವರಿ ದಟ್ಟಣೆಯನ್ನು ನಿವಾರಿಸಲು ಪ್ರಮುಖ ರೈಲುಗಳಿಗೆ ಹೆಚ್ಚುವರಿ ಬೋಗಿಗಳನ್ನು ತಾತ್ಕಾಲಿಕ ಜೋಡಣೆ ಮಾಡಲಾಗುತ್ತಿದೆ ಎಂದು ತಿಳಿಸಿದೆ.

ಜೂನ್ ಮೊದಲ ವಾರದಲ್ಲಿ ಹೆಚ್ಚುವರಿ ಬೋಗಿ ಅಳವಡಿಕೆಯಾಗಲಿದ್ದು, ಒಂದು ತಿಂಗಳಮಟ್ಟಿಗೆ ಈ ಬೋಗಿಗಳಿರಲಿವೆ. ಆ ಬಳಿಕ ಪ್ರಯಾಣಿಕರ ಪ್ರತಿಕ್ರಿಯೆ ಅಗತ್ಯತೆ ನೋಡಿಕೊಂಡು ಮುಂದುವರೆಸಲು ನಿರ್ಧರಿಸಲಾಗಿದೆ.

### ಬೆಂಗಳೂರಿಗೆ ಮತ್ತೊಂದು ನೇರ ರೈಲು ಸೇವೆ

- ರೈಲು ಸಂಖ್ಯೆ 16227/16228 ಮೈಸೂರು - ತಾಳಗುಪ್ಪ - ಮೈಸೂರು ದೈನಂದಿನ ಎಕ್ಸ್‌ಪ್ರೆಸ್‌ಗೆ ತಾತ್ಕಾಲಿಕವಾಗಿ ಒಂದು ಹೆಚ್ಚುವರಿ ಸಾಮಾನ್ಯ ದ್ವಿತೀಯ ದರ್ಜೆ (GS) ಕೋಚ್ ಅಳವಡಿಸಲಾಗುವುದು.
- ರೈಲು ಸಂಖ್ಯೆ 16589/16590 ಕೆಎಸ್‌ಆರ್ ಬೆಂಗಳೂರು - ಮಿರಜ್ - ಕೆಎಸ್‌ಆರ್ ಬೆಂಗಳೂರು ಎಕ್ಸ್‌ಪ್ರೆಸ್‌ಗೆ ತಾತ್ಕಾಲಿಕವಾಗಿ ಒಂದು ಹೆಚ್ಚುವರಿ AC ಪ್ರಥಮ ದರ್ಜೆ ಕೋಚ್ ಅಳವಡಿಸಲಾಗುವುದು.
- ರೈಲು ಸಂಖ್ಯೆ 20653/20654 ಕೆಎಸ್‌ಆರ್ ಬೆಂಗಳೂರು - ಬೆಳಗಾವಿ - ಕೆಎಸ್‌ಆರ್ ಬೆಂಗಳೂರು ಎಕ್ಸ್‌ಪ್ರೆಸ್‌ಗೆ ತಾತ್ಕಾಲಿಕವಾಗಿ ಒಂದು ಹೆಚ್ಚುವರಿ AC ಪ್ರಥಮ ದರ್ಜೆ ಕೋಚ್ ಅಳವಡಿಸಲಾಗುವುದು.
- ರೈಲು ಸಂಖ್ಯೆ 22685/22686 ಯಶವಂತಪುರ - ಚಂಡೀಗಢ - ಯಶವಂತಪುರ ಎಕ್ಸ್‌ಪ್ರೆಸ್‌ಗೆ ತಾತ್ಕಾಲಿಕವಾಗಿ ಒಂದು ಹೆಚ್ಚುವರಿ AC 3-ಟೈರ್ ಕೋಚ್ ಅಳವಡಿಸಲಾಗುವುದು. (ಕಲ್ಯಾಣ ಕರ್ನಾಟಕಕ್ಕೆ ಹೊಸ ರೈಲು)
- ರೈಲು ಸಂಖ್ಯೆ 12079/12080 ಕೆಎಸ್‌ಆರ್ ಬೆಂಗಳೂರು - ಹುಬ್ಬಳ್ಳಿ - ಕೆಎಸ್‌ಆರ್ ಬೆಂಗಳೂರು ಜನಶತಾಬ್ದಿ ಎಕ್ಸ್‌ಪ್ರೆಸ್‌ಗೆ ತಾತ್ಕಾಲಿಕವಾಗಿ ಒಂದು ಎರಡನೇ ದರ್ಜೆಯ ಚೇರ್ ಕಾರ್ ಕೋಚ್ ಹೆಚ್ಚುವರಿಯಾಗಿ ಅಳವಡಿಸಲಾಗುವುದು.
- ರೈಲು ಸಂಖ್ಯೆ 12089/12090 ಕೆಎಸ್‌ಆರ್ ಬೆಂಗಳೂರು - ಶಿವಮೊಗ್ಗ - ಕೆಎಸ್‌ಆರ್ ಬೆಂಗಳೂರು ಜನ ಶತಾಬ್ದಿ ಎಕ್ಸ್‌ಪ್ರೆಸ್‌ಗೆ ತಾತ್ಕಾಲಿಕವಾಗಿ ಒಂದು ಹೆಚ್ಚುವರಿ ಎರಡನೇ ದರ್ಜೆಯ ಚೇರ್ ಕಾರ್ ಕೋಚ್ ಅಳವಡಿಸಲಾಗುವುದು.
- ರೈಲು ಸಂಖ್ಯೆ 12649/12650 ಯಶವಂತಪುರ - ಹಜರತ್ ನಿಜಾಮುದ್ದೀನ್ - ಯಶವಂತಪುರ ಸಂಪರ್ಕ ಕ್ರಾಂತಿ ಎಕ್ಸ್‌ಪ್ರೆಸ್‌ಗೆ ತಾತ್ಕಾಲಿಕವಾಗಿ ಒಂದು ಹೆಚ್ಚುವರಿ AC 3-ಟೈರ್ ಕೋಚ್ ಅಳವಡಿಸಲಾಗುವುದು.
- ರೈಲು ಸಂಖ್ಯೆ 12629/12630 ಯಶವಂತಪುರ - ಹಜರತ್ ನಿಜಾಮುದ್ದೀನ್ - ಯಶವಂತಪುರ ಕರ್ನಾಟಕ ಸಂಪರ್ಕ ಕ್ರಾಂತಿ ಎಕ್ಸ್‌ಪ್ರೆಸ್‌ಗೆ ಒಂದು ಹೆಚ್ಚುವರಿ AC 3-ಟೈರ್ ಕೋಚ್‌ನೊಂದಿಗೆ ಹೆಚ್ಚಿಸಲಾಗುವುದು.
- ರೈಲು ಸಂಖ್ಯೆ 16591/16592 ಹುಬ್ಬಳ್ಳಿ - ಮೈಸೂರು - ಹುಬ್ಬಳ್ಳಿ ಎಕ್ಸ್‌ಪ್ರೆಸ್‌ಗೆ ತಾತ್ಕಾಲಿಕವಾಗಿ ಒಂದು ಹೆಚ್ಚುವರಿ ಸ್ಲೀಪರ್ ಕ್ಲಾಸ್ ಕೋಚ್ ಅಳವಡಿಸಲಾಗುವುದು.
- ರೈಲು ಸಂಖ್ಯೆ 16535/16536 ಮೈಸೂರು - ಪಂಢರಪುರ - ಮೈಸೂರು ಎಕ್ಸ್‌ಪ್ರೆಸ್‌ಗೆ ತಾತ್ಕಾಲಿಕವಾಗಿ ಒಂದು ಹೆಚ್ಚುವರಿ ಸ್ಲೀಪರ್ ಕ್ಲಾಸ್ ಕೋಚ್ ಅಳವಡಿಸಲಾಗುವುದು.

# ಎಚ್‌ಎಎಲ್‌ಗೆ ಭೂಮಿ ಬೇಕಿದ್ದರೆ ಕೊಡ್ತೇವೆ, ಎಲ್ಲೂ ಹೋಗಲು ಬಿಡಲ್ಲ

## ● ಎಚ್‌ಎಎಲ್ ಅನ್ನು ಆಂಧ್ರ ಪ್ರದೇಶಕ್ಕೆ ಸ್ಥಳಾಂತರಿಸುವ ಚಂದ್ರಬಾಬು ನಾಯ್ಡು ಅವರ ಬೇಡಿಕೆಗೆ ತೀಕ್ಷ್ಣ ಪ್ರತಿಕ್ರಿಯೆ

• ಉದಯವಾಹಿನಿ, ಬೆಂಗಳೂರು

ನಮ್ಮ ರಾಜ್ಯದ ಆಸ್ತಿಗಳನ್ನು ನಾವು ರಕ್ಷಣೆ ಮಾಡಿಕೊಳ್ಳುತ್ತೇವೆ ಎಂದಿರುವ ಕೆಪಿಸಿಸಿ ಅಧ್ಯಕ್ಷರೂ ಆದ ಡಿಸಿಎಂ ಡಿಕೆ ಶಿವಕುಮಾರ್, ಎಚ್‌ಎಎಲ್ ಅನ್ನು ಆಂಧ್ರ ಪ್ರದೇಶಕ್ಕೆ ಸ್ಥಳಾಂತರಿಸುವಂತೆ ಸಿಎಂ ಚಂದ್ರಬಾಬು ನಾಯ್ಡು ಇಟ್ಟಿರುವ ಬೇಡಿಕೆಗೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಒಂದು ಸರ್ಕಾರವಾಗಿ ನಾವು ಯಾವುದನ್ನೂ ಸ್ಥಳಾಂತರಿಸಲು ಬಿಡುವುದಿಲ್ಲ. ಅವರು ವಿಸ್ತರಿಸಲು ಬಯಸಿದರೆ ನಾವು ಭೂಮಿ ನೀಡುತ್ತೇವೆ. ಅವರು (ಆಂಧ್ರ ಪ್ರದೇಶ) ಬಯಸಿದ ಯಾವುದೇ ಹೊಸದನ್ನು ಪಡೆಯಬಹುದು. ನಾವು ಅವರ ದಾರಿಗೆ ಅಡ್ಡ ಬರುವುದಿಲ್ಲ. ಆದರೆ, ಕರ್ನಾಟಕದ ಮಟ್ಟಿಗೆ ಎಚ್‌ಎಎಲ್ ನಮ್ಮ ಹೆಮ್ಮೆ, ಎಂದು ಸ್ಪಷ್ಟಪಡಿಸಿದರು.

**ಎಚ್‌ಎಎಲ್ ನಮ್ಮ ಹೆಮ್ಮೆ**



ಹೆಚ್‌ಎಎಲ್ ಅನ್ನು ಯಾವುದೇ ಬಿಜೆಪಿ ಸರ್ಕಾರ ನೀಡಿಲ್ಲ. ಮೊದಲಿನಿಂದಲೂ ನಮ್ಮಲಿರುವ ತಾಂತ್ರಿಕ, ಮಾನವ ಸಂಪನ್ಮೂಲ ನೋಡಿ ಜವಾಹರ್ ಲಾಲ್ ನೆಹರೂ ಅವರು ಇದನ್ನು ಬೆಂಗಳೂರಿನಲ್ಲಿ ಸ್ಥಾಪಿಸಿದ್ದಾರೆ. ದಕ್ಷಿಣ ಭಾರತದಲ್ಲಿ ಏರ್ ಬೇಸ್, ಏರ್ ಶೋಗಳನ್ನು ನೀಡಿದ್ದಾರೆ. ಬೆಂಗಳೂರು, ಬೀದರ್‌ಗಳಲ್ಲಿ ವಾಯು ನೆಲೆ ಸ್ಥಾಪಿಸಲಾಗಿದೆ, ಎಂದರು.

ಚಂದ್ರಬಾಬು ನಾಯ್ಡು ಅವರು ರಾಜಕೀಯವಾಗಿ ಮಾಡಿರುವ ಮನವಿ ಬಗ್ಗೆ ನಾನು ಹಸ್ತಕ್ಷೇಪ ಮಾಡುವುದಿಲ್ಲ. ನಮ್ಮಲ್ಲೂ ಹೆಚ್‌ಎಎಲ್‌ಗೆ ಅಗತ್ಯವಾದ ಭೂಮಿಯನ್ನು ನೀಡಲಾಗಿದೆ. ತುಮಕೂರಿನಲ್ಲಿ ಹೆಲಿಕಾಪ್ಟರ್ ವಿಭಾಗಕ್ಕೆ ಜಮೀನು ನೀಡಲಾಗಿದೆ. ಅವರು ಹೊಸದಾಗಿ ಏನಾದರೂ ಮಾಡಿಕೊಳ್ಳಲಿ. ನೆರೆ ರಾಜ್ಯಗಳಲ್ಲಿ ಏನು ಆಗಬಾರದು ಎಂಬ ಮನಸ್ಥಿತಿ ನಮ್ಮದಲ್ಲ. ನಮ್ಮ ರಾಜ್ಯದಲ್ಲಿನ ಆಸ್ತಿಯನ್ನು ನಮ್ಮ ಸರ್ಕಾರ ಕಾಪಾಡಲಿದೆ. ನಮ್ಮ ಆಸ್ತಿ, ನಮ್ಮ ನವರತ್ನಗಳು ಅವು. ಇವುಗಳನ್ನು ಉಳಿಸಿಕೊಳ್ಳುತ್ತೇವೆ, ಎಂದು ಘೋಷಿಸಿದರು.

**ಸಂಸದರು, ಸಚಿವರ ವಿರುದ್ಧ ಕಿಡಿ**

ಇದೇ ಸಂದರ್ಭದಲ್ಲಿ ನಮ್ಮ ರಾಜ್ಯದಿಂದ ಆಯ್ಕೆಯಾಗಿರುವ ಸಂಸದರು ಏನು ಮಾಡುತ್ತಿದ್ದಾರೆ ಎಂದು ಪ್ರಶ್ನಿಸಿದ ಡಿಕೆ ಶಿವಕುಮಾರ್, ಕೇಂದ್ರ ಸಚಿವರು ಮಾತನಾಡುತ್ತಿಲ್ಲ. ಇಂದು ಸಂಜೆಯೊಳಗೆ ಎಲ್ಲರೂ ಮಾತನಾಡಬೇಕು, ಎಂದು ಆಗ್ರಹಿಸಿದರು. ರವಿಕುಮಾರ್ ವಿರುದ್ಧ ಕ್ರಮಕ್ಕೆ ಆಗ್ರಹ ವ್ಯಕ್ತವಾಗುತ್ತಿರುವ ಬಗ್ಗೆ ಕೇಳಿದಾಗ, ಇಂದು ಬೆಳಗ್ಗೆ ಅನೇಕ ಐಎಎಸ್ ಅಧಿಕಾರಿಗಳು ನನ್ನನ್ನು ಭೇಟಿ ಮಾಡಿದ್ದಾರೆ. ಈ ವಿಚಾರವನ್ನು ಕಾನೂನು ದೃಷ್ಟಿಕೋನದಲ್ಲಿ ಪರಿಶೀಲನೆ ಮಾಡುತ್ತೇವೆ ಎಂದು ತಿಳಿಸಿದರು.

### ಬಿಜೆಪಿ ಎಂಎಲ್‌ಸಿ ವಿರುದ್ಧ ಕಾನೂನು ಕ್ರಮ

ಬಿಜೆಪಿ ಎಂಎಲ್‌ಸಿ ರವಿಕುಮಾರ್ ಅವರು ಕಲಬುರ್ಗಿ ಜಿಲ್ಲಾಧಿಕಾರಿಯನ್ನು ಪಾಕಿಸ್ತಾನಿ ಎಂದು ನಿಂದಿಸಿರುವ ಬಗ್ಗೆ ಕೇಳಿದಾಗ, ಸರ್ಕಾರ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿದೆ. ಈ ವಿಚಾರದಲ್ಲಿ ಕಾನೂನು ಕ್ರಮ ಕೈಗೊಳ್ಳದೇ ಬೇರೆ ದಾರಿ ಇಲ್ಲ. ಕಲಬುರ್ಗಿಯ ಜಿಲ್ಲಾಧಿಕಾರಿ ರಾಷ್ಟ್ರಮಟ್ಟದ ಅಧಿಕಾರಿಯಾಗಿದ್ದು, ದೇಶಕ್ಕೆ ಸೇವೆ ಸಲ್ಲಿಸುತ್ತಿದ್ದಾರೆ. ಅವರು ತಮ್ಮದೇ ಆದ ಘನತೆಯನ್ನು ಹೊಂದಿದ್ದಾರೆ. ಕರ್ನಾಟಕ ರಾಜ್ಯ ಸರ್ಕಾರ ಅವರ ಬೆನ್ನಿಗೆ ನಿಲ್ಲಲಿದೆ. ಮಹಿಳಾ ಅಧಿಕಾರಿಯನ್ನು ಬಿಜೆಪಿಯವರು ನಡೆಸಿಕೊಳ್ಳುವ ರೀತಿ ಇದೇನಾ ಈ ವಿಚಾರವಾಗಿ ಬಿಜೆಪಿ ನಾಯಕರು ಅದರಲ್ಲೂ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ಹಾಗೂ ಕೇಂದ್ರ ಸಚಿವರುಗಳು ಪ್ರತಿಕ್ರಿಯೆ ನೀಡಬೇಕು, ಎಂದು ಆಗ್ರಹಿಸಿದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,813/Gram24ct ₹8,995/Gram22ct ಬೆಳ್ಳಿ: ₹100.00/Gram

# ರಿಯಲ್ ಎಸ್ಟೇಟ್ ಉತ್ತೇಜನಕ್ಕೆ ರಾಮನಗರ ಜಿಲ್ಲೆ ಹೆಸರು ಬದಲಾವಣೆ

## ಕುಮಾರಸ್ವಾಮಿ ಕನ್ನಡಿಗರ ರೂ.5 ಲಕ್ಷ ಕೋಟಿ ಹಣ ತಂದರೆ ಚಿನ್ನದ ತಗಡನ್ನೇ ಹಾಕಿಸೋಣ: ಡಿ.ಕೆ ಸುರೇಶ್

• **ಉದಯವಾಹಿನಿ, ಬೆಂಗಳೂರು**

ರಾಮನ ಹೆಸರಿನಲ್ಲಿ ರಾಜಕೀಯ ಮಾಡುವುದನ್ನು ಬಿಟ್ಟು, ತಮ್ಮ ಅವಧಿಯಲ್ಲಿ ಜಿಲ್ಲೆಗೆ ಕೊಟ್ಟಿರುವ ಕೊಡುಗೆ ಮುಂದಿಟ್ಟು ಮಾತನಾಡಲಿ ಎಂದು ನಿಕಟಪೂರ್ವ ಸಂಸದ ಡಿ.ಕೆ. ಸುರೇಶ್ ವಿರೋಧ ಪಕ್ಷಗಳ ನಾಯಕರ ವಿರುದ್ಧ ಹರಿಹಾಯ್ದರು. ಬೆಂಗಳೂರಿನಲ್ಲಿ ಮಾತನಾಡಿದ ಅವರು, ರಿಯಲ್ ಎಸ್ಟೇಟ್ ಉತ್ತೇಜನಕ್ಕೆ ರಾಮನಗರ ಜಿಲ್ಲೆ ಹೆಸರು ಬದಲಾವಣೆ ಮಾಡಲಾಗಿದೆ.


ಉದಯವಾಹಿನಿ ಚಿತ್ರ

ರಾಮನಗರದಲ್ಲಿ ಯಾರು ನಿವೇಶನ ಖರೀದಿಸಿದ್ದಾರೆ ಎಂದು ಹೆಸರು ಬಹಿರಂಪಡಿಸಲಿ ಎಂಬ ವಿಜಯೇಂದ್ರ ಅವರ ಟೀಕೆ ಬಗ್ಗೆ ಕೇಳಿದಾಗ, ಈ ರೀತಿ ಹೇಳುತ್ತಿರುವವರೆ ಇದನ್ನು ಬಹಿರಂಗ ಪಡಿಸಬೇಕಲ್ಲವೇ ಅವರು ಸ್ಥಿಮಿತ ಇಲ್ಲದೆ ಮಾತನಾಡಿದರೆ ಅದಕ್ಕೆ ನಾನೇನು ಮಾಡಲು ಸಾಧ್ಯ, ರಾಮನಗರ ತಾಲ್ಲೂಕು ಈ ಹಿಂದೆ ಕ್ಲೋಸ್ ಪೇಟೆ ಎಂದಿತ್ತು. ಈ ವಿಚಾರ ವಿಜಯೇಂದ್ರ ಅವರಿಗೆ ಗೊತ್ತಿದೆಯೋ ಇಲ್ಲವೋ ಗೊತ್ತಿಲ್ಲ. ನಾವು ರಾಮನಗರ ತಾಲ್ಲೂಕಿನ ಹೆಸರನ್ನು ಬದಲಾವಣೆ ಮಾಡಿಲ್ಲ. ಬೆಂಗಳೂರು ಜಿಲ್ಲೆಯ ಭಾಗವಾಗಿದ್ದ ಈ ಪ್ರದೇಶವನ್ನು ಅದೇ ರೀತಿ ಮುಂದುವರಿಸಲು ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರುನಾಮಕರಣ ಮಾಡಲು ಸರ್ಕಾರ ಆದೇಶ ಹೊರಡಿಸಿದೆ. ಇಲ್ಲಿ ಬೇರೆಯವರ ಆಸ್ತಿ ಬರೆಸಿಕೊಳ್ಳುವ ಪ್ರಶ್ನೆ ಇಲ್ಲ. ಜಿಲ್ಲೆಯ ಹೆಸರಿನ ಮೇಲೆ ಅನಗತ್ಯ ರಾಜಕಾರಣ ಮಾಡುವುದನ್ನು ಬಿಟ್ಟು ನಿಮ್ಮ ಕಾಲದಲ್ಲಿ ಈ ಜಿಲ್ಲೆಗೆ ನೀಡಿರುವ ಕೊಡುಗೆ ಏನೆಂದು ಹೇಳಿ ಎಂದು ತಿರುಗೇಟು ನೀಡಿದರು. ಬೆಂಗಳೂರು ದಕ್ಷಿಣ ಎಂದು ಮರುನಾಮಕರಣದಿಂದ ರೈತರು, ಯುವಕರು ಸಂತೋಷಪಡುತ್ತಿದ್ದಾರೆ. ಬೆಂಗಳೂರು ಹೆಸರಿದ್ದರೆ ನಮ್ಮ ಕಾಲೇಜು ಹಾಗೂ ವಿವಿಗಳಿಗೆ ಗೌರವ ಸಿಗುತ್ತದೆ, ಉದ್ಯೋಗ ಸಿಗುತ್ತದೆ ಎಂದು ಭಾವಿಸಿದ್ದಾರೆ. ಹೆಸರು ಬದಲಾವಣೆ ಮಾಡಿ ಫಲಕಗಳಿಗೆ ಚಿನ್ನದ ತಗಡು ಹಾಕಿಸುತ್ತಾರಾ ಎಂಬ ಕುಮಾರಸ್ವಾಮಿ ಟೀಕೆ ಬಗ್ಗೆ ಪ್ರತಿಕ್ರಿಯಿಸಿದ ಸುರೇಶ್ ಕುಮಾರಸ್ವಾಮಿ ಅವರು ಚಿನ್ನದ ತಗಡು ತಂದುಕೊಟ್ಟರೆ ಖಂಡಿತವಾಗಿಯೂ ಹಾಕಿಸುತ್ತೇವೆ. ಅವರು ಕೇಂದ್ರ ಸಚಿವರಾಗಿದ್ದಾರೆ. ನಮ್ಮ ಕನ್ನಡಿಗರ ಹಣ ಕೇಂದ್ರ ಸರ್ಕಾರದ ಬಳಿಯೇ ಇದೆ. ಮಧ್ಯಪ್ರದೇಶ, ಉತ್ತರ ಪ್ರದೇಶ, ರಾಜಸ್ಥಾನ, ಬಿಹಾರ ರಾಜ್ಯಗಳಿಗೆ ನೀಡುತ್ತಿರುವುದು ಕನ್ನಡಿಗರ ಹಣವಲ್ಲವೇ ನಮ್ಮ ರಾಜ್ಯದಿಂದ ಸಂಗ್ರಹವಾಗಿರುವ 5 ಲಕ್ಷ ಕೋಟಿ ತೆರಿಗೆ ಹಣವನ್ನು ಕೊಡಿಸಿದರೆ ಖಂಡಿತವಾಗಿ ಚಿನ್ನದ ತಗಡನ್ನೇ ಹಾಕಿಸೋಣ, ಅದಕ್ಕೆ ಅಭ್ಯಂತರವಿಲ್ಲ.

**ರಾಮನ ಹೆಸರಲ್ಲಿ ರಾಜಕೀಯ ಮಾಡಿದ್ದಾರಷ್ಟೆ**

> **ಈ ವಿಚಾರದಲ್ಲಿ ಜನ ಸಂತೋಷವಾಗಿದ್ದಾರೆ. ಕೆಲವು ರಾಜಕಾರಣಿಗಳು ರಾಜಕೀಯಕ್ಕಾಗಿ ರಾಮನ ಹೆಸರು ಬಳಸುತ್ತಿದ್ದಾರೆ. ಇದನ್ನು ಬಿಟ್ಟು, ಅಭಿವೃದ್ಧಿಯ ಸಂಕೇತ ಇಟ್ಟುಕೊಂಡು ಬಿಜೆಪಿ ಅಧ್ಯಕ್ಷರು ಚರ್ಚೆ ಮಾಡಲಿ. ಅವರು ಕರ್ನಾಟಕ, ಕನ್ನಡಿಗರಿಗೆ ಆಗುತ್ತಿರುವ ಅನ್ಯಾಯದ ಬಗ್ಗೆ ಧ್ವನಿ ಎತ್ತಬೇಕು. ಕೃಷ್ಣಾ ಮೇಲ್ದಂಡೆ, ಕಳಸಾ ಬಂಡೂರಿ, ಮೇಕೆದಾಟು ಯೋಜನೆಗೆ ಅನುಮತಿ ನೀಡುವುದು ವಿಳಂಬ ಮಾಡುತ್ತಿರುವ ಅವರ ನಾಯಕರಿಗೆ ತಿಳಿ ಹೇಳಬೇಕು. ಇದು ಅವರ ಮುಖ್ಯ ಕರ್ತವ್ಯ. ನೀವು ರಾಮನಗರ ವಿಚಾರ ಬಿಟ್ಟು, ಕರ್ನಾಟಕ ರಾಜ್ಯ ಬಿಜೆಪಿ ಅಧ್ಯಕ್ಷರಾಗಿರುವ ನೀವು ಕರ್ನಾಟಕ ರಾಜ್ಯಕ್ಕೆ ಆಗುತ್ತಿರುವ ಅನ್ಯಾಯದ ಬಗ್ಗೆ ಗಮನ ಹರಿಸಿ ಎಂದರು.**

> **ಇವರ ಅಧಿಕಾರ ಅವಧಿಯಲ್ಲಿ ಕೆಂಗಲ್ ಹನುಮಂತಯ್ಯ ಅವರ ಒಂದೇ ಒಂದು ಪ್ರತಿಮೆ ಮಾಡಿದ್ದಾರಾ ಅಧಿಕಾರದಲ್ಲಿದ್ದಾಗ ಅವರ ಹೆಸರು ಹೇಳಿದ್ದರಾ ಈಗ ಯಾಕೆ ಅವರ ಹೆಸರು ಹೇಳುತ್ತಿದ್ದಾರೆ ಸುಮ್ಮನೆ ಜನರನ್ನು ಎತ್ತಿಕಟ್ಟುವುದನ್ನು ಬಿಡಲಿ. ಅವರು ಕೇಂದ್ರ ಮಂತ್ರಿಯಾಗಿದ್ದು, ದೇಶಕ್ಕೆ ಹಾಗೂ ರಾಜ್ಯಕ್ಕೆ ಸೇವೆ ಸಲ್ಲಿಸುವ ಅವಕಾಶ ಸಿಕ್ಕಿದೆ. ಅದನ್ನು ಮಾಡಿದರೆ ನಾವು ಸ್ವಾಗತಿಸುತ್ತೇವೆ ಎಂದರು. ಇಂತಹ ಹೇಳಿಕೆಗಳು ಜನರನ್ನು ಗೊಂದಲಗೊಳಿಸುವುದಿಲ್ಲವೇ ಎಂದು ಕೇಳಿದಾಗ, ಜನರು ಯಾರೂ ಗೊಂದಲದಲ್ಲಿಲ್ಲ. ರಾಜಕೀಯ ನಾಯಕರು ಗೊಂದಲಕ್ಕೆ ಒಳಗಾಗಿದ್ದಾರೆ ಎಂದರು.**

ಅವರ ಆಸೆಯನ್ನು ನಾವೇಕೆ ಬೇಡ ಎನ್ನಬೇಕು.

ನಮ್ಮ ಹಣವನ್ನು ಉತ್ತರ ರಾಜ್ಯಗಳಿಗೆ ತೆಗೆದುಕೊಂಡು ಹೋಗುತ್ತಿದ್ದಾರೆ. ಕುಮಾರಸ್ವಾಮಿ ಅವರು ಇಲ್ಲಿದ್ದಾಗ ಒಂದು ಮಾತಾಡುತ್ತಿದ್ದರು. ಈಗ ಬೇರೊಂದು ಮಾತು ಹೇಳುತ್ತಿದ್ದಾರೆ ಎಂದು ಮಾತಿನಲ್ಲೇ ತಿವಿದರು. ರಾಮನಗರಕ್ಕೆ ಅದರದೇ ಆದ ಇತಿಹಾಸವಿದೆ ಎಂಬ ಕುಮಾರಸ್ವಾಮಿ ಹೇಳಿಕೆ ಬಗ್ಗೆ ಕೇಳಿದಾಗ, ಹೌದು ಇತಿಹಾಸ ಇದೆ. ಕೆಂಗಲ್ ಹನುಮಂತಯ್ಯ ಅವರು ಇಲ್ಲಿಂದ ಮುಖ್ಯಮಂತ್ರಿ ಆಗಿದ್ದಾರೆ.

## ಶ್ರೀ ಜಯರಾಮ ಸೇವಾ ಮಂಡಳಿಯಲ್ಲಿ ಸಭಾಂಗಣದಲ್ಲಿ ಕಾರ್ಯಕ್ರಮ

• **ಉದಯವಾಹಿನಿ, ಬೆಂಗಳೂರು**

ಪ್ರಖ್ಯಾತ ಖಂಜಿರ ಮತ್ತು ಮೃದಂಗ ವಿದ್ವಾಂಸರಾದ ಎನ್. ಅಮೃತ್ ಅವರಿಗೆ ಮೇ 29ರ ಸಂಜೆ 6ಕ್ಕೆ ಜಯನಗರ 8ನೇ ಬಡಾವಣೆಯ ಶ್ರೀ ಜಯರಾಮ ಸೇವಾ ಮಂಡಳಿ ಸಭಾಂಗಣದಲ್ಲಿ ಗುರುವಂದನಾ ಕಾರ್ಯಕ್ರಮ ಆಯೋಜಿಸಲಾಗಿದೆ.



ಆಕಾಶವಾಣಿ ಎ ಟಾಪ್ ಕಲಾವಿದರಾಗಿ, ಸಂಗೀತ ಕ್ಷೇತ್ರದಲ್ಲಿ 44 ವರ್ಷ ಮತ್ತು ವೇದಿಕೆ ಮೇಲಿನ ಕಲಾಭಿವ್ಯಕ್ತಿಯಲ್ಲಿ 40 ವರ್ಷಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿರುವ ಹಿರಿಯ ಕಲಾವಿದ ಅಮೃತ್ ಅವರಿಗೆ ಶಿಷ್ಯರು ಮತ್ತು ಅಭಿಮಾನಿ ವೃಂದದವರು ಆತ್ಮೀಯವಾಗಿ ಗೌರವಿಸಲಿದ್ದಾರೆ. ಸಂಭ್ರಮಾಚರಣೆ ಸಂದರ್ಭಕ್ಕೆ ಹಿರಿಯ ವಿದ್ವಾಂಸರಾದ ಆರ್.ಕೆ. ಪದ್ಮನಾಭ, ಡಾ. ಮೈಸೂರು ಎಂ. ಮಂಜುನಾಥ್, ವಿಮರ್ಶಕ ಡಾ. ಎಂ. ಸೂರ್ಯಪ್ರಸಾದ್, ಕಲಾ ಪೋಷಕರಾದ ಡಾ. ಆರ್.ವಿ. ರಾಘವೇಂದ್ರ ಸಾಕ್ಷಿಯಾಗಲಿದ್ದಾರೆ. ಖ್ಯಾತ ಮೃದಂಗ ವಿದ್ವಾಂಸರಾದ ಎಂ. ವಾಸುದೇವರಾವ್ ಮತ್ತು ಎ. ವಿ. ಆನಂದ್ ಉಪಸ್ಥಿತಿಯಲ್ಲಿ ವಿದ್ವಾನ್ ಬಿ. ಎಸ್. ಪುರುಷೋತ್ತಮ ಅವರು ಅಭಿನಂದನಾ ಭಾಷಣ ಮಾಡಲಿದ್ದಾರೆ. ಕಲಾರಸಿಕರು, ಅಭಿಮಾನಿಗಳು ಆಗಮಿಸಬೇಕೆಂದು ಆಯೋಜಕರು ಕೋರಿದ್ದಾರೆ.

## ಬೆನ್ನಿಗಾನಹಳ್ಳಿ ಕೆರೆಯಲ್ಲಿನ ಹೂಳೆತ್ತುವಂತೆ ಬಿಬಿಎಂಪಿಗೆ ನಿವಾಸಿಗಳ ಆಗ್ರಹ!

• **ಉದಯವಾಹಿನಿ, ಬೆಂಗಳೂರು**

ಸಿ.ವಿ. ರಾಮನ್ ನಗರದ ಏಳು ಎಕರೆ ವಿಸ್ತೀರ್ಣದ ಬೆನ್ನಿಗಾನಹಳ್ಳಿ ಕೆರೆಯ ಉತ್ತರ ಭಾಗದ ಅಭಿವೃದ್ಧಿಯನ್ನು ನಿರ್ಲಕ್ಷಿಸಿದ್ದಕ್ಕಾಗಿ ಕಸ್ತೂರಿ ನಗರ ಕಲ್ಯಾಣ ಸಂಘದ ನಿವಾಸಿಗಳು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಬಿಬಿಎಂಪಿಯ ನಿರ್ಲಕ್ಷ್ಯದಿಂದಾಗಿ ಬಿಡಿಎ ಲೇಔಟ್‌ನಲ್ಲಿ 40ಕ್ಕೂ ಹೆಚ್ಚು ಮನೆಗಳು ಜಲಾವೃತಗೊಂಡಿವೆ ಎಂದು ನಿವಾಸಿಗಳು ಹೇಳಿದ್ದಾರೆ.

ಕಳೆದ ಹಲವಾರು ವರ್ಷಗಳಿಂದ ಕೆರೆಯಲ್ಲಿ ಹೂಳು ತೆಗೆದಿಲ್ಲ. ಅಲ್ಲದೆ ಬೆನ್ನಿಗಾನಹಳ್ಳಿ ಕೆರೆಯ ದಕ್ಷಿಣ ಭಾಗದಲ್ಲಿ ಮಾತ್ರ ಸಾಂದ್ರತೆ ಇದೆ ಎಂದು ಸ್ಥಳೀಯರು ಹೇಳುತ್ತಿದ್ದಾರೆ. ನಿವಾಸಿಗಳ ಪ್ರಕಾರ, ಸರ್ವೆ ಸಂಖ್ಯೆ 47ರ ಅಡಿಯಲ್ಲಿ ಬರುವ ಕೆರೆಯ ದಕ್ಷಿಣ ಭಾಗವನ್ನು 2018ರ ಸುಮಾರಿಗೆ ಅಭಿವೃದ್ಧಿಪಡಿಸಲಾಗಿದೆ. ಇತ್ತೀಚಿನ ನದಿ ಮತ್ತು ಸರ್ವೆ ಸಂಖ್ಯೆ 55ರಲ್ಲಿ ಉತ್ತರ ಭಾಗಕ್ಕೆ ಸಂಪರ್ಕಿಸುವ ಎರಡು ಮಳೆನೀರು ಚರಂಡಿಗಳಿಂದ ಹರಿಯುವ ನೀರು ಮುಚ್ಚಿಹೋಗಿದೆ. ಕನಿಷ್ಠ 25 ವರ್ಷಗಳಿಂದ ಉತ್ತರ ಭಾಗದಲ್ಲಿ ಹೂಳು ತೆಗೆಯದಿರುವುದು ಇದಕ್ಕೆ ಕಾರಣ ಎಂದು ಹೇಳಿದರು. ನೈಋತ್ಯ ರೈಲ್ವೆ ಹಳಿಯು ನೀರಿನ ಮೂಲ ಮಧ್ಯದಲ್ಲಿ ಹರಿಯುವ ಕಾರಣ, ಈ ಕೆರೆಯನ್ನು ಎರಡು ಭಾಗಗಳಾಗಿ ಕತ್ತರಿಸಲಾಯಿತು. ಪೈ ಲೇಔಟ್ ನಿವಾಸಿ ಕಲ್ಯಾಣ ಸಂಘವು ಸ್ವಯಂಸೇವಕರೊಂದಿಗೆ ಸೇರಿ ನೀರಿನ ಮೂಲ ಪುನಃ ಸ್ಥಾಪನೆ ಕಾರ್ಯವನ್ನು ಕೈಗೆತ್ತಿಕೊಂಡಿತು. 15 ಎಕರೆ ವಿಸ್ತೀರ್ಣದ ನೀರಿನ ಮೂಲವು ಸುಂದರವಾಗಿ ಕಾಣುತ್ತದೆ. ಆದಾಗ್ಯೂ, ಸುಮಾರು 7 ಎಕರೆ ವಿಸ್ತೀರ್ಣದ ಕರೆ ಇನ್ನೊಂದು ಭಾಗದಿಂದ ಹೂಳು ತೆಗೆಯದ ಕಾರಣ, ಅಭಿವೃದ್ಧಿ ಇನ್ನೂ ಪ್ರಾರಂಭವಾಗಿಲ್ಲ ಎಂದು ನಿವಾಸಿಗಳು ತಿಳಿಸಿದ್ದಾರೆ.

## ಬೆಂಗಳೂರಿನಲ್ಲಿ ಮತ್ತೆ ಟೋಯಿಂಗ್ ಆರಂಭ : ಪರಮೇಶ್ವರ್ ಅಧಿಕೃತ ಘೋಷಣೆ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೆಂಗಳೂರು**

ಇನ್ನು ಮುಂದೆ ಬೆಂಗಳೂರಿನಲ್ಲಿ ಮತ್ತೆ ಟೋಯಿಂಗ್ ಶುರುವಾಗಲಿದೆ. ಗೃಹ ಸಚಿವ ಪರಮೇಶ್ವರ್ ಅವರು ಅಧಿಕೃತವಾಗಿ ಟೋಯಿಂಗ್ ಆರಂಭಿಸಲಾಗುವುದು ಎಂದು ತಿಳಿಸಿದ್ದಾರೆ. ಬಾಡಿಗೆ ಟೋಯಿಂಗ್ ವಾಹನ ಬಳಸದೇ ಇಲಾಖೆಯ ವಾಹನ ಬಳಸಿಕೊಂಡು ಟೋಯಿಂಗ್ ನಡೆಸಲು ಹಿರಿಯ ಅಧಿಕಾರಿಗಳಿಗೆ ಗೃಹ ಸಚಿವರು ಸೂಚನೆ ನೀಡಿದ್ದಾರೆ. ಟೋಯಿಂಗ್ ಆರಂಭದ ಬಗ್ಗೆ ಕೆಲ ದಿನಗಳಿಂದಲೇ ಚರ್ಚೆ ನಡೆಯುತ್ತಿತ್ತು. ಈಗ ಸರ್ಕಾರವೇ ಅಧಿಕೃತವಾಗಿ ಟೋಯಿಂಗ್ ಆರಂಭವಾಗುವ ಬಗ್ಗೆ ತಿಳಿಸಿದೆ.

**ಏನಿದು ಟೋಯಿಂಗ್:** ಪಾರ್ಕಿಂಗ್ ಅಲ್ಲದ ಜಾಗದಲ್ಲಿ ವಾಹನಗಳನ್ನು ನಿಲುಗಡೆ ಮಾಡಿದರೆ ಟೋಯಿಂಗ್ ವಾಹನ ಅವುಗಳನ್ನು ಎತ್ತಿಕೊಂಡು ಹೋಗಿ ಸಂಚಾರ ಠಾಣೆಯ ಮುಂದೆ ಇಡುತ್ತದೆ. ಮಾಲೀಕರು ಠಾಣೆಗೆ ತೆರಳಿ ದಂಡ ಕಟ್ಟಿ ವಾಹನಗಳನ್ನು ಬಿಡಿಸಿಕೊಳ್ಳಬೇಕಾಗುತ್ತದೆ. ಭಾರೀ ಟೀಕೆ ವ್ಯಕ್ತವಾದ ಹಿನ್ನೆಲೆಯಲ್ಲಿ ಬೊಮ್ಮಾಯಿ ಸರ್ಕಾರ 2022ರಲ್ಲಿ ಟೋಯಿಂಗ್ ರದ್ದು ಮಾಡಿತ್ತು.

## ಮತ್ತೆ ಪುಡಿ ರೌಡಿಗಳ ಅಟ್ಟಹಾಸ: ಟೀ ಅಂಗಡಿ ಮೇಲೆ ದಾಳಿ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೆಂಗಳೂರು**

ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಮತ್ತೆ ಪುಡಿ ರೌಡಿಗಳ ಅಟ್ಟಹಾಸ ವರದಿಯಾಗಿದ್ದು, ಟೀ ಅಂಗಡಿಯೊಂದರ ಮೇಲೆ ದುಷ್ಕರ್ಮಿಗಳು ದಾಳಿ ಮಾಡಿ ಪೊಲೀಸರ ವಿರುದ್ಧವೇ ಅವಾಚ್ಯ ಪದ ಬಳಕೆ ಮಾಡಿರುವ ವಿಡಿಯೋ ವೈರಲ್ ಆಗುತ್ತಿದೆ. ಬೆಂಗಳೂರಿನ ಬಿಟಿಎಂ ಲೇಔಟ್ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಎಸ್ ಜಿ ಪಾಳ್ಯದಲ್ಲಿ ಈ ಘಟನೆ ನಡೆದಿದೆ ಎಂದು ಹೇಳಲಾಗುತ್ತಿದ್ದು, ಟೀ ಮಾರುವ ಅಂಗಡಿ, ಬೇಕರಿ ಮೇಲೆ ದಾಳಿ ಮಾಡಿರುವ ದುಷ್ಕರ್ಮಿಗಳು ಅಂಗಡಿಯವರ ಮೇಲೆ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ. ಪೊಲೀಸರಿಗೆ ಹೇಳುತ್ತೇನೆ ಎಂದಾಗ ಪೊಲೀಸರಿಗೂ ಅವಾಚ್ಯ ಶಬ್ದಗಳಿಂದ ನಿಂದಿಸಿ ಮಾತ್ರವಲ್ಲದೇ ಅಂಗಡಿಯಲ್ಲಿ ಚೌಚೌ ಬಾಟಲಿ ತೆಗೆದುಕೊಂಡು ರಸ್ತೆಯಲ್ಲಿ ಹೊಡೆದು ಹಾಕಿದ್ದಾರೆ. ಅಲ್ಲದೆ ಬಾಡಲ್ ಚೂರು ತೆಗೆದುಕೊಂಡು ಪೊಲೀಸರು ಇದನ್ನು ಕೆಳಗೆ ಇಟ್ಟುಕೊಳ್ಳಲಿ ಎಂದು ಅವಾಚ್ಯವಾಗಿ ನಿಂದಿಸಿದ್ದಾರೆ. ಈ ಹಿಂದೆಯೂ ಕೂಡ ಬೆಂಗಳೂರಿನಲ್ಲಿ ಇಂತಹುದೇ ಹಲವು ಘಟನೆಗಳು ನಡೆದಿದ್ದವು. ಆಗ ಪೊಲೀಸರು ಕ್ಷಿಪ್ರ ಕ್ರಮ ಕೈಗೊಂಡು ದುಷ್ಕರ್ಮಿಗಳ ಹೆಡೆಮುರಿಕಟ್ಟಿದ್ದರು. **ಜೆಡಿಎಸ್ ಕಿಡಿ:** ಇನ್ನು ಇದೇ ಘಟನೆ ವಿಚಾರವಾಗಿ ರಾಜ್ಯ ಸರ್ಕಾರದ ವಿರುದ್ಧ ಜೆಡಿಎಸ್ ಕೂಡ ಕಿಡಿಕಾರಿದ್ದು, ಈ ಕುರಿತು ಎಕ್ಸ್‌ನಲ್ಲಿ ವಿಡಿಯೋ ಸಮೇತ ಪೋಸ್ಟ್ ಮಾಡಿ ಸಿದ್ದರಾಮಯ್ಯ ಸರ್ಕಾರವನ್ನು ಟೀಕಿಸಿದೆ ಎತ್ತ ಸಾಗಿದೆ ರಾಜ್ಯದ ಕಾನೂನು ಸುವ್ಯವಸ್ಥೆ?... ಸರ್ವಜನಾಂಗದ ಶಾಂತಿಯ ತೋಟವಾಗಿದ್ದ ಕರ್ನಾಟಕದಲ್ಲಿ ಈಗ ಕೊತ್ವಾಲ್ ಶಿಷ್ಯಂದಿರು ವಿಜೃಂಭಿಸುತ್ತಿದ್ದಾರೆ. ಬೆಂಗಳೂರಿನ ಬಿಟಿಎಂ ಲೇಔಟ್ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಪುಡಿರೌಡಿಗಳ ಅಟ್ಟಹಾಸ ಮಿತಿಮೀರಿದೆ. ಪುಂಡರಿಗೆ ಪೊಲೀಸರು, ಕಾನೂನಿನ ಭಯವೇ ಇಲ್ಲವಾಗಿದೆ. ರಾಜಧಾನಿ ಸೇರಿದಂತೆ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಪಾತಳಕ್ಕೆ ಕುಸಿದಿದೆ. ಕಾಂಗ್ರೆಸ್ ಸರ್ಕಾರದ ಅರಾಜಕತೆಯಲ್ಲಿ ದಿನೇ ದಿನೇ ಸಾರ್ವಜನಿಕರಿಗೆ ರಕ್ಷಣೆ ಎಂಬುದು ಮರೀಚಿಕೆಯಾಗಿದ್ದು, ಜನರು ಆತಂಕದಲ್ಲಿ ಬದುಕುವಂತಾಗಿದೆ ಎಂದು ಟ್ವೀಟ್ ಮಾಡಿದೆ.

## ಜೈಲಿನಿಂದ ಪರಪ್ಪನ ಅಗ್ರಹಾರಕ್ಕೆ ರೆಡ್ಡಿ ಶಿಫ್ಟ್

• **ಉದಯವಾಹಿನಿ, ಬೆಂಗಳೂರು**

ಒಎಂಸಿ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಬಂಧನಕ್ಕೆ ಒಳಗಾದ ಶಾಸಕ ಜನಾರ್ದನ ರೆಡ್ಡಿ ಚಂಚಲಗೂಡ ಜೈಲಿನಿಂದ ಬೆಂಗಳೂರು ಪರಪ್ಪನ ಅಗ್ರಹಾರ ಜೈಲಿಗೆ ಸ್ಥಳಾಂತರವಾಗಲಿದ್ದಾರೆ. ಬಾಡಿ ವಾರಂಟ್ ಮೇಲೆ ಜನಾರ್ದನ ರೆಡ್ಡಿ ಅವರನ್ನು ಹೈದರಾಬಾದ್ ಪೊಲೀಸರು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಹಾಜರು ಪಡಿಸಿದರು.


ಉದಯವಾಹಿನಿ ಚಿತ್ರ

ವಿಚಾರಣೆ ನಡೆಸಿದ ನ್ಯಾ. ಸಂತೋಷ್ ಗಜಾನನ್ ಭಟ್ ಅವರು ಜನಾರ್ದನ ರೆಡ್ಡಿ ಅವರನ್ನು ಪರಪ್ಪನ ಅಗ್ರಹಾರ ಜೈಲಿಗೆ ಸ್ಥಳಾಂತರ ಮಾಡುವಂತೆ ಆದೇಶ ಪ್ರಕಟಿಸಿ ಮುಂದಿನ ವಿಚಾರಣೆಯನ್ನು ಜೂನ್ 2ಕ್ಕೆ ಮುಂದೂಡಿಕೆ ಮಾಡಿದರು. ಬೆಲೆಕೇರಿ ಅದಿರು ನಾಪತ್ತೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜನಾರ್ದನ ರೆಡ್ಡಿ ಸೇರಿದಂತೆ ಎಲ್ಲಾ ಆರೋಪಿಗಳು ನ್ಯಾಯಾಲಯಕ್ಕೆ ಹಾಜರಾಗಿದ್ದರು. ಖುದ್ದು ಹಾಜರಾತಿಗೆ ಕೋರ್ಟ್ ಸೂಚಿಸಿದ್ದರಿಂದ ರೆಡ್ಡಿ ಅವರನ್ನು ಪೊಲೀಸರು ಕೋರ್ಟ್‌ಗೆ ಹಾಜರು ಪಡಿಸಿದ್ದರು.

**ಏನಿದು ಕೇಸ್:** ಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ರೆಡ್ಡಿ ಮೇಲಿದ್ದ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಸಿಬಿಐ ನ್ಯಾಯಾಲಯ 7 ವರ್ಷ ಜೈಲು ಶಿಕ್ಷೆ ವಿಧಿಸಿದೆ. ಶಿಕ್ಷೆ ವಿಧಿಸಿದ ನಂತರ ಪೊಲೀಸರು ರೆಡ್ಡಿಯನ್ನು ಬಂಧಿಸಿ ಚಂಚಲಗೂಡ ಜೈಲಿಗೆ ಶಿಫ್ಟ್ ಮಾಡಿದ್ದರು. ಈ ಮೂಲಕ 10 ವರ್ಷಗಳ ಬಳಿಕ ಮತ್ತೆ ಜನಾರ್ದನ ರೆಡ್ಡಿ ಜೈಲುಪಾಲಾಗಿದ್ದಾರೆ.ಹೈದರಾಬಾದ್‌ನ ನಾಂಪಲ್ಲಿ ಸಿಬಿಐ ವಿಶೇಷ ನ್ಯಾಯಾಲಯವು ಒಎಂಸಿ ಅಕ್ರಮ ಗಣಿಗಾರಿಕೆ ಪ್ರಕರಣದ ಸುದೀರ್ಘ ವಿಚಾರಣೆ ನಡೆಸಿ ತೀರ್ಪು ಪ್ರಕಟಿಸಿತ್ತು. ರೆಡ್ಡಿ ಜತೆಗೆ ಒಎಂಸಿ ಕಂಪನಿ ವ್ಯವಸ್ಥಾಪಕ ನಿರ್ದೇಶಕ ಬಿ.ವಿ. ಶ್ರೀನಿವಾಸ ರೆಡ್ಡಿ, ಆಪ್ತ ಎಂ.ಅಲಿಖಾನ್, ಗಣಿ ಇಲಾಖೆ ಮಾಜಿ ಅಧಿಕಾರಿ ವಿ.ಡಿ.ರಾಜಗೋಪಾಲ್ ದೋಷಿಗಳು ಎಂದು ಹೇಳಿದೆ. ಕೋರ್ಟ್ ರೆಡ್ಡಿಗೆ 7 ವರ್ಷ ಜೈಲು ಶಿಕ್ಷೆ, 10 ಲಕ್ಷ ರೂ. ದಂಡ, ಒಎಂಸಿ ಗಣಿ ಕಂಪನಿಗೆ 2 ಲಕ್ಷ ರೂ. ದಂಡ ವಿಧಿಸಿದೆ

## ಸುಪ್ರೀಂ ಕೋರ್ಟ್ ಮೆಟ್ಟಿಲೇರಲು ರಾಜ್ಯ ಅರಣ್ಯ ಇಲಾಖೆ ನಿರ್ಧಾರ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕ ಅರಣ್ಯ ಇಲಾಖೆಯು ಕಾಡುಗೋಡಿ ಭೂ ಪ್ರಕರಣವನ್ನು ಮತ್ತೆ ವಿಚಾರಣೆಗೆ ಒಳಪಡಿಸಲು ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಲು ನಿರ್ಧರಿಸಿದೆ. ಪೀಣ್ಯದಲ್ಲಿ HMT ಸ್ವಾಧೀನದಲ್ಲಿರುವ ಭೂಮಿಯನ್ನು ವಶಪಡಿಸಿಕೊಳ್ಳಲು ಇಲಾಖೆ ಈಗಾಗಲೇ ಕಾನೂನು ಹೋರಾಟ ನಡೆಸುತ್ತಿದೆ.


ಉದಯವಾಹಿನಿ ಚಿತ್ರ

ಅರಣ್ಯ ಇಲಾಖೆಯ ದಾಖಲೆಗಳ ಪ್ರಕಾರ, 711 ಎಕರೆಗಳಷ್ಟು ವಿಸ್ತಾರವಾದ ಕಾಡುಗೋಡಿ ತೋಟದಲ್ಲಿ 1,901 ಎಕರೆಗಳಷ್ಟು ಭೂಮಿಯನ್ನು ರಾಜ್ಯ ಅರಣ್ಯ ಇಲಾಖೆಗೆ ಹಸ್ತಾಂತರಿಸಲಾಯಿತು. 1907 ರಲ್ಲಿ ಅದನ್ನು ಮೀಸಲು ಅರಣ್ಯವೆಂದು ಘೋಷಿಸಲಾಯಿತು. 1960 ರ ದಶಕದ ನಂತರ, ಭೂಮಿಯ ಕೆಲವು ಭಾಗಗಳನ್ನು ಪೊಲೀಸರು ಬಳಸಿಕೊಂಡರು 141 ಎಕರೆಗಳನ್ನು ಪೊಲೀಸ್ ಇಲಾಖೆಗೆ ಹಸ್ತಾಂತರಿಸಲಾಯಿತು. ಅಲ್ಲದೆ, 400 ಎಕರೆಗಳನ್ನು ದಿಣ್ಣೂರು ಲೇಔಟ್ ರಚನೆ ಕೃಷಿ ಉದ್ದೇಶಗಳಿಗಾಗಿ ಬಳಸಲಾಯಿತು. ಕಾಲಾನಂತರದಲ್ಲಿ, ಅದನ್ನು ರದ್ದುಗೊಳಿಸಲಾಯಿತು.

ನಂತರ ರಾಜ್ಯ ಸರ್ಕಾರವು ಭೂಮಿಯನ್ನು ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿಗೆ (ಕೆಐಎಡಿಬಿ) ಹಸ್ತಾಂತರಿಸಿತು. ಕೆಐಎಡಿಬಿ ಭೂ ಸಮಸ್ಯೆಯಲ್ಲಿ ಎಲ್ಲಾ ಅಭಿವೃದ್ಧಿಯಾಗದ ಭೂಮಿಯನ್ನು ವಶಪಡಿಸಿಕೊಳ್ಳಲು ಸುಪ್ರೀಂ ಕೋರ್ಟ್‌ನಲ್ಲಿ ಕ್ಯುರೇಟಿವ್ ಅರ್ಜಿಯನ್ನು ಸಲ್ಲಿಸಲು ನಾವು ಕೆಲಸ ಮಾಡುತ್ತಿದ್ದೇವೆ.

ಇದು ಯಾವ ರೀತಿ ಪರಿಣಾಮಗಳನ್ನು ತರುತ್ತದೆ ಎಂಬುದು ನಮಗೆ ತಿಳಿದಿದೆ ಎಂದು ಕರ್ನಾಟಕ ಅರಣ್ಯ, ಪರಿಸರ ಪರಿಸರ ಸಚಿವ ಈಶ್ವರ್ ಬಿ ಖಂಡ್ರೆ tnieಗೆ ತಿಳಿಸಿದರು. ಈ ಪ್ರಕರಣಗಳಲ್ಲಿ ಕರ್ನಾಟಕ ಹೈಕೋರ್ಟ್ ಮತ್ತು ಸುಪ್ರೀಂ ಕೋರ್ಟ್‌ನಲ್ಲಿ ಇಲಾಖೆಯು ಹಿಂದಿನ ಮೇಲ್ಮನವಿಗಳಲ್ಲಿ ಸೋತಿದ್ದನ್ನು ನೆನಪಿಸಿಕೊಳ್ಳಬಹುದು.

**ಕಾಡುಗೋಡಿ ಭೂ ಪ್ರಕರಣ**

> **ಕೈಗಾರಿಕೆಗಳಿಗೆ, ಇತರ ಉದ್ದೇಶಗಳಿಗಾಗಿ ಭೂಮಿಯನ್ನು ವಿತರಿಸಿದ ನಂತರ, ಈಗ ಕೇವಲ 120 ಎಕರೆ ಭೂಮಿ ಮಾತ್ರ ಉಳಿದಿದೆ. ಆದರೆ ನಮ್ಮ ಬಳಿ ಕೇವಲ 69 ಎಕರೆ ಮಾತ್ರ ಇದೆ. ಈ ಪ್ರದೇಶದಲ್ಲಿ ಬಳಸದೆ ಇರುವ ಎಲ್ಲಾ ಭೂಮಿ ಹಸಿರು ಪ್ರದೇಶಗಳನ್ನು ವಶಪಡಿಸಿಕೊಳ್ಳಲು ನಾವು ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಲು ಕೆಲಸ ಮಾಡುತ್ತಿದ್ದೇವೆ ಎಂದು ಹೆಸರು ಬಹಿರಂಗಪಡಿಸಲು ಬಯಸದ ಹಿರಿಯ ಅರಣ್ಯ ಅಧಿಕಾರಿಯೊಬ್ಬರು ಹೇಳಿದರು.**

## ರಾಜ್ಯದಲ್ಲಿ ಕೊರೋನಾ ಹೆಚ್ಚಳ, ಸದ್ಯಕ್ಕೆ ಮಾಸ್ಕ್ ಕಡ್ಡಾಯ ಇಲ್ಲ

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಕೊರೋನಾ ಹೆಚ್ಚಳ ಆಗ್ತಿರೋ ಹಿನ್ನಲೆ ಮುಂಜಾಗ್ರತಾ ಕ್ರಮಗಳನ್ನ ತೆಗೆದುಕೊಳ್ಳಲು ಆರೋಗ್ಯ ಇಲಾಖೆ, ವೈದ್ಯಕೀಯ ಶಿಕ್ಷಣ ಇಲಾಖೆಗೆ ಸೂಚನೆ ನೀಡಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.


ಉದಯವಾಹಿನಿ ಚಿತ್ರ

ಕೊರೋನಾ ಸಂಬಂಧ ಸಭೆ ನಡೆಸಿದ ಬಗ್ಗೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಸೋಮವಾರ ಕೋವಿಡ್ ಸಂಬಂಧ ಸಭೆ ಮಾಡಿದ್ದೇನೆ. ಆರೋಗ್ಯ ಇಲಾಖೆ, ವೈದ್ಯಕೀಯ ಶಿಕ್ಷಣ ಇಲಾಖೆ ಮತ್ತು ಟಾಸ್ಕ್ ಫೋರ್ಸ್ ಸಮಿತಿ ಜೊತೆ ಸಭೆ ಮಾಡಿದ್ದೇನೆ. ಕೆಲವು ಮುನ್ನೆಚ್ಚರಿಕೆ ಕ್ರಮ ತೆಗೆದುಕೊಳ್ಳಲು ಹೇಳಿದ್ದೇನೆ. ಎಲ್ಲದಕ್ಕೂ ತಯಾರಿರುವಂತೆ ಸೂಚನೆ ಕೊಟ್ಟಿದ್ದೇನೆ. ವೆಂಟಿಲೇಟರ್ ಆಕ್ಸಿಜನ್ ಪಿಪಿಇ ಕಿಟ್, ಬೆಡ್ ಯಾವುದರ ಕೊರತೆ ಇರಬಾರದು ಎಂದು ಸೂಚನೆ ಕೊಟ್ಟಿದ್ದೇನೆ ಎಂದರು. ವಾರ್ಡ್‌ಗಳನ್ನು ಸಿದ್ಧ ಮಾಡಲು ಸೂಚನೆ ನೀಡಿದ್ದೇನೆ.

ಇದು ಅಷ್ಟು ಅಪಾಯಕಾರಿ ತಳಿ ಅಲ್ಲ. ಆದರೂ ಮುನ್ನೆಚ್ಚರಿಕೆಯಿಂದ ಇರಬೇಕು. ಮಕ್ಕಳಿಗೆ ಆರೋಗ್ಯ ಸಮಸ್ಯೆ ಇದ್ದರೆ ಅವರನ್ನ ಶಾಲೆಗೆ ಕಳಿಸೋದು ಬೇಡ ಅಂತ ಹೇಳಿದ್ದೇವೆ. ವಯಸ್ಸಾದವರು, ವಿವಿಧ ಆರೋಗ್ಯ ಸಮಸ್ಯೆ ಇರೋರು ಮಾಸ್ಕ್ ಧರಿಸಬೇಕು ಎಂದು ಸಲಹೆ ಕೊಟ್ಟರು. ಲಸಿಕೆ ಸಿದ್ಧ ಮಾಡಿಕೊಳ್ಳಿ, ವ್ಯಾಕ್ಸಿನ್ ಖರೀದಿ ಮಾಡಿ ಇಟ್ಕೊಳ್ಳಿ ಅಂತ ಸೂಚನೆ ಕೊಟ್ಟಿದ್ದೇನೆ.

ಮಾಸ್ಕ್ ಕಡ್ಡಾಯ ಮಾಡಿ ಅಂತ ಹೇಳಿಲ್ಲ. ವಯಸ್ಸು ಆಗಿರೋದು, ಆರೋಗ್ಯ ಸಮಸ್ಯೆ ಇರೋರು ಮಾಸ್ಕ್ ಹಾಕಬೇಕು. ಏರ್ಪೋರ್ಟ್‌ನಲ್ಲಿ ಟೆಸ್ಟ್ ಮಾಡೋ ಬಗ್ಗೆ ನಿರ್ಧಾರ ಮಾಡಿಲ್ಲ. ಕೇಂದ್ರ ಸರ್ಕಾರದಿಂದ ಯಾವುದೇ ಸೂಚನೆ ಬಂದಿಲ್ಲ. ಆದರೂ ಎಚ್ಚರಿಕೆಯಿಂದ ಇರಲು ಹೇಳಿದ್ದೇನೆ ಎಂದು ತಿಳಿಸಿದರು.

## 166 ಪ್ರವಾಹ ಪೀಡಿತ ಪ್ರದೇಶಗಳ ಸಮಸ್ಯೆ ಪರಿಹಾರ

• **ಉದಯವಾಹಿನಿ, ಬೆಂಗಳೂರು**

ಬಿಬಿಎಂಪಿ ವ್ಯಾಪ್ತಿಯಲ್ಲಿ ಗುರುತಿಸಲಾದ ಪ್ರವಾಹ ಪೀಡಿತ ಪ್ರದೇಶಗಳಲ್ಲಿನ ಸಮಸ್ಯೆಗಳನ್ನು ಪರಿಹರಿಸಲು ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದರು.


ಉದಯವಾಹಿನಿ ಚಿತ್ರ

ಮಳೆನೀರು ಚರಂಡಿಗಳಲ್ಲಿ ನೀರು ಸರಾಗವಾಗಿ ಹರಿಯಲು ಬಿಡಬೇಕು, ನಿರಂತರವಾಗಿ ಹೂಳು ತೆಗೆಯಬೇಕು, ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು. ಕಾಂಕ್ರೀಟ್ ತಡೆಗೋಡೆಗಳನ್ನು ಇನ್ನೂ ನಿರ್ಮಿಸದ SWDಗಳ ಸುತ್ತಮುತ್ತಲಿನ ಪ್ರದೇಶಗಳಲ್ಲಿ ನೀರು ನಿಲ್ಲುವುದನ್ನು ತಡೆಯಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವಂತೆ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ನಗರದಲ್ಲಿ 210 ಪ್ರವಾಹ ಪೀಡಿತ ಪ್ರದೇಶಗಳಲ್ಲಿ, 166 ಸ್ಥಳಗಳಲ್ಲಿ ಈಗಾಗಲೇ ಸಮಸ್ಯೆಯನ್ನು ಪರಿಹರಿಸಲಾಗಿದೆ ಎಂದು ಆಯುಕ್ತರು ಹೇಳಿದ್ದಾರೆ. ಉಳಿದ 44 ಸ್ಥಳಗಳಲ್ಲಿ ತಕ್ಷಣ ತಾತ್ಕಾಲಿಕ ಕ್ರಮಗಳನ್ನು ತೆಗೆದುಕೊಳ್ಳುವಂತೆ ಮತ್ತು ಕುಟುಂಬಗಳಿಗೆ ಪರಿಹಾರ ಒದಗಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಇಲ್ಲಿಯವರೆಗೆ 183 ಕೆರೆಗಳಲ್ಲಿ 13 ಕೆರೆಗಳಲ್ಲಿ ಸ್ಲೂಯಿಸ್ ಗೇಟ್‌ಗಳನ್ನು ಅಳವಡಿಸಿರುವುದರಿಂದ, ಕೆರೆಗಳಲ್ಲಿ ಮಳೆನೀರನ್ನು ಬಿಡಲು, ಅದನ್ನು ತುಂಬಿಸಲು ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಉಳಿದ ಕೆರೆಗಳಲ್ಲಿ ಹಂತ ಹಂತವಾಗಿ ಸ್ಲೂಯಿಸ್ ಗೇಟ್‌ಗಳನ್ನು ಅಳವಡಿಸಲು ಮತ್ತು ಹೂಳು ತೆಗೆಯದ ಕೆರೆಗಳಲ್ಲಿ ಹೂಳು ತೆರವುಗೊಳಿಸಲು ಯೋಜನೆಯನ್ನು ರೂಪಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

> **ಮಳೆಗಾಲದಲ್ಲಿ, ನಗರದಲ್ಲಿ ಗಾಳಿಯಿಂದಾಗಿ ಬಿದ್ದ ಮರಗಳು ಮತ್ತು ಮರದ ಕೊಂಬೆಗಳನ್ನು ತೆರವುಗೊಳಿಸಲು ತಂಡಗಳು ಯಾವಾಗಲೂ ಸಿದ್ಧರಾಗಿರಬೇಕು. ಒಣಗಿದ/ಅಪಾಯಕಾರಿ ಮರಗಳು ಹಾಗೂ ಕೊಂಬೆಗಳನ್ನು ಗುರುತಿಸಿ ತೆರವುಗೊಳಿಸಿ ಎಂದು ತಿಳಿಸಿದ್ದಾರೆ. ಕಸದ ಸಂಗ್ರಾಹಕಗಳು ರಸ್ತೆ ಜಾಗವನ್ನು ಕಬಳಿಸುತ್ತಿರುವ ಬಗ್ಗೆ ಮಾತನಾಡಿದ ಅವರು ತ್ಯಾಜ್ಯವನ್ನು ಆಟೋ ಟಿಪ್ಪರ್‌ಗಳಿಂದ ರಸ್ತೆಬದಿಯಲ್ಲಿರುವ ಸಂಗ್ರಾಹಕಗಳಿಗೆ ವರ್ಗಾಯಿಸಲಾಗುತ್ತಿದೆ. ರಸ್ತೆ ಬದಿಯ ವರ್ಗಾವಣೆ ಮಾಡಲಾಗುತ್ತಿರುವ ಸ್ಥಳಗಳನ್ನು ತಕ್ಷಣವೇ ಇತರ ಸ್ಥಳಗಳಿಗೆ ಶಿಫ್ಟ್ ಮಾಡಬೇಕು. ಈ ನಿಟ್ಟಿನಲ್ಲಿ, ಪುರಸಭೆಯ ಭೂಮಿ ಅಥವಾ ಇತರ ಸ್ಥಳಗಳನ್ನು ಗುರುತಿಸಿ ರಸ್ತೆ ಬದಿಯ ವರ್ಗಾವಣೆಯ ಪ್ರಕಾರ ಕ್ರಮ ಕೈಗೊಳ್ಳುವಂತೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.**

## ಐದು ಎಂಟೆಕ್ ಕೋರ್ಸ್‌ಗಳಿಗೆ ಪ್ರವೇಶ ಪರೀಕ್ಷೆ ಇಲ್ಲ- ಕೆಇಎ

• **ಉದಯವಾಹಿನಿ, ಬೆಂಗಳೂರು**

ಲಭ್ಯವಿರುವ ಸೀಟುಗಳಿಗಿಂತ ಕಡಿಮೆ ಸಂಖ್ಯೆಯ ಅಭ್ಯರ್ಥಿಗಳು ಪರೀಕ್ಷೆಗೆ ನೋಂದಣಿ ಮಾಡಿಕೊಂಡಿರುವ ಕಾರಣ ಎಂ.ಇ/ಎಂ.ಟೆಕ್‌ನ ಈ ಕೆಳಗಿನ ಐದು ಕೋರ್ಸ್‌ಗಳಿಗೆ ಪಿಜಿಸಿಇಟಿ-25 ನಡೆಸದಿರಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ತೀರ್ಮಾನಿಸಿದೆ.

ಬಯೊ- ಟೆಕ್ನಾಲಜಿ, ಕೆಮಿಕಲ್ ಎಂಜಿನಿಯರಿಂಗ್, ಎನ್ವಿರಾನ್ಮೆಂಟ್ ಎಂಜಿನಿಯರಿಂಗ್, ಪಾಲಿಮರ್ ಸೈನ್ಸ್ ಮತ್ತು ಟೆಕ್ಸ್‌ಟೈಲ್ ಟೆಕ್ನಾಲಜಿ ಕೋರ್ಸ್‌ಗಳ ಪ್ರವೇಶ ಪರೀಕ್ಷೆಗೆ ಲಭ್ಯವಿರುವ ಸೀಟುಗಳಿಗಿಂತ ಕಡಿಮೆ ಮಂದಿ ನೋಂದಣಿ ಮಾಡಿಕೊಂಡಿದ್ದಾರೆ. ಹೀಗಾಗಿ ಅರ್ಹದಾಯಕ ಪದವಿ ಪರೀಕ್ಷೆಗಳಲ್ಲಿ ಅಭ್ಯರ್ಥಿಗಳು ಗಳಿಸಿರುವ ಅಂಕಗಳ ಆಧಾರದ ಮೇಲೆ ಮೆರಿಟ್ ಪಟ್ಟಿ ಸಿದ್ಧಪಡಿಸಿ, ಪ್ರಕಟಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಈ ಮೇಲಿನ ಕೋರ್ಸ್‌ಗಳನ್ನು ಹೊರತುಪಡಿಸಿ, ಸಿವಿಲ್ ಎಂಜಿನಿಯರಿಂಗ್, ಮೆಕಾನಿಕಲ್ ಸೈನ್ಸ್ ಮತ್ತು ಎಲೆಕ್ಟ್ರಿಕಲ್ ಸೈನ್ಸ್ ವಿಷಯಗಳಿಗೆ ಇದೇ 31ರಂದು ವೇಳಾಪಟ್ಟಿ ಪ್ರಕಾರ ಪರೀಕ್ಷೆ ನಡೆಯಲಿದೆ. ಕಂಪ್ಯೂಟರ್ ಸೈನ್ಸ್ ಎಂಜಿನಿಯರಿಂಗ್ ವಿಷಯಕ್ಕೆ ಸಂಬಂಧಿಸಿದಂತೆ ಕಂಪ್ಯೂಟರ್ ಆಧಾರಿತ ಪರೀಕ್ಷೆಯನ್ನು ಜೂನ್ 2ರಂದು ನಡೆಸಲಾಗುವುದು ಎಂದು ಅವರು ಹೇಳಿಕೆಯಲ್ಲಿ ತಿಳಿಸಿದ್ದಾರೆ.

# ಅಪಾರ್ಟ್‌ಮೆಂಟ್‌ಗಳಿಗೆ ಬಲ್ಕ್ ವಾಟರ್ ಬುಕ್ಕಿಂಗ್ ಸೇವೆ

## ಮೊದಲು ಬಂದವರಿಗೆ ಆದ್ಯತೆ ಮತ್ತು ಮುಂಗಡ ಪಾವತಿ ಆಯ್ಕೆ

• **ಉದಯವಾಹಿನಿ, ಬೆಂಗಳೂರು**

ಸಂಚಾರಿ ಕಾವೇರಿ ಯೋಜನೆಯಡಿ ನಿಗದಿತದರದಲ್ಲಿ ಟ್ಯಾಂಕರ್‌ನಲ್ಲಿ ನೀರು ಪೂರೈಕೆ ಮಾಡುತ್ತಿರುವ ಬೆಂಗಳೂರು ಜಲಮಂಡಳಿ, ಮುಂದುವರಿದು ಅಪಾರ್ಟ್‌ಮೆಂಟ್‌ಗಳಿಗೆ ಬಲ್ಕ್ ವಾಟರ್ ಬುಕ್ಕಿಂಗ್ ಸೇವೆ' ಆರಂಭಿಸಲು ನಿರ್ಧರಿಸಿದೆ. ಬೆಂಗಳೂರು ಜಲಮಂಡಳಿಯ ಕೇಂದ್ರ ಕಚೇರಿಯಲ್ಲಿ ಮಂಗಳವಾರ ಮಂಡಳಿಯ ಅಧ್ಯಕ್ಷ ಡಾ. ರಾಮ್ ಪ್ರಸಾತ್ ಮನೋಹರ್ ನೇತೃತ್ವದಲ್ಲಿ ನಡೆದ ಅಧಿಕಾರಿಗಳ ಸಭೆಯಲ್ಲಿ ಬಲ್ಕ್ ವಾಟರ್ ಬುಕ್ಕಿಂಗ್ ಸೇವೆ ನೀಡಲು ನಿರ್ಧರಿಸಲಾಗಿದೆ.



ಉದಯವಾಹಿನಿ ಚಿತ್ರ

ಬೆಂಗಳೂರು ನಗರದ ಹೊರವಲಯದಲ್ಲಿರುವ ಬಹುತೇಕ ಅಪಾರ್ಟ್‌ಮೆಂಟ್‌ಗಳು ಅಂತರ್ಜಲದ ಮೇಲೆಯೇ ಹೆಚ್ಚು ಅವಲಂಬಿತವಾಗಿವೆ. ಈ ಅಪಾರ್ಟ್‌ಮೆಂಟ್‌ಗಳು ಬೇಸಿಗೆಯಲ್ಲಿ ಬೋರ್‌ವೆಲ್ ಬತ್ತಿದಾಗ ಖಾಸಗಿ ಟ್ಯಾಂಕರ್‌ಗಳಿಂದ ನೀರು ಖರೀದಿಸುತ್ತವೆ. ಹಾಗಾಗಿ, ಅಂತರ್ಜಲದ ಮೇಲಿನ ಅವಲಂಬನೆ ಕಡಿಮೆ ಮಾಡುವುದು ಮತ್ತು ಅವರಿಗೂ ಶುದ್ಧ ನೀರು ಪೂರೈಕೆ ಮಾಡುವುದು ನಮ್ಮ ಉದ್ದೇಶವಾಗಿದೆ.

ಹೀಗಾಗಿ ಅವರಿಗೂ ಬಿಐಎಸ್ ಪ್ರಮಾಣೀಕೃತ ಶುದ್ಧ ಕುಡಿಯುವ ನೀರನ್ನು ಒದಗಿಸುವ ನಿಟ್ಟಿನಲ್ಲಿ ಬಲ್ಕ್ ವಾಟರ್ ಬುಕ್ಕಿಂಗ್ ವ್ಯವಸ್ಥೆ ಸೇವೆ ಆರಂಭಿಸಲು ನಿರ್ಧಾರ ಕೈಗೊಳ್ಳಲಾಗಿದೆ ಎಂದು ಡಾ. ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ.

**ಬಲ್ಕ್ ವಾಟರ್ ಬುಕ್ಕಿಂಗ್ ವ್ಯವಸ್ಥೆ**

**ಬುಕ್ಕಿಂಗ್ ಪ್ರಕ್ರಿಯೆ ಹೀಗೆ:** ಮೊದಲು ಬಂದವರಿಗೆ ಮೊದಲು ಅವಕಾಶ ಆಧಾರಿತ ಬುಕ್ಕಿಂಗ್, ಕನಿಷ್ಠ ಒಂದು ತಿಂಗಳ ಮುಂಗಡ ಪಾವತಿ ಅವಶ್ಯಕವಾಗಿದೆ.

ಬಲ್ಕ್ ಬುಕ್ಕಿಂಗ್ ಮೂಲಕ ನಿರಂತರ ಸರಬರಾಜು ಖಚಿತಪಡಿಸಿಕೊಳ್ಳಬಹುದು. ಒಂದು ವರ್ಷದ ಅವಧಿಗೆ ಬುಕ್ಕಿಂಗ್ ಮಾಡುವ ವ್ಯವಸ್ಥೆಯೂ ಲಭ್ಯವಿದೆ. ಸಂಚಾರಿ ಕಾವೇರಿ ಯೋಜನೆಯು ಭಾರತದ ಮೊದಲ ತಾಂತ್ರಿಕ ವ್ಯವಸ್ಥೆಯ ಟ್ಯಾಂಕರ್ ಯೋಜನೆಯಾಗಿದ್ದು, ಜಿಪಿಎಸ್ ನಿಯಂತ್ರಣ, ಪೂರೈಕೆ ಶ್ರೇಣೀಕರಣ ಮತ್ತು ಪೂರೈಕೆ ನಿಯಂತ್ರಣ ಕೇಂದ್ರಗಳ ಮೂಲಕ ಬೆಂಗಳೂರು ನಗರದಲ್ಲಿ ಅವಶ್ಯಕ ನೀರು ಲಭ್ಯವಾಗುವಂತೆ ಮಾಡಲಾಗುತ್ತಿದೆ ಎಂದು ಅವರು ವಿವರಿಸಿದ್ದಾರೆ.

ಯೋಜನೆ ಆರಂಭವಾದ ಮೊದಲ ನಾಲ್ಕು ದಿನಗಳಲ್ಲಿಯೇ 1 ಮಿಲಿಯನ್ ಲೀಟರ್ ಪ್ರಮಾಣದ ನೀರು ಸರಬರಾಜು ಮಾಡುವ ಮೂಲಕ ಜಲಮಂಡಳಿಯು 1 ಲಕ್ಷ ರೂ.ಗಿಂತ ಹೆಚ್ಚು ಶುಲ್ಕ ಸಂಗ್ರಹಿಸಿತ್ತು. ಬುಕ್ಕಿಂಗ್ ಮಾಡುವ ಮೂಲಕ ಟ್ಯಾಂಕರ್ ನೀರು ಪಡೆಯುವ ವ್ಯವಸ್ಥೆ ಕಲ್ಪಿಸಲಾಗಿದ್ದು, ಸಂಚಾರಿ ಕಾವೇರಿ ಮೊಬೈಲ್ ಆಯಪ್ ಹಾಗೂ ವೆಬ್‌ಸೈಟ್ ಮುಖಾಂತರ ನೀರಿನ ಬುಕ್ಕಿಂಗ್ ಮಾಡಬಹುದಾಗಿದೆ.

### ಸಂಚಾರ ಕಾವೇರಿಗೆ ಉತ್ತಮ ಸ್ಪಂದನೆ

**ಬೇಸಿಗೆಯಲ್ಲಿ ನಗರದಲ್ಲಿ ಉಂಟಾಗುವ ನೀರಿನ ಬವಣೆಯನ್ನೇ ಬಂಡವಾಳವಾಗಿಸಿಕೊಂಡು ಖಾಸಗಿ ಟ್ಯಾಂಕರ್ ಮಾಲೀಕರು ಜನರಿಂದ ಬೇಕಾಬಿಟ್ಟಿ ಹಣ ವಸೂಲು ಮಾಡುತ್ತಿದ್ದರು. ಇದಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಜಲಮಂಡಳಿಯು ಕೆಲ ದಿನಗಳ ಹಿಂದಷ್ಟೇ ನಿಗದಿತ ದರದಲ್ಲಿ ಶುದ್ಧ ಕಾವೇರಿ ನೀರನ್ನು ಟ್ಯಾಂಕರ್‌ಗಳ ಮೂಲಕ ಪೂರೈಸಲು ಸಂಚಾರಿ ಕಾವೇರಿ ಯೋಜನೆಯನ್ನು ಆರಂಭಿಸಿತ್ತು. ಇದಕ್ಕೆ ಸಾರ್ವಜನಿಕರಿಂದ ಅತ್ಯುತ್ತಮ ಸ್ಪಂದನೆ ವ್ಯಕ್ತವಾಗಿದೆ.**

## ಬೆಂಗಳೂರು ನಗರದಲ್ಲಿ ದಾಖಲೆ ಮಳೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೆಂಗಳೂರು**

ನಗರದಲ್ಲಿ ದಶಕದ ಅತಿಹೆಚ್ಚು ಮಳೆ 30.79 ಸೆಂ.ಮೀ ಮೇ ತಿಂಗಳಲ್ಲಿ ದಾಖಲಾಗಿದ್ದು, 2023ರ ಮೇ ನಲ್ಲಿ ಸುರಿದ 30.54 ಸೆಂ.ಮೀ ಮಳೆಯ ಪ್ರಮಾಣವನ್ನು ಮೀರಿದೆ. ಮೇ 26ರವರೆಗೆ 30.79 ಸೆಂ.ಮೀ ಮಳೆಯಾಗಿದ್ದು. ತಿಂಗಳ ಅಂತ್ಯಕ್ಕೆ ಈ ಪ್ರಮಾಣ ಇನ್ನೂ ಹೆಚ್ಚಾಗುವ ನಿರೀಕ್ಷೆ ಇದೆ. ನಗರದಲ್ಲಿ ಪೂರ್ವ ಮುಂಗಾರಿನಲ್ಲಿ ಮಾರ್ಚ್ 1ರಿಂದ ಮೇ 26ರವರೆಗೆ 34.06 ಸೆಂ.ಮೀ ಮಳೆಯಾಗಿದೆ. ಇದು ವಾಡಿಕೆಗಿಂತ (15.5 ಸೆಂ.ಮೀ) ದುಪ್ಪಟ್ಟಾಗಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಕಳೆದ ಒಂದು ದಶಕದಲ್ಲಿ ವರ್ಷದ ಮೊದಲ ಐದು ತಿಂಗಳಲ್ಲಿ ಅತಿಹೆಚ್ಚು ಮಳೆ ಸುರಿದ ದಾಖಲೆಯೂ ಈ ವರ್ಷದಲ್ಲೇ ಆಗಿದೆ.

ತಮನ್ನಾರಂತೆಯೇ ಡ್ಯಾನ್ಸ್ ಮಾಡಬಹುದು, ಬಟ್ಟೆ ಹಾಕಿಕೊಳ್ಳೋದು ಎಂಬ ಭ್ರಮೆ ಬಿಡಿ, ರಾಯಭಾರತ್ವ ಬದಲಿಸಿ: ಸಾರಾ ಮಹೇಶ್

# ಕಲ್ಪನಾ ಚಾವ್ಲಾ ರಂತಹ ಸಾಧನೆ ಮಾಡಿರೋರು ತುಂಬಾ ಜನರು ಇದ್ದಾರೆ

**• ಉದಯವಾಹಿನಿ, ಮೈಸೂರು**

ನಟಿ ತಮನ್ನಾ ಭಾಟಿಯಾ ಅವರನ್ನು ಮೈಸೂರು ಸ್ಯಾಂಡಲ್ ಸೋಪ್‌ನ ರಾಯಭಾರಿಯನ್ನಾಗಿ ನೇಮಿಸಿರುವುದಕ್ಕೆ ಮಾಜಿ ಸಚಿವ ಸಾರಾ. ಮಹೇಶ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ಈ ಹಿಂದೆ ಸಾರಾ. ಮಹೇಶ್ ಪ್ರವಾಸೋದ್ಯಮ ಸಚಿವರಾಗಿದ್ದಾಗ ಯದುವೀರ್ ಅವರನ್ನು ರಾಯ ಭಾರಿಯನ್ನಾಗಿ ನೇಮಿಸಿದ್ದನ್ನು ಅವರು ನೆನಪಿಸಿಕೊಂಡಿದ್ದಾರೆ. ಸಮಾಜಕ್ಕೆ ಯದುವಂಶದ ಕೊಡುಗೆಯನ್ನು ಪರಿಗಣಿಸಿ ಈ ನಿರ್ಧಾರ ಕೈಗೊಳ್ಳಲಾಗಿತ್ತು. ಆದರೆ ಈಗ ತಮನ್ನಾ ಅವರನ್ನು ಏಕೆ ನೇಮಕ ಮಾಡಿದ್ದಾರೋ ತಿಳಿಯುತ್ತಿಲ್ಲ ಎಂದರು.

**ತಮನ್ನಾರಂತೆ ಡ್ಯಾನ್ಸ್ ಮಾಡಬಹುದು ಎಂಬ ಭ್ರಮೆ ಬಿಡಿ**


ಮೈಸೂರು ಸ್ಯಾಂಡಲ್ ಸೋಪಿನ ರಾಯಭಾರತ್ವ ಬದಲಾವಣೆ ಮಾಡುವಂತೆ ಎಲ್ಲರೂ ಒತ್ತಾಯಿಸುತ್ತಿದ್ದಾರೆ. ಕಲ್ಪನಾ ಚಾವ್ಲಾರಂತಹ ಸಾಧಕರು ನಮ್ಮಲ್ಲಿದ್ದಾರೆ. ಅವರನ್ನು ರಾಯಭಾರಿಯನ್ನಾಗಿ ನೇಮಿಸಬೇಕು ಎಂದು ಆಗ್ರಹಿಸಿದ್ದಾರೆ. ತಮನ್ನಾ ಅವರಂತೆ ಡ್ಯಾನ್ಸ್ ಮಾಡಬಹುದು, ಬಟ್ಟೆ ಹಾಕಿಕೊಳ್ಳಬಹುದು ಎಂಬ ಭ್ರಮೆಯಿಂದ ಹೊರಬನ್ನಿ. ಕೇವಲ ಬಾಹ್ಯ ನೋಟಕ್ಕೆ ಮರುಳಾಗಬೇಡಿ. ತಮನ್ನಾ ಅವರನ್ನು ಬದಲಾಯಿಸಿ ಎಂದು ಒತ್ತಾಯಿಸಿದ್ದಾರೆ. ಮೈಸೂರಿನಲ್ಲಿ ಮಾತನಾಡಿದ ಸಾ. ರಾ. ಮಹೇಶ್, ಈ ವಿಷಯದ ಬಗ್ಗೆ ತಮ್ಮ ಅಭಿಪ್ರಾಯವನ್ನು ಹಂಚಿಕೊಂಡಿದ್ದಾರೆ. ಈ ಹಿಂದೆ ನಾನು ಪ್ರವಾಸೋದ್ಯಮ ಸಚಿವ ಆಗಿದ್ದಾಗ ಯದುವೀರ್ ಅವರನ್ನು ಪ್ರವಾಸೋದ್ಯಮ ಇಲಾಖೆಯ ರಾಯಭಾರಿಯನ್ನಾಗಿ ಮಾಡಿದ್ವಿ ಎಂದು ಹೇಳಿದರು.

ಆಗ ಯದುವೀರ್ ರಾಜಕೀಯಕ್ಕೆ ಬಂದಿರಲಿಲ್ಲ. ಯದುವಂಶವು ಸಮಾಜಕ್ಕೆ ಬಹಳಷ್ಟು ಕೊಡುಗೆ ನೀಡಿದೆ. ಅದಕ್ಕಾಗಿ ಅವರನ್ನು ನೇಮಿಸಲಾಯಿತು ಎಂದು ಅವರು ವಿವರಿಸಿದರು.

ಈಗ ತಮನ್ನಾನ ಯಾಕೆ ಮಾಡಿದ್ದಾರೋ ಗೊತ್ತಿಲ್ಲ ಎಂದು ಸಾ. ರಾ. ಮಹೇಶ್ ಪ್ರಶ್ನಿಸಿದರು. ತಮನ್ನಾ ಅವರನ್ನು ರಾಯಭಾರಿಯನ್ನಾಗಿ ನೇಮಿಸುವ ನಿರ್ಧಾರದ ಬಗ್ಗೆ ಅವರಿಗೆ ಅಸಮಾಧಾನವಿದೆ. ಬದಲಾವಣೆ ಮಾಡಿ ಅಂತ ಎಲ್ಲರೂ ಹೇಳುತ್ತಿದ್ದಾರೆ ಎಂದು ಅವರು ತಿಳಿಸಿದರು. ಈ ನಿರ್ಧಾರವನ್ನು ಬದಲಾಯಿಸಬೇಕೆಂದು ಅನೇಕ ಜನರು ಬಯಸುತ್ತಿದ್ದಾರೆ ಎಂದು ಅವರು ಹೇಳಿದರು. ಸಾಧನೆ ಮಾಡಿದವರನ್ನು ರಾಯಭಾರಿ ಯನ್ನಾಗಿ ನೇಮಿಸ ಬೇಕು ಎಂದು ಸಾ. ರಾ. ಮಹೇಶ್ ಅಭಿಪ್ರಾಯಪಟ್ಟಿದ್ದಾರೆ.

ಕಲ್ಪನಾ ಚಾವ್ಲಾರಂತಹ ಸಾಧನೆ ಮಾಡಿರೋರು ತುಂಬಾ ಜನರು ಇದ್ದಾರೆ. ಅಂತಹವರನ್ನು ರಾಯ ಭಾರಿಯನ್ನಾಗಿ ಮಾಡಿ ಎಂದು ಅವರು ಸಲಹೆ ನೀಡಿದರು. ಕಲ್ಪನಾ ಚಾವ್ಲಾ ಅವರಂತಹ ಸಾಧಕರು ನಮ್ಮ ಸಮಾಜದಲ್ಲಿದ್ದಾರೆ. ಅವರನ್ನು ಪರಿಗಣಿಸಬೇಕು ಎಂದು ಅವರು ಒತ್ತಾಯಿಸಿದರು.

**ತಮನ್ನಾ ಅವರನ್ನು ಬದಲಾವಣೆ ಮಾಡಿ**






**ಕರ್ನಾಟಕ ಸೋಪ್ಸ್ ಅಂಡ್ ಡಿಟರ್ಜೆಂಟ್ಸ್ ಲಿ.ನ ಅಧಿಕೃತ ಬ್ರ್ಯಾಂಡ್ ರಾಯಭಾರಿಯಾಗಿ ತಮನ್ನಾ ಭಾಟಿಯರನ್ನು 2 ವರ್ಷ ಮತ್ತು ಎರಡು ದಿನಗಳ ಅವಧಿಗೆ 6.20 ಕೋಟಿ ರೂ. ವೆಚ್ಚದಲ್ಲಿ ನೇಮಕ ಮಾಡಿಕೊಳ್ಳಲಾಗಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ. ತಮನ್ನಾ ಭಾಟಿಯಾರನ್ನು ನೇಮಕ ಮಾಡಿಕೊಳ್ಳಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999ರ ಕಲಂ 4(ಜಿ)ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಲಾಗಿದ್ದು, ವಾಣಿಜ್ಯ, ಕೈಗಾರಿಕಾ ಇಲಾಖೆಗೆ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಲಾಗಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.**

**6.20 ಕೋಟಿ ರೂ. ವೆಚ್ಚ**

> **ನಟಿ ತಮನ್ನಾ ಭಾಟಿಯಾ ಅವರನ್ನು ಮೈಸೂರು ಸ್ಯಾಂಡಲ್ ಸೋಪ್ ರಾಯಭಾರಿಯನ್ನಾಗಿ ನೇಮಕ ಮಾಡಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿ, ಈ ಹಿಂದೆ ಯದುವೀರ್ ಅವರನ್ನು ರಾಯಭಾರಿಯನ್ನಾಗಿ ನೇಮಿಸಿದ್ದನ್ನು ಅವರು ನೆನಪಿಸಿಕೊಂಡಿದ್ದಾರೆ. ಈಗ ತಮನ್ನಾ ನೇಮಿಸಿರುವುದಕ್ಕೆ ಅವರು ಪ್ರಶ್ನಿಸಿದ್ದಾರೆ ಕಲ್ಪನಾ ಚಾವ್ಲಾ ರಂತಹ ಸಾಧಕರನ್ನು ರಾಯಭಾರಿಯನ್ನಾಗಿ ನೇಮಿಸಬೇಕು**
>
> **-ಸಾ.ರಾ. ಮಹೇಶ್, ಮಾಜಿ ಸಚಿವ**

# ಕೊಳವೆ ಬಾವಿಗಳಲ್ಲಿ ನೀರು, ತಹಶೀಲ್ದಾರ್‌ಗೆ ಮನವಿ

**• ಉದಯವಾಹಿನಿ, ಮಾಲೂರು**

ಮಾಲೂರು ಹೊಸೂರು ರಸ್ತೆಯ ಕೂರಂಡಹಳ್ಳಿ ಕೈಗಾರಿಕಾ ಪ್ರದೇಶದಲ್ಲಿನ ಕಂಪನಿಗಳಿಂದ ಬರುವ ತ್ಯಾಜ್ಯ ನೀರಿನಿಂದ ನೊಸಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ಕೊಳವೆಬಾವಿಗಳಲ್ಲಿ ಕಲುಷಿತ ನೀರು ಬರುತ್ತಿದ್ದು ಈ ನೀರು ಜನ ಹಾಗೂ ದನಕರುಗಳು ಕುಡಿಯಲು ಯೋಗ್ಯಕರವಾಗಿಲ್ಲ ಎಂದು ಆರೋಪಿಸಿ ಕರುನಾಡ ರೈತ ಜನಾಭಿವೃದ್ಧಿ ಸಂಘದ ವತಿಯಿಂದ ತಾಲ್ಲೂಕು ಕಚೇರಿಯಲ್ಲಿ ತಹಶೀಲ್ದಾರ್ ಎಂ.ವಿ.ರೂಪ ರವರಿಗೆ ಮನವಿ ಪತ್ರ ಸಲ್ಲಿಸಿದರು. ತಾಲ್ಲೂಕು ಕೈಗಾರಿಕಾ ಮಾಲೂರು ಪ್ರದೇಶದಲ್ಲಿನ ಕಂಪನಿಗಳಿಂದ ಬರುವ ತ್ಯಾಜ್ಯ ನೀರಿನಿಂದ ನೊಸಗೆರೆ ಗ್ರಾಮ ಪಂಚಾಯಿತಿ ಗ್ರಾಮಗಳ ಕೊಳವೆ ಬಾವಿಗಳಲ್ಲಿ ಕಲುಷಿತ ನೀರು ಬರುತ್ತಿದೆ, ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ಕರುನಾಡ ರೈತ ಜನಾಭಿವೃದ್ಧಿ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಎಂಆರ್ ರವಿಚಂದ್ರ ಹೇಳಿದರು.

ಅವರು ಪಟ್ಟಣದ ತಾ.ಪಂ. ಕಚೇರಿಯಲ್ಲಿ ತಹಶೀಲ್ದಾರ್ ಎಂ.ವಿ.ರೂಪರವರಿಗೆ ಮನವಿ ಪತ್ರ ಸಲ್ಲಿಸಿ ಮಾತನಾಡಿರು. ಮಾಲೂರು ಸಮೀಪದಲ್ಲಿರುವ ನೊಸಗೆರೆ ಗ್ರಾ.ಪಂ. ವ್ಯಾಪ್ತಿಗೆ ಬರುವ ಅಪೋಲೋ ಮತ್ತು ಇನ್ನಿತರೆ ಕಾರ್ಖಾನೆಗಳಿಂದ ಹೊರ ಬರುವ ತ್ಯಾಜ್ಯ ನೀರನ್ನು ಕಂಪನಿಯಲ್ಲಿ ಹಳೆಯ ಕೊಳವೆ ಬಾವಿಗಳಲ್ಲಿ ನೀರನ್ನು ಇಂಗಿಸುವುದರಿಂದ 3-4 ಗ್ರಾಮಗಳ ಕೊಳವೆ ಬಾವಿಗಳಲ್ಲಿ ತ್ಯಾಜ್ಯ ನೀರು ಬರುತ್ತಿದ್ದು ಈ ನೀರಿನಿಂದ ಯಾವುದೇ ಬೆಳೆ ಇಟ್ಟರು ಬೆಳೆ ಬೆಳೆಯದೆ ರೈತರು ನಷ್ಟಕ್ಕೆ ತುತ್ತಾಗುತ್ತಿದ್ದು, ಈಗಾಗಲೇ ನೊಸಗೆರೆ ಗ್ರಾ.ಪಂ. ಅಭಿವೃದ್ಧಿ ಅಧಿಕಾರಿಯ ಗಮನಕ್ಕೆ ತಂದರು ಪ್ರಯೋಜನ ವಾಗಲಿಲ್ಲವೆಂದು, ಈ ಕೈಗಾರಿಕಾ ಪ್ರದೇಶದ ಸುತ್ತ ಮುತ್ತಲಿನ ಕೊಳವೆ ಬಾವಿಗಳಿಂದ ಬರುವ ನೀರನ್ನು ಜಾನುವಾರು ಗಳು ಸಹ ಕುಡಿಯಲು ಸಾಧ್ಯವಿಲ್ಲದಂತಾಗಿದೆ ಎಂದರು. ಈ ಸಂದರ್ಭದಲ್ಲಿ ತಾ.ಪಂ. ಇಒ ಕೃಷ್ಣಪ್ಪ, ತಾಲ್ಲೂಕು ಆರೋಗ್ಯಾಧಿಕಾರಿಗಳಿಗೆ ಮನವಿ ಪತ್ರವನ್ನು ಸಲ್ಲಿಸಿದರು.



ಉದಯವಾಹಿನಿ ಚಿತ್ರ

> **ಗ್ರಾಮಸ್ಥರು ಕುಡಿಯಲೂ ನೀರನ್ನು ಸಮೀಪದ ಗ್ರಾಮಗಳಿಂದ ತಂದು ಸೇವಿಸುವಂತಹ ಪರಿಸ್ಥಿತಿ ಉಂಟಾಗಿದ್ದು, ಈ ಭಾಗದ ಸಾರ್ವಜನಿಕರು ವಿಷಪೂರಿತ ನೀರನ್ನು ಕಂಡು ಆತಂಕದಿಂದ ಇದ್ದು ಈ ನೀರಿನಿಂದ ಜನರ ಆರೋಗ್ಯದ ಮೇಲೆ ಪರಿಣಾಮ ಬೀರಲಿದ್ದು, ಈ ವಿಷಯವಾಗಿ ಪರಿಶೀಲಿಸಿ ತನಿಖೆ ನಡೆಸಿ ಸೂಕ್ತ ಕ್ರಮ ವಹಿಸಿ ಸಾರ್ವಜನಿಕರಿಗೆ, ರೈತರಿಗೆ, ಬಡಜನರಿಗೆ ನ್ಯಾಯ ಒದಗಿಸಬೇಕು ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ನ್ಯಾಯಕ್ಕಾಗಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದರು.**

# ಸೀರೆ ಹಂಚಿಕೆ ಟೀಕಿಸಿದವರ ವಿರುದ್ಧ ಎಫ್‌ಐಆರ್

**• ಉದಯವಾಹಿನಿ, ರಾಮನಗರ**

ನಗರದ ಜೂನಿಯರ್ ಕಾಲೇಜು ಮೈದಾನದಲ್ಲಿ ಕಳೆದ ತಿಂಗಳು ಜಿಲ್ಲಾಡಳಿತ ಹಮ್ಮಿಕೊಂಡಿದ್ದ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ, ಶಾಸಕ ಎಚ್.ಎ. ಇಕ್ಬಾಲ್ ಹುಸೇನ್ ಮಹಿಳೆಯರಿಗೆ ಸೀರೆ ಹಂಚಿಕೆ ಮಾಡಿದ್ದನ್ನು ಟೀಕಿಸಿದ್ದ ವಿವಿಧ ಸಂಘಟನೆಗಳ ನಾಲ್ವರ ವಿರುದ್ಧ ರಾಮನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಜಿಲ್ಲಾ ಮಹಿಳಾ ಕಾಂಗ್ರೆಸ್ ಸಮಿತಿ ಅಧ್ಯಕ್ಷೆ ದೀಪಾ ಮುನಿರಾಜು ನೀಡಿದ ದೂರಿನ ಮೇರೆಗೆ ಕನಕಪುರದ ಜಯ ಕರ್ನಾಟಕ ಜನಪರ ವೇದಿಕೆಯ ಕುಮಾರಸ್ವಾಮಿ, ರಾಮನಗರದ ಜೆಡಿಎಸ್‌ನ ಮುಖಂಡ ಅಂಜನಾಪುರ ವಾಸು, ಕೊತ್ತಿಪುರ ಗೋವಿಂದರಾಜು ಹಾಗೂ ಡಿಎಸ್ಎಸ್ ಮುಖಂಡ ಪುನೀತ್ ವಿರುದ್ಧ ಪೊಲೀಸರು ಎಫ್ಐಆರ್ ದಾಖಲಿಸಿಕೊಂಡಿದ್ದಾರೆ.



ಜೂನಿಯರ್ ಕಾಲೇಜು ಮೈದಾನದಲ್ಲಿ ಏಪ್ರಿಲ್ 24ರಂದು ನಡೆದಿದ್ದ ಕಾರ್ಯಕ್ರಮದಲ್ಲಿ ಕಾಂಗ್ರೆಸ್‌ನ ಮಹಿಳಾ ಮುಖಂಡರು, ಗ್ರಾಮ ಪಂಚಾಯಿತಿ ಸದಸ್ಯೆಯರು, ವಿವಿಧ ಸಂಘ-ಸಂಸ್ಥೆ, ಮಹಿಳಾ ಒಕ್ಕೂಟಗಳು, ಸ್ವಸಹಾಯ ಸಂಘಗಳ ಸದಸ್ಯರು ಸೇರಿದಂತೆ ಸುಮಾರು 25 ಸಾವಿರ ಮಹಿಳೆಯರು ಭಾಗವಹಿಸಿದ್ದರು. ಶಾಸಕ ಹುಸೇನ್ ಅವರು ಅಣ್ಣನಾಗಿ ಹೆಣ್ಣು ಮಕ್ಕಳಿಗೆ ಸೀರೆಯೊಂದಿಗೆ ಬಾಗಿನ ಕೊಟ್ಟಿದ್ದರು. ಕಾರ್ಯಕ್ರಮದ ಯಶಸ್ಸನ್ನು ಸಹಿಸಲಾಗದ ನಾಲ್ವರೂ ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿ ಹರಡಿದ್ದಾರೆ. ಹೆಣ್ಣು ಮಕ್ಕಳು ಗತಿ ಇಲ್ಲದೆ ಸೀರೆ ತೆಗೆದುಕೊಳ್ಳಲು ಬಂದಿದ್ದಾರೆ. ಅವರಿಗೆ ಗಂಡಂದಿರು ಇಲ್ಲವೆ ಎಂದು ಅವಹೇಳನಕಾರಿಯಾಗಿ ಮಾತನಾಡಿ, ಆತ್ಮಗೌರವಕ್ಕೆ ಧಕ್ಕೆ ತಂದಿದ್ದಾರೆ.

ಪೊಲೀಸರಿಂದಲೂ ಸೀರೆ ಹಂಚಿಸಿದ್ದು, ಅವರಿಗೆ ಎಸ್‌ಪಿ ಅಥವಾ ಡಿಸಿ ಹೇಳಿದ್ದರೇ ಎಂದು ಪ್ರಶ್ನಿಸಿದ್ದಾರೆ. ಸುಳ್ಳು ಸಂಘಟನೆಗಳ ಹೆಸರಿನಲ್ಲಿ ಮಾಧ್ಯಮಗಳಲ್ಲಿ ಸುಳ್ಳು ಆರೋಪಗಳನ್ನು ಮಾಡಿರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆರೋಪಿಸಿ ದೀಪಾ ಅವರು ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ರೈತರು ಭೂಮಿ ಕೊಡಲು ಸಿದ್ಧರಿಲ್ಲ

**• ಉದಯವಾಹಿನಿ, ರಾಮನಗರ**

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ರೈತರು ಭೂಮಿ ಕೊಡಲು ಸಿದ್ಧರಿಲ್ಲ, ಆದರೂ ಸರ್ಕಾರ ಬಲವಂತವಾಗಿ ಭೂಮಿ ವಶಪಡಿಸಿಕೊಳ್ಳಲು ಮುಂದಾದರೆ ವಿಷ ಕುಡಿಯಲು ಸಿದ್ಧರಿದ್ದೇವೆ ಎಂದು ಭೈರಮಂಗಲ, ಕಂಚುಗಾರನಹಳ್ಳಿ ರೈತರ ಭೂ ಹಿತರಕ್ಷಣಾ ಸಂಘ ಅಧಿಕಾರಿಗಳಿಗೆ ಖಡಕ್ ಸಂದೇಶ ರವಾನಿಸಿದರು.

ಬಿಡದಿ ಸಮಗ್ರ ಉಪನಗರ ಯೋಜನೆಗೆ ಭೂ ಸ್ವಾಧೀನ ಪಡಿಸಿಕೊಳ್ಳುವ ಸಂಬಂಧ ಆಕ್ಷೇಪಣೆಗೆ ವಿಚಾರಣೆ ನಡೆಸುವ ಕುರಿತು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಭೂಮಾಲೀಕರಿಗೆ ನೋಟಿಸ್ ಜಾರಿಮಾಡಿರುವ ಹಿನ್ನೆಲೆಯಲ್ಲಿ ತಾಲ್ಲೂಕಿನ ಬಿಡದಿ ಹೋಬಳಿ ಹೊಸೂರು ಗ್ರಾಮದಲ್ಲಿ ಸೋಮವಾರ ಭೈರಮಂಗಲ, ಕಂಚುಗಾರನಹಳ್ಳಿ ರೈತರ ಭೂ ಹಿತ ರಕ್ಷಣಾ ಸಂಘದ ನೇತೃತ್ವದಲ್ಲಿ ರೈತರ ಸಮಾಲೋಚನೆ ಸಭೆಯನ್ನು ಆಯೋಜಿಸಲಾಗಿತ್ತು.

ಸಭೆಯ ನಂತರ ಸಂಘದ ಅಧ್ಯಕ್ಷ ಕೆ.ರಾಮಯ್ಯ ಸುದ್ದಿಗಾರರೊಂದಿಗೆ ಮಾತನಾಡಿ, ಭೂಸ್ವಾಧೀನವನ್ನು ವಿರೋಧಿಸಿ ಈ ಭಾಗದ ರೈತರು ಹಲವು ಸಭೆಗಳನ್ನು ಮಾಡಿದ್ದೇವೆ. ಅಲ್ಲದೆ ಇದೇ ಮೇ.16 ರಂದು ಭೈರಮಂಗಲದಿಂದ ರಾಮನಗರದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಪಾದಯಾತ್ರೆ ಕೂಡ ಮಾಡಿದ್ದೇವೆ.

ಆದರೆ ಜನಪ್ರತಿನಿಧಿಗಳಾಗಲಿ ಅಥವಾ ಅಧಿಕಾರಿಗಳಾಗಲಿ ಈವರೆಗೆ ಒಂದು ಸಭೆಯನ್ನು ಕರೆದು ರೈತರ ಬಳಿ ಚರ್ಚಿಸಿಲ್ಲ. ಇದೀಗ ಏಕಾಏಕಿ 25 ಜನರಿಗೆ ನೋಟಿಸ್ ಜಾರಿ ಮಾಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ರೈತಮುಖಂಡ ಶ್ರೀನಿವಾಸರೆಡ್ಡಿ ಮಾತನಾಡಿದರು, ರೈತರ ಭೂ ಹಿತರಕ್ಷಣಾ ಸಂಘದ ನಾಗರಾಜು ಮಾತನಾಡಿದರು,ಗ್ರಾಪಂ ಸದಸ್ಯ ಹರೀಶ್ ಗೌಡ ಮಾತನಾಡಿದರು. ರೈತ ಮುಖಂಡರಾದ ಕೃಷ್ಣ ಹೆಚ್.ಎಸ್.ಮಂಜುನಾಥ್ ಹರೀಶ್‌ಕುಮಾರ್, ಶಿವರಾಮ್, ಹೆಚ್.ಎಸ್.ಪ್ರದೀಪ್, ಚೌಕಹಳ್ಳಿ ರವಿ ಕುಮಾರ್ ನಾಗರಾಜು, ಅರಳಾಳುಸಂದ್ರ ಕೆ. ರಾಮಯ್ಯ, ಅಶ್ವಥ್, ರಾಮಚಂದ್ರು ಕೆ.ರೇವಣ್ಣ, ವೆಂಕಟಾಚಲಪ್ಪ ಮತ್ತಿತರರು ಇದ್ದರು.



ಉದಯವಾಹಿನಿ ಚಿತ್ರ


> **ನೋಟಿಸ್ ತೆಗೆದುಕೊಳ್ಳದಿದ್ದರೆ ಭೂಸ್ವಾಧೀನ ಪ್ರಕ್ರಿಯೆಗೆ ರೈತರ ಸಮ್ಮತಿಯಿದೆ ಎಂದು ಭಾವಿಸುವುದು ಸರಿಯಲ್ಲ. ವಿಚಾರಣೆಗೆ ವಕೀಲರನ್ನು ನೇಮಿಸಿಕೊಂಡು ಬನ್ನಿ ಎಂದರೆ ವಕೀಲರಿಗೆ ಫೀಸು ಕೊಡುವವರು ಯಾರು? ರೈತರು ಬೇಡವೆಂದರೂ ಬಲವಂತವಾಗಿ ಭೂಸ್ವಾಧೀನ ಮಾಡಿಕೊಳ್ಳಲು ಹುನ್ನಾರ ನಡೆದಿದೆ. ತುಂಡುಭೂಮಿ ಹೊಂದಿರುವ ರೈತರ ಮುಂದಿನ ಪೀಳಿಗೆಯನ್ನು ಸರ್ವನಾಶ ಮಾಡಲು ಸರಕಾರ ಮುಂದಾಗಿದೆ. ಅನ್ನದಾತನ ಬೆನ್ನೆಲುಬು ಮುರಿಯುವ ಕೆಲಸ ಇದಾಗಿದೆ,ಟೌನ್‌ಶಿಫ್ ಯೋಜನೆ ಕೈಬಿಟ್ಟು ರೈತರನ್ನು ಬದುಕಲು ಬಿಡಿ ಎಂದು ರಾಮಯ್ಯ ಆಗ್ರಹಿಸಿದರು.**

# ಅಧಿಕಾರಿಗಳಿಂದ ಒತ್ತುವರಿ ರಸ್ತೆ ತೆರವು

**• ಉದಯವಾಹಿನಿ, ಹಲಗೂರು**

ಸಮೀಪದ ಕೆಂಬೂತಗೆರೆ ಗ್ರಾಮದ ಸರ್ವೇ ನಂ. 39/1 ರಲ್ಲಿ ಕೆಲವರು ಒತ್ತುವರಿ ಮಾಡಿಕೊಂಡಿದ್ದ ರಸ್ತೆಯನ್ನು ಕಂದಾಯ ಇಲಾಖೆ ಅಧಿಕಾರಿಗಳು ಮಂಗಳವಾರ ಪೊಲೀಸ್ ಭದ್ರತೆಯಲ್ಲಿ ತೆರವುಗೊಳಿಸಿದರು. ಗ್ರಾಮದಲ್ಲಿನ ಸಾರ್ವಜನಿಕ ರಸ್ತೆಯನ್ನು ಕೆಲವು ಖಾಸಗಿ ವ್ಯಕ್ತಿಗಳು ರಸ್ತೆಯನ್ನು ಒತ್ತುವರಿ ಮಾಡಿಕೊಂಡಿದ್ದಾರೆ.

ಇದರಿಂದಾಗಿ ನೆರೆಹೊರೆಯ ಜಮೀನುಗಳಿಗೆ ಹೋಗಲು ತೊಂದರೆ ಆಗುತ್ತಿದೆ. ಜಮೀನು ಮಾಲೀಕರು, ರೈತರು ಕೃಷಿ ಚಟುವಟಿಕೆಗಳಿಗೆ ಹೋಗಿ ಬರಲು ತೀವ್ರ ತೊಂದರೆಯಾಗಿದೆ. ಸಾರ್ವಜನಿಕರು, ವಾಹನಗಳು ಸುಗಮವಾಗಿ ಸಂಚರಿಸಲು ಅನುಕೂಲ ಆಗುವಂತೆ ರಸ್ತೆ ತೆರವು ಮಾಡಿ ಕೊಡಬೇಕು ಎಂದು ಅರ್ಜಿದಾರ ಜೋಗಿಪುರ ಗ್ರಾಮದ ನಾಗರಾಜು ಅವರು ಮಳವಳ್ಳಿ ತಹ ಶೀಲ್ದಾರ್ ಕಚೇರಿಗೆ ಮನವಿ ಸಲ್ಲಿಸಿದ್ದರು.



ಉದಯವಾಹಿನಿ ಚಿತ್ರ


ಈ ಸಂಬಂಧ ಉನ್ನತ ಅಧಿಕಾರಿಗಳ ಆದೇಶದ ಮೇರೆಗೆ ಕಸಬಾ 2ನೇ ವೃತ್ತದ ಕಂದಾಯ ಇಲಾಖೆ ಕಂದಾಯ ನಿರೀಕ್ಷಕ ರವಿಕುಮಾರ್, ಸಿಬ್ಬಂದಿ ನೇತೃತ್ವದಲ್ಲಿ ತಾಲ್ಲೂಕು ಸರ್ವೇಯರ್ ಎಂ.ಎಸ್.ಬೀರೇಶ್ ಮಂಗಳವಾರ ಬೆಳಿಗ್ಗೆ ಸ್ಥಳಕ್ಕೆ ಬಂದು ಸಂಬಂಧಿಸಿದ ರಸ್ತೆಯ ಜಾಗವನ್ನು ಗುರುತಿಸಿದರು. ಮಳವಳ್ಳಿ ಗ್ರಾಮಾಂತರ ಎಎಸ್‌ಐ ಸಿದ್ದರಾಜು, ಸಿಬ್ಬಂದಿ ಭದ್ರತೆಯಲ್ಲಿ ಕಾಲು ದಾರಿಯನ್ನು ತೆರವುಗೊಳಿಸಿ, ರೈತರ ಜಮೀನುಗಳಿಗೆ ಸಂಚ ರಿಸಲು ಅನುವು ಮಾಡಿಕೊಡಲಾಯಿತು.

# ಕಾರ್ಮಿಕರ ಸಮಸ್ಯೆ ಬಗೆಹರಿಸಲು ಒತ್ತಾಯ

**• ಉದಯವಾಹಿನಿ, ಕೆಜಿಎಫ್**

ಬಿಜಿಎಂಎಲ್ ಕಾರ್ಖಾನೆ ಮುಚಲ್ಪಟ್ಟು 25 ವರ್ಷಗಳೇ ಕಳೆದಿದ್ದು ಬಿಜಿಎಂಎಲ್ ಕಾರ್ಮಿಕರ ಧ್ವನಿಯಾಗಿ ಕೆಲಸ ಮಾಡಲು ಹಿಂದೆ 18 ಸಂಘಟನೆಗಳು ಚಾಲ್ತಿಯಲ್ಲಿ ಇತ್ತು ಆದರೆ ಇಂದು ಕೇವಲ 3ರಿಂದ 4 ಸಂಘಟನೆಗಳು ಮಾತ್ರ ಅಸಿತ್ವದಲ್ಲಿ ಮತ್ತು ಸಕ್ರಿಯವಾಗಿ ಇದೆ ಅದರಲ್ಲಿ ನಮ್ಮ ಚಿನ್ನದ ಗಣಿ ಕಾರ್ಮಿಕರ ಕ್ಷೇಮಾಬಿದ್ಧಿ ಸಂಘ ಸಹ ಒಂದು ಕೋಲಾರ ಸಂಸದ ಮಲ್ಲೇಶಬಾಬು ಯಾವ ಸಂಘಟನೆಯ ಮುಖಂಡರನ್ನು ಕರೆದುಕೊಂಡು ಬರುವಂತೆ ಸೂಚಿಸುತ್ತಾರೋ ಅವರ ಬಳಿ ತೆರಳಿ ಕಾಲಿಗೆ ಬಿದ್ದು ಕರೆದುಕೊಂಡು ಬರಲು ಸಿದ್ದ ಆದರೆ ಸಂಸದ ಮಲ್ಲೇಶ ಬಾಬು ನಮ್ಮ ಸಮಸ್ಯೆಯನ್ನು ಬಗೆಹರಿಸಿದರೆ ಸಾಕು ಎಂದು ಚಿನ್ನದ ಗಣಿ ಕಾರ್ಮಿಕರ ಸಂಘಟನೆ ಅಧ್ಯಕ್ಷ ಮೂರ್ತಿ ಹೇಳಿದರು.

ನಗರದ ಅಥಿತಿ ಗೃಹದಲ್ಲಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಚಿನ್ನದ ಗಣಿ ಕಾರ್ಮಿಕರ ಸಂಘಟನೆ ಅಧ್ಯಕ್ಷ ಮೂರ್ತಿ ಕಳೆದ 4 ವರ್ಷಗಳಿಂದ ಬಿಜಿಎಂಎಲ್ ಕಾರ್ಮಿಕರ ಪರವಾಗಿ ಯಾವುದೇ ಸಂಘಟನೆಗಳು ನಮಗೆ ಬೇಡ ನಮ್ಮ ಸಮಸ್ಯೆಯನ್ನು ಬಗೆಹರಿಸುವ ನಿಟ್ಟಿನಲ್ಲಿ ನಾವುಗಳೇ ಹೋರಾಟ ಮಾಕೊಂಡು ಬಂದಿದ್ದೇವೆ ಆದರೆ ಇತ್ತಿಚ್ಚೆಗೆ ನಮ್ಮೊಂದಿಗೆ ಇದ್ದಂತಹ ವಿಜಯರಾಘವನ್ ಕೆ.ರಾಜೇಂದ್ರನ್ ಬಳಿ ಹೋಗಿ ನಮ್ಮದೆ ನಿಜವಾದ ಕಾರ್ಮಿಕ ಸಂಘಟನೆ ಎಂದು ಹೇಳಿಕೊಳ್ಳುತ್ತಿದ್ದಾರೆ.



ಉದಯವಾಹಿನಿ ಚಿತ್ರ

ಕೆ.ರಾಜೇಂದ್ರನ್ ಬಳಿ ಹೋಗುವ ಮುನ್ನ ಅವರು ನಮ್ಮ ಬಳಿ ಬಂದು ಪದಾಧಿಕಾರಿಗಳ ಅಭಿಪ್ರಾಯ ಪಡೆದು ತೀರ್ಮಾನ ಕೈಗೊಂಡಿದ್ದಾರೆ ಸ್ವಾಗತಿಸಬಹುದಿತ್ತು ಆದರೆ ನಮ್ಮ ಬಳಿ ಚರ್ಚೆ ಮಾಡದೆ ಏಕಪಕ್ಷೀಯ ನಿರ್ಧಾರ ಕೈಗೊಂಡು ಕೆ.ರಾಜೇಂದ್ರನ್ ಬಳಿ ಹೋಗಿ ನಮ್ಮದೆ ನಿಜವಾದ ಕಾರ್ಮಿಕ ಸಂಘಟನೆ ಎಂದು ಘೋಷಿದ್ದಾರೆ. ಆದ್ದರಿಂದ ಅವರಿಂದ ನಾವು ದೂರವಾಗಿ ಇದೀಗ ನಮ್ಮದೆ ಆದ ಚಿನ್ನದ ಗಣಿ ಕಾರ್ಮಿಕ ಸಂಘಟನೆ ಎಂದು ಅಧಿಕೃತವಾಗಿ ಕಾನೂನು ಬದ್ಧವಾಗಿ ರಚನೆ ಮಾಡಿಕೊಂಡಿದ್ದೇವೆ, ನಿವೃತ ಬಿಜಿಎಂಎಲ್ ಕಾರ್ಮಿಕರ ಹೆಸರಿನಲ್ಲಿ ಇದ್ದಂತಹ ಸಂಘಟನೆಯ ನವೀಕರಣ ಗೊಳಿಸದಿದ್ದರಿಂದ ನಿವೃತ್ತ ಬಿಜಿಎಂಎಲ್ ಕಾರ್ಮಿಕರ ಹೆಸರಿನಲ್ಲಿ ಯಾವುದೇ ಸಂಘಟನೆ ಇಲ್ಲವೆಂದು ಸೊಸೈಟಿ, ಟ್ರಸ್ಟ್‌ಗಳ ನೋಂದಣಿ ಕಚೇರಿಯಿಂದ ಅಧಿಕೃತವಾಗಿ ಮಾಹಿತಿ ಹಕ್ಕಿನಡಿ ಕೇಳಿದ ಮಾಹಿತಿಗೆ ಉತ್ತರವನ್ನು ನೀಡಿದ್ದಾರೆ. ಹಾಗಾಗಿ ನಾಳೆ ನಮಗೂ ಅಂತಹ ಪರಿಸ್ಥಿತಿ ಬರಬಾರದು ಎಂದು ಹೊಸದಾಗಿ ಚಿನ್ನದ ಗಣಿ ಕಾರ್ಮಿಕರ ಸಂಘಟನೆ ಎಂದು ರಿಜಿಸ್ಟಾರ್ ಮಾಡಿಸಿದ್ದೇವೆ ಮತ್ತು ಇನ್ನು ಮುಂದೆ ನಮ್ಮ ಹೊಸ ಸಂಘಟನೆ ಮೂಲಕ ಹೋರಾಟವನ್ನು ಮುಂದುವರೆಸುತ್ತೇವೆ ಎಂದರು.

> **ಮಾಜಿ ಸಂಸದ ಮುನಿಸ್ವಾಮಿ ಸಹ ನಮ್ಮಗೆ ಮೋಸ ಮಾಡಿಬಿಟ್ಟರು ಕೇವಲ ಪೊಳ್ಳು ಆಶ್ವಾಸನೆ ನೀಡಿದರೇ ಹೊರತು ಯಾವುದೇ ಒಳ್ಳೆಯ ಕೆಲಸವನ್ನು ಕಾರ್ಮಿಕರಿಗೆ ಮಾಡಲಿಲ್ಲ ಎಂದು ಬೇಸರ ಹೊರ ಹಾಕಿದರು. ಸ್ಥಳೀಯ ಶಾಸಕಿ ಸಹ ಮಧ್ಯ ಪ್ರವೇಶ ಮಾಡಿ ನಮ್ಮ ಅಳಲನ್ನು ಆಲಿಸಿ ಪರಿಹಾರ ಕೊಡಿಸುವಲ್ಲಿ ಮಧ್ಯೆ ಪ್ರವೇಶ ಮಾಡಬೇಕು ಎಂದರು .**

# ಕಾನೂನು ಹೋರಾಟ ಮಾಡಿ ಕೆನಾಲ್ ಕಾಮಗಾರಿಗೆ ತಡೆಯಾಜ್ಞೆ ತರುವ ಪ್ರಯತ್ನ

## ಎಕ್ಸ್‌ಪ್ರೆಸ್ ಕೆನಾಲ್: ತುಮಕೂರು ಪಾಲಿನ ಹೇಮಾವತಿ ನೀರನ್ನು ಮಾಗಡಿ, ರಾಮನಗರಕ್ಕೆ ಕೊಡಲು ಭಾರಿ ವಿರೋಧ, 31ರಂದು ಮುತ್ತಿಗೆ

**• ಉದಯವಾಹಿನಿ, ತುಮಕೂರು:**

ಪಾವಗಡ ಹೊರತುಪಡಿಸಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳೂ ಹೇಮಾವತಿ ನೀರನ್ನು ಅವಲಂಬಿಸಿವೆ. ಹೇಮಾವತಿ ನೀರಿಲ್ಲದಿದ್ದರೆ ಬರಡು ಪ್ರದೇಶವಾಗುತ್ತಿತ್ತು ಎಂದು ಶಾಸಕ ಜಿ.ಬಿ.ಜ್ಯೋತಿಗಣೇಶ್ ಹೇಳಿದರು. ನಗರದಲ್ಲಿ ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್ ಹೋರಾಟ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ಕುಡಿಯುವ ನೀರಿನ ಯೋಜನೆಗಳಿಗೆ ಮಾರಕವಾಗಲಿರುವ ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್ ಯೋಜನೆ ವಿರುದ್ಧ ಜಿಲ್ಲೆಯಾದ್ಯಂತ ಜನರನ್ನು ಸಂಘಟಿಸಿ ಹೋರಾಟ ತೀವ್ರಗೊಳಿಸಲು ಹಾಗೂ ಇದರ ಜತೆಯಲ್ಲಿ ಕಾನೂನು ಹೋರಾಟ ಮಾಡಿ ಕೆನಾಲ್ ಕಾಮಗಾರಿಗೆ ತಡೆಯಾಜ್ಞೆ ತರುವ ಪ್ರಯತ್ನ ಮಾಡುತ್ತಿದ್ದೇವೆ ಎಂದರು. ಜಿಲ್ಲೆಯ ಪಾಲಿನ 19 ಟಿಎಂಸಿ ನೀರನ್ನು ಹೊರಗೆ ತೆಗೆದುಕೊಂಡು ಹೋಗಲು ಬಿಡಬಾರದು. ಅದಕ್ಕಾಗಿ ಯಾವ ರೀತಿಯ ಕಾನೂನು ಹೋರಾಟ ಮಾಡಬೇಕು, ಸರಕಾರದ ಮೇಲೆ ಒತ್ತಡ ಹೇರುವ ಕೆಲಸ ಮಾಡಬೇಕು. ಈ ಹೋರಾಟಕ್ಕೆ ಪಕ್ಷಭೇದವಿಲ್ಲದೆ ಎಲ್ಲರೂ ಬೆಂಬಲ ನೀಡಬೇಕು ಎಂದು ಕೋರಿದರು.

**ಮಾಗಡಿ, ರಾಮನಗರ ಕಡೆ ತೆಗೆದುಕೊಂಡು ಹೋಗಲು ಬಿಡುವುದಿಲ್ಲ:** ಶಾಸಕ ಎಂ.ಟಿ. ಕೃಷ್ಣಪ್ಪ ಮಾತನಾಡಿ, ನಮ್ಮ ಜಿಲ್ಲೆಗೆ ಹಂಚಿಕೆಯಾಗಿರುವ ಹೇಮಾವತಿ ನೀರನ್ನು ಎಕ್ಸ್‌ಪ್ರೆಸ್ ಕೆನಾಲ್ ಮೂಲಕ ದಬ್ಬಾಳಿಕೆ ಮಾಡಿ ಮಾಗಡಿ, ರಾಮನಗರ ಕಡೆ ತೆಗೆದುಕೊಂಡು ಹೋಗಲು ಬಿಡುವುದಿಲ್ಲ, ಅವೈಜ್ಞಾನಿಕ ಕೆನಾಲ್ ಯೋಜನೆ ಕಾಮಗಾರಿಯನ್ನು ಸರಕಾರ ಸ್ಥಗಿತಗೊಳಿಸಬೇಕು. ಇದರ ವಿರುದ್ಧ ಕಾನೂನು ಹೋರಾಟ, ಸಾಮಾಜಿಕ ಹೋರಾಟ ಮಾಡಿ ನಮ್ಮ ನೀರನ್ನು ನಾವು ಉಳಿಸಿಕೊಳ್ಳದಿದ್ದರೆ ನಮಗೆ ಉಳಿಗಾಲವಿಲ್ಲಎಂದರು. ಜಿಲ್ಲಾ ಬಿಜೆಪಿ ಅಧ್ಯಕ್ಷ ಎಚ್.ಎಸ್.ರವಿಶಂಕರ್ ಹೆಬ್ಬಾಕ ಮಾತನಾಡಿ, ಈ ಹೋರಾಟಕ್ಕೆ ಜಿಲ್ಲಾ ಬಿಜೆಪಿಯ ಸಂಪೂರ್ಣ ಬೆಂಬಲವಿದೆ. ಹೋರಾಟದಲ್ಲಿ ಭಾಗವಹಿಸಿ ಬೆಂಬಲ ನೀಡುವಂತೆ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಪಕ್ಷ ನಾಯಕರಾದ ಆರ್. ಅಶೋಕ್, ಛಲವಾದಿ ನಾರಾಯಣಸ್ವಾಮಿ ಅವರನ್ನು ಕೋರುವುದಾಗಿ ಹೇಳಿ, ಹೋರಾಟ ತೀವ್ರಗೊಳಿಸಲು ಪಕ್ಷದಿಂದ ಜನರ ಸಂಘಟನೆ ಮಾಡಲಾಗುತ್ತದೆ. ಇದೇ ವಿಚಾರವಾಗಿ ಈ ತಿಂಗಳ 28 ರಂದು ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದರು.

ಬಿಜೆಪಿ ಮುಖಂಡ ದಿಲೀಪ್ ಕುಮಾರ್ ಮಾತನಾಡಿ, ಲಿಂಕ್ ಕೆನಾಲ್ ವಿರುದ್ಧ ಕಾನೂನು ಹೋರಾಟ ಅನಿವಾರ್ಯ. ಇದರ ಜತೆಗೆ ಜಿಲ್ಲೆ, ತಾಲ್ಲೂಕು, ಹೋಬಳಿ, ಗ್ರಾಮಗಳ ಮಟ್ಟದಲ್ಲಿ ಸಮಿತಿಗಳನ್ನು ರಚಿಸಿ ಜನಜಾಗೃತಿಗೊಳಿಸಿ ಹೋರಾಟ ತೀವ್ರಗೊಳಿಸಬೇಕು ಎಂದರು. ಹೋರಾಟ ಸಮಿತಿ ಸಂಚಾಲಕ ಪ್ರಭಾಕರ್ ಮಾತನಾಡಿ, ಲಿಂಕ್ ಕೆನಾಲ್ ವಿರುದ್ಧ ಹಲವು ಹಂತದ ಹೋರಾಟಗಳಾಗಿವೆ. ಸರಕಾರ ಪೊಲೀಸರನ್ನು ಬಳಸಿಕೊಂಡು ಹೋರಾಟ ಹತ್ತಿಕ್ಕುವ ಪ್ರಯತ್ನ ಮಾಡುತ್ತಿದೆ. ಇದರ ವಿರುದ್ಧ ಜಿಲ್ಲೆಯ ಜನರು ಸಂಘಟಿತರಾಗಿ ಹೋರಾಟಕ್ಕಿಳಿದರೆ ನಮ್ಮ ನೀರಿನ ಹಕ್ಕನ್ನು ಪಡೆಯಬಹುದು ಎಂದರು. ವಿವಿಧ ಪಕ್ಷಗಳ ಮುಖಂಡರು, ರೈತ ಸಂಘ, ಹಲವು ಸಂಘಟನೆಗಳ ಪ್ರಮುಖರು ಸೇರಿದ್ದ ಸಭೆಯಲ್ಲಿ ಇದೇ 31ರಂದು ಲಿಂಕ್ ಕೆನಾಲ್ ಕಾಮಗಾರಿ ನಡೆಯುವ ಸ್ಥಳದಲ್ಲಿ ಐದು ಸಾವಿರ ಜನರನ್ನು ಸೇರಿಸಿ ಮುತ್ತಿಗೆ ಹಾಕುವ ಬೃಹತ್ ಹೋರಾಟ ನಡೆಸಲು ತೀರ್ಮಾನಿಸಲಾಯಿತು.



ಉದಯವಾಹಿನಿ ಚಿತ್ರ



> **ಜಿಲ್ಲೆಗೆ ಹಂಚಿಕೆಯಾಗಿರುವ ಹೇಮಾವತಿ ನೀರು ನಮ್ಮ ಹಕ್ಕು. ಇದನ್ನು ಕಸಿಯಲು ಬಿಡುವುದಿಲ್ಲ. ನೀರಿಗಾಗಿ ಯಾವುದೇ ತ್ಯಾಗಕ್ಕೆ ನಾವು ಸಿದ್ಧರಾಗಬೇಕು. ಕಾನೂನು ಹೋರಾಟ ಮಾಡಿ, ಕಾಮಗಾರಿಗೆ ತಡೆ ತಂದು ನೀರನ್ನು ಕಾಪಾಡಿಕೊಳ್ಳಬೇಕು**
>
> **- ಸೊಗಡು ಶಿವಣ್ಣ, ಹೋರಾಟ ಸಮಿತಿ ಅಧ್ಯಕ್ಷ**

> **ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್ ವಿರುದ್ಧ ಹೋರಾಟ ಮಾಡಿ ನಮ್ಮ ನೀರನ್ನು ಉಳಿಸಿಕೊಳ್ಳಬೇಕು. ಇದಕ್ಕಾಗಿ ಹೋರಾಟವನ್ನು ಮತ್ತಷ್ಟು ಗಟ್ಟಿಗೊಳಿಸಬೇಕಾದ ಅವಶ್ಯಕತೆಯಿದೆ. ಕಾನೂನು ಹೋರಾಟ ಅಗತ್ಯ**
>
> **-ಎ. ಗೋವಿಂದರಾಜು, ರೈತ ಸಂಘದ ಜಿಲ್ಲಾಧ್ಯಕ್ಷ**

**ಮಠಾಧೀಶರ ಬೆಂಬಲ**

**ತೆವಡೆಹಳ್ಳಿ ಮಠದ ಗೋಸಲ ಚನ್ನಬಸವೇಶ್ವರ ಸ್ವಾಮೀಜಿ, ಕುಪ್ಪೂರು ಗದ್ದುಗೆ ಮಠದ ಅಭಿನವ ಮಲ್ಲಿಕಾರ್ಜುನ ದೇಶಿಕೇಂದ್ರ ಸ್ವಾಮೀಜಿ, ಗೊಲ್ಲಹಳ್ಳಿ ಮಠದ ವಿಭವ ವಿದ್ಯಾಶಂಕರ ಸ್ವಾಮೀಜಿ, ರೇವಣಸಿದ್ದೇಶ್ವರ ಮಠದ ಬಿಂದುಶೇಖರ ಒಡೆಯರ್ ಸ್ವಾಮೀಜಿ ಭಾಗವಹಿಸಿದ್ದರು. ಜಿಲ್ಲೆಯ ಪಾಲಿನ ಹೇಮಾವತಿ ನೀರನ್ನು ಉಳಿಸಿಕೊಳ್ಳಲು ಹೋರಾಟ ಸಮಿತಿ ರೂಪಿಸುವ ಯಾವುದೇ ರೀತಿಯ ಹೋರಾಟಕ್ಕೆ ಬೆಂಬಲ ನೀಡಿ ಭಾಗವಹಿಸುವುದಾಗಿ ಸ್ವಾಮೀಜಿಗಳು ಘೋಷಿಸಿದರು.**

# ಮಿನಿ ನ್ಯೂಸ್

## ಹಾಳಾದ ಮ್ಯಾನ್ ಹೋಲ್, ಸರಿಪಡಿಸದ ನಗರಸಭೆ

**• ಉದಯವಾಹಿನಿ, ಕನಕಪುರ**

ನಗರ ಒಂದು ಕಡೆ ಅಭಿವೃದ್ಧಿ ಕಾಣುತ್ತಿದ್ದರೆ ಮತ್ತೊಂದು ಕಡೆ ಒಳ ಚರಂಡಿಗೆ ನಿರ್ಮಾಣ ಮಾಡಿರುವ ಮ್ಯಾನ್ ಹೋಲ್ ಗುಂಡಿಗಳು ಬಾಯಿ ತೆರೆದುಕೊಂಡು ಅಪಾಯದ ವಲಯಗಳಾಗಿ ಪರಿಣಮಿಸಿವೆ. ಇಲ್ಲಿನ ಸಬ್ ರಿಜಿಸ್ಟರ್ ಕಚೇರಿ ಮುಂಭಾಗದ ತಿರುವಿನಲ್ಲಿ ನಿರ್ಮಾಣ ಮಾಡಿರುವ ಮ್ಯಾನ್ ಹೋಲ್ ಮೇಲೆ ಮುಚ್ಚಳ ಇಲ್ಲದೆ ಬಾಯಿ ತೆರೆದುಕೊಂಡಿದ್ದು ಅಪಘಾತದ ವಲಯವಾಗಿದೆ.

ರಸ್ತೆ ತಿರುವು, ಮುಖ್ಯ ರಸ್ತೆ ಮಧ್ಯಭಾಗದಲ್ಲಿ ಹಲವು ದಿನಗಳಿಂದ ಮ್ಯಾನ್ ಹೋಲ್ ಗುಂಡಿ ಬಾಯಿ ತೆರೆದುಕೊಂಡಿದ್ದರೂ ಸಂಬಂಧಪಟ್ಟವರು ಸರಿಪಡಿಸುವ ಕೆಲಸ ಮಾಡಿಲ್ಲ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸಬ್ ರಿಜಿಸ್ಟರ್ ಕಚೇರಿ ಮುಂಭಾಗದ ತಿರುವಿನಲ್ಲಿ ಮ್ಯಾನ್ ಹೋಲ್ ಗುಂಡಿ ಅಪಾಯಕಾರಿಯಾಗಿದ್ದು ದೊಡ್ಡಮಟ್ಟದ ಅನಾಹುತ ಆಗುವುದಕ್ಕಿಂತ ಮುಂಚೆ ನಗರಸಭೆ ಎಚ್ಚೆತ್ತುಕೊಂಡು ವೈಜ್ಞಾನಿಕವಾಗಿ ಸರಿಪಡಿಸಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

## ಚಿರತೆ ಪ್ರತ್ಯಕ್ಷ- ಜನರಲ್ಲಿ ಆತಂಕ

**• ಉದಯವಾಹಿನಿ, ಮೇಲುಕೋಟೆ**

ವಿಶ್ವಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಮೇಲುಕೋಟೆ ಯೋಗಾನರಸಿಂಹ ಸ್ವಾಮಿ ಬೆಟ್ಟದ ತಪ್ಪಲಿನಲ್ಲಿ ಹಗಲು ಹೊತ್ತಿನಲ್ಲೇ ಚಿರತೆಗಳು ಕಾಣಿಸಿಕೊಂಡಿದ್ದು ಗ್ರಾಮಸ್ಥರು, ಪ್ರವಾಸಿಗರಲ್ಲಿ ಆತಂಕ ಉಂಟು ಮಾಡಿದೆ. ಸುಮಾರು ದಿನಗಳಿಂದ ಬೆಟ್ಟ, ಪಂಚಕಲ್ಯಾಣಿ, ಧನುಷ್ ಕೋಟೆ, ರಾಯಗೋಪುರ ಸೇರಿದಂತೆ ಪ್ರವಾಸಿತಾಣಗಳ ಬಳಿ ಚಿರತೆಗಳು ಪ್ರತ್ಯಕ್ಷವಾಗುತ್ತಿವೆ. ಇದರಿಂದ ಪ್ರವಾಸಿಗರಲ್ಲಿ ಆತಂಕ ಮನೆ ಮಾಡಿದೆ. ಜತೆಗೆ ಹೊಸಹಳ್ಳಿ, ಉಳಿಗೆರೆ, ಕಾಡೇನಹಳ್ಳಿ, ನಾಣಾಪುರ, ಬಳ್ಳಿಘಟ್ಟ, ಮದೇನಹಳ್ಳಿ ಗ್ರಾಮಗಳಲ್ಲೂ ಚಿರತೆಗಳು ಕಾಣಿಸಿಕೊಳ್ಳುತ್ತಿದ್ದು, ಜನ ಓಡಾಡಲು, ಜಮೀನು, ತೋಟಗಳಲ್ಲಿ ಹೋಗಲು ಭಯಪಡುವಂತಾಗಿದೆ. ಮೇಲುಕೋಟೆ ದಳವಾಯಿಕೆರೆ ಬಳಿ ಶನಿವಾರ ರೈತರ ಜಮೀನಿನ ಬಳಿ ಚಿರತೆ ದಾಳಿ ಮಾಡಿ ಆಡನ್ನು ಕೊಂದು ಹಾಕಿದೆ. ಗ್ರಾಮದ ಒಳಗೂ ಚಿರತೆ ಬಂದಿದ್ದು ಆತಂಕ ಹೆಚ್ಚಿಸಿದೆ. ಸ್ಥಳೀಯರು ಚಿರತೆ ಸೆರೆ ಹಿಡಿಯುವಂತೆ ಅರಣ್ಯ ಇಲಾಖೆ ಮನವಿ ಮಾಡಿದರು ಅಧಿಕಾರಿಗಳು ಯಾವುದೇ ಕ್ರಮ ಕೈಗೊಂಡಿಲ್ಲ. ಇನ್ನಾದರೂ ಅಧಿಕಾರಿ ಹೆಚ್ಚೆತ್ತುಕೊಳ್ಳಬೇಕು ಎನ್ನುವುದು ಸ್ಥಳೀಯರ ಆಗ್ರಹ.

## ಪೌರ ನೌಕರರ ಹೋರಾಟಕ್ಕೆ ಅಧಿಕಾರಿಗಳ ಬೆಂಬಲ

**• ಉದಯವಾಹಿನಿ, ಮಳವಳ್ಳಿ**

ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಅನಿರ್ದಿಷ್ಟಾವಧಿ ಮುಷ್ಕರ ನಡೆಸುತ್ತಿರುವ ಪೌರ ನೌಕರರನ್ನು ಬೆಂಬಲಿಸಿ ಪಟ್ಟಣದ ಪುರಸಭೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ನೌಕರರೊಡನೆ ಸಾಂಕೇತಿಕವಾಗಿ ಧರಣಿ ನಡೆಸಿದರು. ಪುರಸಭೆ ಮುಂದೆ ಜಮಾಯಿಸಿದ ಅಧಿಕಾರಿಗಳು, ಸಿಬ್ಬಂದಿ ಎಲ್ಲಾ ನೌಕರರು ಕೆಲಕಾಲ ತಮ್ಮ ಕೆಲಸವನ್ನು ಸ್ಥಗಿತಗೊಳಿಸಿ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿದರು. ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆ ನೌಕರರು ರಾಜ್ಯ ಸರ್ಕಾರಿ ನೌಕರರು ಎಂದು ಪರಿಗಣಿಸುವುದರ ಜೊತೆಗೆ ಸಂಜೀವಿನಿ, ಕೆಜಿಐಡಿ, ಸೇರಿದಂತೆ ಸರ್ಕಾರಿ ನೌಕರರು ಪಡೆಯುವ ಎಲ್ಲಾ ಸೌಲಭ್ಯಗಳನ್ನು ನೀಡಬೇಕು. ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ನೀರು ಸರಬರಾಜು, ಚಾಲಕರು, ಲೋಡರ್ಸ್, ಕ್ಲೀನರ್ಸ್, ಗಾರ್ಡನರ್, ಸ್ಯಾನಿಟರಿ ಸೂಪರ್‌ವೈಜರ್, ಯುಜಿಡಿ ಸಹಾಯಕರು ಸೇರಿದಂತೆ ವಿವಿಧ ವೃಂದದ ಹೊರಗುತ್ತಿಗೆ ನೌಕರರನ್ನು ನೇರ ಪಾವತಿಗೆ ಒಳಪಡಿಸಬೇಕು ಎಂದು ಆಗ್ರಹಿಸಿದರು. ದಿನಗೂಲಿ, ಕ್ಷೇಮಾಭಿವೃದ್ಧಿ ಸಮಾನ ಕೆಲಸಕ್ಕೆ ಸಮಾನ ವೇತನ ನೀಡುವುದರ ಜೊತೆಗೆ ನೌಕರರನ್ನು ಕಾಯಂ ಗೊಳಿಸಬೇಕು ಹಾಗೂ ಎಲ್ಲಾ ನೌಕರರಿಗೂ ಎಸ್‌ಎಫ್‌ಸಿ ಮುಕ್ತ ನಿಧಿಯಿಂದ ವೇತನ ನೀಡುವುದು ಸೇರಿದಂತೆ ಹಲವು ಬೇಡಿಕೆಗಳನ್ನು ಈಡೇರಿಸಿ ಸರ್ಕಾರ ತಮ್ಮನ್ನು ಸರ್ಕಾರಿ ನೌಕರು ಎಂದು ಪರಿಗಣಿಸಬೇಕು ಎಂದು ಒತ್ತಾಯಿಸಿದರು.

## ಹೊಸೂರು ಶಾಲೆ ಉನ್ನತೀಕರಣಕ್ಕೆ 3 ಕೋಟಿ ಅನುದಾನ



ಉದಯವಾಹಿನಿ ಚಿತ್ರ

**• ಉದಯವಾಹಿನಿ, ಗೌರಿಬಿದನೂರು**

ತಾಲ್ಲೂಕಿನಲ್ಲಿ ಶತಮಾನ ಕಂಡ, ಶಿಕ್ಷಣ ತಜ್ಞ ಡಾ.ಎಚ್.ನರಸಿಂಹಯ್ಯ ಅವರು ವ್ಯಾಸಂಗ ಮಾಡಿರುವ ಹೊಸೂರು ಸರ್ಕಾರಿ ಶಾಲೆ ಉನ್ನತೀಕರಣಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್‌ನಲ್ಲಿ ಅನುದಾನ ಘೋಷಿಸಿದ್ದು. ಅದರಂತೆ ಮಂಗಳವಾರ ಶಾಲೆ ಅಭಿವೃದ್ಧಿಗೆ 3 ಕೋಟಿ ಬಿಡುಗಡೆ ಮಾಡಿದ್ದಾರೆ. ಡಾ.ಎಚ್.ನರಸಿಂಹಯ್ಯ ಅವರ ಹೊಸೂರು ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆ ಉನ್ನತೀಕರಣ. 9, 10ನೇ ತರಗತಿ ಮಂಜೂರಾತಿ. ಶತಮಾನೋತ್ಸವ ಭವನ, ಶಾಲಾ ಸಂಕೀರ್ಣ ನಿರ್ಮಾಣದ ಜೊತೆಗೆ ಶಾಲೆಯನ್ನು ಶೈಕ್ಷಣಿಕ, ವೈಜ್ಞಾನಿಕ ಮನೋಭಾವದ ಕೇಂದ್ರವನ್ನಾಗಿ ರೂಪಿಸುವ ಉದ್ದೇಶದಿಂದ ಹಳೆಯ ವಿದ್ಯಾರ್ಥಿ ಸಂಘದ ಸದಸ್ಯರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಳಿ 10 ಕೋಟಿ ಆರ್ಥಿಕ ಸಹಾಯ ಮಂಜೂರು ಮಾಡಬೇಕೆಂದು ಮನವಿ ಮಾಡಿದ್ದರು.

## ಲೋಕಾಯುಕ್ತ ಹೆಸರಲ್ಲಿ ಆರ್‌ಟಿಒಗೆ ಬೆದರಿಕೆ: ದಾಳಿ ನಡೆಸದಿರಲು 1 ಲಕ್ಷ ಬೇಡಿಕೆ

**• ಉದಯವಾಹಿನಿ, ತುಮಕೂರು**

ನಗರದಲ್ಲಿರುವ ಪ್ರಾದೇಶಿಕ ಸಾರಿಗೆ ಅಧಿಕಾರಿ ಎ.ವಿ.ಪ್ರಸಾದ್ ಅವರಿಗೆ ಅಪರಿಚಿತರು ಲೋಕಾಯುಕ್ತ ಎಸ್.ಪಿ ಹೆಸರಿನಲ್ಲಿ ಕರೆ ಮಾಡಿ ಹಣ ವಸೂಲಿಗೆ ಯತ್ನಿಸಿದ್ದಾರೆ. ಈಚೆಗೆ ವಾಟ್ಸ್ ಆ್ಯಪ್ ಮೂಲಕ ಕರೆ ಮಾಡಿ, ನಾನು ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ ವಂಶಿಕೃಷ್ಣ ಮಾತನಾಡುತ್ತಿದ್ದೇನೆ. ಇನ್ನು 10 ನಿಮಿಷದ ಬಳಿಕ ನಮ್ಮ ಎಡಿಜಿಪಿ ಮಾತನಾಡುತ್ತಾರೆ. ನಿಮ್ಮ ಕಚೇರಿ ಮೇಲೆ ದಾಳಿ ಮಾಡಲು ಫೈಲ್ ಸಿದ್ಧವಾಗಿದೆ. 1 ಲಕ್ಷ ವರ್ಗಾವಣೆ ಮಾಡಿದರೆ ದಾಳಿ ನಿಲ್ಲಿಸುತ್ತೇವೆ ಎಂದು ಹೇಳಿದ್ದಾರೆ. ನಂತರ ಪ್ರಸಾದ್ ಕರೆ ಕಟ್ ಮಾಡಿದ್ದಾರೆ. ಈ ಕುರಿತು ಪ್ರಸಾದ್ ನೀಡಿದ ದೂರಿನ ಮೇರೆಗೆ ಹೊಸ ಬಡಾವಣೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸರ್ಕಾರಿ ಅಧಿಕಾರಿ ಹೆಸರಿನಲ್ಲಿ ಕರೆ ಮಾಡಿ, ಹಣಕ್ಕೆ ಬೇಡಿಕೆ ಇಟ್ಟು ವಂಚಿಸಿದ ವ್ಯಕ್ತಿಯನ್ನು ಪತ್ತೆ ಹಚ್ಚಿ ಕಾನೂನು ಕ್ರಮಕ್ಕೆಗೊಳ್ಳುವಂತೆ' ದೂರಿನಲ್ಲಿ ಮನವಿ ಮಾಡಿದ್ದಾರೆ.

## ಅಂತರಾಳದಿಂದ.. EDITORIAL

# ಸರಕಾರಿ ಕನ್ನಡ ಶಾಲೆಗಳ ದುರವಸ್ಥೆ



ಈ ಸಲದ ಪರೀಕ್ಷೆಯ ಫಲಿತಾಂಶದಲ್ಲಿ ಸರಕಾರಿ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಅನುತ್ತೀರ್ಣರಾಗಿರುವುದು ದೊಡ್ಡ ಸುದ್ದಿಯಾಗಿದೆ. ಅದರಲ್ಲೂ ಕನ್ನಡ ಮಾಧ್ಯಮದ ವಿದ್ಯಾರ್ಥಿಗಳು ಕಡಿಮೆ ಸಂಖ್ಯೆಯಲ್ಲಿ ಉತ್ತೀರ್ಣರಾಗಿರುವುದು ಸಹಜವಾಗಿ ಕಳವಳವನ್ನು ಉಂಟು ಮಾಡಿದೆ. ಇದರ ಬಗ್ಗೆ ಭಾವನಾತ್ಮಕ ಮಾತುಗಳಿಂದ ಪ್ರಯೋಜನವಿಲ್ಲ. ಇದಕ್ಕೆ ಕಾರಣವಾಗಿರುವ ಅಂಶಗಳನ್ನು ಪರಿಶೀಲಿಸಿ ವೈಜ್ಞಾನಿಕ ಪರಿಹಾರವನ್ನು ಕಂಡು ಹಿಡಿಯ ಬೇಕಾಗಿದೆ ಖಾಸಗೀಕರಣದ ಅಬ್ಬರದ ದಿನಗಳಲ್ಲಿ ಶಿಕ್ಷಣ ಕೂಡ ಮಾರುಕಟ್ಟೆಯ ಸರಕಾಗಿರುವುದು ಹಳೆಯ ಸಂಗತಿ. ಇದರ ನಡುವೆಯೂ ಪ್ರತಿಕೂಲ ಪರಿಸ್ಥಿತಿಯಲ್ಲೂ ಉತ್ತಮ ಸಾಧನೆ ಮಾಡಿರುವ ಮಕ್ಕಳ ಕುರಿತು ಕೂಡ ವರದಿಗಳು ಬಂದಿವೆ. ಜೊತೆಗೆ ಅನುತ್ತೀರ್ಣರಾಗಿ ಆತ್ಮಹತ್ಯೆ ಮಾಡಿಕೊಂಡ ಕೆಲವು ಮಕ್ಕಳೂ ಇದ್ದಾರೆ ಎಂಬುದು ಎಲ್ಲರಿಗೂ ತಿಳಿದ ಸಂಗತಿಯಾಗಿದೆ. ಪರೀಕ್ಷೆ ಎಂಬುದು ಬಹುತೇಕ ವಿದ್ಯಾರ್ಥಿಗಳ ಪಾಲಿಗೆ ಒಂದು ಯುದ್ಧದಂತಾಗಿದೆ. ಈ ಒತ್ತಡದ ನಡುವೆ ಮಾನಸಿಕವಾಗಿ ದುರ್ಬಲರಾದ ಮಕ್ಕಳು ಸಾವಿನ ಮೊರೆ ಹೋಗುತ್ತಿದ್ದಾರೆ. ಇದಕ್ಕೆಲ್ಲ ಬಹುತೇಕ ಕಾರಣ ವಿದ್ಯಾರ್ಥಿಗಳು ಗುಣಮಟ್ಟದ ಶಿಕ್ಷಣದಿಂದ ವಂಚಿತರಾಗಿರುವುದು ಕಟು ಸತ್ಯವಾಗಿದೆ.ಬೋಧನೆಯ ಗುಣಮಟ್ಟ ಮಾತ್ರವಲ್ಲ ಸರಕಾರಿ ಶಾಲೆಗಳು ಖಾಸಗಿ ಶಾಲೆಗಳಿಗೆ ಕಡಿಮೆಯಿಲ್ಲದಂತೆ ಮೂಲಭೂತ ಸೌಕರ್ಯಗಳನ್ನು ಸುಧಾರಿಸಬೇಕಾಗಿದೆ. ಖಾಸಗಿ ಶಿಕ್ಷಣ ಲಾಬಿಗೆ ಸರಿಸಾಟಿಯಾಗಲು, ವಿದ್ಯಾರ್ಥಿಗಳನ್ನು ಆಕರ್ಷಿಸಲು ಸರಕಾರಿ ಶಾಲೆಗಳಲ್ಲಿ ಪ್ರಾಥಮಿಕ ಹಂತದಲ್ಲೇ ಇಂಗ್ಲಿಷ್ ಬೋಧನೆಯನ್ನು ಕಡ್ಡಾಯ ಮಾಡಿದರೂ ಅದರಿಂದ ಹೆಚ್ಚಿನ ಪ್ರಯೋಜನವಾಗಲಿಲ್ಲ. ಇದರಿಂದಾಗಿ ಶೈಕ್ಷಣಿಕ ಗುಣಮಟ್ಟ ಮತ್ತಷ್ಟು ಕುಸಿಯಿತು. ಇತ್ತ ಇಂಗ್ಲಿಷನ್ನೂ ಕಲಿಯದೆ, ಅತ್ತ ಕನ್ನಡವನ್ನೂ ಕಲಿಯಲಾಗದೆ ಶಾಲೆಗೆ ವಿದಾಯ ಹೇಳುವ ಮಕ್ಕಳ ಸಂಖ್ಯೆ ಹೆಚ್ಚಾಯಿತು. ಹೀಗಾಗಿ ಸರಕಾರಿ ಶಾಲೆಗಳ ಮುಚ್ಚುವಿಕೆ ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಾ ಸಾಗಿದೆ. ಇದರಿಂದಾಗಿ ಬಡವರ, ಅವಕಾಶ ವಂಚಿತರ ಮಕ್ಕಳು ಅಕ್ಷರದಿಂದ ವಂಚಿತರಾಗುತ್ತಿದ್ದಾರೆ.ಅನ್ನ ಶಿಕ್ಷಣ ಮತ್ತು ಆರೋಗ್ಯ ಇವುಗಳು ಯಾವುದೇ ಜವಾಬ್ದಾರಿಯುತ ಸರಕಾರದ ಸಾಮಾಜಿಕ ಹೊಣೆಗಾರಿಕೆಗಳಾಗಿವೆ. ಇದರಲ್ಲಿ ಅನ್ನಭಾಗ್ಯದಂಥ ಯೋಜನೆಯ ಮೂಲಕ ಹಸಿದವರ ಬವಣೆಯನ್ನು ನಿವಾರಿಸಲು ಸರಕಾರ ಮುಂದಾಗಿದೆ. ಆದರೆ ಇದರಷ್ಟೇ ಮುಖ್ಯವಾಗಿರುವ ಆರೋಗ್ಯ ಮತ್ತು ಶಿಕ್ಷಣದ ಬಗ್ಗೆ ಅಷ್ಟೇ ಆಸಕ್ತಿಯನ್ನು ಸರಕಾರ ತೋರಿಸಬೇಕಾಗಿದೆ. ಖಾಸಗೀಕರಣದ ಹೊಡೆತದಿಂದ ಇವೆರಡು ಕ್ಷೇತ್ರಗಳು ತತ್ತರಿಸಿ ಹೋಗಿವೆ. ಈ ನೆಲದ ಭಾಷೆಯಾದ ಕನ್ನಡವೂ ಈಗ ಅಳಿವು ಉಳಿವಿನ ಸಮಸ್ಯೆಯನ್ನು ಎದುರಿಸುತ್ತಿದೆ. ಶಿಕ್ಷಣದಲ್ಲಿ ಕನ್ನಡವನ್ನು ಉಳಿಸಲಾಗದಿದ್ದರೆ, ಅದನ್ನು ಆಡಳಿತ ಭಾಷೆಯನ್ನಾಗಿ ಮಾಡಿಯೂ ಉಪಯೋಗವಾಗುವುದಿಲ್ಲ. ಸರಕಾರಿ ಕನ್ನಡ ಶಾಲೆಗಳ ದುರವಸ್ಥೆಗೆ ಹಲವಾರು ಕಾರಣಗಳಿವೆ. ಎಲ್ಲಕ್ಕಿಂತ ಮುಖ್ಯವಾಗಿ ಸರಕಾರಿ ಕನ್ನಡ ಶಾಲೆಗಳ ಶಿಕ್ಷಕರನ್ನು ಪಾಠ ಮಾಡುವ ಜೊತೆಗೆ ಇನ್ನೂ ಹಲವಾರು ಕೆಲಸಗಳಿಗಾಗಿ ಬಳಸಿಕೊಳ್ಳಲಾಗುತ್ತಿದೆ. ಆಧಾರ್ ಕಾರ್ಡ್ ನೋಂದಣಿ, ಜನಗಣತಿ, ಬಿಸಿಯೂಟ ಇವೇ ಮುಂತಾದ ಕೆಲಸಗಳ ಹೊಣೆಯನ್ನು ಸರಕಾರಿ ಶಾಲೆಗಳ ಶಿಕ್ಷಕರು ನಿಭಾಯಿಸಬೇಕಾಗಿದೆ. ಶಿಕ್ಷಕರನ್ನು ಮಕ್ಕಳಿಗೆ ಪಾಠ ಮಾಡಲು ಬಿಡಬೇಕು. ಶಿಕ್ಷಣೇತರ ಕಾರ್ಯಗಳಿಗೆ ಅವರನ್ನು ಬಳಸಿ ಕೊಳ್ಳುವುದು ಸರಿಯಲ್ಲ. ಶಿಕ್ಷಕರು ಶಿಕ್ಷಕರಾಗಿ ಕೆಲಸ ಮಾಡಲು ಬಿಡಬೇಕು. ಸರಕಾರಿ ಶಾಲೆಗಳ ಗುಣಮಟ್ಟ ಕುಸಿಯಲು ಇದೂ ಕಾರಣವಾಗಿದೆ ಎಂಬುದನ್ನು ಸರಕಾರ ಮರೆಯಬಾರದು. ಸರಕಾರಿ ಶಾಲೆಗಳ ವಿದ್ಯಾಭ್ಯಾಸದ ಗುಣಮಟ್ಟ ಕುಸಿಯಲು ಇನ್ನೊಂದು ಕಾರಣವೆಂದರೆ ಕನಿಷ್ಠ ಮೂಲಭೂತ ಸೌಕರ್ಯಗಳ ಕೊರತೆ. ಬಹುತೇಕ ಸರಕಾರಿ ಶಾಲೆಗಳಲ್ಲಿ ಕುಡಿಯುವ ನೀರು ಮತ್ತು ಹೆಣ್ಣು ಮಕ್ಕಳಿಗೆ ಪ್ರತ್ಯೇಕ ಶೌಚಾಲಯವಿಲ್ಲ. ಈ ದುರವಸ್ಥೆಗಾಗಿ ರಾಜ್ಯ ಹೈಕೋರ್ಟ್ ಸರಕಾರವನ್ನು ತರಾಟೆಗೆ ತೆಗೆದುಕೊಂಡಿತ್ತು. ಆದರೂ ಸಂಬಂಧಿಸಿದ ಅಧಿಕಾರಿಗಳು ಯಾವುದೇ ಸೂಕ್ತ ಕ್ರಮವನ್ನು ಕೈಗೊಳ್ಳದೆ ತಮ್ಮ ಪಾಡಿಗೆ ತಾವಿದ್ದಾರೆ. ಸರಕಾರಿ ಕನ್ನಡ ಶಾಲೆಗಳನ್ನು ಸುರಕ್ಷಿತವಾಗಿ ಉಳಿಸಿಕೊಳ್ಳಬೇಕೆಂದರೆ ಎಲ್ಲಕ್ಕಿಂತ ಮೊದಲು ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು. ಸರಕಾರ ಕ್ರಮ ಕೈಗೊಳ್ಳದಿರುವುದರಿಂದ ಕೆಲವು ಶಾಲೆಗಳಲ್ಲಿ ಶಿಕ್ಷಕರು, ಶಿಕ್ಷಕಿಯರು ತಮ್ಮ ಹಣದಿಂದಲೇ ಅಗತ್ಯ ಸೌಕರ್ಯಗಳನ್ನು ಒದಗಿಸಿದ

**ಅನುಕೂಲಗಳಿಲ್ಲದ ಬಡವರ ಹಾಗೂ ದಲಿತ, ಹಿಂದುಳಿದ, ಅಲ್ಪಸಂಖ್ಯಾತ ಸಮುದಾಯಗಳ ಮಕ್ಕಳಿಗೆ ಸರಕಾರಿ ಶಾಲೆಯೊಂದೇ ಶೈಕ್ಷಣಿಕ ಆಸರೆಯಾಗಿದೆ. ಯಾವುದೇ ವಿದ್ಯಾರ್ಥಿ ಬಂದರೂ ಪ್ರವೇಶವನ್ನು ನಿರಾಕರಿಸುವುದಿಲ್ಲ. ಶಿಕ್ಷಣ ಎಂಬುದು ಮಗುವಿನ ಹಕ್ಕಾಗಿದ್ದರೂ ಖಾಸಗಿ ಶಾಲೆಗಳು ಶೇ. 90ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ಮಕ್ಕಳನ್ನಷ್ಟೇ ಶಾಲೆಗೆ ಸೇರಿಸಿಕೊಳ್ಳುತ್ತವೆ. ಶೇ. 85ಕ್ಕಿಂತ ಕಡಿಮೆ ಅಂಕವನ್ನು ಪಡೆದ ಮಕ್ಕಳಿಗೂ ಪ್ರವೇಶ ಸಿಗುವುದು ಕಷ್ಟ ಸಾಧ್ಯ ಉಳಿದ 70ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ಮಕ್ಕಳು ಅನುದಾನಿತ ಶಾಲೆಗಳ ಬಳಿ ಹೋಗುತ್ತಾರೆ. ಆದರೆ ಶೇ 70ಕ್ಕಿಂತ ಕಡಿಮೆ ಅಂಕ ಗಳಿಸಿದ ಮಕ್ಕಳಿಗೆ ಸರಕಾರಿ ಶಾಲೆಗಳೇ ಏಕೈಕ ಆಸರೆಯ ತಾಣಗಳಾಗಿವೆ. ವಾಸ್ತವಾಂಶ ಹೀಗಿರುವಾಗ ಸರಕಾರಿ ಶಾಲೆಗಳ ಕನ್ನಡ ಬೋಧನೆಯ ಗುಣಮಟ್ಟವನ್ನು ಸುಧಾರಿಸಲು ಸರಕಾರ ಮೊದಲ ಆದ್ಯತೆಯನ್ನು ನೀಡಬೇಕಾಗಿದೆ.**

# ನೀರಾವರಿ ವ್ಯವಸ್ಥೆ ಸರಳೀಕರಣ: ಅನ್ನದಾತರಿಗೆ ಬೆಂಬಲ

■ ಚನ್ನೇಗೌಡ ಉಜ್ಜನಿ ಚಲುವಯ್ಯ



• ಉದಯವಾಹಿನಿ ವಿಶೇಷ

ನಾವೆಲ್ಲ ಚಿಕ್ಕವರಿದ್ದಾಗ ಅರಸರ ಪಾಳೇಗಾರರ, ಪಾಠವನ್ನು ಓದುವಾಗ ಅವರುಗಳ ಮೊದಲ ಉದ್ದೇಶ ಒಂದು ಗ್ರಾಮ ನಿರ್ಮಾಣ ಮಾಡುವ ಮೊದಲು ಸುಸಜ್ಜಿತ ಕೆರೆ, ಇಲ್ಲವೇ ಒಂದು ಆಣೆಕಟ್ಟು, ಗ್ರಾಮದ ವಾಸ್ತು ಪ್ರಕಾರ ಒಂದು ಉತ್ತಮ ದೇವಸ್ಥಾನವನ್ನು ಕಟ್ಟಿಸಿ ಜೀರ್ಣೋದ್ಧಾರ ಮಾಡುತ್ತಿದ್ದರು. ಬಹುಮುಖ್ಯವಾಗಿ ನೀರಾವರಿ ವ್ಯವಸ್ಥೆ, ನಮ್ಮ ಧರ್ಮ ಸಾರುವ ನಮ್ಮ ಸಂಸ್ಕೃತಿ ಉಳಿಸುವ ಕೆಲಸಗಳ ಮೂಲಕ ಅಲ್ಲೊಂದಷ್ಟು ಕುಟುಂಬಗಳನ್ನು ಸೇರಿಸಿ ಆ ಊರಿಗೆ ಒಂದು ಹೆಸರು ನೀಡಿ, ಒಂದು ಗ್ರಾಮ ಮಾಡುತ್ತಿದ್ದರು.

ಅದೇ ಪ್ರಸ್ತುತ ರಾಜಕೀಯ ವ್ಯವಸ್ಥೆ ಹೇಗಿದೆ ಎಂದರೆ ಯಾವ ಆಣೆಕಟ್ಟು ಇಲ್ಲಾ, ಯಾವ ಕೆರೆಯೂ ಇಲ್ಲಾ, ಕೊನೆಪಕ್ಷ ಇರೋ ಕೆರೆಗಳ ಊಳು ಎತ್ತುವ ಕಸ ತೆಗೆಸುವ ಕಾರ್ಯವೂ ನಡೆಯುತ್ತಿಲ್ಲ. ನಮ್ಮ ಪೂರ್ವಜರು, ಗುರುಹಿರಿಯರು, ಅಂದು ಮಾಡಿ ಕೊಟ್ಟಿರುವ ಕೊಡುಗೆಯಿಂದಲೇ ಇಂದಿನ ನಮ್ಮೆಲ್ಲರ ಜೀವನ ನಡೆಯುತ್ತಿದೆ ಎನ್ನಬಹುದು.

ನಾವುಗಳು ವೈಜ್ಞಾನಿಕವಾಗಿ ಎಷ್ಟೇ ಮುಂದುವರಿದರೂ ಹಿರಿಯರು ರೂಡಿಸಿಕೊಂಡು ಬಂದಿರುವ ಪದ್ಧತಿಯನ್ನು ನಾವು ಯಾವಾಗಲೂ ಗೌರವಿಸಲೇ ಬೇಕು. ನಮ್ಮ ದೇಶ ಕಂಡ ಮಹಾನ್ ಚೇತನ ಸರ್ ಎಂ ವಿಶ್ವೇಶ್ವರಯ್ಯ ಹಾಗೂ ಇನ್ನೂ ಹಲವಾರು ವ್ಯಕ್ತಿಗಳು ಅಂದು ಜಲ ವಿದ್ಯುತ್ ಉತ್ಪಾದನೆಯ ಘಟಕಗಳನ್ನು ನೀಡಿದ್ದು, ಅಣೆಕಟ್ಟುಗಳ ಒಳಗೆ ಸಂಗ್ರಹವಾಗುವ ನೀರನ್ನು ಜಲ ವಿದ್ಯುತ್ ಉತ್ಪಾದಿಸಲು ಎತ್ತರದಿಂದ ಜಲಪಾತಗಳು ಧುಮುಕಿದಾಗ ಅದರಿಂದ ಉತ್ಪತ್ತಿ ಮಾಡಿ ನಮಗೆಲ್ಲ ಇಂದು ವಿದ್ಯುತ್ ಸಿಗುತ್ತಿದೆ.

ನೀರು ಸರಬರಾಜು ಮಳೆಗಾಲದಲ್ಲಿ, ನೀರನ್ನು ಅಣೆಕಟ್ಟುಗಳ ಒಳಗೆ ಸಂಗ್ರಹಿಸಿ ನಂತರ ಬೇಸಿಗೆಯಲ್ಲಿ ಅವಶ್ಯ ಪ್ರದೇಶಗಳಲ್ಲಿ ಅಥವಾ ನೀರಿನ ಕೊರತೆಯಿರುವ ಪ್ರದೇಶಗಳಲ್ಲಿ ನೀರನ್ನು ಪೂರೈಸಬಹುದು. ಆಣೆಕಟ್ಟು ಕಟ್ಟಿಸುವ ಮೂಲಕ ಹೆಚ್ಚು ನೀರಿನ ಹರಿವನ್ನು ತಿರುಗಿಸಲು ಅಣೆಕಟ್ಟುಗಳನ್ನು ಬಳಸಬಹುದು, ನಂತರ ಅದನ್ನು ಬರಡಾಗಿರುವ ಭೂಪ್ರದೇಶಗಳಿಗೆ ನೀರಾವರಿ ವ್ಯವಸಾಯ ಮಾಡಲು ಅನ್ನದಾತರು ಬಳಸಿಕೊಳ್ಳಬಹುದು. ನಮ್ಮ ಪರಿಸರ ವ್ಯವಸ್ಥೆಯಲ್ಲಿ ಅಣೆಕಟ್ಟುಗಳ ಪ್ರಾಮುಖ್ಯತೆ ಹೆಚ್ಚಿದ್ದರೂ ಸರ್ಕಾರ ಇವುಗಳ ಬಗ್ಗೆ ಹೆಚ್ಚು ಆದ್ಯತೆ ನೀಡಬೇಕು.

ದೇಶದಲ್ಲಿ ವಿದ್ಯಾವಂತರು ದಿನೇ ದಿನೇ ಹೆಚ್ಚಾಗುತ್ತಿದ್ದಾರೆ. ಅನ್ನದಾತರಿಗೆ ಹೊಸ ಹೊಸ ಯೋಜನೆಗಳು ಹಲವಾರು ರೀತಿಯ ಯಂತ್ರೋಪಕಾರಣಗಳು ಉತ್ತಮ ಸರಳ ವ್ಯವಸಾಯ ಪದ್ಧತಿ ಈ ಎಲ್ಲಾ ಅವಕಾಶವಿರುವಾಗ ಮಳೆಗಾಲದಲ್ಲಿ ಭೂಮಿಗೆ ಬಿದ್ದ ನೀರು ಸಮುದ್ರ ಪಲಾಗುವ ಬದಲು, ಅದೇ ನೀರನ್ನು ಹೊಸದಾಗಿ ಆಣೆಕಟ್ಟುಗಳನ್ನು ಕಟ್ಟಿ ನಿಲ್ಲಿಸುವ ಮೂಲಕ ಈ ನೆಲದ ಅನ್ನದಾತರಿಗೆ ಹಾಗೂ ಇನ್ನಿತರ ಕಾರ್ಖಾನೆ ಬಳಕೆಗೆ, ಬಹು ಮುಖ್ಯವಾಗಿ ಭೂಮಿಯ ಫಾಲವತ್ತತೆಯನ್ನು ಕಾಪಾಡಲು ಸರ್ಕಾರಗಳು ಕೂಡಲೇ ಪ್ರತೀ ತಾಲ್ಲೋಕು ಮಟ್ಟದಲ್ಲಿ ಪ್ರತೀ ವರ್ಷವೂ ಹೆಚ್ಚಿನ ಅನುದಾನ ನೀಡುವ ಮೂಲಕ ಒಂದೊಂದು ಕೆರೆ ಕಟ್ಟಿಸುವ ಕೆಲಸವನ್ನು ಸರ್ಕಾರ ಕೂಡಲೇ ತೀರ್ಮಾನಿಸಬೇಕು.

**ರೈತ ಮಕ್ಕಳಿಗೆ ಸರಿಯಾಗಿ ಮೀಸಲಾತಿ ಸಿಗುತ್ತಿಲ್ಲ, ಸರಿಯಾದ ಮಾರ್ಗದರ್ಶನ ಸಿಗುತ್ತಿಲ್ಲ, ಇನ್ನಾದರೂ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರ ಜಂಟಿಯಾಗಿ ನಿಂತು ನೀರಿನ ವ್ಯವಸ್ಥೆ ಸರಳೀಕರಣ ಮಾಡುವ ಮೂಲಕ ಪೋಲಾಗುವ ನೀರು ಈ ನೆಲದ ಅನ್ನದಾತರಿಗೆ ಸಿಗುವ ವ್ಯವಸ್ಥೆಯಾಗಲಿ, ನೊಂದಿರುವ ರೈತರಿಗೆ ಇದರ ಅನುಕೂಲ ಕಲ್ಪಿಸಿಕೊಡಬೇಕೆಂದು ಈ ಮೂಲಕ ಎರಡೂ ಸರ್ಕಾರಕ್ಕೆ ಮನವಿ ಸಲ್ಲಿಸುತ್ತಿದ್ದೇನೆ.**



# ನಿಜವಾದ ಅರ್ಥದಲ್ಲಿ ಸನಾತನ ರಾಷ್ಟ್ರದ ಶಂಖನಾದವಾಗಿದೆ




ಉದಯವಾಹಿನಿ ಚಿತ್ರ

• ಉದಯವಾಹಿನಿ, ಫೋಂಡಾ, ಗೋವಾ

ಮೇ 17 ರಿಂದ 19, 2025 ರವರೆಗೆ ಗೋವಾದಲ್ಲಿ ನಡೆದ ಸನಾತನ ರಾಷ್ಟ್ರ ಶಂಖನಾದ ಮಹೋತ್ಸವವು ರಾಷ್ಟ್ರ ಮಟ್ಟದಲ್ಲಿ ಆಧ್ಯಾತ್ಮಿಕ, ಸಾಂಸ್ಕೃತಿಕ, ರಾಷ್ಟ್ರೀಯ ಚೇತನವನ್ನು ಮೂಡಿಸಿದ ಒಂದು ಅಪೂರ್ವ ಉತ್ಸವವಾಗಿತ್ತು. ಈ ಮೂರು ದಿನಗಳ ಐತಿಹಾಸಿಕ ಮಹೋತ್ಸವವು ನ ಭೂತೋನ ಭವಿಷ್ಯತಿ ಎಂಬ ಛಾಪು ಮೂಡಿಸಿದ್ದು, ನಿಜವಾದ ಅರ್ಥದಲ್ಲಿ ಸನಾತನ ರಾಷ್ಟ್ರದ ಶಂಖನಾದವಾಯಿತು ಎಂದು ಸನಾತನ ಸಂಸ್ಥೆಯ ವಕ್ತಾರರಾದ ಶ್ರೀ. ಅಭಯ ವರ್ತಕ ಅವರು ತಿಳಿಸಿದ್ದಾರೆ.

ಫೋಂಡಾದ ಫ್ಯಾನ್ ಆರೋಮಾ ಹೋಟೆಲ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾಜಿ ಚುನಾವಣಾ ಆಯುಕ್ತರಾದ ಶ್ರೀ ನಾರಾಯಣ ನಾವತಿ, ಉದ್ಯಮಿ ಶ್ರೀ ಮನೋಜ ಗಾಂವ್ಕರ, ಹಿಂದೂ ಜನಜಾಗೃತಿ ಸಮಿತಿಯ ರಾಷ್ಟ್ರೀಯ ವಕ್ತಾರರಾದ ಶ್ರೀ ರಮೇಶ್ ಶಿಂದೆ, ಉದ್ಯಮಿ ಶ್ರೀ ಜಯಂತ್ ಮಿರಿಂಗಕರ, ಬ್ರಾಹ್ಮಣ ಮಹಾಸಂಘದ ಶ್ರೀ ರಾಜ್ ಶರ್ಮಾಗೋಮಾಂತಕ ಮಂದಿರ ಮಹಾಸಂಘದ ಕಾರ್ಯದರ್ಶಿ ಶ್ರೀ ಜಯೇಶ್ ಥಳಿ ಉಪಸ್ಥಿತರಿದ್ದರು. ಸಂತ ಮಹಾತ್ಮರು, ವ್ಯಾಖ್ಯಾನಕಾರರು, ಲೇಖಕರು ಸನಾತನ ರಾಷ್ಟ್ರ ಹಿತೈಷಿಗಳ ಸಮಾವೇಶ ವಿವಿಧ ಮಾರ್ಗಗಳು ಮತ್ತು ಕೊಠಡಿಗಳಿಗೆ ಋಷಿಗಳು, ದೇವತೆಗಳ ಹೆಸರಿನ ಭವ್ಯ ಸಚ್ಚಿದಾನಂದ ಪರಬ್ರಹ್ಮ ಡಾ. ಆಠವಲೆ ನಗರದ ನಿರ್ಮಾಣ; 30,000 ಜನರಿಗೆ ಎರಡೂ ಹೊತ್ತಿನ ಊಟದ ವ್ಯವಸ್ಥೆ, ಹಾಗೆಯೇ 1 ಲಕ್ಷ ಜನರಿಗೆ ಮಹಾಧನ್ವಂತರಿಯಾಗದ ಪ್ರಸಾದ ವಿತರಣೆ; ಗಣ್ಯರ ಭಾಷಣಗಳೊಂದಿಗೆ ಸಾಕ್ಷಾತ್ ಸಚ್ಚಿದಾನಂದ ಪರಬ್ರಹ್ಮ ಡಾ. ಜಯಂತ ಆಠವಲೆ ಅವರ ಬಹುಮೂಲ್ಯ ಮಾರ್ಗದರ್ಶನ ಇಂತಹ ವೈವಿಧ್ಯಮಯ ಕಾರ್ಯಕ್ರಮಗಳ ಜೊತೆಗೆ ಒಂದು ಕಡೆ ಕ್ಷಾತ್ರತೇಜಸ್ಸುಳ್ಳ ಶಿವಾಜಿ ಕಾಲದ ಶಸ್ತ್ರಾಸ್ತ್ರ ಪ್ರದರ್ಶನ, ಮತ್ತೊಂದು ಕಡೆ ಭಕ್ತಿ ಮತ್ತು ಬ್ರಾಹ್ಮತೇಜಸ್ಸುಳ್ಳ 15 ಸಂತರ ಪಾದುಕೆಗಳ ದರ್ಶನ; ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಜನಸಂದಣಿ ಇದ್ದರೂ ಸುನಿಯೋಜಿತ ಸಂಚಾರ ವ್ಯವಸ್ಥೆಯಿಂದ ಸ್ಥಳೀಯ ಜನಜೀವನ ಸುಗಮವಾಗಿಡಲು ಸಾಧ್ಯವಾದ ಯಶಸ್ಸು, ಇಂತಹ ವೈವಿಧ್ಯಮಯ ವೈಶಿಷ್ಟ್ಯಗಳು ಮಹೋತ್ಸವದ ಗಮನಸೆಳೆದಿದ್ದವು. ಮಹೋತ್ಸವದ ಉತ್ತರಾರ್ಧದಲ್ಲಿ ನಡೆದ ಶತಚಂಡಿ ಯಜ್ಞವು ವಿಶೇಷವಾಗಿ ಪಾಕಿಸ್ತಾನದೊಂದಿಗಿನ ಯುದ್ಧದಲ್ಲಿ ಭಾರತೀಯ ಸೇನೆಯು ವಿಜಯ ಸಾಧಿಸಲಿ ಎಂದು ನಡೆಸಲಾಯಿತು. ಈ ಸಂದರ್ಭದಲ್ಲಿ ಸನಾತನ ಸಂಸ್ಥೆಯ ವತಿಯಿಂದ ಸೇನಾಪಡೆಗಾಗಿ 1 ಲಕ್ಷ 11 ಸಾವಿರ ರೂಪಾಯಿಗಳ ಮೊತ್ತವನ್ನು ಗೋವಾ ಮುಖ್ಯಮಂತ್ರಿ ಶ್ರೀ ಪ್ರಮೋದ ಸಾವಂತ ಅವರಿಗೆ ಹಸ್ತಾಂತರಿಸಲಾಯಿತು. ಈ ಮಹೋತ್ಸವದಲ್ಲಿ ಸನಾತನ ಸಂಸ್ಥೆಯ ಸಂಸ್ಥಾಪಕರಾದ ಸಚ್ಚಿದಾನಂದ ಪರಬ್ರಹ್ಮ ಡಾ. ಜಯಂತ ಆಠವಲೆ ಅವರ ಕರಕಮಲದಿಂದ 4 ಗಣ್ಯರಿಗೆ ಹಿಂದೂ ರಾಷ್ಟ್ರರತ್ನ ಪ್ರಶಸ್ತಿ ಮತ್ತು 21 ಗಣ್ಯರಿಗೆ ಸನಾತನ ಧರ್ಮಶ್ರೀ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು. ಈ ಮಹೋತ್ಸವದಲ್ಲಿ ಸವ್ಯಸಾಚಿ ಗುರುಕುಲಂ ವತಿಯಿಂದ ಶಿವಾಜಿ ಕಾಲದ ಯುದ್ಧಕಲೆ, ಹಿಂದೂ ಜನಜಾಗೃತಿ ಸಮಿತಿಯ ವತಿಯಿಂದ ಸ್ವಸಂರಕ್ಷಣಾ ತರಬೇತಿಯ ಪ್ರಾತ್ಯಕ್ಷಿಕೆಗಳು, ಮಹರ್ಷಿ ಅಧ್ಯಾತ್ಮ ವಿಶ್ವವಿದ್ಯಾಲಯದ ವತಿಯಿಂದ ನೃತ್ಯ ಮತ್ತು ಸಂಗೀತ ಪ್ರಸ್ತುತೀಕರಣ ನಡೆಯಿತು. ಈ ಮಹೋತ್ಸವಕ್ಕಾಗಿ ಸಾವಿರಾರು ಜನರು ಗೋವಾದ ಹೊರಗಿನಿಂದ ಬಂದಿದ್ದರು, ಅವರು ಗೋವಾದ ದೇವಸ್ಥಾನಗಳು, ಐತಿಹಾಸಿಕ ಸ್ಥಳಗಳಿಗೆ ಭೇಟಿ ನೀಡಿದ್ದರಿಂದ ಗೋವಾದಲ್ಲಿ ಸ್ಪಿರಿಚುವಲ್ ಟೂರಿಸಂಗೆ ಹೆಚ್ಚಿನ ಉತ್ತೇಜನ ಸಿಕ್ಕಿತು.

ದೇಶ-ವಿದೇಶಗಳಿಂದ ಬಂದ ಗಣ್ಯರಿಗೆ ಗೋವಾ ಭೋಗಭೂಮಿ ಅಲ್ಲ, ಅದು ಯೋಗಭೂಮಿ ಎಂದು ಮನವರಿಕೆ ಮಾಡಿಸುವಲ್ಲಿ ಈ ಮಹೋತ್ಸವವು ದೊಡ್ಡ ಯಶಸ್ಸನ್ನು ಸಾಧಿಸಿದೆ ಎಂದು ಖಚಿತವಾಗಿ ಹೇಳಬಹುದು.

**ಸನಾತನ ರಾಷ್ಟ್ರ ಹಿತೈಷಿಗಳ ಸಮಾವೇಶ**

**ಸನಾತನ ರಾಷ್ಟ್ರ ಶಂಖನಾದ ಮಹೋತ್ಸವದ ಸಮಾರೋಪ ಪತ್ರಿಕಾ ಗೋಷ್ಠಿಯಲ್ಲಿ ಅವರು ಮಾತನಾಡುತ್ತಿದ್ದರು. ಶ್ರೀ ವರ್ತಕ ಅವರು ಮುಂದುವರಿದು, ಗೋವಾ ಇತಿಹಾಸದಲ್ಲಿ ಭಾರತ ಸೇರಿದಂತೆ 23 ದೇಶಗಳ 30 ಸಾವಿರಕ್ಕೂ ಹೆಚ್ಚು ಜನರು ಭಾಗವಹಿಸಿದ್ದ ಇಷ್ಟು ಭವ್ಯ, ನಯನಮನೋಹರ ಮತ್ತು ಯೋಜಿತ ಕಾರ್ಯಕ್ರಮ ಇದಾಗಿತ್ತು ಎಂದು ಅನೇಕ ಚಿಂತಕರು, ಪ್ರಾಧ್ಯಾಪಕರು, ಉದ್ಯಮಿಗಳು, ಲೇಖಕರು, ಸಂಪಾದಕರು, ಕೇಂದ್ರ ಸಚಿವರು ಮತ್ತು ಗಣ್ಯರು ಅಭಿಪ್ರಾಯಪಟ್ಟಿದ್ದಾರೆ ಎಂದರು. ಅಲ್ಲದೆ, ಪ್ರತಿ ವರ್ಷ ಇಂತಹ ಶಂಖನಾದ ಮಹೋತ್ಸವವನ್ನು ಆಯೋಜಿಸಬೇಕು ಎಂಬ ಬೇಡಿಕೆ ಸಮಾಜದಿಂದ ಬರಲು ಪ್ರಾರಂಭಿಸಿದೆ ಎಂದು ಶ್ರೀ ವರ್ತಕ ಅವರು ಈ ಸಂದರ್ಭದಲ್ಲಿ ತಿಳಿಸಿದರು.**

ಈ ಕಾರ್ಯಕ್ರಮದ ಯಶಸ್ವಿ ಆಯೋಜನೆಯಲ್ಲಿ ಗೋವಾ ಸರಕಾರ, ಪೊಲೀಸ್ ಆಡಳಿತ, ಗೋವಾ ಇಂಜಿನಿಯರಿಂಗ್ ಕಾಲೇಜು, ಸ್ಥಳೀಯ ಜನ ಪ್ರತಿನಿಧಿಗಳು, ಸರಪಂಚರು, ಗ್ರಾಮಸ್ಥರು ಹೆಚ್ಚಿನ ಸಹಕಾರ ನೀಡಿದರು, ಹಾಗೆಯೇ ಪತ್ರಕರ್ತರು, ಉದ್ಯಮಿಗಳು ಸೇವಾ ಸಂಸ್ಥೆಗಳ ಕೊಡುಗೆ ಅತ್ಯಂತ ಅಮೂಲ್ಯವಾಗಿದೆ. ಅದೇ ರೀತಿ, ಎಲ್ಲಾ ಆಧ್ಯಾತ್ಮಿಕ ಸಾಮಾಜಿಕ ಮತ್ತು ರಾಷ್ಟ್ರೀಯ ವಿಚಾರಗಳ ಸಂಸ್ಥೆಗಳು ಇದರಲ್ಲಿ ಸಕ್ರಿಯವಾಗಿ ಭಾಗವಹಿಸಿದವು, ಇದಕ್ಕಾಗಿ ಅವರಿಗೆ ವಿಶೇಷ ಕೃತಜ್ಞತೆಗಳು! ಈ ಭವ್ಯ ಮಹೋತ್ಸವದ ಚರ್ಚೆ ದೇಶಾದ್ಯಂತ ಹರಡಿದ್ದು, ಶಂಖನಾದ ಎಂಬ ಪರಿಕಲ್ಪನೆಯು ಈಗ ದೇಶಾದ್ಯಂತ ರಾಷ್ಟ್ರ ನಿರ್ಮಾಣದ ಚೇತನವನ್ನು ಮೂಡಿಸುತ್ತಿದೆ.

ಒಟ್ಟಾರೆ, ಈ ಮಹೋತ್ಸವದಿಂದ ರಾಷ್ಟ್ರೀಯ ಏಕತೆ, ಭಾರತೀಯತೆಯ ಭಾವನೆ, ಆಧ್ಯಾತ್ಮಿಕ ಶಕ್ತಿ ಸಾಂಸ್ಕೃತಿಕ ಚೇತನ, ಶೌರ್ಯ ಇವುಗಳ ಪ್ರಬಲ ಜಾಗೃತಿಯಾಯಿತು.

ಆದ್ದರಿಂದ ಅನೇಕ ಗಣ್ಯರು ಹಾಗೂ ಸಾಮಾನ್ಯ ನಾಗರಿಕರು ಇಂತಹ ಮಹೋತ್ಸವವನ್ನು ಪ್ರತಿ ವರ್ಷ ಆಯೋಜಿಸಬೇಕು ಎಂದು ಬೇಡಿಕೆ ಇಟ್ಟಿದ್ದಾರೆ. ಇದು ಕಾರ್ಯಕ್ರಮದ ಯಶಸ್ಸಿನ ಸಾಕ್ಷಿಯಾಗಿದೆ ಎಂದೂ ಹೇಳಬಹುದು.

# ಉರ್ದುಗೆ 100 ಕೋಟಿ

## ಕನ್ನಡಕ್ಕೆ ಬರೀ 32 ಕೋಟಿನಾ..?




• ಉದಯವಾಹಿನಿ, ಬೆಂಗಳೂರು

ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಬಿಜೆಪಿ ಉರ್ದು ಬಾಣ ಬಿಟ್ಟಿದೆ. ಬಜೆಟ್‌ನಲ್ಲಿ ಭಾಷಾ ಅಭಿವೃದ್ಧಿಗೆ ಅನುದಾನದಲ್ಲಿ ತಾರತಮ್ಯ ಮಾಡಿದೆ. ಉರ್ದುಗೆ 100 ಕೋಟಿ ಅನುದಾನ ಕೊಟ್ಟಿದ್ದು, ಕನ್ನಡಕ್ಕೆ ಬರೀ 32 ಕೋಟಿ ಕೊಟ್ಟಿದೆ ಅಂತ ಬಿಜೆಪಿ ಆರೋಪ ಮಾಡಿದೆ. ಇದು ಭಂಡ ಹಾಗೂ ಭ್ರಷ್ಟರ ಉರ್ದು ಪ್ರೇಮ.. ನಾಡದ್ರೋಹಿ ಕಾಂಗ್ರೆಸ್ ಸಿದ್ದರಾಮಯ್ಯಗೆ ಉರ್ದು ಪ್ರೇಮ ಅಂತ ಬಿಜೆಪಿ ಕಾರ್ಟೂನ್ ಸಮೇತ ಎಕ್ಸ್‌ನಲ್ಲಿ ಟೀಕಿಸಿದೆ ಸಿಟಿ ರವಿ ಕಿಡಿಕಾರಿ ಸಿದ್ದರಾಮಯ್ಯಗೆ ಏನಾದರೂ ಟಿಪ್ಪು ಭೂತ ಆವರಿಸಿಕೊಂಡಿದ್ಯಾ ಅಂದಿದ್ದಾರೆ. ಇದಕ್ಕೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಸ್ಪಷ್ಟನೆ ಕೊಟ್ಟಿದ್ದು, ಭಾಷೆಯ ಹೆಸರಿನಲ್ಲಿ ಸುಳ್ಳು ಮಾಹಿತಿ ನೀಡಿ, ಕೋಮುದ್ವೇಷ ಹಂಚಲಾಗ್ತಿದೆ. ಉರ್ದು ಶಾಲೆಗಳಲ್ಲಿ ಕನ್ನಡ ಕಲಿಸಲಾಗ್ತಿದೆ. ಅಲ್ಪಸಂಖ್ಯಾತ ಕಲ್ಯಾಣ ಕಾರ್ಯಕ್ರಮದಡಿಯಲ್ಲಿ ಮುಸಲ್ಮಾನರು, ಕ್ರೈಸ್ತರು, ಜೈನರು, ಬೌದ್ದರು, ಸಿಕ್ಕರು ಬರುತ್ತಾರೆ. ಇವರೆಲ್ಲರಿಗೂ ಸೇರಿ 4,510 ಕೋಟಿ ಅನುದಾನ ನೀಡಲಾಗಿದೆ ಎಂದು ಸ್ಪಷ್ಟನೆ ಕೊಟ್ಟಿದೆ. ಈ ಬೆನ್ನಲ್ಲೇ ಸಿಎಂ ಮಾಧ್ಯಮ ಪ್ರಕಟಣೆ ಮೂಲಕ ಸ್ಪಷ್ಟನೆ ಕೊಟ್ಟಿದ್ದಾರೆ. ಬಿಜೆಪಿಗರ ಅಪಪ್ರಚಾರ ಸಂಪೂರ್ಣ ಸತ್ಯಕ್ಕೆ ದೂರವಾಗಿದೆ. ಬಿಜೆಪಿ ತಕ್ಷಣ ಸ್ಪಷ್ಟೀಕರಣದ ಮೂಲಕ ಸತ್ಯ ಸಂಗತಿಯನ್ನು ತಿಳಿಸಬೇಕು. ರಾಜ್ಯದ ಜನತೆಯ ಕ್ಷಮೆ ಕೇಳಬೇಕೆಂದು ಆಗ್ರಹಿಸುತ್ತೇನೆ ಅಂದಿದ್ದಾರೆ. ಇನ್ನೂ ಸರ್ಕಾರದ 2 ವರ್ಷದ ಸಾಧನೆ ವೇಳೆ ಬಿಜೆಪಿ ಬಿಡುಗಡೆ ಮಾಡಿದ್ದ ಚಾರ್ಜ್‌ಶೀಟ್ ವಿರುದ್ಧ ಮಾನ ಹಾನಿ ಕೇಸ್ ಹಾಕೋ ಬಗ್ಗೆ ಗೃಹ ಸಚಿವ ಪರಮೇಶ್ವರ್ ಹಾಗೂ ಸಚಿವ ಪ್ರಿಯಾಂಕ್ ಖರ್ಗೆ ಸುಳಿವು ಕೊಟ್ಟಿದ್ದಾರೆ

**ಬಿಜೆಪಿ ಪೋಸ್ಟರ್ ತಂತ್ರಕ್ಕೆ ಸಿಎಂ ಕೆಂಡ**






• ಹಿಂದಿನ ಸಂಚಿಕೆಯಿಂದ 78ನೆಯ ಅಧ್ಯಾಯ

ಹದಿನಾಲ್ಕು ವರುಷಗಳೆಂಬ ವನವಾಸದ ಮಿತಿಯನ್ನು ತೀರಿಸಿ ಹದಿನೈದನೆಯ ವರುಷದಲ್ಲಿ ತಿರುಗಿ ಬರುವಂಥ ತಾವರೆಯ ಎಸಳಿನಂತೆ ಕಣ್ಣುಗಳುಳ್ಳವನಾಗಿ, ಶೋಭನವಾದ ಹುಬ್ಬುಗಳುಳ್ಳವನಾಗಿ, ನಯವಾಗಿರುವ ದಂತಪಂಕ್ತಿಗಳುಳ್ಳವನಾಗಿ, ಸೊಬಗಾದ ನಾಸಿಕವುಳ್ಳವನಾಗಿ, ಮನೋಹರವಾದ ಮಕರ ಕುಂಡಲಗಳುಳ್ಳವನಾಗಿ, ಶರತ್ಕಾಲದ ಪೂರ್ಣಚಂದ್ರನಂತೆಯೂ ವಿಕಸಿತವಾದ ಕಮಲದಂತೆಯೂ ಮುಖಪದ್ಮವುಳ್ಳವನಾದ, ನನ್ನ ಒಡೆಯನಾದ ಶ್ರೀರಾಮನನ್ನು ಕಾಣುವವರು ಸಾಕ್ಷಾತ್ ದೇವತಾ ಸ್ವರೂಪರಲ್ಲದೆ ಮನುಷ್ಯರಲ್ಲ ಅವರೇ ಕೃತಾರ್ಥರು, ವನವಾಸದಿಂದ ತಿರುಗಿ ಬರುವ ಶ್ರೀರಾಮನನ್ನು ಗಗನಮಾರ್ಗದಲ್ಲಿ ಸಂಚರಿಸುವ ಶುಕ್ರನನ್ನು ಕಾಣುವಂತೆ ಯಾರು ಕಾಣುವರೋ ಅವರೇ ಸುಖಿಗಳು ಕೌಸಲ್ಯಾದೇವಿ, ನಾನು ಇನ್ನು ಶ್ರೀರಾಮನಿಗಾಗಿ ಕಾದಿರುವ ಹಾಗಿಲ್ಲ. ನನಗೆ ಚಿತ್ತ ವಿಭ್ರಮೆಯಾಗುತ್ತಿದೆ. ಎದೆಯು ಹಾರುತ್ತಿದೆ. ನನಗೆ ಶಬ್ದ ಸ್ಪರ್ಶಾದಿ ವಿಷಯಗಳು ಅಡಗಿದುವು. ಚಕ್ಷುರಾದಿ ದಶೇಂದ್ರಿಯಗಳು, ದೀಪದ ಎಣ್ಣೆಯು ತೀರಿದಮೇಲೆ ದೀಪಜ್ವಾಲೆ ತಗ್ಗುವಂತೆ, ತಮ್ಮ ತಮ್ಮ ವಿಷಯಗಳನ್ನನುಭವಿಸಲಾರದೆ ತಗ್ಗುತ್ತಿವೆ. ನನ್ನ ಮನೋವ್ಯಥೆಯು ನದೀಪ್ರವಾಹವು ಹೊತ್ತು ಹೊತ್ತಿಗೆ ತಡಿಯನ್ನು ಕೊರೆದು ಕೆಡಹುವಂತೆ ರಕ್ಷಕರಿಲ್ಲದೆ ಚೈತನ್ಯ ಗುಂದಿದ ನನ್ನನು ಬರಸೆಳೆಯುತ್ತಿದೆ ಹಾ ರಾಮಾ ಭುಜಬಲಪರಾಕ್ರಮವುಳ್ಳವನೆ ಪುತ್ರಶೋಕವನ್ನು ಶಮನ ಮಾಡಿದವನೆ ಪಿತೃಭಕ್ತನೆ ನನ್ನ ಒಡೆಯನಾದ ಶ್ರೀರಾಮನೆ ಹಾ ಮಗನೆ ನನ್ನನ್ನು ಬಿಟ್ಟು ವನಕ್ಕೆ ತೆರಳಿದೆಯಾ ಕೌಸಲ್ಯಾದೇವಿ, ಹಾ ಸುಮಿತ್ರೆ, ಪಾಪಿಯಾದ ಕೈಕೇಯಿಯು ಕುಲಗೇಡಿ ಎಂದು ಹಂಬಲಿಸುತ್ತ ಪ್ರಿಯಪುತ್ರನಾದ ಶ್ರೀರಾಮನ ವಿಯೋಗದಿಂದ ಬಾಧೆಪಟ್ಟು ಮುಂದುಗಾಣದೆ ಹಾಸಿಗೆಯ ಮೇಲೆ ಒರಗಿ ಸೌಮ್ಯಸ್ವರೂಪನಾಗಿ ಪ್ರಾಣವನ್ನು ಪರಿತ್ಯಾಗಮಾಡಿದನು. ಪ್ರಥಮಮುದ್ರಣದಲ್ಲಿ ಈ ಭಾಗವನ್ನು ಮುದ್ರಿಸುವಾಗ ನಮ್ಮ ಮಹಾಸ್ವಾಮಿಗಳಾದ ಮೈಸೂರು ಮಹಾರಾಜ ಶ್ರೀ ಚಾಮರಾಜ ಒಡೆಯರ್ ಬಹದ್ದೂರ್, ಬಿ. ಸಿ. ಎಸ್. ಐ. ಅವರು ಕಲ್ಕತ್ತೆಯಲ್ಲಿ 1894ನೆಯ ವರುಷ ಡಿಸೆಂಬರ್ 28ನೆಯ ತಾ ಪ್ರಾತಃ ಕಾಲ 6 ಘಂಟೆಯಲ್ಲಿ ಸ್ವರ್ಗಸ್ಥರಾದಂಥ ಅತಿದುಃಖಕರವಾದ ಘಟನೆ ಸಂಭವಿಸಿತು

### ದಶರಥ ರಾಯನ ಪತ್ನಿಯರು ದುಃಖ ಪಟ್ಟಿದ್ದು

ಆಮೇಲೆ ಆ ರಾತ್ರಿಯು ಕಳೆಯಲು ಪ್ರಾತಃಕಾಲದಲ್ಲಿ ಮಂಗಳಪಾಠಕರು ಸ್ತೋತ್ರಪಾಠಕರು ಗಾಯಕರು ಮೊದಲಾದವರು ತಂಡತಂಡವಾಗಿ ತಮ್ಮ ತಮ್ಮ ಸ್ಥಳಗಳಲ್ಲಿ ನಿಂತು ಸರ್ವಾಭರಣಭೂಷಿತರಾಗಿ ದಶರಥರಾಯನನ್ನು ಸ್ತೋತ್ರಮಾಡತೊಡಗಿದರು. ಆ ಧ್ವನಿಯು ಉಪ್ಪರಿಗೆಯ ಅಂತರಗಳನ್ನೂ ಪ್ರಾಕಾರಗಳನ್ನೂ ಪ್ರದೇಶಿಸಿ ಪ್ರತಿಶಬ್ದ ಹುಟ್ಟಿ ಒಂದಕ್ಕೆ ಹತ್ತು ಮಡಿಯಾಗಿ ಪ್ರತಿಧ್ವನಿಸುತ್ತಿತ್ತು. ಆ ಶಬ್ದದಿಂದ ಎಬ್ಬಿಸಲ್ಪಟ್ಟ, ಗಿಳಿ ಪಾರಿವಾಳ ನವಿಲು ಕೊಳರ್ವಕ್ಕಿ ಹಂಸ ಕೋಗಿಲೆ ಮೊದಲಾದ ಪಕ್ಷಿಗಳು ಕಿವಿಗಿಂಪಾಗಿ ಸ್ವರಗೈಯುತ್ತಿದ್ದುವು. ವೈಣಿಕರು ವೀಣಾನಾದವನ್ನು ಮಾಡುತ್ತಿದ್ದರು. ಬ್ರಹ್ಮವೇತ್ತ್ವಗಳಾದ ಬ್ರಾಹ್ಮಣರು ಆಶೀರ್ವಾದಗಳನ್ನು ಮಾಡುತ್ತಿದ್ದರು. ನಾನಾಪ್ರಕಾರವಾದ ಆ ಧ್ವನಿಗಳಿಂದ ದಶರಥರಾಯನ ಅರಮನೆಯು ರಮಣೀಯವಾಗಿತ್ತು.

ಮುಂದುವರಿಯುವುದು...

# ಗ್ರಾಮೀಣ ಯುವಸಮೂಹವನ್ನು ಸಬಲರನ್ನಾಗಿಸುವುದೇ ನಮ್ಮ ಗುರಿ

• ಉದಯವಾಹಿನಿ, ಬೆಂಗಳೂರು

ಗ್ರಾಮೀಣ ಯುವ ಸಮೂಹವನ್ನು ಸಬಲೀಕರಣಗೊಳಿಸಲು, ನಾವೀನ್ಯತೆ, ಸಮಾನತೆ ಮತ್ತು ಅಂತರ್ಗತ ಅಭಿವೃದ್ಧಿಗೆ ಮಾದರಿಯಾಗಿ ಉಳಿಯುವ ಭವಿಷ್ಯವನ್ನು ರೂಪಿಸಲು ನಮ್ಮ ಸರ್ಕಾರ ಸಂಕಲ್ಪ ತೊಟ್ಟಿದೆ ಎಂದು ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ತಿಳಿಸಿದರು.

ಬೆಂಗಳೂರಿನ ರಾಡಿಸನ್ ಬ್ಲೂನಲ್ಲಿ ನಡೆದ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ ಅಡಿಯಲ್ಲಿ ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯಾ CXO ಸಮಾವೇಶ ಮತ್ತು ಹಳೆಯ ವಿದ್ಯಾರ್ಥಿಗಳ ಸಭೆಯನ್ನು ಉದ್ದೇಶಿಸಿ ಸಚಿವರು ಮಾತನಾಡಿದರು.




CXO ಸಮಾವೇಶ ಮತ್ತು ಹಳೆಯ ವಿದ್ಯಾರ್ಥಿಗಳ ಸಭೆಯು ಸಹಯೋಗದ ಕ್ರಮ, ನಾವೀನ್ಯತೆ ಮತ್ತು ಬದ್ಧತೆಯ ಮೂಲಕ ಕರ್ನಾಟಕದ ಭವಿಷ್ಯವನ್ನು ರೂಪಿಸುವ ಪ್ರಮುಖ ಅವಕಾಶ ಕಲ್ಪಿಸುವ ವೇದಿಕೆಯಾಗಿದೆ ಎಂದರು.

ನಮ್ಮ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ, ಜೀವನೋಪಾಯ ಇಲಾಖೆಯ ಮೂಲಕ ಗ್ರಾಮೀಣ ಯುವಕರನ್ನು ಸಬಲೀಕರಣಗೊಳಿಸುವ ಪರಿವರ್ತನಾತ್ಮಕ ಹಾದಿಯಲ್ಲಿದೆ. ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ ಅಡಿಯಲ್ಲಿ ಒಂದು ಮೂಲಾಧಾರ ಮತ್ತು ಪ್ರಮುಖ ಉಪಕ್ರಮವಾಗಿದೆ. ಈ ಕಾರ್ಯಕ್ರಮವು ಗ್ರಾಮೀಣ ಯುವಜನರಿಗೆ ಜೀವನಾಡಿಯಾಗಿ ಹೊರಹೊಮ್ಮಿದೆ ಎಂದು ಸ್ಪಷ್ಟಪಡಿಸಿದರು. ಉದ್ಯಮ-ಸಂಬಂಧಿತ ಕೌಶಲ್ಯ ತರಬೇತಿಯನ್ನು ನೀಡುವ ಮೂಲಕ, ಯುವಕರು ಅರ್ಥಪೂರ್ಣ ಉದ್ಯೋಗವನ್ನು ಪಡೆಯಲು ಅನುವು ಮಾಡಿ ಕೊಡುತ್ತದೆ. ಇದರಿಂದಾಗಿ ಅವರ ಜೀವನಮಟ್ಟ ಸುಧಾರಿಸುತ್ತದೆ ಮತ್ತು ಗ್ರಾಮೀಣ ಬಡತನವನ್ನು ನಿರ್ಮೂಲನೆ ಮಾಡಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.

# ಫಂಗಲ್ ಇನ್‌ಫೆಕ್ಷನ್ ಎಚ್ಚರ!

ಹವಾಮಾನ ಬದಲಾವಣೆಯ ಪರಿಣಾಮದಿಂದಾಗಿ ನಾನಾ ಕಾಯಿಲೆಗಳು ಕಾಡಲಾರಂಭಿಸಿವೆ. ಹವಾಮಾನ ಬದಲಾವಣೆಯಿಂದಾಗಿ ಸಣ್ಣ ಪುಟ್ಟ ಜ್ವರ, ಶೀತ, ಕೆಮ್ಮಿನಂತಹ ಸಮಸ್ಯೆ ಬರೋದು ಸಾಮಾನ್ಯ. ಆದರೆ ಇದು ಮಾನವ ದೇಹವನ್ನು ಒಳಗಿನಿಂದಲೇ ತಿನ್ನಬಲ್ಲ ಫಂಗಲ್ ಇನ್‌ಫೆಕ್ಷನ್‌ಗೆ ಕಾರಣವಾಗುತ್ತಿದೆ. ದೇಶದ ಕೆಲವು ಕಡೆ ವಿಪರೀತ ಬಿಸಿಲು ಇದ್ದರೆ ಇನ್ನೂ ಕೆಲವು ಕಡೆಗಳಲ್ಲಿ ವಿಪರೀತ ಮಳೆ ಬೀಳುತ್ತಿದೆ. ಈ ರೀತಿಯ ಹವಾಮಾನದ ಬದಲಾವಣೆಯು ನಾನಾ ರೀತಿಯಲ್ಲಿ ಆರೋಗ್ಯದ ಮೇಲೆ ಪರಿಣಾಮ ಬೀರಲಿದೆ. ಹೆಚ್ಚುತ್ತಿರುವ ತಾಪಮಾನದಿಂದಾಗಿ, ಅತ್ಯಂತ ಅಪಾಯಕಾರಿ ಶಿಲೀಂಧ್ರವಾದ ಆಸ್ಪರ್ಜಿಲಸ್ ಸಾಂಕ್ರಾಮಿಕ ರೋಗವಾಗಿ ಪರಿಣಮಿಸಬಹುದು ಎಂಬ ವಿಜ್ಞಾನಿಗಳ ವರದಿಯು ಪ್ರಪಂಚದಾದ್ಯಂತ ಸಂಚಲನ ಮೂಡಿಸಿದೆ. ಈ ಶಿಲೀಂಧ್ರವು ಗಾಳಿಯ ಮೂಲಕ ಮಾತ್ರ ದೇಹವನ್ನು ಪ್ರವೇಶಿಸುತ್ತದೆ ಮತ್ತು ಶ್ವಾಸಕೋಶದಿಂದ ಮೆದುಳಿನವರೆಗೆ ಸೋಂಕನ್ನುಂಟು ಮಾಡುತ್ತದೆ. ಈ ಶಿಲೀಂಧ್ರ ಯಾವುದು, ಅದು ಹೇಗೆ ಹರಡುತ್ತದೆ ಮತ್ತು ಅದರ ಅಪಾಯಕಾರಿ ಲಕ್ಷಣಗಳು ಯಾವುವು ಎಂಬುದನ್ನು ನಾವಿಲ್ಲಿ ತಿಳಿಯೋಣ.





**ಆಸ್ಪರ್ಜಿಲಸ್ ಶಿಲೀಂಧ್ರ ಎಂದರೇನು:** ಶಿಲೀಂಧ್ರಗಳಲ್ಲಿ ಹಲವು ವಿಧಗಳಿವೆ ಆದರೆ ಆಸ್ಪರ್ಜಿಲಸ್ ಅಂತಹ ಒಂದು ಶಿಲೀಂಧ್ರವಾಗಿದ್ದು, ಇದು ಶತಮಾನಗಳಿಂದ ನಮ್ಮ ಸುತ್ತಲಿನ ಪರಿಸರದಲ್ಲಿ ಇದೆ. ಇದು ಮಣ್ಣು, ಗಾಳಿ ಮತ್ತು ಕೊಳೆತ ಸಸ್ಯಗಳಲ್ಲಿ ಬೆಳೆಯುತ್ತದೆ. ಇದು ಸತ್ತ ಸಾವಯವ ಪದಾರ್ಥಗಳನ್ನು ನೈಸರ್ಗಿಕವಾಗಿ ಒಡೆಯಲು ಸಹಾಯ ಮಾಡುತ್ತದೆ.

**ಯಾರು ಇದರ ಹೆಚ್ಚಿನ ಅಪಾಯದಲ್ಲಿದ್ದಾರೆ:** ಕ್ಯಾನ್ಸರ್ ರೋಗಿಗಳು ಅಥವಾ ಗಂಭೀರ ಕಾಯಿಲೆಯಿಂದ ಬಳಲುತ್ತಿರುವ ಜನರಂತಹ ದುರ್ಬಲ ರೋಗನಿರೋಧಕ ಶಕ್ತಿ ಹೊಂದಿರುವ ಜನರು ಈ ಶಿಲೀಂಧ್ರದಿಂದ ಹೆಚ್ಚು ಅಪಾಯಕ್ಕೆ ಒಳಗಾಗುತ್ತಾರೆ. ಆರೋಗ್ಯವಂತ ಜನರಲ್ಲಿ ಇದರ ಪರಿಣಾಮ ಕಡಿಮೆ ಇರಬಹುದು, ಏಕೆಂದರೆ ಅವರ ರೋಗನಿರೋಧಕ ಶಕ್ತಿ ಆ ಶಿಲೀಂಧ್ರದ ವಿರುದ್ಧ ಹೋರಾಡುತ್ತದೆ.

**ಈ ಶಿಲೀಂಧ್ರ ಹೇಗೆ ಹರಡುತ್ತದೆ:** ಆಸ್ಪರ್ಜಿಲಸ್ ಗಾಳಿಯಲ್ಲಿ ಬಿಡುಗಡೆಯಾಗುತ್ತದೆ. ನಾವು ಅದನ್ನು ಪ್ರತಿದಿನ ಉಸಿರಾಡುತ್ತೇವೆ. ಹೆಚ್ಚಿನ ಸಂದರ್ಭಗಳಲ್ಲಿ ದೇಹದ ಪ್ರತಿರಕ್ಷಣಾ ವ್ಯವಸ್ಥೆಯು ಅವುಗಳನ್ನು ನಾಶಪಡಿಸುತ್ತದೆ. ಆದರೆ ದೇಹವು ಅವುಗಳನ್ನು ತೆರವುಗೊಳಿಸಲು ಸಾಧ್ಯವಾಗದಿದ್ದರೆ, ಈ ಶಿಲೀಂಧ್ರವು ದೇಹದೊಳಗೆ ಬೆಳೆಯಲು ಪ್ರಾರಂಭಿಸುತ್ತದೆ ಮತ್ತು ನಿಧಾನವಾಗಿ ಅಂಗಗಳನ್ನು ಹಾನಿಗೊಳಿಸುತ್ತದೆ.

**ಹವಾಮಾನ ಬದಲಾವಣೆಯ ಪರಿಣಾಮಗಳು:** ಜಾಗತಿಕ ತಾಪ ಮಾನ ಏರಿಕೆಯು ಭೂಮಿಗೆ ಮಾತ್ರವಲ್ಲದೆ ಮಾನವನ ಆರೋಗ್ಯಕ್ಕೂ ದೊಡ್ಡ ಬೆದರಿಕೆಯಾಗುತ್ತಿದೆ. ಆಸ್ಪರ್ಜಿಲಸ್ ನಂತಹ ಅಪಾಯಕಾರಿ ಶಿಲೀಂಧ್ರವು ಜನರನ್ನು ಬೇಗನೆ ತಲುಪಬಹುದು, ಸಮಸ್ಯೆಗಳನ್ನು ಉಂಟುಮಾಡಬಹುದು. ಹವಾಮಾನ ಬದಲಾವಣೆಯ ಪರಿಣಾಮಗಳು ಜನದಟ್ಟಣೆ ಮತ್ತು ಕಳಪೆ ಜೀವನ ಪರಿಸ್ಥಿತಿಗಳಿಗೆ ಕಾರಣವಾಗಬಹುದು. ಈ ಅಂಶಗಳು ಹುಳುಕಡ್ಡಿ ಹರಡುವಿಕೆಯ ಅಪಾಯ ಜೊತೆ ಸಂಬಂಧ ಹೊಂದಿವೆ.

### ವಿಜ್ಞಾನಿಗಳ ಎಚ್ಚರಿಕೆ

**ಮಾಹಿತಿಯ ಪ್ರಕಾರ, ಮ್ಯಾಂಚೆಸ್ಟರ್ ವಿಶ್ವವಿದ್ಯಾಲಯದ ವಿಜ್ಞಾನಿಗಳು ಭವಿಷ್ಯದ ಭಯಾನಕ ಚಿತ್ರವನ್ನು ತೋರಿಸಿದ್ದಾರೆ. ಅಂದರೆ, ಜಾಗತಿಕ ತಾಪಮಾನ ಏರಿಕೆ ಹೀಗೆಯೇ ಹೆಚ್ಚಾದರೆ, ಈ ಶಿಲೀಂಧ್ರವು 77.5% ವರೆಗೆ ಹರಡುತ್ತದೆ ಎಂದು ವಿಜ್ಞಾನಿಗಳು ಹೇಳುತ್ತಾರೆ. ಅದು ಉತ್ತರ ಧ್ರುವವನ್ನು ಸಹ ತಲುಪಬಹುದು.**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ನಿಯಮಿತ ತೊಂದರೆ ನಿಮಗೆ ಕೆಲವು ಸಮಸ್ಯೆಗಳನ್ನು ಉಂಟು ಮಾಡಬಹುದು. ನಿಮ್ಮ ನರಮಂಡಲದ ಕಾರ್ಯವೆಸಗುತ್ತಿರಲು ಸಂಪೂರ್ಣ ವಿಶ್ರಾಂತಿ ತೆಗೆದುಕೊಳ್ಳಿ.

**ವೃಷಭ** ನೀವು ಸಾಮಾನ್ಯವಾಗಿ ಇರುವುದಕ್ಕಿಂತ ಕಡಿಮೆ ಚೈತನ್ಯವನ್ನು ಇಂದು ಕಾಣುತ್ತೀರಿ. ನಿಮ್ಮ ಮೇಲೆ ನೀವೇ ಹೆಚ್ಚುವರಿ ಕೆಲಸಕ್ಕೆ ಒತ್ತಡ ಹೇರಬೇಡಿ – ಸ್ವಲ್ಪ ವಿಶ್ರಾಂತಿ ತೆಗೆದುಕೊಳ್ಳಿ.

**ಮಿಥುನ** ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ. ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ.

**ಕರ್ಕಾಟಕ** ನಿಮ್ಮಲ್ಲಿ ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ಇಂದು ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಹೊಂದಿರುವ ಸಾಧ್ಯತೆ ಇದೆ.

**ಸಿಂಹ** ಮಾನಸಿಕ ಒತ್ತಡ ತರುವ ಸುಪ್ತ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಇಂದು ನಿಮ್ಮ ಆಪ್ತರೊಂದಿಗೆ ಜಗಳವಾಗಬಹುದು ಮತ್ತು ವಿಷಯ ನ್ಯಾಯಾಲಯ ಕಚೇರಿಯ ವರೆಗೂ ಹೋಗಬಹುದು.

**ಕನ್ಯಾ** ಮನೆಯಲ್ಲಿನ ಹಬ್ಬದ ವಾತಾವರಣ ನಿಮ್ಮ ಉದ್ವೇಗವನ್ನು ಶಮನ ಗೊಳಿಸುತ್ತದೆ. ನೀವು ಇದರಲ್ಲಿ ಭಾಗವಹಿಸುತ್ತೀರಿ ಮತ್ತು ಕೇವಲ ಮೂಕ ಪ್ರೇಕ್ಷಕರಾಗಿ ಮಾತ್ರ ಉಳಿಯುವುದಿಲ್ಲವೆಂದು ಖಚಿತಪಡಿಸಿಕೊಳ್ಳಿ.

**ತುಲಾ** ಕೆಲವು ಕುಟುಂಬದ ಸದಸ್ಯರು ತಮ್ಮ ಅಸೂಯೆಯ ವರ್ತನೆಯಿಂದ ನಿಮಗೆ ಕಿರಿಕಿರಿ ಮಾಡಬಹುದು. ಆದರೆ ತಾಳ್ಮೆ ಕಳೆದುಕೊಳ್ಳುವುದು ಬೇಡ. ಇಲ್ಲದಿದ್ದರೆ ಪರಿಸ್ಥಿತಿ ನಿಯಂತ್ರಣ ಮೀರಬಹುದು.

**ವೃಶ್ಚಿಕ** ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ.

**ಧನಸ್ಸು** ಇಂದು ನಿಮಗಾಗಿ ಸಾಕಷ್ಟು ಸಮಯವನ್ನು ಹೊಂದಿರುವ ದಿನ. ತಪ್ಪು ಸಂವಹನ ಇಂದು ತೊಂದರೆಯುಂಟುಮಾಡಬಹುದು, ಆದರೆ ನೀವು ಕುಳಿತು ಮಾತನಾಡುವುದರಿಂದ ಇದನ್ನು ನಿರ್ವಹಿಸಬಹುದು.

**ಮಕರ** ಇಂದು ನಿಮಗೆ ಹಣದ ಲಾಭವಾಗುವ ಪೂರ್ತಿ ಸಾಧ್ಯತೆ ಇದೆ, ಆದರೆ ಇದರೊಂದಿಗೆ ನೀವು ದಾನವನ್ನು ಸಹ ಮಾಡಬೇಕು ಏಕೆಂದರೆ ಇದರಿಂದ ನಿಮಗೆ ಮಾನಸಿಕ ಶಾಂತಿ ಸಿಗುತ್ತದೆ.

**ಕುಂಭ** ಮಕ್ಕಳಲ್ಲಿ ನಿಮಗೆ ರೋಮಾಂಚಕ ಸುದ್ದಿ ತರಬಹುದು. ನಿಮ್ಮ ಪ್ರೀತಿಯ ಕಥೆ ಇಂದು ಒಂದು ಹೊಸ ತಿರುವು ತೆಗೆದುಕೊಳ್ಳಬಹುದು, ಇಂದು ನಿಮ್ಮ ಸಂಗಾತಿ ಮದುವೆಯ ಬಗ್ಗೆ ನಿಮ್ಮೊಂದಿಗೆ ಮಾತನಾಡಬಹುದು.

**ಮೀನ** ದೇಹದ ನೋವಿನಿಂದ ಬಳಲುವ ಸಾಧ್ಯತೆ ಹೆಚ್ಚಿದೆ. ನಿಮ್ಮ ದೇಹದ ಮೇಲೆ ಹೆಚ್ಚು ಒತ್ತಡ ಹಾಕುವ ಯಾವುದೇ ದೈಹಿಕ ಪರಿಶ್ರಮವನ್ನು ತಪ್ಪಿಸಲು ಪ್ರಯತ್ನಿಸಿ. ಸಾಕಷ್ಟು ವಿಶ್ರಾಂತಿ ತೆಗೆದುಕೊಳ್ಳಿ.

---

• ಕಷ್ಟಪಟ್ಟು ದುಡಿದರೆ ಕೃಷಿ ಅತ್ಯಂತ ಲಾಭದಾಯಕ,ಯುವಕರು ಆಸಕ್ತಿ ವಹಿಸಿ ಕೃಷಿಯಲ್ಲಿ ತೊಡಗುವ ಅಗತ್ಯವಿದೆ

## ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ

• ಉದಯವಾಹಿನಿ ಬೀದರ್

ಕಷ್ಟಪಟ್ಟು ದುಡಿದರೆ ಕೃಷಿ ಅತ್ಯಂತ ಲಾಭದಾಯಕವಿದೆ. ಹೀಗಾಗಿ ಯುವಕರು ಆಸಕ್ತಿ ವಹಿಸಿ ಕೃಷಿಯಲ್ಲಿ ತೊಡಗುವ ಅಗತ್ಯವಿದೆ ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಕರೆ ನೀಡಿದರು. ಬೀದರ್ ದಕ್ಷಿಣ ಕ್ಷೇತ್ರದ ಬಗದಲ್ ರೈತ ಸಂಪರ್ಕ ಕೇಂದ್ರದಲ್ಲಿ ರೈತ ಬಾಂಧವರಿಗೆ 2025–26ನೇ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರೈತರು ಬಿತ್ತನೆ ಕೈಗೊಳ್ಳುವಾಗ ಭೂಮಿಯಲ್ಲಿ ಅವಶ್ಯಕ ತೇವಾಂಶ ಇರುವುದನ್ನು ಕಡ್ಡಾಯವಾಗಿ ಖಚಿತ ಪಡಿಸಿಕೊಂಡು ಬಿತ್ತನೆ ಮಾಡಬೇಕು. ಇಲ್ಲವಾದಲ್ಲಿ ಬೀಜಗಳು ಸರಿಯಾಗಿ ಮೊಳಕೆಯೊಡೆಯದೇ ಉತ್ತಮ ಬೆಳೆ ಪಡೆಯಲು ಸಾಧ್ಯವಾಗುವುದಿಲ್ಲ ಎಂದು ಮನವಿ ತಿಳಿಸಿದರು.

ರೈತರಿಗೆ ಅವಶ್ಯವಿರುವ ಸೋಯಬೀನ್, ಹೆಸರು, ತೊಗರಿ, ಉದ್ದು ಬಿತ್ತನೆ ಬೀಜಗಳ ದಾಸ್ತಾನು ಮಾಡಲಾಗಿದ್ದು, ಮುಂಗಾರು ಹಂಗಾಮು ಪ್ರಾರಂಭ ವಾಗಲಿರುವ ಹಿನ್ನೆಲೆಯಲ್ಲಿ ರೈತರಿಗೆ ಬಿತ್ತನೆ ಕಾರ್ಯ ಪ್ರಾರಂಭವಾಗುವ ಮುನ್ನ ಎಲ್ಲಾ ರೀತಿಯ



☛ ಉದಯವಾಹಿನಿ ಚಿತ್ರ

**34 ಸಾವಿರ ಹೆಕ್ಟೇರ್ ಬಿತ್ತನೆ ಗುರಿ**

ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಕ್ಷೇತ್ರದಲ್ಲಿ ಸುಮಾರು 19 ಸಾವಿರ ಕ್ವಿಂಟಾಲ್ ಬೀಜ ಬೇಡಿಕೆಯಿದ್ದು, 10 ಸಾವಿರ ಕ್ವಿಂಟಾಲ್ ದಾಸ್ತಾನಿದೆ. ರೈತರಿಗೆ ಬೇಕಾದ ಸೋಯಾಬೀನ್, ತೊಗರಿ, ಉದ್ದು, ಹೆಸರು ಬೀಜ ವಿತರಣೆಗೆ ಕ್ರಮ ಕೈಗೊಳ್ಳಲಾಗಿದೆ. ರೈತರ ಬೇಡಿಕೆಯಂತೆ ಬೀಜ ವಿತರಣೆ ಮಾಡಲಾಗುವುದು ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಬೀದರ್ ದಕ್ಷಿಣ ಕ್ಷೇತ್ರದಲ್ಲಿ ಬಿತ್ತನೆ ಪ್ರದೇಶ ಗುರಿ 34 ಸಾವಿರ ಹೆಕ್ಟೇರ್ ಬಿತ್ತನೆ ಗುರಿ.

ಬೀದರ್ ತಾಲ್ಲೂಕಿನ ವ್ಯಾಪ್ತಿಯ ನಮ್ಮ ಕೇತ್ರದಲ್ಲಿ ಒಟ್ಟು 19 ಬೀಜ ವಿತರಣೆ ಕೇಂದ್ರ ಮಾಡಲಾಗಿದೆ. ಚಿಟಗುಪ್ಪ ವ್ಯಾಪ್ತಿಯಲ್ಲಿ 5 ಬೀಜ ವಿತರಣೆ ಕೇಂದ್ರ ಮಾಡಲಾಗಿದೆ. ರೈತರು ಹಾಗೂ ಸೈನಿಕರು ದೇಶದ ಎರಡು ಕಣ್ಣು. ಜೈ ಜವಾನ್, ಜೈ ಕಿಸಾನ್. ಇವರಿಬ್ಬರೂ ಚೆನ್ನಾಗಿದ್ದಾಗಲೇ ದೇಶ ಚೆನ್ನಾಗಿ ಇರಲು ಸಾಧ್ಯ. ಭಾರತದಲ್ಲಿ ಇಂದು 145 ಕೋಟಿ ಜನರಿದ್ದಾರೆ. ಎಲ್ಲರಿಗೂ ಆಹಾರ ಭದ್ರತೆ ಬೇಕು. ಇದಕ್ಕೆ ಕೃಷಿ ಚೆನ್ನಾಗಿರಬೇಕು. ಕೃಷಿ ಏರುಪೇರಾದರೆ ದೇಶದ ವ್ಯವಸ್ಥೆಯೇ ಬುಡಮೇಲಾಗುತ್ತದೆ. ಅಷ್ಟೊಂದು ಪ್ರಾಧಾನ್ಯತೆ ಕೃಷಿಗೆ ಇದೆ. ಅದಕ್ಕಾಗಿಯೇ ಕೃಷಿ ಭಾರತದ ಬೆನ್ನೆಲುಬು ಎನ್ನುತ್ತಾರೆ.

ಆಧುನಿಕ ತಂತ್ರಜ್ಞಾನದ ಬಳಕೆ, ಮಿಶ್ರ ಬೇಸಾಯ, ತೋಟಗಾರಿಕೆ ಸೇರಿ ವಿವಿಧ ಬೆಳೆಗಳ ಮೂಲಕ ಒಂದೆರಡು ಎಕರೆ ಭೂಮಿಯಲ್ಲೂ ಲಕ್ಷಾಂತರ ಆದಾಯ ಗಳಿಸಬಹುದು. ಈ ಬಗ್ಗೆ ಯುವಕರು ಚಿತ್ತ ಹರಿಸಬೇಕು ಎಂದರು.

### ಎಲ್ಲರಿಗೂ ಅಗತ್ಯ ಬೀಜ, ಗೊಬ್ಬರ ವಿತರಿಸಲು ಕ್ರಮ

ಈ ಸಲ ಮಳೆ ಬೇಗ ಶುರುವಾಗಿದೆ. ಕಳೆದ ಒಂದು ವಾರದಿಂದ ಕ್ಷೇತ್ರದ ಬಹುತೇಕ ಕಡೆ ಮಳೆಯಾಗುತ್ತಿದೆ. ಒಂದು ವಾರದಲ್ಲಿ ಕ್ಷೇತ್ರದಲ್ಲಿ ಸರಾಸರಿ 6 ಮಿಮೀ ಮಳೆ ಆಗಬೇಕಿತ್ತು. ಆದರೆ ವಾಸ್ತವವಾಗಿ ಸರಾಸರಿ 35 ಮಿಮೀ ಮಳೆಯಾಗಿದೆ. ಕೆಲ ಹೋಬಳಿಗಳಲ್ಲಿ ಸರಾಸರಿ 50 ಮಿಮೀ ಮಳೆಯಾಗಿದೆ. ಅನೇಕ ಕಡೆ ಮಳೆಯಾದ ಕಾರಣ ಹೊಲಗಳಲ್ಲಿ ನೀರು ನಿಂತಿದೆ. ತೇವಾಂಶ ಹೆಚ್ಚಿದೆ. ಅನೇಕ ರೈತರು ಹೊಲ ಹದ ಮಾಡಿಕೊಳ್ಳಲು ಸಾಧ್ಯವಾಗಿಲ್ಲ. ರೈತರು ಯಾವುದೇ ಕಾರಣಕ್ಕೂ ಹೆದರಬಾರದು. ಇನ್ನೂ ಸಾಕಷ್ಟು ಸಮಯವಿದೆ. ಜೂನ್ ಎರಡು, ಮೂರನೇ ವಾರದವರೆಗೆ ಬಿತ್ತನೆ ಮಾಡಬಹುದು. ಎಲ್ಲರೂ ತಯಾರಿ ಮಾಡಿಕೊಳ್ಳಿ. ಎಲ್ಲರಿಗೂ ಅಗತ್ಯ ಬೀಜ, ಗೊಬ್ಬರ ವಿತರಿಸಲು ಕ್ರಮ ಕೈಗೊಳ್ಳಲಾಗಿದೆ. ಎಲ್ಲರೂ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ ಬೀಜ, ಗೊಬ್ಬರ ಪಡೆಯಬೇಕು. ಅಲ್ಲಲ್ಲಿ ಯಾರಾದರೂ ಬಂದು ಬೀಜ, ಗೊಬ್ಬರ ಕಡಿಮೆ ದರದಲ್ಲಿ ಕೊಟ್ಟರೆ ಪಡೆದು ಮೋಸ ಹೋಗಬಾರದು. ಎಲ್ಲರೂ ರೈತ ಸಂಪರ್ಕದಲ್ಲಿ ಬೀಜ ಖರೀದಿಸಿ ಎಂದು ಮನವಿ ಮಾಡಿದರು.

> ನಾವೆಲ್ಲರೂ ಕೃಷಿಯಲ್ಲಿ ಆಸಕ್ತಿ ವಹಿಸಬೇಕಾಗುತ್ತದೆ. ನಮ್ಮ ಮಕ್ಕಳು ಇಂದು ಓದುತ್ತಾರೆ. ಸಿಕ್ಕರೆ ನೌಕರಿ ಮಾಡುತ್ತಾರೆ. ನೌಕರಿ ಸಿಗದಿದ್ದರೆ ಏನಾದರೂ ಉದ್ಯೋಗ ಮಾಡಲು ಮುಂದಾಗುತ್ತಾರೆ. ಆದರೆ ಸ್ವಂತ ಜಮೀನು ಇದ್ದರೂ ಸಹ ಕೃಷಿ ಮಾಡಲು ಮುಂದಾಗುವುದಿಲ್ಲ ಇದು ನೋವಿನ ಸಂಗತಿ. ಕೃಷಿಯಲ್ಲಿರುವ ಖುಷಿ, ಸಮಾಧಾನ, ಆರೋಗ್ಯ ಮತ್ತು ಆದಾಯ ಯಾವುದರಲ್ಲೂ ಇಲ್ಲ. ಆದರೆ ಇದಕ್ಕೆ ಶ್ರಮ ಅವಶ್ಯಕತೆಯಿದೆ ಭೂಮಿ ಬಂಗಾರ ಕೊಡುತ್ತದೆ ಎಂಬ ಮಾತು ನಿಜವಿದೆ **–ಡಾ. ಶೈಲೇಂದ್ರ ಬೆಲ್ದಾಳೆ**

---

## ಬೇಡಿಕೆಗಳು ಈಡೇರಿಸಲು, ಪೌರ ನೌಕರರ ಅನಿರ್ಧಿಷ್ಟಾವಧಿ ಮುಷ್ಕರ

• ಉದಯವಾಹಿನಿ, ಚಿಂಚೋಳಿ

ರಾಜ್ಯಾದ್ಯಂತ ಪೌರ ನೌಕರರು ಕರ್ತವ್ಯಕ್ಕೆ ಗೈರು ಕಸ ವಿಲೇವಾರಿ ಸ್ವಚ್ಛತೆ ಒಳಚರಂಡಿ ನಿರ್ವಹಣೆ ಹಾಗೂ ಕಛೇರಿ ಕೆಲಸ ಸ್ಥಗಿತಗೊಳಿಸಿ ವಿವಿಧ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ರಾಜ್ಯ ಪೌರ ನೌಕರರ ಸಂಘದ ಆದೇಶದಂತೆ ತಾಲ್ಲೂಕಿನಲ್ಲಿ ಪೌರ ನೌಕರರು ಅನಿರ್ಧಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿದೆ. ಪಟ್ಟಣದ ಪುರಸಭೆ ಕಛೇರಿ ಎದುರು ಪೌರ ನೌಕರರು ಅನಿರ್ಧಿಷ್ಟಾವಧಿ ಮುಷ್ಕರ ಹಮ್ಮಿಕೊಂಡು ವಿವಿಧ ಬೇಡಿಕೆಗಳನ್ನು ಈಡೇರಿಸಲು ಒತ್ತಾಯಿಸಿದರು.

ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಯ ನೌಕರರನ್ನು ರಾಜ್ಯ ಸರ್ಕಾರಿರೆಂದು ಪರಿಗಣಿಸಿ ಜ್ಯೋತಿ ಸಂಜೀವಿನಿ ಕೆಜಿಐಡಿ ಸೇರಿದಂತೆ ಸರ್ಕಾರಿ ನೌಕರರು ಪಡೆಯುವ ಎಲ್ಲಾ ಸೌಲಭ್ಯಗಳನ್ನು ನೀಡಬೇಕು,ರಾಜ್ಯದ ನಗರ ಎಲ್ಲಾ ಸ್ಥಳೀಯ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಅಡಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ನೀರು ಸರಬರಾಜು,ವಾಹನ ಚಾಲಕರು, ಲೋಡರ್ಸ್, ಗಾರ್ಡನರ, ಸ್ಯಾನಿಟರಿ,ಸೂಪರವೈಜರ್, ಯುಜಿಡಿ ಸಹಾಯಕರು ಸೇರಿದಂತೆ ವಿವಿಧ ವೃಂದದ



☛ ಉದಯವಾಹಿನಿ ಚಿತ್ರ

ಹೊರಗುತ್ತಿಗೆ ನೌಕರರನ್ನು ನೇರ ಪಾವತಿಗೆ ಒಳಪಡಿಸುವುದು.

ದಿನಗೂಲಿ ಕ್ಷೇಮಾಭಿವೃದ್ಧಿ ಸಮಾನ ಕೆಲಸಕ್ಕೆ ಸಮಾನ ವೇತನ ನೌಕರರನ್ನು ಖಾಯಂ ಮಾಡಬೇಕು,ಎಲ್ಲಾ ನೌಕರರಿಗೆ ಎಸ್.ಎಫ್.ಸಿ ಮುಕ್ತ ನಿಧಿಯಿಂದ ವೇತನ ನೀಡಬೇಕು ಎಂದು ಪೌರ ನೌಕರರ ಸಂಘದ ತಾಲ್ಲೂಕಾ ಅಧ್ಯಕ್ಷ ಗುಂಡಪ್ಪ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸುಮಂತ,ಶ್ರೀಕಾಂತ, ಆನಂದ ಕಾಂಬ್ಳೆ, ಎಜಾಜ್, ಶಂಭುಲಿಂಗ ಕಣ್ಣೆ, ಜಗನ್ನಾಥ, ಸತೀಶ, ಸೋಮಶೇಖರ, ಮಹಾನಂದ,ದಶರಥ, ಶಿವಪ್ಪ, ಶರಣಮ್ಮ, ತುಳಜಮ್ಮ, ಗಂಗಮ್ಮ, ರೇಷ್ಮಾಬಾಯಿ,ಯಲ್ಲಾಲಿಂಗ, ಸೀನಾಬಾಯಿ ಅನೇಕರಿದ್ದರು.

---

## ಇಂದಿರಾ ಕ್ಯಾಂಟೀನ್ ಬಡವರಿಗೆ ವರ: ಅಪ್ಪಾಜಿ ನಾಡಗೌಡ

• ಉದಯವಾಹಿನಿ, ಮುದ್ದೇಬಿಹಾಳ

ಇಂದಿರಾ ಕ್ಯಾಂಟೀನ್ ಆರಂಭದಿಂದ ಬಡವರಿಗೆ ರೈತರಿಗೆ ಅನುಕೂಲವಾದೆ ಇಂದಿನ ದುಬಾರಿ ದಿನ ಮಾನದಲ್ಲಿಯೂ ಕಡಿಮೆ ದರದಲ್ಲಿ ಆಹಾರ ವಿತರಿಸುವ ಇಂದಿರಾ ಕ್ಯಾಂಟೀನ್ ಬಡವರ ಪಾಲಿಗೆ ವರವಾಗಿದೆ ಇದು ಕಾಂಗ್ರೆಸ್ ಸರ್ಕಾರ ಬಡವರ ಪರ ಕಾಳಜಿಯನ್ನು ತೋರಿಸುತ್ತದೆ ಎಂದು ಕೆ ಎಸ್ ಡಿ ನಿಗಮ ಅಧ್ಯಕ್ಷ ಶಾಸಕ ಸಿ.ಎಸ್ ನಾಡಗೌಡ ಅಪ್ಪಾಜಿ ಹೇಳಿದರು ಮಂಗಳವಾರ ಪಟ್ಟಣದ ಪ್ರವಾಸಿ ಮಂದಿರ ಆವರಣ ಪಕ್ಕದಲ್ಲಿ ಇಂದಿರಾ ಕ್ಯಾಂಟೀನ್ ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು

ಬಡವರ ಸಲುವಾಗಿಯೇ ಇಂದಿರಾ ಕ್ಯಾಂಟೀನ್ ತೆರೆಯಲಾಗಿದೆ. ನಮ್ಮ ಅವಧಿಯಲ್ಲಿ ಈ ಯೋಜನೆ ಜಾರಿಗೆ ತಂದಿತ್ತು ಅಧಿಕಾರಕ್ಕೆ ಬಂದ ಬಿಜೆಪಿ ಸರ್ಕಾರ ಈ ಯೋಜನೆಯನ್ನು



☛ ಉದಯವಾಹಿನಿ ಚಿತ್ರ

ನಿಲ್ಲಿಸಿತ್ತು ಈಗ ನಮ್ಮ ಕಾಂಗ್ರೆಸ್ ಸರ್ಕಾರ ಮುಂದುವರೆಸಿಕೊಂಡು ಹೋಗುತ್ತಿರುವುದು ಶ್ಲಾಘನೆಯ ಸಂಗತಿಯಾಗಿದೆ ಎಂದರು,

ಮಂಗಳವಾರ ಮುದ್ದೇಬಿಹಾಳ ತಾಳಿಕೋಟಿ ಹಾಗೂ ನಾಲತವಾಡ ಪಟ್ಟಣದಲ್ಲಿ ಏಕಕಾಲಕ್ಕೆ ಇಂದಿರಾ ಕ್ಯಾಂಟೀನ್ ಲೋಕಾರ್ಪಣೆಯನ್ನು ಶಾಸಕರು ಮಾಡಿದ್ದಾರೆ. ಈ ವೇಳೆ ತಹಶೀಲ್ದಾರ ಬಲರಾಮ ಕಟ್ಟಮನಿ,ಪುರಸಭೆ ಅಧ್ಯಕ್ಷ ಮಹಿಬೂಬ ಗೊಳಸಂಗಿ, ಉಪಾಧ್ಯಕ್ಷೆ ಪ್ರೀತಿ ದೇಗಿನಾಳ, ಮುಖ್ಯಾಧಿಕಾರಿ ಮಲ್ಲನಗೌಡ ಬಿರಾದಾರ, ಸತೀಶ್ ಓಸ್ವಾಲ್, ಸಿ.ಬಿ ಅಸ್ಕಿ, ಸಂಗನಗೌಡ ಬಿರಾದಾರ ಜಿಟಿಸಿ, ಗಣೇಶ ಅನ್ನಗೌನಿ, ಕಾಮರಾಜ ಬಿರಾದಾರ, ಸೇರಿದಂತೆ ಅನೇಕರು ಭಾಗವಹಿಸಿದ್ದರು

> ಕ್ಯಾಂಟೀನ್‌ನಲ್ಲಿ ಟಿಫಿನ್‌ಗೆ 5 ರೂ. ಊಟಕ್ಕೆ 10 ರೂಪಾಯಿ ನಿಗದಿ ಮಾಡಿದ್ದು, ಒಂದು ದಿನಕ್ಕೆ ಬೆಳಗ್ಗೆ 250 ಟಿಫಿನ್, ಮಧ್ಯಾಹ್ನ 250 ಊಟ ಮತ್ತು ರಾತ್ರಿ 250 ಊಟದ ವ್ಯವಸ್ಥೆಯನ್ನು ಇಂದಿರಾ ಕ್ಯಾಂಟೀನ್ ನಲ್ಲಿಮಾಡಲಾಗುತ್ತಿದೆ. ಹೆಚ್ಚಿನ ಬೇಡಿಕೆ ಬಂದಲ್ಲಿ ಹೆಚ್ಚಿನ ಜನರಿಗೆ ಅವಕಾಶ ಕಲ್ಪಿಸಲಾಗುತ್ತದೆ
> **– ಅಪ್ಪಾಜಿ ನಾಡಗೌಡ**
> ಕೆ ಎಸ್ ಡಿ ನಿಗಮ ಅಧ್ಯಕ್ಷ


---

## ಎಪಿಎಂಸಿ ಅನಧಿಕೃತ ಅಂಗಡಿಗಳ ತೆರವಿಗೆ ಮನವಿ

• ಉದಯವಾಹಿನಿ, ಕಲಬುರಗಿ

ನಗರದ ಎಪಿಎಂಸಿ ಆವರಣದಲ್ಲಿರುವ ಅನಧಿಕೃತ ಅಂಗಡಿಗಳ ತೆರವಿಗೆ ಅಂತಿಮ ನೋಟಿಸ್ ನೀಡಿ ಒಂದು ವರ್ಷವಾದರೂ, ಕೈ ಕಟ್ಟಿ ಕುಳಿತಿರುವ ಕಾರ್ಯದರ್ಶಿ ಮತ್ತು ಎಲ್ಲಾ ಅಧಿಕಾರಿಗಳ ಸಾಮೂಹಿಕ ವರ್ಗಾವಣೆ ಮಾಡಿ ಅನಧಿಕೃತ ಅಂಗಡಿಗಳನ್ನು ಖಾಲಿ ಮಾಡಿಸಲು ಸರ್ಕಾರಕ್ಕೆ ಸೂಚಿಸುವಂತೆ ಕಲ್ಯಾಣ ಕರ್ನಾಟಕ ಪ್ರತ್ಯೇಕ ರಾಜ್ಯ ಹೋರಾಟ ಸಮಿತಿ ನೇತೃತ್ವದಲ್ಲಿ ,ವಿವಿಧ ಸಂಘಟನೆಗಳ ಸಮ್ಮುಖದಲ್ಲಿ ಜಿಲ್ಲಾಡಳಿತದ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.

ಕಲಬುರಗಿ ಎಪಿಎಂಸಿಯಲ್ಲಿ ಕೃಷಿ ವಹಿವಾಟುಗಳಿಗಿಂತ ಕಿರಾಣಿ ಅಂಗಡಿ, ಪ್ಲಾಸ್ಟಿಕ್ ಶಾಪ್, ಎಲೆಕ್ಟ್ರಿಕ್ ಶಾಪ್, ಟ್ರಾನ್ಸ್‌ಪೋರ್ಟ್ ಸೇರಿ ಹಲವಾರು ಅನಧಿಕೃತ ಅಂಗಡಿಗಳೇ ತುಂಬಿವೆ.



☛ ಉದಯವಾಹಿನಿ ಚಿತ್ರ

ಇತ್ತೀಚಿಗೆ ಇಲ್ಲಿ ಗಾಂಜಾ ಕೂಡಾ ಸಿಕ್ಕಿದ್ದು, ಪೊಲೀಸ್ ಠಾಣೆಯಲ್ಲಿ ಎಫ್ ಐ ಆರ್ ಕೂಡಾ ದಾಖಲಾಗಿದೆ. ಈ ಕುರಿತು ವಿಶ್ರಾಂತ ನ್ಯಾಯಾಧೀಶರ ನೇತೃತ್ವದಲ್ಲಿ ಉನ್ನತ ಮಟ್ಟದ ತನಿಖೆ ಮಾಡಿಸಬೇಕು ಎಂದು ಮನವಿ ಸಲ್ಲಿಸಲಾಯಿತು. ಎಂಎಸ್ ಪಾಟೀಲ ನರಿಬೋಳ,ಆದಿನಾಥ ಹೀರಾ,ಲಕ್ಷ್ಮೀಕಾಂತ ಸ್ವಾದಿ,ಸುನೀಲ ಶಿರ್ಕೆ,ಶಿವಲಿಂಗ ಹಳಿಮನಿ, ಯುಗಾಂತ್ರಿ ದೇಶಮಾನೆ,ಚಿದಾನಂದ ಇತರರು ಉಪಸ್ಥಿತರಿದ್ದರು.

---

## ಬೀಜ ಗೊಬ್ಬರ ಕೊರತೆಯಾಗದಂತೆ ನೋಡಿಕೊಳ್ಳಿ: ಶಾಸಕ

• ಉದಯವಾಹಿನಿ, ಹುಮನಾಬಾದ್

ಮುಂಗಾರು ಹಂಗಾಮಿನ ಬಿತ್ತನೆಗಾಗಿ ಸರಕಾರ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ವಿತರಣೆ ಮಾಡುತ್ತಿದೆ. ಹೀಗಾಗಿ ರೈತರು ಕೃಷಿ ಇಲಾಖೆ, ರೈತ ಸಂಪರ್ಕ ಕೇಂದ್ರಗಳಿಗೆ ಭೇಟಿ ನೀಡಿ ಗುಣಮಟ್ಟದ ಬೀಜ ಖರೀದಿ ಮಾಡಬೇಕು ಎಂದು ಶಾಸಕ ಡಾ.ಸಿದ್ದು ಪಾಟೀಲ್ ಹೇಳಿದರು.

ಪಟ್ಟಣದ ರೈತ ಸಂಪರ್ಕ ಕೇಂದ್ರದ ಆವರಣದಲ್ಲಿ ಕೃಷಿ ಇಲಾಖೆ ವತಿಯಿಂದ ಸೋಮವಾರ ನಡೆದ 2025–26ನೇ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು. ಹಿಂದೆ ರೈತರು ತಿಪ್ಪೆ ಗೊಬ್ಬರು ಬಳಸುತ್ತಿದ್ದರು ಈಗ ಅತಿಯಾದ ರಸಗೊಬ್ಬರ ಬಳಕೆಯಾಗುತ್ತಿರುವುದನ್ನು ತಡೆಯಲು ರೈತರು ವೈಜ್ಞಾನಿಕ ಕೃಷಿ ಕಡೆ ಗಮನ ಹರಿಸಬೇಕಾಗಿದೆ. ರೈತರಿಗೆ ಉತ್ತಮ ಬೆಳೆ ಬಂದರೆ ದೇಶದ ಆರ್ಥಿಕ ಸ್ಥಿತಿ



☛ ಉದಯವಾಹಿನಿ ಚಿತ್ರ

ಬಲಿಷ್ಠವಾಗುತ್ತದೆ. ಆದ್ದರಿಂದ ಅನ್ನದಾತನ ಶ್ರಮಕ್ಕೆ ಫಲ ದೊರೆಯಲು ಸಹಕಾರ ಅಗತ್ಯ ಎಂದರು.

ವಿಧಾನ ಪರಿಷತ್ ಸದಸ್ಯರು ಡಾ. ಚಂದ್ರಶೇಖರ್ ಪಾಟೀಲ್ ಮಾತನಾಡಿ ಮುಂಗಾರು ಹಂಗಾಮಿನಲ್ಲಿ ರೈತರು ಬಿತ್ತನೆ ಪ್ರಕ್ರಿಯೆ ಕೈಗೊಳ್ಳುವಾಗ ಭೂಮಿಯಲ್ಲಿ ಅವಶ್ಯಕ ತೇವಾಂಶ ಇರುವುದನ್ನು ಕಡ್ಡಾಯವಾಗಿ ಖಚಿತ ಪಡಿಸಿಕೊಂಡು ಬಿತ್ತನೆ ಮಾಡಬೇಕು. ಇಲ್ಲವಾದಲ್ಲಿ ಬೀಜಗಳು ಸರಿಯಾಗಿ ಮೊಳಕೆಯೊಡೆಯದೇ ಉತ್ತಮ ಬೆಳೆ ಪಡೆಯಲು ಸಾಧ್ಯವಾಗುವುದಿಲ್ಲ ಎಂದರು.

> ವಿವಿಧೆಡೆ ಮುಂಗಾರು ಪೂರ್ವದಲ್ಲಿ ಉತ್ತಮ ಮಳೆಯಾಗುತ್ತಿದ್ದು, ಕೃಷಿ ಇಲಾಖೆಯು ಮುಂಚಿತವಾಗಿಯೇ ಬಿತ್ತನೆ ಬೀಜ ಮತ್ತು ರಸಗೊಬ್ಬರ ಪೂರೈಕೆಗೆ ಕ್ರಮ ಕೈಗೊಂಡಿದೆ ಮತ್ತು ಬೇಡಿಕೆಯಂತೆ ಬೀಜ ಮತ್ತು ರಸಗೊಬ್ಬರ ಪೂರೈಕೆಯಾಗಲಿದೆ. ಆದ್ದರಿಂದ ರೈತರು ಆತಂಕ ಪಡೆಯಬಾರದು ಮತ್ತು ಅಧಿಕಾರಿಗಳು ರಸಗೊಬ್ಬರದ ಕೊರತೆ ಆಗದಂತೆ ಕ್ರಮವಹಿಸಬೇಕು **–ಡಾ.ಸಿದ್ದು ಪಾಟೀಲ್**

---

## ಶುದ್ಧ ಕುಡಿಯುವ ನೀರಿನ ಘಟಕ ಉದ್ಘಾಟನೆ

• ಉದಯವಾಹಿನಿ, ಹರಪನಹಳ್ಳಿ

ಪಟ್ಟಣದ 11ನೇ ವಾರ್ಡ್‌ನ ಚಿತ್ತರಗೇರಿ ಸರ್ಕಾರಿ ಹಿರಿಯ ಪ್ರಾಥಮಿಕ(ಮೇನ್)ಶಾಲೆ ಬಳಿ ಪುರಸಭೆ ಅನುದಾನಲ್ಲಿ ನಿರ್ಮಿಸಲಾಗಿದ್ದ ಶುದ್ಧ ಕುಡಿಯುವ ನೀರಿನ ಘಟಕವನ್ನು ಶಾಸಕಿ ಎಂ.ಪಿ.ಲತಾ ಮಲ್ಲಿಕಾರ್ಜುನ ಸೋಮವಾರ ಉದ್ಘಾಟಿಸಿದರು.ಇದೇ ವೇಳೆ ಶತಮಾನ



☛ ಉದಯವಾಹಿನಿ ಚಿತ್ರ

ಪೂರೈಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಮೇನ್ ಶಾಲೆಗೆ ಭೇಟಿ ನೀಡಿ ಪರಿಶೀಲಿಸಿದರು, ಈ ಸಂದರ್ಭದಲ್ಲಿ ಶಾಲಾ ಕೊಠಡಿಗಳು, ಕಾಂಪೌಂಡ್ ನಿರ್ಮಾಣಕ್ಕೆ ಅನುದಾನ ನೀಡುವಂತೆ ವಾರ್ಡಿನ ಪುರಸಭೆ ಸದಸ್ಯ ಎಸ್. ಜಾಕೀರ್ ಹುಸೇನ್ ಅವರು ಶಾಸಕರಲ್ಲಿ ಮನವಿ ಮಾಡಿಕೊಂಡರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ವಿ.ಅಂಜಿನಪ್ಪ ಪುರಸಭೆ ಅಧ್ಯಕ್ಷೆ ಫಾತಿಮಾಬೀ, ಉಪಾಧ್ಯಕ್ಷ ಎಚ್.ಕೊಟ್ರೇಶ, ಸ್ಥಾಯಿ ಸಮಿತಿ ಅಧ್ಯಕ್ಷ ಟಿ.ವೆಂಕಟೇಶ, ಮುಖ್ಯಾಧಿಕಾರಿ ಎರಗುಡಿ ಶಿವಕುಮಾರ, ಸೇರಿದಂತೆ ಇತರರು ಇದ್ದರು.

---

## ಐದು ವರ್ಷದೊಳಗಿನ ಮಕ್ಕಳಿಗೆ ತಪ್ಪದೇ ಲಸಿಕೆ ಹಾಕಿಸಿ

• ಉದಯವಾಹಿನಿ, ಹೊಸಪೇಟೆ

ಮೇ.26 ರಿಂದ 31 ರವರೆಗೆ ಹಾಗೂ ಜೂ.23 ರಿಂದ 28 ರವರೆಗೆ ಜಿಲ್ಲೆಯ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ವಿಶೇಷ ಲಸಿಕೆ ಅಭಿಯಾನ ನಡೆಯಲಿದೆ ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಜಂಬಯ್ಯ ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಕಲ್ಲಹಳ್ಳಿ ಆರೋಗ್ಯ ಕ್ಷೇಮ ಕೇಂದ್ರದಲ್ಲಿ ವಿಶೇಷ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಿ ಅವರು ಸೋಮವಾರ ಮಾತನಾಡಿದರು, ಜಿಲ್ಲೆಯ ಎಲ್ಲಾ ಮಕ್ಕಳಿಗೆ ಲಸಿಕೆ ಹಾಕಿಸುವುದು ಕಡ್ಡಾಯವಾಗಿದೆ. ಅದರಲ್ಲೂ ಲಸಿಕೆ ವಂಚಿತ ಮಕ್ಕಳಿಗೆ ವಿಶೇಷ ಲಸಿಕಾ ಅಭಿಯಾನದ ಮೂಲಕ ಲಸಿಕೆಯನ್ನು ನೀಡಲಾಗುವುದು ಎಂದರು.

---

## ಗರೀಬ್ ರಥ ಎಕ್ಸ್‌ಪ್ರೆಸ್ ಬೀದರ್ ವರೆಗೆ ವಿಸ್ತರಿಸಿ

• ಉದಯವಾಹಿನಿ, ಬೀದರ್

ಸಿಕಂದರಾಬಾದ್ ನಿಂದ ಬೀದರ್‌ಗೆ ರೈಲು ಸಂಖ್ಯೆ 12740/12739 ಗರೀಬ್ ರಥ ಎಕ್ಸ್‌ಪ್ರೆಸ್ ಬೀದರ್ ವರೆಗೆ ವಿಸ್ತರಿಸುವಂತೆ ಅಹಿಂದ ವರ್ಗಗಳ ಒಕ್ಕೂಟ ಆಗ್ರಹಿಸಿದೆ.



☛ ಉದಯವಾಹಿನಿ ಚಿತ್ರ

ಈ ಕುರಿತು ಸಂಸದ ಸಾಗರ್ ಖಂಡ್ರೆ ಅವರಿಗೆ ಮನವಿ ಪತ್ರ ಸಲ್ಲಿಸಿದ ಅವರು, ಈ ರೈಲು ಸಿಕಂದರಾಬಾದ್ ನಿಂದ ವಿಶಾಖಪಟ್ಟಣಕ್ಕೆ ಹೋಗುತ್ತದೆ. ಈ ರೈಲು ಸಿಕಂದರಾಬಾದ್‌ನಿಂದ ರಾತ್ರಿ 8:30 ಕ್ಕೆ ಹೊರಟು ಮರುದಿನ ಬೆಳಿಗ್ಗೆ 8:30 ಕ್ಕೆ ಹಿಂತಿರುಗುತ್ತದೆ. ಈ ರೈಲು ಸಿಕಂದರಾಬಾದ್‌ನಲ್ಲಿ 12 ಗಂಟೆಗಳ ಕಾಲ ನಿಲ್ಲುತ್ತದೆ, ಆದ್ದರಿಂದ ಈ ರೈಲನ್ನು ಬೀದರ್ ವರೆಗೆ ವಿಸ್ತರಿಸಿದರೆ ಹೆಚ್ಚು ಸೂಕ್ತವಾಗಿರುತ್ತದೆ.

ಈ ರೈಲು ಸಂಪೂರ್ಣವಾಗಿ ಮೂರು ಹಂತದ ಹವಾನಿಯಂತ್ರಣ ವ್ಯವಸ್ಥೆಯನ್ನು ಹೊಂದಿದೆ, ಈ ರೈಲು ಸಂಪೂರ್ಣವಾಗಿ ಹವಾನಿಯಂತ್ರಣ ವ್ಯವಸ್ಥೆಯ ಬೋಗಿಗಳನ್ನು ಹೊಂದಿದೆ. ಈ ರೈಲಿನಲ್ಲಿ ಯಾವುದೇ ಬಡ ವ್ಯಕ್ತಿ ಕಡಿಮೆ ವೆಚ್ಚದಲ್ಲಿ ಹವಾನಿಯಂತ್ರಣದಲ್ಲಿ ಆರಾಮವಾಗಿ ಪ್ರಯಾಣಿಸಬಹುದು. ಮಧ್ಯಮ ವರ್ಗದ ವ್ಯಕ್ತಿ 200 ಕ್ಕೆ ಸಿಕಂದರಾಬಾದ್‌ಗೆ ಸುಲಭವಾಗಿ ಪ್ರಯಾಣಿಸಬಹುದು.

---

## ವಿದ್ಯಾರ್ಜನೆಯೇ ವಿದ್ಯಾರ್ಥಿ ಜೀವನದ ಮುಖ್ಯ ಗುರಿ: ರವಿ ಹತ್ತಳ್ಳಿ

• ಉದಯವಾಹಿನಿ, ವಿಜಯಪುರ

ವಿದ್ಯಾರ್ಥಿಗಳು ಶಿಕ್ಷಣಕ್ಕೆ ಮೊದಲಾದ್ಯತೆ ನೀಡಿ, ಜೀವನದಲ್ಲಿ ನಿರ್ದಿಷ್ಟ ಗುರಿ ಹೊಂದುವ ಜೊತೆಗೆ ಗುರುಭಕ್ತಿ, ಶ್ರದ್ದೆ, ಆಸಕ್ತಿ, ಸ್ವಯಂ ಶಿಸ್ತಿನ ಗುಣಗಳನ್ನು ರೂಢಿಸಿಕೊಂಡು ಸ್ವಾವಲಂಬಿ ಬದುಕನ್ನು ಕಟ್ಟಿಕೊಳ್ಳಬೇಕು ಎಂದು ಹುಬ್ಬಳ್ಳಿ ಧಾರವಾಡ ತೆರಿಗೆ ಇಲಾಖೆಯ ಜಂಟಿ ನಿರ್ದೇಶಕ ರವಿ ಹತ್ತಳ್ಳಿ ಹೇಳಿದರು. ನಗರದ ಷಣ್ಮುಖಾರೂಢ ಮಠದಲ್ಲಿ ಅಭಿನವಶ್ರೀ ಬೇಸಿಗೆ ವಿಶೇಷ ತರಬೇತಿ ಶಿಬಿರದ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿಗಳಲ್ಲಿ ಶಿಸ್ತು ಮತ್ತು ಸಮಯಪ್ರಜ್ಞೆ ಬಹಳ ಮುಖ್ಯ. ನಿರಂತರ ಅಧ್ಯಯನದಿಂದ ಗುರಿ ತಲುಪಲು ಸಾಧ್ಯ. ಯಾವುದೇ ಗುರಿ ತಲುಪಬೇಕಾದರೂ ಶ್ರದ್ಧೆ, ಸಂಯಮ ಹಾಗೂ ಕಠಿಣ ಪರಿಶ್ರಮ ಅತ್ಯಗತ್ಯ ಎಂದು ಹೇಳಿದರು.



☛ ಉದಯವಾಹಿನಿ ಚಿತ್ರ

> ವಿದ್ಯಾರ್ಜನೆಯೇ ವಿದ್ಯಾರ್ಥಿ ಜೀವನದ ಮುಖ್ಯ ಗುರಿ. ಮಕ್ಕಳಲ್ಲಿ ಶಿಸ್ತು, ಸಂಸ್ಕಾರ ಮುಖ್ಯ. ಮಕ್ಕಳಲ್ಲಿ ಸಕಾರಾತ್ಮಕ ಯೋಚನೆ ಜಾಗೃತವಾಗಬೇಕು. ಸದೃಢ ಸ್ವಸ್ಥ ಸಮಾಜ ನಿರ್ಮಾಣದಲ್ಲಿ ಶಿಕ್ಷಣದ ಪಾತ್ರ ಬಹು ಮುಖ್ಯ
> **–ಸಂತೋಷ ಬಂಡೆ,** ಶಿಕ್ಷಕ ಸಾಹಿತಿ

---

## ಟ್ರಾನ್ಸ್‌ಫಾರ್ಮರ್ ಸ್ಥಳಾಂತರಕ್ಕೆ ಆಗ್ರಹ

• ಉದಯವಾಹಿನಿ, ಲಕ್ಷ್ಮೇಶ್ವರ

ತಾಲ್ಲೂಕಿನ ಸುರಣಗಿ ಗ್ರಾಮದಲ್ಲಿ ಬಸ್ ತಂಗುದಾಣದ ಸಮೀಪವಿರುವ ವಿದ್ಯುತ್ ಟ್ರಾನ್ಸ್‌ಫಾರ್ಮರ್ ಅನ್ನು ಸ್ಥಳಾಂತರಿಸುವಂತೆ ಗ್ರಾಮಸ್ಥರು ಹೆಸ್ಕಾಂನವರಿಗೆ ಆಗ್ರಹಿಸಿದ್ದಾರೆ. ವಿದ್ಯುತ್ ಟ್ರಾನ್ಸ್‌ಫಾರ್ಮರ್ ಅತ್ಯಂತ ಕೆಳಮಟ್ಟದಲ್ಲಿದ್ದು ಏನಾದರೂ ಅವಘಡ ಸಂಭವಿಸಿದರೆ ದೊಡ್ಡ ಅನಾಹುತ ಸಂಭವಿಸುವ ಸಾಧ್ಯತೆ ಇದೆ.

ಈ ವಿದ್ಯುತ್ ಟ್ರಾನ್ಸ್‌ಫಾರ್ಮರ್ ಸ್ಥಳಾಂತರಿಸುವಂತೆ ಕಳೆದ ಎರಡು ವರ್ಷಗಳಿಂದಲೂ ಲಕ್ಷ್ಮೇಶ್ವರ ಹೆಸ್ಕಾಂ ಅಧಿಕಾರಿಗಳಿಗೆ ವಿನಂತಿಸಿದ್ದರೂ ಯಾವುದೇ ಪ್ರಯೋಜನವಾಗಿಲ್ಲ ಎಂಬುದು ಗ್ರಾಮಸ್ಥರ ದೂರಾಗಿದೆ.



☛ ಉದಯವಾಹಿನಿ ಚಿತ್ರ

---

• ಬದುಕಿಗೆ ಕಣ್ಣುಗಳು ಬಹಳ ಅವಶ್ಯಕವಾಗಿದ್ದು, ಕಾಲಕಾಲಕ್ಕೆ ಕಣ್ಣುಗಳ ತಪಾಸಣೆ ಮಾಡಿಸಿಕೊಳ್ಳಬೇಕು

## ಕಾಲಕಾಲಕ್ಕೆ ಕಣ್ಣಿನ ತಪಾಸಣೆ ಮಾಡಿಸಿಕೊಳ್ಳಿ: ಬಿ.ಟಿ.ಕುಮಾರಸ್ವಾಮಿ

• ಉದಯವಾಹಿನಿ ಚಿತ್ರದುರ್ಗ

**ಕಣ್ಣಿನ ತಪಾಸಣೆ ಶಿಬಿರ**

ಬದುಕಿಗೆ ಕಣ್ಣುಗಳು ಬಹಳ ಅವಶ್ಯಕವಾಗಿದ್ದು, ಕಾಲಕಾಲಕ್ಕೆ ಕಣ್ಣುಗಳ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ಗಾಯತ್ರಿ ಕಲ್ಯಾಣ ಮಂಟಪದಲ್ಲಿ ಮಂಗಳವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾಸ್ಪತ್ರೆ, ಜಿಲ್ಲಾ ಅಂಧತ್ವ ನಿವಾರಣಾ ವಿಭಾಗ, ನಗರಸಭೆ ಹಾಗೂ ಶಿವಮೊಗ್ಗ ಶಂಕರ ಕಣ್ಣಿನ ಆಸ್ಪತ್ರೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಬೃಹತ್ ಉಚಿತ ಕಣ್ಣಿನ ತಪಾಸಣೆ, ಶಸ್ತ್ರ ಚಿಕಿತ್ಸೆ ಹಾಗೂ ಕನ್ನಡಕ ವಿತರಣಾ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಜೀವನದ ಎಲ್ಲಾ ಚಟುವಟಿಕೆಗಳಿಗೆ ಮೂಲ ಕಣ್ಣು. ಕಣ್ಣುಗಳು ನಮ್ಮ ಆತ್ಮದ ಕಿಟಕಿಗಳಿದ್ದಂತೆ, ಕಣ್ಣಿನ ಬಗ್ಗೆ ಕಾಳಜಿ, ರಕ್ಷಣೆ ವಹಿಸುವುದು ಅತ್ಯಂತ ಅವಶ್ಯಕವಾಗಿದ್ದು, ಉಚಿತ ಕಣ್ಣಿನ ತಪಾಸಣಾ ಶಿಬಿರಗಳಲ್ಲಿ ಭಾಗವಹಿಸುವ ಮೂಲಕ ಕಣ್ಣಿನ ತಪಾಸಣೆ ಮಾಡಿಸಿಕೊಂಡು ಕಣ್ಣುಗಳ ಆರೋಗ್ಯ ಕಾಪಾಡಿಕೊಳ್ಳಿ ಎಂದರು.

ಹೊರ ಜಗತ್ತನ್ನು ನೋಡಿ ಆನಂದಿಸಬೇಕಾದರೆ ಕಣ್ಣನ್ನು ಜೋಪಾನವಾಗಿ ಕಾಪಾಡಿಕೊಳ್ಳಬೇಕು ಎಂದು ತಿಳಿಸಿದ ಅವರು, ವ್ಯಕ್ತಿಯ ಮರಣದ ನಂತರ ನೇತ್ರದಾನಕ್ಕೆ ಅವಕಾಶವಿದ್ದು, ಕಣ್ಣುಗಳನ್ನು ದಾನ ಮಾಡುವ ಮೂಲಕ ಅಂಧರ ಬಾಳಿಗೆ ಬೆಳಕಾಗೋಣ ಎಂದು ಹೇಳಿದರು.

ಚಿತ್ರದುರ್ಗ ನಗರದ ಎಲ್ಲಾ ವಾರ್ಡ್‌ಗಳಲ್ಲಿ ಪ್ರತಿ ತಿಂಗಳು ಒಂದೊಂದು ವಾರ್ಡಿನ ನಾಗರೀಕರಿಗೆ ಪ್ರತ್ಯೇಕವಾಗಿ ಉಚಿತ ಕಣ್ಣಿನ ನೇತ್ರ ತಪಾಸಣಾ ಶಿಬಿರವನ್ನು ಆಯೋಜಿಸಲಾಗುವುದು. ಈ ಶಿಬಿರದ ಪ್ರಯೋಜನವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಅನುಷ್ಟಾನ ಪ್ರಾಧಿಕಾರದ ಅಧ್ಯಕ್ಷ ಆರ್. ಶಿವಣ್ಣ, ನಗರಸಭೆ ಉಪಾಧ್ಯಕ್ಷೆ ಶ್ರೀದೇವಿ ಚಕ್ರವರ್ತಿ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ, ಚಿತ್ರದುರ್ಗ ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ. ಗಿರೀಶ್, ಡಿವೈಎಸ್‌ಪಿ ಪಿ.ಕೆ.ದಿನಕರ್, ಶಂಕರ ಕಣ್ಣಿನ ಆಸ್ಪತ್ರೆಯ ಹಿರಿಯ ವೈದ್ಯಾಧಿಕಾರಿ ಡಾ.ರವಿಶಂಕರ್, ಮಾಜಿ ನಗರಸಭಾ ಅಧ್ಯಕ್ಷ ಹೆಚ್.ಸಿ. ನಿರಂಜನಮೂರ್ತಿ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಸೇರಿದಂತೆ ಮುಖಂಡರಾದ ಮುಹಿಬುಲ್ಲಾ, ನರಸಿಂಹಮೂರ್ತಿ ಮತ್ತಿತರು ಇದ್ದರು.



☛ ಉದಯವಾಹಿನಿ ಚಿತ್ರ

> ಚಿತ್ರದುರ್ಗ ನಗರಸಭೆ ವ್ಯಾಪ್ತಿಯಲ್ಲಿ ನಡೆಯುವ ಉಚಿತ ಕಣ್ಣಿನ ತಪಾಸಣೆ ಶಿಬಿರಗಳಿಗೆ ನಗರಸಭೆ ವತಿಯಿಂದ ಅಗತ್ಯ ಸಹಕಾರ ನೀಡಲಾಗುವುದು, ನೇತ್ರದಾನ ಮಹಾದಾನವಾಗಿದ್ದು, ಎಲ್ಲರೂ ಸಹ ಕೈಜೋಡಿಸಬೇಕಿದೆ
> **–ಸುಮಿತಾ ಬಿ.ಎನ್. ರಾಘವೇಂದ್ರ**
> ನಗರಸಭೆ ಅಧ್ಯಕ್ಷೆ

> ಕೆ.ಸಿ.ವೀರೇಂದ್ರ, (ಪಪ್ಪಿ) ಶಾಸಕರಾಗಿ ಆಯ್ಕೆಯಾದ ಮರುದಿನದಿಂದಲೇ ಕ್ಷೇತ್ರದ ಜನರ ಸೇವೆಯಲ್ಲಿ ತಮ್ಮನ್ನು ಸಂಪೂರ್ಣವಾಗಿ ತೊಡಗಿಸಿಕೊಂಡಿದ್ದು, ಚಿತ್ರದುರ್ಗ ವಿಧಾನಸಭಾ ಕ್ಷೇತ್ರದ 22 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಉಚಿತ ಕಣ್ಣಿನ ತಪಾಸಣಾ ಶಿಬಿರವನ್ನು ನಡೆಸಿಕೊಂಡು ಬರಲಾಗಿದೆ. ಇದುವರೆಗೂ 20 ಗ್ರಾಮ ಪಂಚಾಯಿತಿಗಳಲ್ಲಿ ಕಣ್ಣು ತಪಾಸಣಾ ಶಿಬಿರವನ್ನು ಅತ್ಯಂತ ಯಶಸ್ವಿಯಾಗಿ ನಡೆಸಿಕೊಂಡು ಬರಲಾಗಿದೆ. ಕ್ಷೇತ್ರದಲ್ಲಿ 6,451 ಜನರು ಪರೀಕ್ಷೆಗೆ ಒಳಗಾಗಿ, ಈ ಪೈಕಿ 667 ಜನರು ಕಣ್ಣಿನ ಶಸ್ತ್ರಚಿಕಿತ್ಸೆಗೆ ಒಳಪಟ್ಟಿದ್ದು, 2,460 ಜನರಿಗೆ ಕನ್ನಡಕಗಳನ್ನು ವಿತರಿಸಲಾಗಿದೆ
> **–ದೊಡ್ಡಣ್ಣ,** ಚಲನಚಿತ್ರ ಕಲಾವಿದ

> ಚಿತ್ರದುರ್ಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಈಗಾಗಲೇ 20ಕ್ಕೂ ಹೆಚ್ಚು ಗ್ರಾಮ ಪಂಚಾಯಿತಿಗಳಲ್ಲಿ ಉಚಿತ ಕಣ್ಣೆ ಆರೋಗ್ಯ ತಪಾಸಣೆಗಳನ್ನು ಆಯೋಜಿಸಲಾಗಿದ್ದು, ಚಿತ್ರದುರ್ಗ ನಗರದ 27ನೇ ವಾರ್ಡ್‌ನಲ್ಲಿ ಶಿಬಿರ ಆಯೋಜಿಸಲಾಗಿದೆ. ಪ್ರತಿ ತಿಂಗಳು ಒಂದೊಂದು ವಾರ್ಡಿನ ನಾಗರೀಕರಿಗೆ ಪ್ರತ್ಯೇಕವಾಗಿ ಶಿಬಿರ ನಡೆಯಲಿದೆ. ಉಚಿತ ಕಣ್ಣಿನ ತಪಾಸಣಾ ಶಿಬಿರಕ್ಕೆ ಜಿಲ್ಲಾ ಅಂಧತ್ವ ನಿವಾರಣಾ ವಿಭಾಗದಿಂದ ಅಗತ್ಯ ಸಹಕಾರ ನೀಡಲಾಗುವುದು **–ಡಾ. ಜಿ.ಓ.ನಾಗರಾಜ್**
> ಜಿಲ್ಲಾ ಅಂಧತ್ವ ನಿವಾರಣಾಧಿಕಾರಿ

---

## ಸುಳ್ಯ ನಗರಕ್ಕೆ ಕಾಡಾನೆಗಳ ಲಗ್ಗೆ ಅಪಾರ ಪ್ರಮಾಣದಲ್ಲಿ ಕೃಷಿ ನಾಶ

• ಉದಯವಾಹಿನಿ, ಸುಳ್ಯ


ಸುಳ್ಯ ತಾಲ್ಲೂಕಿನ ಗ್ರಾಮೀಣ ಭಾಗಗಳಲ್ಲಿ ಕೃಷಿಕರ ನಿದ್ದೆಗೆಡಿಸಿರುವ ಕಾಡಾನೆಗಳ ಹಿಂಡು ಇದೀಗ ಸುಳ್ಯ ನಗರಕ್ಕೂ ಲಗ್ಗೆ ಇಟ್ಟಿದೆ. ಸುಳ್ಯ ಕಾಯತರ್ಡಿಯ ಸೂರ್ತಿಲದಲ್ಲಿ ಕೃಷಿಕರ ತೋಟಕ್ಕೆ ಬಂದ ನಾಲ್ಕು ಕಾಡಾನೆಗಳು ಕೃಷಿಕರ ತೋಟವನ್ನು ಪುಡಿಗಟ್ಟಿವೆ. ಸೂರ್ತಿಲದ ಪುರುಷೋತ್ತಮ, ಜಯರಾಮ ಪ್ರಭು, ಬಾಲಕೃಷ್ಣ ಶೆಟ್ಟಿ, ಶಶಿಧರ ಶೆಟ್ಟಿ, ಪುಂಡರೀಕ ಸೂರ್ತಿಲ, ಮಾಧವ ಪುಂದ್ರೂಕೋಡಿ ಅವರ ತೋಟಕ್ಕೆ ಕಾಡಾನೆಗಳ ಹಿಂಡು ನುಗ್ಗಿ ಅಪಾರ ಪ್ರಮಾಣದಲ್ಲಿ ಕೃಷಿ ಹಾನಿ ಮಾಡಿದೆ.

ಕೆಲ ದಿನಗಳ ಹಿಂದೆ ಉಬರಡ್ಕ ಗ್ರಾಮದಲ್ಲಿ ವಿವಿಧ ಭಾಗಗಳಲ್ಲಿನ ಕೃಷಿ ತೋಟಕ್ಕೆ ನುಗ್ಗಿದ ಕಾಡಾನೆಗಳ ಗುಂಪು ಬಳ್ಳಡ್ಕದ ಸುಮಿತ್ರ ಇಂಜಿನಿಯರ್‌ರ ತೋಟಕ್ಕೆ ನುಗ್ಗಿ ಕೃಷಿ ಹಾಳುಗೆಡವಿದೆ. ಅಲ್ಲಿಂದ ಉಬರಡ್ಕ ರಸ್ತೆಯಲ್ಲಿ ಬಂದು ಸೂರ್ತಿಲ ರಸ್ತೆಯಾ ಮೂಲಕ ಸುಳ್ಯ ನಗರಕ್ಕೆ ಪ್ರವೇಶಿಸಿ ಕೃಷಿಕರ ತೋಟಕ್ಕೆ ನುಗ್ಗಿದೆ.

# ಆಪರೇಷನ್ ಸಿಂಧೂರ್ ಕ್ಯಾಮೆರಾದಲ್ಲಿ ರೆಕಾರ್ಡ್: ಸಾಕ್ಷಿ ಕೇಳುವವರಿಗೆ ಮೋದಿ ಟಾಂಗ್

**ಗುಜರಾತ್:** ಪಾಕಿಸ್ತಾನದ ವಿರುದ್ಧ ಆಪರೇಷನ್ ಸಿಂಧೂರ್‌ನಲ್ಲಿ ಭಾರತ ನಡೆಸಿದ ವೈಮಾನಿಕ ದಾಳಿಯಲ್ಲಿ ಕೇವಲ 22 ನಿಮಿಷಗಳಲ್ಲಿ 09 ಭಯೋತ್ಪಾದಕ ಅಡಗುತಾಣಗಳು ನಾಶವಾದವು. ಪುರಾವೆಗಾಗಿ ಇಡೀ ಕಾರ್ಯಾಚರಣೆಯನ್ನು ಕ್ಯಾಮೆರಾದಲ್ಲಿ ರೆಕಾರ್ಡ್ ಮಾಡಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು. ತವರು ರಾಜ್ಯ ಗುಜರಾತ್‌ನ ಗಾಂಧಿನಗರದಲ್ಲಿ ನಡೆದ ರ್‍ಯಾಲಿ ಮಾತನಾಡಿದ ಅವರು, ಪುರಾವೆಗಾಗಿ ಯಾವುದೇ ಕರೆಗಳನ್ನು ನಿಶ್ಯಬ್ದಗೊಳಿಸಲು ಇಡೀ ಕಾರ್ಯಾಚರಣೆಯನ್ನು ಕ್ಯಾಮೆರಾದಲ್ಲಿ ರೆಕಾರ್ಡ್ ಮಾಡಲಾಗಿದೆ. ಇದೊಂದು ನಿರ್ಣಾಯಕ ಕ್ರಮ ಎಂದು ಕರೆದರು.

ಭಾರತ ಮತ್ತು ಪಾಕಿಸ್ತಾನ ಯುದ್ಧಕ್ಕೆ ಹೋದಾಗಲೆಲ್ಲಾ ಭಾರತೀಯ ಸಶಸ್ತ್ರ ಪಡೆಗಳು ಮತ್ತು ಧೈರ್ಯಶಾಲಿಗಳು ಅವರನ್ನು ಎಂದಿಗೂ ಮರೆಯಲಾಗದ ರೀತಿಯಲ್ಲಿ ಸೋಲಿಸಿದ್ದಾರೆ. ಭಾರತದ ವಿರುದ್ಧ ನೇರ ಯುದ್ಧವನ್ನು ಎಂದಿಗೂ ಗೆಲ್ಲಲು ಸಾಧ್ಯವಿಲ್ಲ ಎಂದರು. ಆಪರೇಷನ್ ಸಿಂಧೂರ್‌ಲ್ಲಿ ಕೊಲ್ಲಲ್ಪಟ್ಟ ಭಯೋತ್ಪಾದಕರಿಗೆ ಪಾಕಿಸ್ತಾನಿ ಸೇನೆಯ ಗೌರವವು ಭಾರತದ ವಿರುದ್ಧದ ಭಯೋತ್ಪಾದಕ ದಾಳಿಗಳನ್ನು ಇನ್ನು ಮುಂದೆ ಪ್ರಾಕ್ಸಿ ಯುದ್ಧಎಂದು ಕರೆಯಬಾರದೆಂಬುದನ್ನು ತೋರಿಸುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಭಯೋತ್ಪಾದಕ ಚಟುವಟಿಕೆಗಳು ಪ್ರಾಕ್ಸಿ ಯುದ್ಧವಲ್ಲ ಆದರೆ ಉತ್ತಮವಾಗಿ ಯೋಜಿಸಲಾದ ಯುದ್ಧ ತಂತ್ರವಾಗಿದೆ ಎಂದು ಇದು ಸಾಬೀತುಪಡಿಸುತ್ತದೆ. ನೀವು ಈಗಾಗಲೇ ಯುದ್ಧದಲ್ಲಿದ್ದೀರಿ, ಮತ್ತು ಅದಕ್ಕೆ ತಕ್ಕಂತೆ ನಿಮಗೆ ಪ್ರತಿಕ್ರಿಯೆ ಸಿಗುತ್ತದೆ. ನಾವು ಯಾರೊಂದಿಗೂ ದ್ವೇಷವನ್ನು ಬಯಸುವುದಿಲ್ಲ, ನಾವು ಶಾಂತಿಯುತವಾಗಿ ಬದುಕಲು ಬಯಸುತ್ತೇವೆ. ಪ್ರಪಂಚದ ಕಲ್ಯಾಣಕ್ಕೆ ಕೊಡುಗೆ ನೀಡಲು ನಾವು ಪ್ರಗತಿ ಹೊಂದಲು ಬಯಸುತ್ತೇವೆ ಎಂದರು. ಗಡಿಯಾಚೆಗಿನ ಭಯೋತ್ಪಾದನೆಗೆ ಸಂಬಂಧಿಸಿದಂತೆ ಪಾಕಿಸ್ತಾನವನ್ನು ತರಾಟೆಗೆ ತೆಗೆದುಕೊಂಡ ಪ್ರಧಾನಿ ನರೇಂದ್ರ ಮೋದಿ, ನೆರೆಯ ರಾಷ್ಟ್ರವು ಪರೋಕ್ಷ ಯುದ್ಧದ ಮೂಲಕ ದೇಶದ ಶಾಂತಿಗೆ ಸವಾಲು ಹಾಕಿದಾಗ ಭಾರತ ಮೌನವಾಗಿರಲು ಸಾಧ್ಯವಿಲ್ಲ ಎಂದು ಎಚ್ಚರಿಕೆ ನೀಡಿದರು. ಭಯೋತ್ಪಾದನೆ ಪಾಕಿಸ್ತಾನದ ಯುದ್ಧ ತಂತ್ರವಾಗಿದ್ದು, ಭಾರತ ಅದಕ್ಕೆ ತಕ್ಕಂತೆ ಪ್ರತಿಕ್ರಿಯಿಸುತ್ತದೆ. ನಾವು ಶಾಂತಿಯಿಂದ ಇರಲು ಬಯಸುತ್ತೇವೆ ಮತ್ತು ಇತರರು ಶಾಂತಿಯಿಂದ ಬದುಕಲು ಬಿಡುತ್ತೇವೆ. ಆದರೆ ಪ್ರಾಕ್ಸಿ ಯುದ್ಧದ ಮೂಲಕ ನಮ್ಮ ಶಕ್ತಿಯನ್ನು ಪ್ರಶ್ನಿಸಿದಾಗ, ನಾವು ಮೌನವಾಗಿರಲು ಸಾಧ್ಯವಿಲ್ಲ. ಭಯೋತ್ಪಾದನೆಯು ಪಾಕಿಸ್ತಾನದ ಪರೋಕ್ಷ ಯುದ್ಧವಲ್ಲ, ಬದಲಾಗಿ ಅದು ಒಂದು ಯುದ್ಧ ತಂತ್ರ ಎಂಬುದನ್ನು ಇದು ಸಾಬೀತುಪಡಿಸುತ್ತದೆ. ನಾವು ಅದಕ್ಕೆ ತಕ್ಕಂತೆ ಉತ್ತರಿಸುತ್ತೇವೆ ಎಂದು ಅವರು ಹೇಳಿದರು.



ರ್‍ಯಾಲಿಯನ್ನು ಉದ್ದೇಶಿಸಿ ಮಾತನಾಡುವ ಮೊದಲು, ಮೋದಿ ಮಂಗಳವಾರ ಬೆಳಿಗ್ಗೆ ಗಾಂಧಿನಗರದಲ್ಲಿ ಮೆಗಾ ರೋಡ್ ಶೋ ನಡೆಸಿದರು, ಅವರನ್ನು ಸ್ವಾಗತಿಸಲು ಜನಸಮೂಹ ಜಮಾಯಿಸಿತ್ತು.

# ತರಗತಿಗಳಿಗೆ ಗೈರುಹಾಜರಾದರೆ ವೀಸಾ ರದ್ದು

## ಅಮೆರಿಕದಲ್ಲಿ ಉನ್ನತ ಶಿಕ್ಷಣ ಪಡೆಯುತ್ತಿರುವ ಭಾರತೀಯ ವಿದ್ಯಾರ್ಥಿಗಳಿಗೆ ಹೊಸ ಎಚ್ಚರಿಕೆ

**ಹೊಸದಿಲ್ಲಿ:** ಅಮೆರಿಕದಲ್ಲಿ ಉನ್ನತ ಶಿಕ್ಷಣ ಪಡೆಯಲು ತೆರಳುವ ಭಾರತೀಯ ವಿದ್ಯಾರ್ಥಿಗಳೂ ಸೇರಿದಂತೆ ಹೊರ ದೇಶಗಳ ವಿದ್ಯಾರ್ಥಿಗಳಿಗೆ, ಅಲ್ಲಿನ ರಾಯಭಾರ ಕಚೇರಿಯು ಒಂದು ಪ್ರಮುಖ ಎಚ್ಚರಿಕೆಯನ್ನು ನೀಡಿದೆ. ವಿದ್ಯಾರ್ಥಿಗಳು ತಾವು ದಾಖಲಾದ ಕೋರ್ಸ್‌ಗಳ ತರಗತಿಗಳಿಗೆ ನಿಯಮಿತವಾಗಿ ಹಾಜರಾಗದಿದ್ದರೆ, ಅವರ ಎಫ್-1 ವಿದ್ಯಾರ್ಥಿ ವೀಸಾವನ್ನು ರದ್ದುಗೊಳಿಸುವ ಸಾಧ್ಯತೆ ಇದೆ ಎಂದು ಸ್ಪಷ್ಟಪಡಿಸಿದೆ. ಈ ಕುರಿತು ಮಾಹಿತಿ ನೀಡಿರುವ ಅಮೆರಿಕನ್ ರಾಯಭಾರ ಕಚೇರಿ, ವಿದ್ಯಾರ್ಥಿ ವೀಸಾ ಮೂಲಕ ಅಮೆರಿಕದಲ್ಲಿ ಉನ್ನತ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳು ತಮ್ಮ ವಿದ್ಯಾರ್ಥಿ ಸ್ಥಿತಿಯನ್ನು ಕಾಯ್ದುಕೊಳ್ಳುವುದು ಅತ್ಯಗತ್ಯ. ಇದಕ್ಕಾಗಿ, ವಿಶ್ವವಿದ್ಯಾಲಯದ ನಿಯಮಾನುಸಾರ ನಿಗದಿತ ತರಗತಿಗಳಿಗೆ ತಪ್ಪದೇ ಹಾಜರಾಗಬೇಕು. ಒಂದು ವೇಳೆ ನೀವು ತರಗತಿಗಳನ್ನು ತಪ್ಪಿಸಿಕೊಂಡರೆ, ನಿಮ್ಮ ವೀಸಾವನ್ನು ರದ್ದುಗೊಳಿಸಬಹುದು ಎಂದು ಎಚ್ಚರಿಸಿದೆ.



### ವೀಸಾವನ್ನು ರದ್ದುಗೊಳಿಸುವ ಸಾಧ್ಯತೆ

**ಅಮೆರಿಕದಲ್ಲಿ ಉನ್ನತ ಶಿಕ್ಷಣ ಪಡೆಯಲು ತೆರಳು ಭಾರತೀಯ ವಿದ್ಯಾರ್ಥಿಗಳೂ ಸೇರಿದಂತೆ ಅನ್ಯ ದೇಶಗಳ ವಿದ್ಯಾರ್ಥಿಗಳಿಗೆ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತ ಹೊಸದೊಂದು ಶಾಕ್ ನೀಡಿದೆ. ವಿದ್ಯಾರ್ಥಿಗಳು ತಾವು ದಾಖಲಾದ ಕೋರ್ಸ್‌ಗಳ ತರಗತಿಗಳಿಗೆ ನಿಯಮಿತವಾಗಿ ಹಾಜರಾಗದಿದ್ದರೆ, ಅವರ ಎಫ್-1 ವಿದ್ಯಾರ್ಥಿ ವೀಸಾವನ್ನು ರದ್ದುಗೊಳಿಸುವ ಸಾಧ್ಯತೆ ಇದೆ ಎಂದು ಅಮೆರಿಕನ್ ರಾಯಭಾರ ಕಚೇರಿ ಸ್ಪಷ್ಟಪಡಿಸಿದೆ. ಅನಾರೋಗ್ಯ ಅಥವಾ ಇತರೆ ಕಾರಣಗಳಿಂದ ತರಗತಿಗಳಿಗೆ ಹಾಜರಾಗದಿದ್ದರೆ, ಸೂಕ್ತ ದಾಖಲೆಗಳನ್ನು ಒದಗಿಸಬೇಕು ಎಂದು ರಾಯಭಾರ ಕಚೇರಿ ವಿದ್ಯಾರ್ಥಿಗಳಿಗೆ ಸೂಚನೆ ನೀಡಿದೆ.**

### ಎಚ್ಚರಿಕೆಯ ಪ್ರಮುಖ ಅಂಶಗಳು

**ನಿಯಮಿತ ಹಾಜರಾತಿ ಕಡ್ಡಾಯ:** ಅಮೆರಿಕದ ಶಿಕ್ಷಣ ಸಂಸ್ಥೆಗಳು ಹಾಜರಾತಿಯನ್ನು ಗಂಭೀರವಾಗಿ ಪರಿಗಣಿಸುತ್ತವೆ. ವಿದ್ಯಾರ್ಥಿಗಳು ತಾವು ನೋಂದಾಯಿಸಿಕೊಂಡಿರುವ ಕೋರ್ಸ್‌ಗಳ ಎಲ್ಲಾ ತರಗತಿಗಳು, ಉಪನ್ಯಾಸಗಳು, ಪ್ರಾಯೋಗಿಕ ತರಗತಿಗಳಿಗೆ ಹಾಜರಾಗುವುದು ಕಡಾಯವಾಗಿದೆ.

**ವೀಸಾ ಸ್ಥಿತಿಯ ಮೇಲೆ ಪರಿಣಾಮ:** ನಿರಂತರವಾಗಿ ಗೈರುಹಾಜರಾಗುವುದು ವೀಸಾ ನಿಯಮಗಳ ಉಲ್ಲಂಘನೆ ಎಂದು ಪರಿಗಣಿಸಲಾಗುತ್ತದೆ. ಇದು ವಿದ್ಯಾರ್ಥಿಯ ಎಫ್-1 ಸ್ಟೇಟಸ್‌ಅನ್ನು ಕಳೆದುಕೊಳ್ಳಲು ಕಾರಣವಾಗಬಹುದು. ಇದರ ಪರಿಣಾಮವಾಗಿ ವೀಸಾ ರದ್ದಾಗಬಹುದು.

**ವಿಶ್ವವಿದ್ಯಾಲಯಕ್ಕೆ ಮಾಹಿತಿ:** ಒಂದು ವೇಳೆ ಅನಾರೋಗ್ಯ ಅಥವಾ ಇತರೆ ಗಂಭೀರ ಕಾರಣಗಳಿಂದ ತರಗತಿಗಳಿಗೆ ಹಾಜರಾಗಲು ಸಾಧ್ಯವಾಗದಿದ್ದರೆ, ತಕ್ಷಣವೇ ವಿಶ್ವವಿದ್ಯಾಲಯದ ಗೊತ್ತುಪಡಿಸಿದ ಶಾಲಾ ಅಧಿಕಾರಿಗೆ ಮಾಹಿತಿ ನೀಡಿ, ಸೂಕ್ತ ದಾಖಲೆಗಳನ್ನು ಒದಗಿಸಬೇಕು.

**ಗಂಭೀರ ಪರಿಣಾಮಗಳು:** ವೀಸಾ ರದ್ದಾದರೆ, ವಿದ್ಯಾರ್ಥಿಯು ತಕ್ಷಣವೇ ಅಮೆರಿಕವನ್ನು ತೊರೆಯಬೇಕಾಗಬಹುದು. ಇದು ಅವರ ಶೈಕ್ಷಣಿಕ ಭವಿಷ್ಯದ ಮೇಲೆ ಗಂಭೀರ ಪರಿಣಾಮ ಬೀರುವುದಲ್ಲದೆ, ಭವಿಷ್ಯದಲ್ಲಿ ಅಮೆರಿಕಕ್ಕೆ ಪ್ರಯಾಣಿಸುವ ಅವಕಾಶಗಳನ್ನೂ ಕಠಿಣಗೊಳಿಸಬಹುದು.

**ಶೈಕ್ಷಣಿಕ ಗಂಭೀರತೆ:** ಅಮೆರಿಕವು ಶಿಕ್ಷಣವನ್ನು ಅತ್ಯಂತ ಗಂಭೀರವಾಪರಿಗಣಿಸುತ್ತದೆ, ಅಲ್ಲಿಗೆ ಉನ್ನತ ಅಧ್ಯಯನಕ್ಕಾಗಿ ಬರುವ ವಿದ್ಯಾರ್ಥಿಗಳು ಕೂಡ, ಅದೇ ಬದ್ಧತೆಯನ್ನು ಪ್ರದರ್ಶಿಸಬೇಕು ಎಂದು ಅದು ನಿರೀಕ್ಷಿಸುತ್ತದೆ. ಕೆಲವು ವಿದ್ಯಾರ್ಥಿಗಳು ಅಮೆರಿಕಕ್ಕೆ ಬಂದ ನಂತರ ಅಧ್ಯಯನವನ್ನು ನಿರ್ಲಕ್ಷಿಸಿ, ಬೇರೆ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುತ್ತಿರುವ, ನಿಯಮಗಳನ್ನು ಪಾಲಿಸದೆ ಇರುವಂತಹ ಪ್ರಕರಣಗಳು ವರದಿಯಾಗುತ್ತಿರುವ ಹಿನ್ನೆಲೆಯಲ್ಲಿ, ಅಮೆರಿಕದಿಂದ ಈ ಗಂಭೀರ ಎಚ್ಚರಿಕೆ ಬಂದಿರುವುದು ಗಮನ ಸೆಳೆದಿದೆ. ಅಮೆರಿಕದಲ್ಲಿ ತಮ್ಮ ಉನ್ನತ ಶಿಕ್ಷಣದ ಕನಸನ್ನು ನನಸಾಗಿಸಲು ಬಯಸುವ ಭಾರತೀಯ ವಿದ್ಯಾರ್ಥಿಗಳು, ವೀಸಾ ನಿಯಮಗಳನ್ನು ಚಾಚೂತಪ್ಪದೆ ಪಾಲಿಸಬೇಕು. ತರಗತಿಗಳಿಗೆ ನಿಯಮಿತವಾಗಿ ಹಾಜರಾಗಬೇಕು, ತಮ್ಮ ಅಧ್ಯಯನದ ಕಡೆಗೆ ಸಂಪೂರ್ಣ ಗಮನ ಹರಿಸಬೇಕು. ಈ ಮೂಲಕ ತಮ್ಮ ವೀಸಾ ಸ್ಥಿತಿಯನ್ನು ಸುರಕ್ಷಿತವಾಗಿರಿಸಿಕೊಂಡು, ಯಶಸ್ವಿ ಶೈಕ್ಷಣಿಕ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದು ರಾಯಭಾರ ಕಚೇರಿ ಸಲಹೆ ನೀಡಿದೆ. ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಆಡಳಿತವು ಈಗಾಗಲೇ ಕಠಿಣ ವೀಸಾ ನಿಯಮ ಜಾರಿಗೆ ತಂದಿದ್ದು, ಇದೀಗ ತರಗತಿಗಳಿಗೆ ಹಾಜರಾಗದ ವಿದ್ಯಾರ್ಥಿಗಳ ವೀಸಾ ರದ್ದು ಮಾಡುವ ಎಚ್ಚರಿಕೆ ನೀಡಿರುವದು ಗಮನ ಸೆಳೆದಿದೆ.

**ಅಧ್ಯಯನದ ಕಡೆಗೆ ಗಮನ ಹರಿಸಬೇಕು**

# ಮಿನಿ ನ್ಯೂಸ್

## ಕಾರಿನಲ್ಲಿ ಒಂದೇ ಕುಟುಂಬದ 7 ಮಂದಿಯ ಮೃತದೇಹಗಳು ಪತ್ತೆ

**ಚಂಡೀಗಢ:** ಹರಿಯಾಣದ ಪಂಚಕುಲದ ವಸತಿ ಪ್ರದೇಶದಲ್ಲಿ ನಿಲ್ಲಿಸಿದ್ದ ಕಾರಿನೊಳಗೆ ಒಂದೇ ಕುಟುಂಬದ ಏಳು ಮಂದಿಯ ಮೃತದೇಹಗಳು ಪತ್ತೆಯಾಗಿದೆ. ಪಂಚಕುಲದಸೆಕ್ಟರ್-27 ಪ್ರದೇಶದಲ್ಲಿ ಮನೆಯ ಮುಂದೆ ಕಾರು ನಿಂತಿತ್ತು, ಅದರೊಳಗೆ ಇದ್ದವರು ನಿಗೂಢವಾಗಿ ಮೃತಪಟ್ಟಿರುವುದು ತಡರಾತ್ರಿ ಬೆಳಕಿಗೆ ಬಂದಿದೆ. ಪೊಲೀಸರು ದಾವಿಸಿ ಪರಿಶೀಲಿಸಿದಾಗ ಕಾರಿನೊಳಗೆ ದಂಪತಿ, ಮೂವರು ಮಕ್ಕಳು, ಇಬ್ಬರು ವೃದ್ಧರು ಮೃತಪಟ್ಟಿರುವುದು ಕಂಡುಬಂದಿದೆ, ಇವರು ಡೆಹ್ರಾಡೂನ್‌ನ ನಿವಾಸಿಗಳಾಗಿದ್ದು, ಎಲ್ಲರೂ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ.

ಕುಟುಂಬವು ಭಾರೀ ಸಾಲ, ಆರ್ಥಿಕ ಸಂಕಷ್ಟದಲ್ಲಿ ಸಿಲುಕಿದ್ದರಿಂದ ಈ ನಿರ್ಧಾರಕ್ಕೆ ಬಂದಿರಬಹುದು ಎಂದು ಹೇಳಲಾಗಿದೆ. ಡೆಹ್ರಾಡೂನ್ ಕುಟುಂಬದೊಂದಿಗೆ ನಿವಾಸಿ ಪ್ರವೀಣ್ ಮಿತ್ತಲ್, ಪಂಚಕುಲದ ಬಾಗೇಶ್ವರ ಧಾಮದಲ್ಲಿ ಆಧ್ಯಾತ್ಮಿಕ ಕಾರ್ಯಕ್ರಮದಲ್ಲಿ ಭಾಗವಹಿಸಲು ಬಂದಿದ್ದರು ಎಂದು ಮೂಲಗಳು ತಮ್ಮ ತಿಳಿಸಿವೆ. ಸದ್ಯಕ್ಕೆ, ನಾವು ಪ್ರಕರಣವನ್ನು ಎಲ್ಲಾ ಕೋನಗಳಿಂದ ತನಿಖೆ ನಡೆಸುತ್ತಿದ್ದೇವೆ. ನಾವು ಸ್ಥಳೀಯರಿಂದ ಮಾಹಿತಿ, ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸುತ್ತಿದ್ದೇವೆ ಎಂದು ಹರಿಯಾಣದ ಪಂಚಕುಲದ ಡಿಸಿಪಿ ಅಮಿತ್ ದಹಿಯಾ ಹೇಳಿದ್ದಾರೆ.

## ಭಯೋತ್ಪಾದನೆ ವಿರುದ್ಧದ ಭಾರತದ ಹೋರಾಟದಲ್ಲಿ ಗಯಾನಾ ಬೆಂಬಲ

**ಗಯಾನಾ:** ಭಯೋತ್ಪಾದನೆ ವಿರುದ್ಧದ ಭಾರತದ ಹೋರಾಟದಲ್ಲಿ ಗಯಾನಾ ದೇಶವು ಅಚಲ ಬೆಂಬಲವನ್ನು ವ್ಯಕ್ತಪಡಿಸಿದೆ. ಕಾಂಗ್ರೆಸ್ ಸಂಸದ ಶಶಿ ತರೂರ್ ನೇತೃತ್ವದ ಸರ್ವಪಕ್ಷ ಸಂಸದೀಯ ನಿಯೋಗವು, ಗಯಾನಾದ ಉಪಾಧ್ಯಕ್ಷ ಭರತ್ ಜಗದೇವ್ ಮತ್ತು ಪ್ರಧಾನಿ ಮಾರ್ಕ್ ಫಿಲಿಪ್ಸ್ ಅವರನ್ನು ಭೇಟಿಯಾಗಿ ಭಾರತದ ನಿಲುವನ್ನು ವಿವರಿಸಿದ್ದಾರೆ. ಈ ಕುರಿತು ಜಾರ್ಜ್‌ಟೌನ್‌ನಲ್ಲಿರುವ ಭಾರತದ ರಾಯಭಾರ ಕಚೇರಿ ಮಾಹಿತಿ ನೀಡಿದೆ. ಅಧ್ಯಕ್ಷರ ಕಚೇರಿಯಲ್ಲಿ ಭಾರತದ ನಿಯೋಗವು ಗಯಾನಾ ನಾಯಕರೊಂದಿಗೆ ಅತ್ಯುತ್ತಮ ಸಭೆ ನಡೆಸಿತು ಎಂದು ತರೂರ್ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ಇತ್ತೀಚಿನ ಘಟನೆಗಳ ಹಿನ್ನೆಲೆಯಲ್ಲಿ ಭಾರತದ ಕಳವಳಗಳಿಗೆ ಬೆಂಬಲ ವ್ಯಕ್ತಪಡಿಸುವುದರ ಜತೆಗೆ ತೈಲ, ಅನಿಲದ ನಿಕ್ಷೇಪದೊಂದಿಗೆ ಗಯಾನಾದಲ್ಲಿ ದಾಖಲೆಯ ಶೇ 30ರಷ್ಟು ವಾರ್ಷಿಕ ಆರ್ಥಿಕ ಬೆಳವಣಿಗೆ, ಅಭಿವೃದ್ಧಿ ಸಂಬಂಧಿಸಿದ ವಿಷಯಗಳ ಕುರಿತು ಚರ್ಚಿಸಲಾಯಿತು ಎಂದು ಅವರು ತಿಳಿಸಿದ್ದಾರೆ. ಕೃಷಿಯಿಂದ ಹಿಡಿದು ದೂರಸಂಪರ್ಕ, ಬ್ಯಾಂಕಿಂಗ್, ಹೆದ್ದಾರಿ ಅಭಿವೃದ್ಧಿಗಳಲ್ಲಿ ಭಾರತೀಯ ಕಂಪನಿಗಳಿಗೆ ಹೆಚ್ಚಿನ ಅವಕಾಶ ಸೃಷ್ಟಿಯ ಕುರಿತು ಉಲ್ಲೇಖಿಸಲಾಗಿದೆ. ಗಯಾನಾದಲ್ಲಿ ಕಾರ್ಮಿಕರ ಕೊರತೆಯಿದ್ದು, ಭಾರತದ ನೆರವನ್ನು ಸ್ವಾಗತಿಸುತ್ತದೆ ಎಂದು ಹೇಳಿದ್ದಾರೆ. ಗಯಾನಾದ 59ನೇ ಸ್ವಾತಂತ್ರ್ಯ ದಿನಾಚರಣೆಯ ಹಿಂದಿನ ದಿನ ಪ್ರಧಾನಿ ಮಾರ್ಕ್ ಫಿಲಿಪ್ಸ್ ಅವರ ನೇತೃತ್ವದಲ್ಲಿ ಭಾರತದ ನಿಯೋಗಕ್ಕೆ ಔತಣಕೂಟವನ್ನು ಏರ್ಪಡಿಸಲಾಯಿತು.

## ಹೋರಾಟದಲ್ಲಿ ಭಾರತದ ಪರ ನಾವಿದ್ದೇವೆ: ಸಿಂಗಪುರ



**ಸಿಂಗಪುರ:** ನಾವು ಭಯೋತ್ಪಾದಕ ಕೃತ್ಯಗಳನ್ನು ತೀವ್ರವಾಗಿ ಖಂಡಿಸುತ್ತೇವೆ, ಅದರ ವಿರುದ್ಧದ ಹೋರಾಟದಲ್ಲಿ ಭಾರತದ ಪರವಾಗಿದ್ದೇವೆ ಎಂದು ಸಿಂಗಪುರವು ಬೆಂಬಲ ಸೂಚಿಸಿದೆ. ಮಂಗಳವಾರ ಆಪರೇಷನ್ ಸಿಂಧೂರ ಕುರಿತು ಮಾಹಿತಿ ನೀಡಲು ತೆರಳಿರುವ ಜೆಡಿ(ಯು) ರಾಜ್ಯ ಸಭಾ ಸದಸ್ಯ, ಸಂಜಯ್ ಕುಮಾರ್ ಝಾ ನೇತೃತ್ವದ ಸರ್ವಪಕ್ಷ ಸಂಸದೀಯ ನಿಯೋಗದ ಭೇಟಿಯ ನಂತರ ಅಲ್ಲಿನ ವಿದೇಶಾಂಗ ಸಚಿವೆ ಸಿಮ್ ಆನ್ ಅವರು ಭಾರತಕ್ಕೆ ಬೆಂಬಲ ಸೂಚಿಸಿದ್ದಾರೆ.

ಉಗ್ರವಾದದ ವಿರುದ್ಧ ಭಾರತ ತೆಗೆದುಕೊಳ್ಳುತ್ತಿರುವ ಕ್ರಮಗಳು, ನಿಲುವುಗಳ ಕುರಿತು ಅವರೊಂದಿಗೆ ನಿಯೋಗವು ಚರ್ಚಿಸಿದೆ. ಭಾರತ, ಸಿಂಗಪುರಗಳು ಮಿತ್ರ ರಾಷ್ಟ್ರಗಳಾಗಿದ್ದು, ಭಯೋತ್ಪಾದನೆಯಂತಹ ಜಾಗತಿಕ ಸಮಸ್ಯೆಗಳ ವಿರುದ್ಧದ ಹೋರಾಟಕ್ಕೆ ನಮ್ಮ ಸಂಪೂರ್ಣ ಬೆಂಬಲ ಸೂಚಿಸುತ್ತೇವೆ. ಮುಂದಿನ ದಿನಗಳಲ್ಲಿ ನಮ್ಮ ನಡುವಿನ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ವೃದ್ಧಿಸಿಕೊಳ್ಳಲಾಗುತ್ತದೆ ಎಂದು ವಿದೇಶಾಂಗ ಸಚಿವೆ ಸಿಮ್ ಆನ್ ಹೇಳಿದ್ದಾರೆ. ಭಾರತೀಯ ನಿಯೋಗವು ಸಿಂಗಪುರ ಸರ್ಕಾರ ಹಾಗೂ ಅಲ್ಲಿನ ಮಾಧ್ಯಮಗಳಿಗೆ ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತಿಕಾರವಾಗಿ ಆಪರೇಷನ್ ಸಿಂಧೂರ ನಡೆಸಿದ್ದು, ಅದು ಕೇವಲ ಉಗ್ರರ ಮೇಲಿನ ದಾಳಿ ಅಷ್ಟೇ ಎನ್ನುವುದನ್ನು ಮನವರಿಕೆ ಮಾಡಿಕೊಡಲು ಯಶಸ್ವಿಯಾಗಿದೆ.

## 24.47 ಕೋಟಿ ಮೌಲ್ಯದ ಮಾದಕ ವಸ್ತು ವಶ; ಆರು ಮಂದಿ ಬಂಧನ

**ಮುಂಬೈ:** ಮುಂಬೈ ಪೊಲೀಸರು ನಡೆಸಿದ ದಾಳಿಯಲ್ಲಿ 24.47 ಕೋಟಿ ಮೌಲ್ಯದ 12.6 ಕೆ.ಜಿ ಮೆಫೆಡೋನ್ (ಮಾದಕ ವಸ್ತು) ವಶಪಡಿಸಿಕೊಂಡಿದ್ದು, ಆರು ಮಂದಿಯನ್ನು ಬಂಧಿಸಿದ್ದಾರೆ ಎಂದು ಅಧಿಕಾರಿಗಳು ಮಂಗಳವಾರ ತಿಳಿಸಿದ್ದಾರೆ.

ಮುಂಬೈ, ನವಿ ಮುಂಬೈ ಮತ್ತು ಕರ್ಜತ್‌ನಲ್ಲಿ ಮೂರು ತಿಂಗಳ ಅವಧಿಯಲ್ಲಿ ನಡೆದ ವಿವಿಧ ದಾಳಿಯಲ್ಲಿ 12.6 ಕೆ.ಜಿ ಮೆಫೆಡೋನ್ (ಎಂಡಿ) ವಶಪಡಿಸಿಕೊಳ್ಳಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಖಚಿತ ಮಾಹಿತಿ ಆಧಾರಿಸಿ ಮೇ 15ರಂದು ನವಿ ಮುಂಬೈನಲ್ಲಿ ದಾಳಿ ನಡೆಸಿ 13.37 ಕೋಟಿ ಮೌಲ್ಯದ 6 ಕೆ.ಜಿಗೂ ಅಧಿಕ ಮಾದಕ ವಸ್ತು ಗಳನ್ನು ವಶಪಡಿಸಿಕೊಳ್ಳಲಾಯಿತು. 11 ಕೋಟಿಗೂ ಹೆಚ್ಚು ಮೌಲ್ಯದ 5.5 ಕೆ.ಜಿ ಎಂಡಿ, ಮಾದಕವಸ್ತು ತಯಾರಿಸಲು ಬಳಸುವ ವಸ್ತುಗಳನ್ನು ವಶಪಡಿಸಿಕೊಳ್ಳಲಾಯಿತು. ಮಾರ್ಚ್‌ನಲ್ಲಿ ಚೆಂಬೂರಿನಲ್ಲಿ 45 ಗ್ರಾಂ ಎಂಡಿಯೊಂದಿಗೆ ಆರೋಪಿಯೊಬ್ಬನನ್ನು ಬಂಧಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಆರೋಪಿಗಳ ವಿರುದ್ಧ ಭಾರತೀಯ ನ್ಯಾಯಸಂಹಿತೆಯ ವಿವಿಧ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಉಗ್ರ ದಾಳಿಗೆ ಸರಿಯಾದ ಬೆಲೆ ತೆರಬೇಕಾಗುತ್ತದೆ; ರವಿಶಂಕರ್ ಪ್ರಸಾದ್



**ಪ್ರಧಾನಿ ಇದು ಯುದ್ಧದ ಯುಗವಲ್ಲ ಎಂದು ಹೇಳಿದ್ದರು ಎಂದು ನಿಮ್ಮನ್ನು ಕೇಳಿದರೆ ಅದು ಭಯೋತ್ಪಾದನೆಯ ಯುಗವೂ ಅಲ್ಲ. ಭಯೋತ್ಪಾದನೆ ಜಾಗತಿಕ ಶಾಪ, ಜಾಗತಿಕ ಕ್ಯಾನ್ಸರ್ ನಾಗರಿಕ ಸಮಾಜವನ್ನು ಕೊಲ್ಲುತ್ತಿದೆ ಎಂದು ಅವರು ಹೇಳಿದರು.**

**ಪ್ಯಾರಿಸ್:** ಜಾಗತಿಕ ಶಾಪವಾಗಿರುವ ಭಯೋತ್ಪಾದನೆ ವಿರುದ್ಧ ಹೋರಾಡುತ್ತಿರುವ ಬ್ರ್ಯಾಂಡ್ ಇಂಡಿಯಾವನ್ನು ಶಾಂತಿಯ ದಾರಿ ದೀಪವಾಗಿ ಪ್ರದರ್ಶಿಸಲು ಎಲ್ಲಾ ಪ್ರಯತ್ನಗಳನ್ನು ಮಾಡಬೇಕೆಂದು ಬಿಜೆಪಿ ಸಂಸದ ರವಿಶಂಕರ್ ಪ್ರಸಾದ್ ಫ್ರಾನ್ಸ್‌ನಲ್ಲಿರುವ ಭಾರತೀಯ ಸಮುದಾಯದ ಸದಸ್ಯರಿಗೆ ಮನವಿ ಮಾಡಿಕೊಂಡರು. ಪ್ಯಾರಿಸ್‌ನಲ್ಲಿ ಸಮುದಾಯದ ನಾಯಕರು ಮತ್ತು ಭಾರತೀಯ ವಲಸಿಗರ ಪ್ರಮುಖ ಸದಸ್ಯರ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಸಾದ್ ನೇತೃತ್ವದ ಸರ್ವಪಕ್ಷ ನಿಯೋಗ, ಕಳೆದ ತಿಂಗಳು. ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯು ಕೇಂದ್ರಾಡಳಿತ ಪ್ರದೇಶವಾದ ಜಮ್ಮು, ಕಾಶ್ಮೀರದಲ್ಲಿ ಶಾಂತಿ ಅಭಿವೃದ್ಧಿಯನ್ನು ಹಾಳುಮಾಡುವ ಉದ್ದೇಶ ಪೂರ್ವಕ ಪ್ರಯತ್ನವಾಗಿದೆ ಎಂಬ ಸಂದೇಶವನ್ನು ರವಾನಿಸಿತು. ಆಪರೇಷನ್ ಸಿಂಧೂರ್‌ನೊಂದಿಗೆ ಭಾರತದ ಪ್ರತಿಕ್ರಿಯೆಯು ನಿಖರ, ಗುರಿ, ಪ್ರಮಾಣಾನುಗುಣ ಮತ್ತು ಉಲ್ಬಣಗೊಳ್ಳದ, ಪಾಕಿಸ್ತಾನ ಬೆಂಬಲಿತ ಭಯೋತ್ಪಾದಕ ಶಿಬಿರಗಳನ್ನು ಗುರಿಯಾ ಗಿಸಿಕೊಂಡಿತ್ತು.

ಭಾರತದ ಬೆಳವಣಿಗೆಯನ್ನು ನಾನು ನೋಡಿದಾಗ, ನೀವು ಬ್ರ್ಯಾಂಡ್ ರಾಯಭಾರಿಗಳಾಗಿರುವುದರಿಂದ ನಿಮ್ಮೆಲ್ಲರ ಬಗ್ಗೆ ನನಗೆ ತುಂಬಾ ಹೆಮ್ಮೆಯಾಗುತ್ತದೆ ಎಂದು ಪ್ರಸಾದ್ ಹೇಳಿದರು. ದಯವಿಟ್ಟು ಬ್ರ್ಯಾಂಡ್ ಇಂಡಿಯಾವನ್ನು ಸರಿಯಾಗಿ ಪ್ರದರ್ಶಿಸಿ, ನಾವು ಶಾಂತಿಗಾಗಿ, ನಾವು ಸೌಹಾರ್ದಕ್ಕಾಗಿ. ಆದರೆ ಭಯೋತ್ಪಾದಕರಿಂದ ಅಮಾಯಕ ಭಾರತೀಯರು ಕೊಲ್ಲಲ್ಪಟ್ಟರೆ, ಅವರು ಬೆಲೆ ತೆರಬೇಕಾಗುತ್ತದೆ. ಅದುವೇ ಗೆಲುವಿನ ಆಪ ರೇಷನ್ ಸಿಂಧೂರ ಎಂದು ಅವರು ಹೇಳಿದರು.

ಪಾಕಿಸ್ತಾನದಲ್ಲಿ ಭಯೋತ್ಪಾದನೆ, ಸರ್ಕಾರಿ ಸಂಸ್ಥೆಗಳು ಒಟ್ಟಿಗೆ ಇರುವುದರಿಂದ ಯಾವುದೇ ಭಯೋತ್ಪಾದನಾ ಕೃತ್ಯವನ್ನು ಯುದ್ಧವೆಂದು ನೋಡಲಾಗುತ್ತದೆ ಎಂಬ ನಿಯೋಗದ ಕೇಂದ್ರ ಸಂದೇಶವನ್ನು ಮಾಜಿ ಕೇಂದ್ರ ಸಚಿವರು ಪುನರುಚ್ಚರಿಸಿದರು. ಭಯೋತ್ಪಾದನೆಯ ಬಗ್ಗೆ ಕೆಲವು ಕಠಿಣ ಸತ್ಯಗಳನ್ನು ಜಾಗತಿಕ ಸಮುದಾಯಕ್ಕೆ ಪ್ರಸ್ತುತಪಡಿಸಲು ನಿಯೋಗವು ಯುರೋಪಿನಲ್ಲಿದೆ ಎಂದು ಸಹ ಲೋಕಸಭಾ ಸಂಸದೆ ದಗ್ಗುಬಾಟಿ ಪುರಂದೇಶ್ವರಿ ಗಮನಿಸಿದರು. ಭಾರತವು ಗಡಿಯಾಚೆಗಿನ ಭಯೋತ್ಪಾದನೆಯನ್ನು ಬಹಳ ಸಮಯದಿಂದ ಅನುಭವಿಸಿದೆ. ಆದರೆ ಈಗ ಭಾರತ ಸಾಕು ಎಂದು ಹೇಳಿದೆ. ಮಲಗಿ ವಿಷಯಗಳನ್ನು ತೆಗೆದು ಕೊಳ್ಳಲು ಇಚ್ಛಿಸದ ನಾಯಕತ್ವ ಇಂದು ನಮಗಿದೆ.

ನಾವು ಜವಾಬ್ದಾರಿಯುತ ದೇಶವಾಗಿದ್ದೇವೆ, ನಾವು ಯಾವುದೇ ದೇಶದ ಮೇಲೆ ಎಂದಿಗೂ ಯುದ್ಧ ಮಾಡಿಲ್ಲ. ಆದರೆ ಇಂದು ನಮ್ಮ ತಾಳ್ಮೆ ಬಹಳ ದೂರ ಸಾಗಿದೆ ಎಂದು ಆಂಧ್ರಪ್ರದೇಶದ ನಾಯಕಿ ಹೇಳಿದರು. ಅವರು ತೆಲುಗಿನಲ್ಲಿ ಸಭೆಯನ್ನುದ್ದೇಶಿಸಿ ಮಾತನಾಡಿದರು. ರಾಜ್ಯಸಭಾ ಸಂಸದೆ ಪ್ರಿಯಾಂಕಾ ಚತುರ್ವೇದಿ ಅವರು, ಭಯೋತ್ಪಾದನೆಯು ದಕ್ಷಿಣ ಏಷ್ಯಾ ದಲ್ಲಿ ಮಾತ್ರವಲ್ಲದೆ ಪ್ರಪಂಚದಾದ್ಯಂತ ಶಾಂತಿಗೆ ಧಕ್ಕೆ ತರುವ ಪಾಕಿಸ್ತಾನಕ್ಕೆ ಆರ್ಥಿಕ ಉದ್ಯಮವಾಗಿ ಮಾರ್ಪಟ್ಟಿದೆ ಎಂದು ಎತ್ತಿ ತೋರಿಸಿದರು.

# LoC ದಾಟಿದ್ದ ಭಾರತೀಯ ಮಹಿಳೆಯನ್ನು ಬಿಎಸ್‌ಎಫ್ ಒಪ್ಪಿಸಿದ ಪಾಕ್ ರೇಂಜರ್ಸ್

**ನಾಗುರ:** ಕಾರ್ಗಿಲ್‌ನಿಂದ ಪಾಕಿಸ್ತಾನಕ್ಕೆ ಗಡಿ ದಾಟಿದ ನಗರದ 43 ವರ್ಷದ ಮಹಿಳೆಯನ್ನು ವಶಕ್ಕೆ ಪಡೆಯಲು ನಾಗುರ ಪೊಲೀಸರು ತಂಡವನ್ನು ಕಳುಹಿಸಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪಾಕಿಸ್ತಾನ ರೇಂಜರ್‌ಗಳು ಸುನೀತಾ ಜಮ್ ಗಡೆ ಅವರನ್ನು ಗಡಿ ಭದ್ರತಾ ಪಡೆಗಳಿಗೆ ಹಸ್ತಾಂತರಿಸಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ. ಮೇ 4 ರಂದು ಮಹಿಳೆ ತನ್ನ 13 ವರ್ಷದ ಮಗನೊಂದಿಗೆ ನಾಗುರದಿಂದ ಹೊರಟು ಕಾರ್ಗಿಲ್ ತಲುಪಿದರು, ಅಲ್ಲಿಂದ ಮೇ 14 ರಂದು ಪಾಕಿಸ್ತಾನಕ್ಕೆ ದಾಟಿದರು ಎಂದು ಪೊಲೀಸ್ ವಲಯ 5 ರ ಉಪ ಆಯುಕ್ತ ನಿಕೇತನ್ ಕದಮ್ ಹೇಳಿದ್ದಾರೆ. ಶೀಘ್ರದಲ್ಲೇ ಆಕೆಯನ್ನು ಪಾಕಿಸ್ತಾನಿ ಅಧಿಕಾರಿಗಳು ಸೆರೆಹಿಡಿದರು ಎಂದು ಅವರು ಹೇಳಿದರು. ಜಾಮ್ ಗಡೆ ಅಮೃತಸರ ಪೊಲೀಸರ ವಶದಲ್ಲಿದ್ದಾರೆ ಮತ್ತು ಆಕೆಯನ್ನು ಮರಳಿ ಕರೆತರಲು ಒಬ್ಬ ಅಧಿಕಾರಿ ಮತ್ತು ಇಬ್ಬರು ಮಹಿಳಾ ಕಾನ್‌ಸ್ಟೆಬಲ್‌ಗಳನ್ನು ಒಳಗೊಂಡ ತಂಡವನ್ನು ಕಳುಹಿಸಲಾಗಿದೆ ಎಂದು ಅಧಿಕಾರಿ ಹೇಳಿದರು. ಆಕೆ ನಾಗುರ ಪೊಲೀಸರ ವಶದಲ್ಲಿರುವಾಗ ನಾವು ಅವಳನ್ನು ವಿಚಾರಣೆ ಮಾಡುತ್ತೇವೆ. ಅವಳು ಬೇಹುಗಾರಿಕೆಯಲ್ಲಿ ಭಾಗಿಯಾಗಿದ್ದಾಳೆಯೇ ಅಥವಾ ಯಾವುದೇ ಇತರ ಕಾನೂನುಬಾಹಿರ ಚಟುವಟಿಕೆಯಲ್ಲಿ ಭಾಗಿಯಾಗಿದ್ದಾಳೆಯೇ ಎಂದು ನಾವು ಪರಿಶೀಲಿಸಬೇಕಾಗಿದೆ ಎಂದು ಕದಮ್ ಹೇಳಿದರು. ಅಮೃತಸರ ಪೊಲೀಸರು ಶೂನ್ಯ ಎಫ್‌ಐಆರ್ ದಾಖಲಿಸಿದ್ದಾರೆ, ಅವರ ಶಾಶ್ವತ ವಿಳಾಸ ನಗರದಲ್ಲಿರುವುದರಿಂದ ಅದನ್ನು ನಾಗುರದ ಕಪಿಲ್ ನಗರ ಪೊಲೀಸ್ ಠಾಣೆಗೆ ವರ್ಗಾಯಿಸಲಾಗುವುದು ಎಂದು ಅವರು ಹೇಳಿದರು. ಜಮ್‌ಗಡೆ ಅವರ ಪುತ್ರ ಕಾರ್ಗಿಲ್‌ನಿಂದ ಕಣ್ಮರೆಯಾದ ನಂತರ ಮಕ್ಕಳ ಕಲ್ಯಾಣ ಸಮಿತಿ ಆರೈಕೆಗೆ ಒಳಗಾಗಿದ್ದರು, ಅವರನ್ನು ಶೀಘ್ರದಲ್ಲೇ ನಾಗುರಕ್ಕೆ ಕರೆತರಲಾಗುವುದು ಎಂದು ಅಧಿಕಾರಿ ತಿಳಿಸಿದ್ದಾರೆ.



# ಪಾಕ್ ಸೇನಾ ಮುಖ್ಯಸ್ಥ ಒಬ್ಬ ಜೋಕರ್: ಓವೈಸಿ

**ಕುವೈತ್:** ಪಾಕಿಸ್ತಾನ ಸೇನಾ ಮುಖ್ಯಸ್ಥ ಅಸಿಮ್ ಮುನೀರ್ ಅವರನ್ನು ಒಬ್ಬ ಜೋಕರ್ ಎಂದು ಸಂಸದ ಅಸಾದುದ್ದೀನ್ ಓವೈಸಿ ಹಿಗ್ಗಾಮುಗ್ಗ ತರಾಟೆಗೆ ತೆಗೆದುಕೊಂಡಿದ್ದು, ಸರಿಯಾಗಿ ನಕಲನ್ನೇ ಮಾಡಲು ಬಾರದಿರುವವರು ಭಾರತದ ಜೊತೆ ಸ್ಪರ್ಧೆಗಿಳಿಯಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದ್ದಾರೆ. ಕುವೈತ್‌ನಲ್ಲಿರುವ ಭಾರತೀಯ ವಲಸಿಗರೊಂದಿಗೆ ನಡೆದ ಸಂವಾದದಲ್ಲಿ, ಅಸಾದುದ್ದೀನ್ ಓವೈಸಿ ಅವರು ಪಾಕಿಸ್ತಾನದ ನಕಲಿ ಅಜೆಂಡಾಗಳನ್ನು ಎಳೆಎಳೆಯಾಗಿ ಬಿಚ್ಚಿಟ್ಟರು.

ಪಾಕಿಸ್ತಾನದ ಭೂಸೇನಾ ಮುಖ್ಯಸ್ಥ ಜನರಲ್ ಅಸೀಮ್ ಮುನೀರ್ ಅವರು, ಪಾಕಿಸ್ತಾನ ಪ್ರಧಾನಮಂತ್ರಿ ಶೆಹಬಾಜ್ ಷರೀಫ್ ಅವರಿಗೆ, ಆಪರೇಷನ್ ಬನ್ಯಾನ್ ನಕಲಿ ಫೋಟೋ ಉಡುಗೊರೆ ನೀಡಿದ ಪ್ರಸಂಗವನ್ನು ಅಸಾದುದ್ದೀನ್ ಓವೈಸಿ ವ್ಯಂಗ್ಯವಾಡಿದರು. ಪಾಕಿಸ್ತಾನಿ ಸೇನಾ ಮುಖ್ಯಸ್ಥರು ಪಾಕಿಸ್ತಾನಿ ಪ್ರಧಾನಿ ಶೆಹಬಾಜ್ ಷರೀಫ್ ಅವರಿಗೆ ಒಂದು ಫೋಟೋವನ್ನು ಉಡುಗೊರೆಯಾಗಿ ನೀಡಿದ್ದಾರೆ. ಈ ಮೂರ್ಖ ಜೋಕರ್‌ಗಳು ಭಾರತದೊಂದಿಗೆ ಸ್ಪರ್ಧಿಸಲು ಬಯಸುತ್ತಾರೆ, ಅವರು 2019ರ ಚೀನಾದ ಸೇನಾ ಕವಾಯತಿನ ಛಾಯಾಚಿತ್ರವನ್ನು ನೀಡಿ ಅದು ಭಾರತದ ವಿರುದ್ಧದ ವಿಜಯ ಎಂದು ಹೇಳಿಕೊಂಡಿದ್ದಾರೆ. ಅವರಿಗೆ ಸರಿಯಾದ ಛಾಯಾಚಿತ್ರವನ್ನು ಸಹ ನೀಡಲು ಸಾಧ್ಯವಿಲ್ಲ. ನಕಲ್ ಕರ್ನೆಕೆ ಲಿಯೇ



ಅಕಲ್ ಚಾಹಿಯೇ, ಇಂಕೆ ಪಾಸ್ ಅಕಲ್ ಭೀ ನಹೀ ಹೈ ಎಂದು ಕುಹಕವಾಡಿದರು. ಡಿ. 2023ರಲ್ಲಿ ಭಾರತವು ವಿಶ್ವಸಂಸ್ಥೆಯ ನಿರ್ಬಂಧ ಸಮಿತಿಗೆ, ದಿ ರೆಸಿಸ್ಟನ್ಸ್ ಫೋರ್ಸ್ ಲಷ್ಕರ್-ಎ-ತೋಯ್ಬಾಯ ಅಂಗ ಸಂಸ್ಥೆ ಎಂಬುದನ್ನು ಮನವರಿಕೆ ಮಾಡಿಕೊಟ್ಟಿದ್ದೇವು. ಮೇ 2024ರಲ್ಲಿ ಈ ಸಂಘಟನೆ ಭಾರತದ ಮೇಲೆ ದಾಳಿ ಮಾಡಬಹುದಾದ ಪಾಕಿಸ್ತಾನ ಮೂಲದ ಭಯೋತ್ಪಾದಕ ಗುಂಪು ಎಂದು ಸ್ಪಷ್ಟಪಡಿಸಿದ್ದೇವು. ಆದರೆ ಭದ್ರತಾ ಮಂಡಳಿಯ ಹೇಳಿಕೆಯಲ್ಲಿ ಟಿಆರ್‌ಎಫ್ ಹೆಸರಿನ ಉಲ್ಲೇಖವಿರದಂತೆ ಪಾಕಿಸ್ತಾನ ಪ್ರಯತ್ನಪಟ್ಟಿತ್ತು ಎಂದು ಎಐಎಂಐಎಂ ಸಂಸದ ಗುಡುಗಿದರು. ಮುಂದುವರೆದು, ಪಹಲ್ಗಾಮ್ ದಾಳಿಯ ಹೊಣೆ ಹೊತ್ತುಕೊಂಡಿರುವ ಟಿಆರ್‌ಎಫ್, 4 ಹೇಳಿಕೆಗಳನ್ನು ಬಿಡುಗಡೆ ಮಾಡಿದೆ. ಪಾಕಿಸ್ತಾನಿ ಕಂಟೋನೆಂಟ್ ಪ್ರದೇಶದ ಬಳಿಯೇ, ಟಿಆರ್‌ಎಫ್ ಸಭೆ ನಡೆಸಿರುವುದನ್ನು ನಮ್ಮ ಗುಪ್ತಚರ ಸಂಸ್ಥೆಗಳು ಖಚಿತಪಡಿಸಿವೆ. ಇದು ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಪಾಕಿಸ್ತಾನದ ಸ್ಪಷ್ಟ ಒಳಗೊಳ್ಳುವಿಕೆಯನ್ನು ತೋರಿಸುತ್ತದೆ ಎಂದು ಅಸಾದುದ್ದೀನ್ ಓವೈಸಿ ತೀವ್ರವಾಗಿ ತರಾಟೆಗೆ ತೆಗೆದುಕೊಂಡರು.

**ಹೋಲಿಕೆ ಬೇಡ:** ಇನ್ನು ಪಾಕಿಸ್ತಾನವು ಭಾರತೀಯ ಮುಸ್ಲಿಮರ ಬಗ್ಗೆ ಚಿಂತಿಸುವ ಅಗತ್ಯವಿಲ್ಲ ಎಂದು ಹೇಳಿರುವ ಅಸಾದುದ್ದೀನ್ ಓವೈಸಿ, ಭಾರತೀಯ ಮುಸ್ಲಿಮರೊಂದಿಗೆ ಪಾಕಿಸ್ತಾನ ತನ್ನನ್ನು ಹೋಲಿಕೆ ಮಾಡಿಕೊಂಡರೆ ಪರಿಣಾಮ ನೆಟ್ಟಗಿರುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ. ಭಾರತೀಯ ಮುಸ್ಲಿಮರು ಪಾಕಿಸ್ತಾನದವರಿಗಿಂತ ಹೆಚ್ಚು ಪ್ರಾಮಾಣಿಕರು ಎಂದು ಎಐಎಂಐಎಂ ಸಂಸದರು ನೆರೆ ರಾಷ್ಟ್ರಕ್ಕೆ ಸೂಕ್ತ ತಿರುಗೇಟು ನೀಡಿದರು.

# ವಿದ್ಯಾರ್ಥಿನಿಗೆ ಲೈಂಗಿಕ ಕಿರುಕುಳ ನೀಡಿದ ಕಾಮುಕ ಪ್ರಾಧ್ಯಾಪಕ ಅಮಾನತು

**ಮುಜಫರ್‌ನಗರ:** ಸರ್ಕಾರಿ ಅನುದಾನಿತ ಛೋಟು ರಾಮ್ ಪದವಿ ಕಾಲೇಜಿನ ಪ್ರಾಧ್ಯಾಪಕರೊಬ್ಬರನ್ನು ವಿದ್ಯಾರ್ಥಿನಿಯೊಬ್ಬರಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪದ ಮೇಲೆ ಅಮಾನತುಗೊಳಿಸಲಾಗಿದೆ. ಬಿಎಸ್‌ಸಿ ವಿದ್ಯಾರ್ಥಿನಿಯೊಬ್ಬಳು ಮೇ 24 ರಂದು ಕಾಲೇಜಿನ ಸಸ್ಯ ರೋಗಶಾಸ್ತ್ರ ವಿಭಾಗದ ಪ್ರಾಧ್ಯಾಪಕ ದುಶ್ಯಂತ್ ಕುಮಾರ್ ವಿರುದ್ಧ ಲೈಂಗಿಕ ಕಿರುಕುಳದ ಆರೋಪ ಹೊರಿಸಿದ್ದರು.

ತುರ್ತು ಸಭೆಯ ನಂತರ ಕುಮಾರ್ ಅವರನ್ನು ಸೇವೆಯಿಂದ ಅಮಾನತುಗೊಳಿಸಲಾಗಿದೆ ಎಂದು ಕಾಲೇಜು ಆಡಳಿತ ಕಾರ್ಯದರ್ಶಿ ಶರದ್ ಕುಮಾರ್ ವರದಿಗಾರರಿಗೆ ತಿಳಿಸಿದರು. ಘಟನೆಯ ಬಗ್ಗೆ ಉಪ ಸಮಿತಿ ತನಿಖೆ ನಡೆಸಲಿದೆ ಎಂದು ಅವರು ಹೇಳಿದರು. ಪೊಲೀಸ್ ಕಸ್ಟಡಿಯಲ್ಲಿರುವ ಕುಮಾರ್ ಅವರನ್ನು ಮುಖ್ಯ ನ್ಯಾಯಾಂಗ ಮ್ಯಾಜಿಸ್ಟ್ರೇಟ್ ಕವಿತಾ ಅಗರ್ವಾಲ್ ಜಾಮೀನು ನಿರಾಕರಿಸಿದರು.

ಪ್ರಾಸಿ ಕ್ಯೂಷನ್ ಅಧಿಕಾರಿ ಕೆ.ಸಿ. ಮೋರಿ ಅವರ ಪ್ರಕಾರ, ವಿದ್ಯಾರ್ಥಿನಿಯೊಬ್ಬಳಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪದ ಮೇಲೆ ಕುಮಾರ್ ಅವರನ್ನು ಮೇ 24 ರಂದು ಬಂಧಿಸಲಾಯಿತು. ಅಂದಿನಿಂದ ಪೊಲೀಸರು ಅವರ ವಿರುದ್ಧ ಇನ್ನೂ ಎರಡು ವಿಭಾಗಗಳನ್ನು ಸೇರಿಸಿದ್ದಾರೆ. ಸೆಕ್ಷನ್ 64, ಸೆಕ್ಷನ್ 62 (ಕೆಲವು ಅಪರಾಧಗಳನ್ನು ಮಾಡಲು ಪ್ರಯತ್ನ) ಮೂಲತಃ, ಕುಮಾರ್ ವಿರುದ್ಧ ಬಿಎನ್‌ಎಸ್ ಸೆಕ್ಷನ್ 75 (ಲೈಂಗಿಕ ಕಿರುಕುಳ), 352 (ಶಾಂತಿ ಉಲ್ಲಂಘನೆಯನ್ನು ಪ್ರಚೋದಿಸುವ ಉದ್ದೇಶದಿಂದ ಉದ್ದೇಶಪೂರ್ವಕ ಅವಮಾನ) ಮತ್ತು 351 (ಕ್ರಿಮಿನಲ್ ಬೆದರಿಕೆ) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

# ಹೊಸ ಕೊರೋನಾ ತಳಿ ಬಗ್ಗೆ ಆತಂಕ ಬೇಡ

**ನವದೆಹಲಿ:** ಇತ್ತೀಚೆಗೆ ಸಿಂಗಾಪುರ, ಭಾರತದಲ್ಲಿ ಕಾಣಿಸಿಕೊಂಡಿರುವ ಕೊರೋನಾ ಸೋಂಕಿನ ಹೊಸ ತಳಿಯ ಲಕ್ಷಣಗಳು ವೈರಲ್ ಜ್ವರದ ಮಾದರಿಯಲ್ಲಿವೆ ಎಂದು ದೆಹಲಿ ಆರೋಗ್ಯ ಸಚಿವ ಪಂಕಜ್ ಸಿಂಗ್ ಹೇಳಿದ್ದಾರೆ.



ನಗರದಲ್ಲಿ ಕಂಡುಬಂದಿರುವ ಪ್ರಕರಣಗಳನ್ನು ಗಮನಿಸಿದರೆ ಲಕ್ಷಣಗಳು ಸೌಮ್ಯವಾಗಿವೆ ಎಂದು ಹೇಳಿದ್ದಾರೆ. ಯಾರೂ ಕೂಡ ಭಯ ಪಡುವ ಅಗತ್ಯವಿಲ್ಲ, ಕೊರೋನಾ ಸೋಂಕಿತರಲ್ಲಿ ನೆಗಡಿ, ಜ್ವರ, ಕೆಮ್ಮು, ಕಫದಂತಹ ಲಕ್ಷಣಗಳು ಕಂಡುಬಂದಿವೆ. ದೆಹಲಿಯಲ್ಲಿ ಇದುವರೆಗೆ 104 ಪ್ರಕರಣಗಳು ಕಂಡುಬಂದಿವೆ, ದೇಶದಲ್ಲಿ 1000 ಪ್ರಕರಣಗಳು ವರದಿಯಾಗಿವೆ. ಕೊರೋನಾ ವೈರಸ್‌ನ ಹೊಸ ತಳಿ .1 ಆತಂಕ ಹುಟ್ಟಿಸುತ್ತಿದೆ. ಸಿಂಗಾಪುರ, ಹಾಂಕಾಂಗ್‌ನಲ್ಲಿ ತಲ್ಲಣ ಎಬ್ಬಿಸಿರುವ ಕೊರೋನಾ ಹೊಸ ತಳಿ ಭಾರತದಲ್ಲೂ ಆತಂಕ ಸೃಷ್ಟಿಸಿದೆ. ಭಯ ಇಲ್ಲದಿದ್ದರೂ ಜನರು ತಮ್ಮ ಎಚ್ಚರಿಕೆಯಲ್ಲಿ ತಾವಿರಬೇಕು ಎಂದು ಸೂಚನೆ ನೀಡಿದ್ದಾರೆ.

ಆದರೆ ಆಸ್ಪತ್ರೆಯಲ್ಲಿ ಔಷಧಗಳು, ಬೆಡ್‌ಗಳು, ಆಕ್ಸಿಜನ್, ಇನ್ನಿತರೆ ವೈದ್ಯಕೀಯ ಉಪಕರಣಗಳನ್ನು ಸಿದ್ಧವಿಟ್ಟುಕೊಳ್ಳುವಂತೆ ಸೂಚಿಸಿದ್ದೇವೆ. ಎಂಥಾ ತುರ್ತು ಪರಿಸ್ಥಿತಿ ಉದ್ಭವವಾದರೂ ಗಾಬರಿಗೊಳ್ಳದಂತೆ ಎಲ್ಲವನ್ನೂ ಸಿದ್ಧಪಡಿಸಿಕೊಳ್ಳ ಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ. ಕಳೆದ ಒಂದು ವಾರದಲ್ಲಿ, ಕೇರಳದಲ್ಲಿ ಅತಿ ಹೆಚ್ಚು 335 ಪ್ರಕರ ಣಗಳು, ಮಹಾರಾಷ್ಟ್ರದಲ್ಲಿ 153, ದೆಹಲಿಯಲ್ಲಿ 99, ಗುಜರಾತ್‌ನಲ್ಲಿ 76 ಮತ್ತು ಕರ್ನಾಟಕದಲ್ಲಿ 80 ಪ್ರಕರಣಗಳು ವರದಿಯಾಗಿವೆ. ಆರೋಗ್ಯ, ಕುಟುಂಬ ಕಲ್ಯಾಣ ಸಚಿವಾಲಯದ ಪ್ರಕಾರ, ಮೇ 26 ರಂದು ಬೆಳಗ್ಗೆ 8:00 ಗಂಟೆಗೆ ದೇಶದಲ್ಲಿ ಸಕ್ರಿಯ ಕೊರೋನಾ ಪ್ರಕರಣಗಳ ಸಂಖ್ಯೆ 1009 ಆಗಿದೆ.

ಕೇರಳದಲ್ಲಿ ಅತಿ ಹೆಚ್ಚು 403 ಕೊರೋನಾ ಪ್ರಕರಣಗಳು ದಾಖಲಾಗಿವೆ. ಮುಂಬೈನಲ್ಲಿ 209 ಮತ್ತು ದೆಹಲಿಯಲ್ಲಿ 104 ಪ್ರಕರಣಗಳು ದಾಖಲಾಗಿವೆ. ಈ ನಗರಗಳ ನಂತರ ಗುಜರಾತ್ ಇದ್ದು, ಅಲ್ಲಿ 83 ಪ್ರಕರಣಗಳು ದಾಖಲಾಗಿವೆ. ಕರ್ನಾಟಕದಲ್ಲಿ 80, ಉತ್ತರ ಪ್ರದೇಶದಲ್ಲಿ 15 ಮತ್ತು ಪಶ್ಚಿಮ ಬಂಗಾಳದಲ್ಲಿ 12 ಪ್ರಕರಣಗಳು ವರದಿಯಾಗಿವೆ.

## ಆಪರೇಷನ್ ಸಿಂಧೂರದ ಗಾಯ ತೋರಿಸಿದ ಶೆಹಬಾಜ್ ಷರೀಫ್; ಖಮೇನಿ ಕ್ಯಾ ಬೋಲೆ?

# ಪಾಕಿಸ್ತಾನ ಬಯಸಿದ ಪ್ರತಿಕ್ರಿಯೆ ನೀಡಲು ನಿರಾಕರಿಸಿದ ಇರಾನ್

**ಟೆಹ್ರಾನ್:** ಕಾಶ್ಮೀರದ ಪಹಲ್ಗಾಮ್‌ನಲ್ಲಿ ಇತ್ತೀಚೆಗೆ ನಡೆದ ಭಯೋತ್ಪಾದಕ ದಾಳಿಯ ನಂತರ ಪ್ರಾದೇಶಿಕವಾಗಿ ಸಂಕೀರ್ಣ ಪರಿಸ್ಥಿತಿಗಳು ನೆಲೆಗೊಂಡಿರುವ ಹಿನ್ನೆಲೆಯಲ್ಲಿ, ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಅವರು ಇರಾನ್‌ಗೆ ಭೇಟಿ ನೀಡಿ, ಬೆಂಬಲವನ್ನು ಕ್ರೋಢೀಕರಿಸಲು ಪ್ರಯತ್ನಿಸಿದ್ದಾರೆ. ಆದರೆ, ಟೆಹ್ರಾನ್‌ನಿಂದ ಬಂದಿರುವ ಅಳೆದು ತೂಗಿದ ಪ್ರತಿಕ್ರಿಯೆ ಕೇಳಿ ಶೆಹಬಾಜ್ ಷರೀಫ್ ಬೇಸರಗೊಂಡಿದ್ದಾರೆ.

ಶೆಹಬಾಜ್ ಷರೀಫ್ ಅವರು ಇರಾನ್ ಪರಮೋಚ್ಛ ನಾಯಕ ಆಯತೊಲ್ಲಾ ಅಲಿ ಖಮೇನಿ ಮತ್ತು ಅಧ್ಯಕ್ಷ ಇಬ್ರಾಹಿಂ ರೈಸಿ ಅವರನ್ನು ಪ್ರತ್ಯೇಕವಾಗಿ ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ. ಆದರೆ ಇಬ್ಬರೂ ನಾಯಕರು ಮಾತು ಕತೆಯಲ್ಲಿ ಪಾಕಿಸ್ತಾನದ ಪರವಾಗಿ ಧ್ವನಿ ಎತ್ತುವ ಯಾವುದೇ ಪ್ರಸ್ತಾಪ ಮಾಡದಿರುವುದು, ಪ್ರಧಾನಿ ಶೆಹಬಾಜ್ ಷರೀಫ್ ಅವರಲ್ಲಿ ನಿರಾಸೆ ಮೂಡಿಸಿದೆ. ಇತ್ತೀಚೆಗೆ ಭಾರತ ಮತ್ತು ಪಾಕಿಸ್ತಾನ ನಡುವೆ ಇರಾನ್ ಮಧ್ಯಸ್ಥಿಕೆ ವಹಿಸಲು ಸಿದ್ಧ ಎಂದು ಹೇಳಿದ್ದನ್ನು ಇಲ್ಲಿ ಸ್ಮರಿಸಬಹುದು. ಇರಾನ್, ಪಾಕಿಸ್ತಾನದ ನಡುವಿನ ದ್ವಿಪಕ್ಷೀಯ ಸಂಬಂಧ, ಪ್ರಾದೇಶಿಕ ಭದ್ರತೆ ಮತ್ತು ಆರ್ಥಿಕ ಸಹಕಾರದಂತಹ ವಿಷಯಗಳ ಕುರಿತು, ಶೆಹಬಾಜ್ ಷರೀಫ್ ಅವರು ಇರಾನ್ ಉನ್ನತ ನಾಯಕತ್ವದೊಂದಿಗೆ ಚರ್ಚೆ ನಡೆಸಿದ್ದಾರೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತ ಮತ್ತು ಪಾಕಿಸ್ತಾನದ ನಡುವೆ ಉದ್ವಿಗ್ನತೆ ಹೆಚ್ಚಿರುವ ಸಮಯದಲ್ಲಿ ಈ ಭೇಟಿ ನಡೆದಿರುವುದು ಮಹತ್ವ ಪಡೆದುಕೊಂಡಿದೆ.



**ಸಪ್ಪೆ ಮೋರೆ ಹಾಕಿದ ಷರೀಫ್**

ಭಾರತ ಮತ್ತು ಪಾಕಿಸ್ತಾನ ನಡುವಿನ ಉದ್ವಿಗ್ನತೆಗೆ ಸಂಬಂಧಿಸಿದಂತೆ ಇರಾನ್ ತನ್ನ ಸಾಂಪ್ರದಾಯಿಕ ನಿಲುವನ್ನು ಪುನರುಚ್ಚರಿಸಿದ್ದು, ಇತರ ದೇಶಗಳ ಆಂತರಿಕ ವ್ಯವ ಹಾರಗಳಲ್ಲಿ ಹಸ್ತಕ್ಷೇಪ ಮಾಡದಿರುವುದು ಮತ್ತು ನೆರೆ ರಾಷ್ಟ್ರಗಳ ಸಾರ್ವಭೌಮತ್ವಕ್ಕೆ ಗೌರವ ನೀಡುವುದಾಗಿ ಸ್ಪಷ್ಟಪಡಿಸಿದೆ. ಇದು ಪಾಕಿಸ್ತಾನದ ನಿರೀಕ್ಷೆಗಳಿಗೆ ಸಂಪೂರ್ಣವಾಗಿ ಸ್ಪಂದಿಸದ, ಜಾಗರೂಕತೆಯಿಂದ ಕೂಡಿದ ಉತ್ತರವೆಂದು ವಿಶ್ಲೇಷಿಸಲಾಗುತ್ತಿದೆ. ಶೆಹಬಾಜ್ ಷರೀಫ್ ಅವರ ಭೇಟಿಯು ಇತ್ತೀಚೆಗೆ ಇರಾನ್ ಮತ್ತು ಪಾಕಿಸ್ತಾನದ ನಡುವೆ ನಡೆದ ಗಡಿ ದಾಳಿ-ಪ್ರತಿದಾಳಿಗಳಿಂದಾಗಿ ಹದಗೆಟ್ಟಿದ್ದ ಸಂಬಂಧವನ್ನು ಸರಿಪಡಿಸುವ ಮತ್ತು ಪ್ರಾದೇಶಿಕವಾಗಿ ರಾಜತಾಂತ್ರಿಕ ಬೆಂಬಲವನ್ನು ಗಳಿಸುವ ಪಾಕಿಸ್ತಾನದ ಪ್ರಯತ್ನದ ಭಾಗವೆಂದು ಪರಿಗಣಿಸಲಾಗಿದೆ. ಪಾಕಿಸ್ತಾನವು ಪ್ರಸ್ತುತ ಆರ್ಥಿಕ, ರಾಜಕೀಯ ಸವಾಲುಗಳನ್ನು ಎದುರಿಸುತ್ತಿದ್ದು, ಅಂತಾರಾಷ್ಟ್ರೀಯ ಮಟ್ಟದಲ್ಲಿ ಮಿತ್ರರನ್ನು ಹುಡುಕುವ ಪ್ರಯತ್ನದಲ್ಲಿದೆ.

ಇದೇ ಕಾರಣಕ್ಕೆ ಶೆಹಬಾಜ್ ಷರೀಫ್ ಟರ್ಕಿ ಪ್ರವಾಸ ಮುಗಿಸಿ ಇದೀಗ ಇರಾನ್‌ಗೆ ಭೇಟಿ ನೀಡಿದ್ದಾರೆ. ಆದಾಗ್ಯೂ, ಇರಾನ್‌ನ ಪ್ರತಿಕ್ರಿಯೆಯು ಪಾಕಿಸ್ತಾನಕ್ಕೆ ಸಂಪೂರ್ಣ ಬೆಂಬಲ ನೀಡುವ ಬದಲು, ಪ್ರಾದೇಶಿಕ ಸ್ಥಿರತೆ ಮತ್ತು ಸಹಕಾರದ ಮೇಲೆ ಹೆಚ್ಚು ಗಮನಹರಿಸಿದೆ ಎಂಬುದನ್ನು ಸೂಚಿಸುತ್ತದೆ. ಕಾಶ್ಮೀರ ವಿಷಯದಲ್ಲಿ ಅಥವಾ ಭಾರತದೊಂದಿಗಿನ ತನ್ನ ಸಂಬಂಧಗಳ ವಿಚಾರದಲ್ಲಿ, ಪಾಕಿಸ್ತಾನಕ್ಕೆ ನಿರೀಕ್ಷಿತ ಮಟ್ಟದ ಬಲವಾದ ಬೆಂಬಲ ಇರಾನ್‌ನಿಂದ ವ್ಯಕ್ತವಾಗಿಲ್ಲ ಎಂಬುದು ಈ ಭೇಟಿಯಿಂದ ಸ್ಪಷ್ಟವಾಗಿದೆ. ಒಟ್ಟಿನಲ್ಲಿ ಶೆಹಬಾಜ್ ಷರೀಫ್ ಅವರ ಇರಾನ್ ಭೇಟಿಯು ಪಾಕಿಸ್ತಾನದ ರಾಜತಾಂತ್ರಿಕ ಪ್ರಯತ್ನಗಳ ಮುಂದುವರಿಕೆಯಾಗಿದ್ದರೂ, ಇರಾನ್‌ನಿಂದ ದೊರೆತ ಸೀಮಿತ ಮತ್ತು ಜಾಗರೂಕ ಪ್ರತಿಕ್ರಿಯೆಯು, ಪಾಕಿಸ್ತಾನ ತನ್ನ ಪ್ರಾದೇಶಿಕ ನೀತಿಗಳನ್ನು ಮರುಪರಿಶೀಲಿಸುವ ಅಗತ್ಯವನ್ನು ಒತ್ತಿ ಹೇಳುವಂತಿದೆ.

### ನೆರೆ ರಾಷ್ಟ್ರಗಳ ಪ್ರವಾಸ

**ಭಾರತದ ಆಪರೇಷನ್ ಸಿಂಧೂರದ ಹೊಡೆತ ತಿಂದಿರುವ ಪಾಕಿಸ್ತಾನ ಪ್ರಧಾನಮಂತ್ರಿ, ಶೆಹಬಾಜ್ ಷರೀಫ್, ಈ ಹೊಡೆತದ ಗಾಯಗಲನ್ನು ತೋರಿಸಲು ನೆರೆ ರಾಷ್ಟ್ರಗಳ ಪ್ರವಾಸ ಆರಂಭಿಸಿದ್ದಾರೆ. ಈಗಾಗಲೇ ಟರ್ಕಿ ಪ್ರವಾಸ ಮುಗಿಸಿರುವ ಷರೀಫ್, ಇದೀಗ ಇರಾನ್‌ಗೂ ಭೇಟಿ ನೀಡಿದ್ದಾರೆ. ಭಾರತ-ಪಾಕಿಸ್ತಾನ ಸಂಘರ್ಷಕ್ಕೆ ಸಂಬಂಧಿಸಿದಂತೆ ಇರಾನ್‌ನ ಸಾಂಪ್ರದಾಯಿಕ ನಿಲುವನ್ನೇ ಪುನರುಚ್ಚಿಸಿರುವ ಪರಮೋಚ್ಚ ನಾಯಕ ಆಯತೊಲ್ಲಾ ಖಮೇನಿ, ಶಾಂತಿ ಮಾತುಕತೆ ಮೂಲಕ ಸಂಘರ್ಷವನ್ನು ಕೊನೆಗಾಣಿಸುವಂತೆ ಶೆಹಬಾಜ್ ಷರೀಫ್ ಅವರಿಗೆ ಸಲಹೆ ನೀಡಿದ್ದಾರೆ.**



## ಎದುರಾಳಿಗಳ ಬಲಾಬಲ ತಿಳಿಯಲು
# ಯುವರಾಜ್ ಹಿಂದೆ ಬಿದ್ದ ಗುಜರಾತ್

ಯುವಿಗೆ ಯೂಸ ಜಾಕ್ಸ್ ಸಿಗಲಿದೆ

ಐಪಿಎಲ್ 2025ರ ಪ್ಲೇಆಫ್ ಸುತ್ತು ಆರಂಭಕ್ಕೂ ಮೊದಲು ಗುಜರಾತ್ ಟೈಟನ್ಸ್ ಸಿಕ್ಸರ್ ಕಿಂಗ್ ಯುವರಾಜ್ ಸಿಂಗ್‌ರನ್ನು ತನ್ನ ತಂಡಕ್ಕೆ ಸೇರಿಸಿಕೊಂಡಿದೆ ಎಂಬ ಸುದ್ದಿ ಹರಿದಾಡುತ್ತಿದೆ. ಐಪಿಎಲ್‌ನಲ್ಲಿ ಹಲವು ತಂಡಗಳಿಗೆ ಆಡಿರುವ ಯುವರಾಜ್ ಸಿಂಗ್ ಇದೀಗ ಗುಜರಾತ್ ತಂಡದಲ್ಲಿ ಕಾಣಿಸಿಕೊಂಡಿದ್ದಾರೆ. ಯುವರಾಜ್ ಸಿಂಗ್ ಐಪಿಎಲ್‌ನಲ್ಲಿ ಪಂಜಾಬ್ ಕಿಂಗ್ಸ್, ಮುಂಬೈ ಇಂಡಿಯನ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ಪರ ಆಡಿದ್ದಾರೆ. ಅಂತಹ ಪರಿಸ್ಥಿತಿಯಲ್ಲಿ, ಅವರಿಗೆ ಈ ತಂಡಗಳ ಸಾಮರ್ಥ್ಯ ಮತ್ತು ದೌರ್ಬಲ್ಯಗಳು ತಿಳಿದಿವೆ. ಹೀಗಾಗಿ ಗುಜರಾತ್ ಪ್ಲೇಆಫ್ ಪಂದ್ಯಗಳಲ್ಲಿ ಯುವರಾಜ್ ಅವರ ಅನುಭವವನ್ನು ಬಳಸಿಕೊಳ್ಳಲು ಮುಂದಾಗಿದೆ. ಅದಕ್ಕಾಗಿಯೇ ತಂಡದ ಕೋಚ್ ಆಶಿಶ್ ನೆಹ್ರಾ, ಯುವರಾಜ್ ಸಿಂಗ್ ಅವರನ್ನು ತಂಡಕ್ಕೆ ಸೇರಿಸಿಕೊಳ್ಳಲು ಉತ್ಸುಕರಾಗಿದ್ದಾರೆ. ಇದಕ್ಕೆ ಪೂರಕವಾಗಿ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಫೋಟೋದಲ್ಲಿ ಶುಭಮನ್ ಗಿಲ್ ಜೊತೆ ಯುವರಾಜ್ ಸಿಂಗ್ ಕಾಣಿಸಿಕೊಂಡಿರುವುದು ಈ ಸುದ್ದಿಗೆ ಪುಷ್ಟಿ ನೀಡಿದೆ. ಟಿ20 ಕ್ರಿಕೆಟ್‌ನಲ್ಲಿ 6 ಎಸೆತಗಳಲ್ಲಿ 6 ಸಿಕ್ಸರ್ ಬಾರಿಸಿದ್ದ ಯುವರಾಜ್ ಸಿಂಗ್, ಐಪಿಎಲ್‌ನಲ್ಲಿ ಪಂಜಾಬ್ ಕಿಂಗ್ಸ್, ಮುಂಬೈ ಇಂಡಿಯನ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ಪರ ಆಡಿದ್ದಾರೆ. ಈ ಸೀಸನ್‌ನಲ್ಲಿ ಮೂರೂ ತಂಡಗಳು ಪ್ಲೇಆಫ್‌ಗೆ ತಲುಪಿವೆ. ಇಂತಹ ಪರಿಸ್ಥಿತಿಯಲ್ಲಿ, ಗುಜರಾತ್ ಟೈಟನ್ಸ್ ತಂಡವು ಯುವರಾಜ್ ಸಿಂಗ್ ಅವರನ್ನು ತಮ್ಮ ತಂಡಕ್ಕೆ ಸೇರಿಸಿಕೊಂಡು ಈ ಮೂರು ತಂಡಗಳ ಶಕ್ತಿ ಮತ್ತು ದೌರ್ಬಲ್ಯಗಳನ್ನು ತಿಳಿದುಕೊಳ್ಳಲು ಯೋಜನೆ ರೂಪಿಸಿದೆ.

ಎರಡು ಪಂದ್ಯಗಳಲ್ಲಿ ಜಿಟಿಗೆ ಸೋಲು

ಗುಜರಾತ್ ಟೈಟನ್ಸ್ ತನ್ನ ಇನ್ಸ್ಟಾಗ್ರಾಮ್ ಖಾತೆಯಲ್ಲಿ ಯುವರಾಜ್ ಸಿಂಗ್ ಮತ್ತು ಶುಭ್ಮನ್ ಗಿಲ್ ಅವರ ಫೋಟೋವನ್ನು ಪೋಸ್ಟ್ ಮಾಡಿದೆ. ಪ್ಲೇಆಫ್‌ಗೂ ಮುನ್ನ, ಗುಜರಾತ್ ಟೈಟನ್ಸ್ ಲೀಗ್ ಪಂದ್ಯಗಳಲ್ಲಿ ಸತತ ಎರಡು ಪಂದ್ಯಗಳಲ್ಲಿ ಸೋಲನ್ನು ಎದುರಿಸಬೇಕಾಯಿತು.

ಇದಾದ ನಂತರ, ತಂಡದ ಕೋಚ್ ಆಶಿಶ್ ನೆಹ್ರಾ, ಯುವರಾಜ್ ಸಿಂಗ್‌ರನ್ನು ತಂಡಕ್ಕೆ ಕರೆತಂದಿದ್ದಾರೆ ಎನ್ನಲಾಗುತ್ತಿದೆ.



ಗುಜರಾತ್ ಟೈಟನ್ಸ್ ತಂಡವು, ಲಕ್ನೋ ಸೂಪರ್ ಜೈಂಟ್ಸ್ ಮತ್ತು ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ಸೋಲನ್ನು ಅನುಭವಿಸಿತು. ಲಕ್ನೋ ಸೂಪರ್ ಜೈಂಟ್ಸ್ ತಂಡವು ಜಿಟಿ ತಂಡವನ್ನು 33 ರನ್‌ಗಳಿಂದ ಸೋಲಿಸಿದರೆ, ಚೆನ್ನೈ ಸೂಪರ್ ಕಿಂಗ್ಸ್ ತಂಡವು ತನ್ನ ಕೊನೆಯ ಲೀಗ್ ಪಂದ್ಯದಲ್ಲಿ ಗುಜರಾತ್ ತಂಡವನ್ನು 83 ರನ್‌ಗಳಿಂದ ಸೋಲಿಸಿತು. ಈ ಎರಡು ಸೋಲುಗಳ ನಂತರ, ತಂಡದ ಆಡಳಿತ ಮಂಡಳಿಗೆ ತಲೆನೋವು ಶುರುವಾಗಿದೆ. ಹೀಗಾಗಿ ಪ್ಲೇಆಫ್‌ಗೂ ಮುನ್ನ ತಂಡದ ಎಲ್ಲಾ ದೌರ್ಬಲ್ಯಗಳ ಮೇಲೆ ಕೆಲಸ ಮಾಡಲು ಪ್ರಾರಂಭಿಸಿರುವ ಮ್ಯಾನೇಜ್‌ಮೆಂಟ್ ಇದನ್ನು ಗಮನದಲ್ಲಿಟ್ಟುಕೊಂಡು ಯುವರಾಜ್ ಸಿಂಗ್‌ಗೆ ಆಹ್ವಾನ ನೀಡಿದೆ.

ಆದರೆ, ಪ್ಲೇಆಫ್‌ನಲ್ಲಿ ಗುಜರಾತ್ ಯಾವ ತಂಡವನ್ನು ಎದುರಿಸಲಿದೆ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ಮೇ 27, ಮಂಗಳವಾರ ಆರ್‌ಸಿಬಿ ಮತ್ತು ಎಲ್‌ಎಸ್‌ಜಿ ನಡುವಿನ ಕೊನೆಯ ಲೀಗ್ ಪಂದ್ಯದ ನಂತರವಷ್ಟೇ, ಗುಜರಾತ್ ಟೈಟನ್ಸ್ ಟಾಪ್ -2 ರಲ್ಲಿ ಉಳಿಯುತ್ತದೆಯೇ ಅಥವಾ ಒಂದು ಸ್ಥಾನ ಕೆಳಗೆ ಜಾರಿದೆಯೇ ಎಂಬುದು ತಿಳಿಯಲಿದೆ.

# ಕ್ಯಾಪ್ಟನ್ ಜಿತೇಶ್ ಅಬ್ಬರ, ಆರ್‌ಸಿಬಿ ಜಯಭೇರಿ
## ಪಾಯಿಂಟ್ ಟೇಬಲ್‌ನಲ್ಲಿ ಬೆಂಗಳೂರು ತಂಡ ಟಾಪರ್

ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧದ ಲೀಗ್‌ನ ಕೊನೆ ಪಂದ್ಯದಲ್ಲಿ ವಿರಾಟ್ ಕೊಹ್ಲಿ ಹಾಗೂ ನಾಯಕ ಜಿತೇಶ್ ಶರ್ಮಾ ಅವರ ಅದ್ಭುತವಾದ ಅರ್ಧಶತಕದಿಂದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಟೀಮ್ ರೋಚಕ ಗೆಲುವು ಪಡೆದಿದೆ. ಈ ಮೂಲಕ ಪಾಯಿಂಟ್ ಟೇಬಲ್‌ನಲ್ಲಿ ಆರ್‌ಸಿಬಿ ಅಗ್ರಸ್ಥಾನ ಪಡೆದಿದೆ.

ಲಕ್ನೋದ ವಾಜಪೇಯಿ ಏಕನಾ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಪಂದ್ಯದಲ್ಲಿ ಆರ್‌ಸಿಬಿ ನಾಯಕ ಜಿತೇಶ್ ಶರ್ಮಾ ಟಾಸ್ ಗೆದ್ದು ಎದುರಾಳಿ ಲಕ್ನೋ ಸೂಪರ್ ಜೇಂಟ್ಸ್ ತಂಡವನ್ನು ಮೊದಲ ಬ್ಯಾಟಿಂಗ್‌ಗೆ ಆಹ್ವಾನ ಮಾಡಿದರು. ಲಕ್ನೋದ ಓಪನರ್‌ಗಳಾದ ಮಿಚೆಲ್ ಮಾರ್ಷ್, ಮ್ಯಾಥ್ಯೂ ಬ್ರೀಟ್ಜ್ಕೆ ಒಳ್ಳೆಯ ಆರಂಭ ಪಡೆಯಲಿಲ್ಲ. ಕೇವಲ 14 ರನ್‌ಗೆ ಮ್ಯಾಥ್ಯೂ ವಿಕೆಟ್ ಒಪ್ಪಿಸಿದರು. ಇವರ ನಂತರ ಬಂದ ರಿಷಭ್ ಪಂತ್, ಆರ್‌ಸಿಬಿ ಬೌಲರ್‌ಗಳ ಮೇಲೆ ಒತ್ತಡ ಏರಿದರು.

ಇನ್ನೊಂದೆಡೆ ಓಪನರ್ ಮಿಚೆಲ್ ಮಾರ್ಷ್ ಭರ್ಜರಿ ಬ್ಯಾಟಿಂಗ್ ಮುಂದುವರೆಸಿ ಕೇವಲ 37 ಬಾಲ್‌ಗಳನ್ನು 4 ಬೌಂಡರಿ ಹಾಗೂ 5 ಸಿಕ್ಸರ್‌ಗಳಿಂದ 67 ರನ್ ಸಿಡಿಸಿ ಔಟ್ ಆದರು. ಬ್ಯಾಟಿಂಗ್‌ನಲ್ಲಿ ಸುಧಾರಣೆ ಕಂಡ ರಿಷಭ್ ಪಂತ್, ಆರ್‌ಸಿಬಿ ಬೌಲರ್‌ಗಳ ಮೇಲೆ ಎರಗಿದರು. ಕೇವಲ 54 ಎಸೆತಗಳನ್ನು ಎದುರಿಸಿದ ಪಂತ್, 10 ಬೌಂಡರಿ ಹಾಗೂ 6 ಸಿಕ್ಸರ್‌ಗಳಿಂದ ಸೆಂಚುರಿ ಬಾರಿಸಿದರು.



ಈ ಪಂದ್ಯದಲ್ಲಿ ಒಟ್ಟು 61 ಎಸೆತಗಳಲ್ಲಿ 11 ಬೌಂಡರಿ, 8 ಸಿಕ್ಸರ್‌ಗಳಿಂದ 118 ರನ್ ಬಾರಿಸಿ ಅಜೇಯರಾಗಿದರು. ಇದರಿಂದ ಲಕ್ನೋ ತಂಡ 20 ಓವರ್‌ಗಳಲ್ಲಿ 3 ವಿಕೆಟ್‌ಗೆ 228 ರನ್‌ಗಳ ಬೃಹತ್ ಟಾರ್ಗೆಟ್ ನೀಡಿತ್ತು.


ಈ ದೊಡ್ಡ ಮೊತ್ತದ ರನ್‌ಗಳ ಹಿಂದೆ ಬಿದ್ದ ಆರ್‌ಸಿಬಿ ಓಪನರ್ ಬ್ಯಾಟರ್ಸ್ ಉತ್ತಮ ಆರಂಭವೇನೋ ಪಡೆದುಕೊಂಡರು. ವಿರಾಟ್ ಕೊಹ್ಲಿ ಜೊತೆ ಇನ್ನಿಂಗ್ಸ್ ಆರಂಭಿಸಿದ್ದ ಫಿಲ್ ಸಾಲ್ಟ್ 30 ರನ್‌ಗೆ ಬ್ಯಾಟಿಂಗ್ ಮುಗಿಸಿದರು. ಇವರ ಬೆನ್ನಲ್ಲೇ ರಜತ್ ಪಾಟಿದಾರ್ ಕೇವಲ 14 ರನ್‌ಗೆ ಪೆವಿಲಿಯನ್‌ಗೆ ನಡೆದರು. ರಜತ್ ಹಿಂದೆಯೇ ಲೈಮ್ ಲಿವಿಂಗ್‌ಸ್ಟೋನ್ ಡಕೌಟ್ ಆಗಿದ್ದು ಆರ್‌ಸಿಬಿ ಫ್ಯಾನ್ಸ್ ಬೇಸರಕ್ಕೆ ಕಾರಣವಾಯಿತು.

# ಫೈನಲ್ ಆಡುವ ಎರಡು ತಂಡಗಳನ್ನು ಹೆಸರಿಸಿದ ಉತ್ತಪ್ಪ

ಐಪಿಎಲ್ 2025ರ ಪ್ಲೇಆಫ್ಸ್‌ಗೆ ನಾಲ್ಕು ತಂಡಗಳು ಅರ್ಹತೆ ಪಡೆದಿವೆ. ರಾಬಿನ್ ಉತ್ತಪ್ಪ ಅವರು ಪಂಜಾಬ್ ಕಿಂಗ್ಸ್ ಮತ್ತು ಆರ್‌ಸಿಬಿ ತಂಡಗಳು ಫೈನಲ್‌ನಲ್ಲಿ ಭೇಟಿಯಾಗುವುದೆಂದು ಭವಿಷ್ಯ ನುಡಿದಿದ್ದಾರೆ. ಪಂಜಾಬ್ ಕಿಂಗ್ಸ್ ಬಲಿಷ್ಠ ಬ್ಯಾಟಿಂಗ್ ಮತ್ತು ಅರ್ಶ್‌ದೀಪ್ ಸಿಂಗ್ ಅವರ ಉತ್ತಮ ಬೌಲಿಂಗ್‌ನಿಂದಾಗಿ ಫೈನಲ್ ತಲುಪುವ ಸಾಧ್ಯತೆ ಹೆಚ್ಚಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ. ಆರ್‌ಸಿಬಿಯು ಜೋಶ್ ಹೇಜಲ್‌ವುಡ್ ಅವರ ಮರಳುವಿಕೆಯಿಂದ ಬಲಪಡೆಯಲಿದೆ ಮತ್ತು ವಿರಾಟ್ ಕೊಹ್ಲಿ ಅವರ ಚೇಸ್ ಮಾಸ್ಟರ್ ಪಾತ್ರ ಮುಖ್ಯ ಎಂದು ಅವರು ಹೇಳಿದ್ದಾರೆ.

ರಾಬಿನ್ ಉತ್ತಪ್ಪ ಭವಿಷ್ಯ

ಐಪಿಎಲ್ 2025 ಮುಗಿಯಲು ಇನ್ನೊಂದು ಪಂದ್ಯ ಮಾತ್ರ ಬಾಕಿ ಉಳಿದಿದೆ. ಈಗಾಗಲೇ ನಾಲ್ಕು ತಂಡಗಳು ಪ್ಲೇಆಫ್‌ಗೆ ಅರ್ಹತೆ ಪಡೆದಿದ್ದು, ಅದರಲ್ಲಿ ಪಂಜಾಬ್ ಕಿಂಗ್ಸ್ ಕ್ವಾಲಿಫೈಯರ್ 1 ಆಡಲು ಸಜ್ಜಾಗಿದೆ. ನಡೆಯಲಿರುವ ಲಕ್ನೋ ಸೂಪರ್ ಜೈಂಟ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ನಡುವಿನ ಪಂದ್ಯವು ಆರ್‌ಸಿಬಿ ಕ್ವಾಲಿಫೈಯರ್ 1 ರಲ್ಲಿ ಪಂಜಾಬ್ ಕಿಂಗ್ಸ್ ತಂಡವನ್ನು ಎದುರಿಸುತ್ತದೆಯೇ ಅಥವಾ ಎಲಿಮಿನೇಟರ್‌ನಲ್ಲಿ ಮುಂಬೈ ಇಂಡಿಯನ್ಸ್ ತಂಬುದನ್ನು ಎದುರಿಸುತ್ತದೆಯೇ ಎಂಬುದನ್ನು ನಿರ್ಧರಿಸುತ್ತದೆ. ನಾಲ್ಕು ಪ್ಲೇಆಫ್ ತಂಡಗಳ ಬಗ್ಗೆ ಹೇಳುವುದಾದರೆ, ಪಂಜಾಬ್ ಕಿಂಗ್ಸ್, ಗುಜರಾತ್ ಟೈಟನ್ಸ್, ಆರ್‌ಸಿಬಿ ಮತ್ತು ಮುಂಬೈ ಇಂಡಿಯನ್ಸ್ ತಮ್ಮ ಸ್ಥಾನಗಳನ್ನು ಖಚಿತಪಡಿಸಿವೆ. ಇದೀಗ ಈ ನಾಲ್ಕು ತಂಡಗಳಲ್ಲಿ ಯಾವೆರಡು ತಂಡಗಳು ಫೈನಲ್‌ಗೇರುತ್ತವೆ ಎಂದು ಕನ್ನಡಿಗ ರಾಬಿನ್ ಉತ್ತಪ್ಪ ಭವಿಷ್ಯ ನುಡಿದಿದ್ದಾರೆ.



**ಈ 2 ತಂಡಗಳ ನಡುವೆ ಫೈನಲ್ ಪಂದ್ಯ:** ಟೀಂ ಇಂಡಿಯಾದ ಮಾಜಿ ಅನುಭವಿ ಕ್ರಿಕೆಟಿಗ ರಾಬಿನ್ ಉತ್ತಪ್ಪ ಎರಡು ಫೈನಲ್ ತಂಡಗಳ ಬಗ್ಗೆ ಮಾತನಾಡಿದ್ದು, 'ಪಂಜಾಬ್ ಕಿಂಗ್ಸ್ ಅದ್ಭುತವಾಗಿ ಆಡುವ ಮೂಲಕ ಪ್ಲೇಆಫ್‌ಗೆ ತಲುಪಿದೆ. ಪಂಜಾಬ್‌ನ ಬ್ಯಾಟಿಂಗ್ ತುಂಬಾ ಬಲಿಷ್ಠವಾಗಿ ಕಾಣುತ್ತದೆ. ಅರ್ಶ್‌ದೀಪ್ ಸಿಂಗ್ ಇಲ್ಲಿಯವರೆಗೆ ಉತ್ತಮ ಪ್ರದರ್ಶನ ನೀಡಿದ್ದು, ಇದು ಮುಂಬರುವ ಪ್ರಮುಖ ಪಂದ್ಯಗಳಲ್ಲಿ ಅವರು ದೊಡ್ಡ ಪ್ರದರ್ಶನ ನೀಡಲಿದ್ದಾರೆ ಎಂಬುದರ ಸೂಚನೆಯಾಗಿದೆ.

# ಸಿಎಸ್‌ಕೆ ತೊರೆದು ಹೊಸ ತಂಡ ಸೇರಿಕೊಂಡ ಡೆವಾಲ್ಡ್ ಬ್ರೆವಿಸ್

ಜೂನಿಯರ್ ಎಬಿ ಡಿವಿಲಿಯರ್ಸ್ ಎಂದೇ ಜನಪ್ರಿಯರಾಗಿರುವ ದಕ್ಷಿಣ ಆಫ್ರಿಕಾದ ಯುವ ಬ್ಯಾಟರ್ ಡೆವಾಲ್ಡ್ ಬ್ರೆವಿಸ್, ಐಪಿಎಲ್ 2025ರಲ್ಲಿ ಅದ್ಭುತ ಪ್ರದರ್ಶನ ನೀಡಿದರು. ಮೆಗಾ ಹರಾಜಿನಲ್ಲಿ ಯಾವುದೇ ತಂಡವು ಅವರನ್ನು ಖರೀದಿಸದಿದ್ದರೂ, ವೇಗದ ಬೌಲರ್ ಗುರ್ಜಾಪ್ನೀತ್ ಸಿಂಗ್ ಸೀಸನ್ ಮಧ್ಯದಲ್ಲಿ ಗಾಯಗೊಂಡ ಕಾರಣದಿಂದಾಗಿ ಚೆನ್ನೈ ಸೂಪರ್ ಕಿಂಗ್ಸ್ ಬ್ರೆವಿಸ್ ಅವರನ್ನು ತಂಡಕ್ಕೆ ಸೇರಿಸಿಕೊಂಡಿತು. ಸಿಕ್ಕ ಅವಕಾಶವನ್ನು ಸದುಪಯೋಗಪಡಿಸಿಕೊಂಡ ಬ್ರೆವಿಸ್ ಗಮನಾರ್ಹ ಪ್ರದರ್ಶನ ನೀಡಿದರು. ಗುಜರಾತ್ ಟೈಟನ್ಸ್ ವಿರುದ್ಧದ ಕೊನೆಯ ಲೀಗ್ ಪಂದ್ಯದಲ್ಲಿ ಅಬ್ಬರದ ಅರ್ಧಶತಕ ಸಿಡಿಸಿದ ಬ್ರೆವಿಸ್ ತಂಡಕ್ಕೆ ಅದ್ಭುತ ಗೆಲುವು ತಂದುಕೊಟ್ಟರು. ಇದಕ್ಕಾಗಿ ಅವರಿಗೆ ಪಂದ್ಯಶ್ರೇಷ್ಠ ಪ್ರಶಸ್ತಿಯೂ ಲಭಿಸಿತು. ಈಗ ಬ್ರೆವಿಸ್ ಹೊಸ ಪ್ರಯಾಣವನ್ನು ಆರಂಭಿಸಿದ್ದು, ಸಿಕ್ಸರ್‌ಗಳ ಮಳೆ ಸುರಿಸಲು ಲಂಡನ್‌ಗೆ ಹಾರಿದ್ದಾರೆ.

ಐಪಿಎಲ್‌ನಲ್ಲಿ ಅಮೋಘ ಪ್ರದರ್ಶನ ನೀಡಿದ್ದ ಬ್ರೆವಿಸ್ ಇದೀಗ ಟಿ20 ಬ್ಲಾಸ್ಟ್‌ನಲ್ಲಿ ಭಾಗವಹಿಸಲು ಲಂಡನ್ ತಲುಪಿದ್ದಾರೆ.

ಹ್ಯಾಂಪ್‌ಶೈರ್ ತಂಡ ಸೇರಿಕೊಂಡ ಬ್ರೆವಿಸ್

ಈ ಸೀಸನ್‌ನಲ್ಲಿ ಅವರು ಹ್ಯಾಂಪ್‌ಶೈರ್ ತಂಡದ ಪರ ಆಡಲಿದ್ದಾರೆ. ಈ ಲೀಗ್ ಮೇ 29 ರಿಂದ ಪ್ರಾರಂಭವಾಗಲಿದ್ದು, ಹ್ಯಾಂಪ್‌ಶೈರ್ ತನ್ನ ಮೊದಲ ಪಂದ್ಯವನ್ನು ಮೇ 30 ರಂದು ಎಸೆಕ್ಸ್ ವಿರುದ್ಧ ಆಡಲಿದೆ. ಡೆವಾಲ್ಡ್ ಬ್ರೆವಿಸ್ ತಮ್ಮ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ಪೋಸ್ಟ್‌ವೊಂದನ್ನು ಹಂಚಿಕೊಂಡಿದ್ದು, ಅದರಲ್ಲಿ ಅವರು ಸೌತಾಂಪ್ಟನ್ ಮೈದಾನದ ವೀಡಿಯೊವನ್ನು ತೋರಿಸುತ್ತಿದ್ದಾರೆ. ಬ್ರೆವಿಸ್ ಈಗ ಈ ಲೀಗ್‌ನಲ್ಲಿ ತನ್ನ ಐಪಿಎಲ್ ಪ್ರದರ್ಶನವನ್ನು ಪುನರಾವರ್ತಿಸಲು ಎದುರು ನೋಡುತ್ತಿದ್ದಾರೆ.

**ಐಪಿಎಲ್ 2025 ರಲ್ಲಿ ಉತ್ತಮ ಪ್ರದರ್ಶನ**

ಸಿಎಸ್‌ಕೆ ವೇಗಿ ಗುರ್ಜಾಪ್ನೀತ್ ಸಿಂಗ್ ಗಾಯಗೊಂಡ ನಂತರ, ಚೆನ್ನೈ ಸೂಪರ್ ಕಿಂಗ್ಸ್ ಡೆವಾಲ್ಡ್ ಬ್ರೆವಿಸ್ ಅವರನ್ನು ತಮ್ಮ ತಂಡಕ್ಕೆ ಸೇರಿಸಿಕೊಂಡಿತು. ಅದರಂತೆ ಸಿಎಸ್‌ಕೆ ಪರ 6 ಪಂದ್ಯಗಳನ್ನು ಆಡಿದ ಬ್ರೆವಿಸ್ 37.50 ಸರಾಸರಿ ಮತ್ತು 180 ಸ್ಟ್ರೈಕ್ ರೇಟ್‌ನಲ್ಲಿ 225 ರನ್ ಗಳಿಸಿದ್ದಾರೆ. ಇದರಲ್ಲಿ ಎರಡು ಅರ್ಧಶತಕಗಳು ಸೇರಿವೆ.



ಕಳೆದ ಸೀಸನ್‌ನಲ್ಲಿ ಅವರು ಮುಂಬೈ ಇಂಡಿಯನ್ಸ್ ಪರ ಆಡಿದ್ದರು, ಆದರೆ ಕೇವಲ ಮೂರು ಪಂದ್ಯಗಳನ್ನು ಆಡುವ ಅವಕಾಶ ಪಡೆದಿದ್ದರು. ಇದರಲ್ಲಿ ಅವರು ಕೇವಲ 69 ರನ್ ಗಳಿಸಲು ಸಾಧ್ಯವಾಯಿತು. ಇದಾದ ನಂತರ, ಈ ಸೀಸನ್‌ನ ಮೆಗಾ ಹರಾಜಿಗೂ ಮುನ್ನ ಮುಂಬೈ ಅವರನ್ನು ಬಿಡುಗಡೆ ಮಾಡಿತು. 2022 ರಲ್ಲಿ ಮುಂಬೈ ಇಂಡಿಯನ್ಸ್ ಪರ ಐಪಿಎಲ್‌ಗೆ ಪಾದಾರ್ಪಣೆ ಮಾಡಿದ್ದ ಬ್ರೆವಿಸ್ ಆ ಸೀಸನ್‌ನಲ್ಲಿ ಆಡಿದ 7 ಪಂದ್ಯಗಳಲ್ಲಿ 23 ರ ಸರಾಸರಿಯಲ್ಲಿ 161 ರನ್ ಗಳಿಸಿದ್ದರು.

# ಜ್ಯೂ.ಎನ್‌ಟಿಆರ್ ಸಿನಿಮಾದಲ್ಲಿ ರಶ್ಮಿಕಾ ಐಟಂ ಡ್ಯಾನ್ಸ್

ನಟಿ ರಶ್ಮಿಕಾ ಮಂದಣ್ಣಗೆ ಬಾಲಿವುಡ್ ಮತ್ತು ದಕ್ಷಿಣದ ಸಿನಿಮಾದಲ್ಲಿ ಭಾರೀ ಬೇಡಿಕೆಯಿದೆ. ಸ್ಟಾರ್ ನಟರೊಂದಿಗೆ ನಟಿಸಿರುವ ಶ್ರೀವಲ್ಲಿಗೆ ಈಗ ಜ್ಯೂ.ಎನ್‌ಟಿಆರ್ ಸಿನಿಮಾದಲ್ಲಿ ಸ್ಪೆಷಲ್ ಹಾಡಿಗೆ ಹೆಜ್ಜೆ ಹಾಕುವ ಅವಕಾಶ ಸಿಕ್ಕಿದೆ ಎನ್ನಲಾದ ಸುದ್ದಿ ಸೋಷಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದೆ. ಪ್ರಶಾಂತ್ ನೀಲ್ ನಿರ್ದೇಶನದಲ್ಲಿ ಜ್ಯೂ.ಎನ್‌ಟಿಆರ್ ನಟನೆಯ ಈ ಸಿನಿಮಾದ ಶೂಟಿಂಗ್ ಭರದಿಂದ ನಡೆಯುತ್ತಿದೆ. ಈ ಸಿನಿಮಾದಲ್ಲಿ ಸ್ಟಾರ್ ನಟಿಯಿಂದಲೇ ಐಟಂ ಡ್ಯಾನ್ಸ್ ಮಾಡಿಸುವ ಪ್ಲ್ಯಾನ್ ಚಿತ್ರತಂಡಕ್ಕಿದ್ದು, ಅದಕ್ಕಾಗಿ ರಶ್ಮಿಕಾರನ್ನು ಚಿತ್ರತಂಡ ಸಂಪರ್ಕಿಸಿದೆಯಂತೆ. ಜನಪ್ರಿಯತೆಯಿರುವ ಸ್ಟಾರ್ ನಟಿ ಸಿನಿಮಾದಲ್ಲಿ ಕುಣಿದು ಕುಪ್ಪಳಿಸಿದ್ರೆ ಸಿನಿಮಾಗೆ ಪ್ಲಸ್ ಪಾಯಿಂಟ್ ಎಂಬುದು ಚಿತ್ರತಂಡದ ಲೆಕ್ಕಾಚಾರ. ಹೀಗಾಗಿ ಅದಕ್ಕೆ ರಶ್ಮಿಕಾನೇ ಸೂಕ್ತ ಎಂದು ತಂಡಕ್ಕೆ ಅನಿಸಿದೆ. ಬ್ಯಾಕ್ ಟು ಬ್ಯಾಕ್ 3 ಸಿನಿಮಾಗಳ ಯಶಸ್ಸು ಕಂಡಿರೋ ರಶ್ಮಿಕಾರನ್ನು ಸಂಪರ್ಕಿಸಿ ಐಟಂ ಡ್ಯಾನ್ಸ್‌ಗೆ ಹೆಜ್ಜೆ ಹಾಕಲು ಕೇಳಲಾಗಿದೆಯಂತೆ. ಒಂದು ಹಂತದ ಮಾತುಕತೆ ಆಗಿದೆ ಎನ್ನಲಾಗ್ತಿದೆ. ಆದರೆ ಜ್ಯೂ.ಎನ್‌ಟಿಆರ್ ಸಿನಿಮಾದ ಭಾಗವಾಗಲು ನಟಿ ಒಪ್ಪಿಕೊಂಡ್ರಾ ಎಂಬುದು ಖಾತ್ರಿಯಾಗಿಲ್ಲ. ಈ ಬಗ್ಗೆ ಚಿತ್ರತಂಡವೇ ಅಧಿಕೃತವಾಗಿ ತಿಳಿಸಬೇಕಿದೆ.

ಮೂಲಗಳ ಪ್ರಕಾರ, ಈ ಚಿತ್ರದಲ್ಲಿ ನಾಯಕಿಯಾಗಿ ನಟಿಸಲು ರುಕ್ಮಿಣಿ ವಸಂತ್‌ಗೆ ಚಾನ್ಸ್ ಸಿಕ್ಕಿದೆ ಎಂದು ಹೇಳಲಾಗ್ತಿದೆ. ಅವರು ಈ ಸಿನಿಮಾದಲ್ಲಿ ನಟಿಸಲು ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ ಎಂದು ಸದ್ಯ ಹರಿದಾಡುತ್ತಿರುವ ಸುದ್ದಿ.




# ತಮಿಳಿನಿಂದ ಕನ್ನಡ ಹುಟ್ಟಿದ್ದು

ಕಮಲ್ ಹಾಸನ್ ಹೇಳಿಕೆಗೆ ಆಕ್ರೋಶ

ಕಾಲಿವುಡ್ ನಟ ಕಮಲ್ ಹಾಸನ್ ನಟನೆಯ 'ಥಗ್ ಲೈಫ್ ಸಿನಿಮಾ ಜೂನ್ 5ರಂದು ರಿಲೀಸ್‌ಗೆ ಸಿದ್ಧವಾಗಿದೆ. ಈ ಚಿತ್ರದ ಪ್ರಚಾರಕ್ಕಾಗಿ ಚಿತ್ರತಂಡ ಮೇ 27 ಬೆಂಗಳೂರಿಗೆ ಆಗಮಿಸಿದೆ. ಈ ವೇಳೆ, ತಮಿಳಿನಿಂದ ಕನ್ನಡ ಹುಟ್ಟಿದ್ದು ಎಂದ ಕಮಲ್ ಹಾಸನ್ ಹೇಳಿಕೆಗೆ ಕನ್ನಡಿಗರು ರಾಂಗ್ ಆಗಿದ್ದಾರೆ. ಬೆಂಗಳೂರಿನಲ್ಲಿ ನಡೆದ 'ಥಗ್ ಲೈಫ್ ಪ್ರಚಾರ ಕಾರ್ಯಕ್ಕೆ ನಟ ಶಿವಣ್ಣ ಅತಿಥಿಯಾಗಿ ಭಾಗವಹಿಸಿದ್ದರು. ಈ ವೇಳೆ, ರಾಜ್‌ಕುಮಾರ್ ಜೊತೆಗಿನ ಒಡನಾಡವನ್ನು ಕಮಲ್ ಹಾಸನ್ ಸ್ಮರಿಸಿದ್ದಾರೆ.

ಬಳಿಕ ಶಿವಣ್ಣ ಎದುರೇ ನಿಮ್ಮ ಕನ್ನಡ ಹುಟ್ಟಿದ್ದು ತಮಿಳಿನಿಂದ ಎಂದು ನಟ ಹೇಳಿದ್ದಾರೆ. ಕನ್ನಡಿಗರ ಪ್ರೀತಿ, ಗೌರವಕ್ಕೆ ನಮಿಸುತ್ತಲೇ ನಿಮ್ಮ ಕನ್ನಡ ನಮ್ಮಿಂದ ಬಂದಿದ್ದು ಎಂದ ಕಮಲ್ ಹೇಳಿಕೆಗೆ ಕನ್ನಡಿಗರು ಕೆಂಡ ಕಾರಿದ್ದಾರೆ. ಹೀಗಾಗಿ ಕಮಲ್ ಆಡಿರುವ ಮಾತುಗಳು ಸೋಷಿಯಲ್ ಮೀಡಿಯಾದಲ್ಲಿ ವ್ಯಾಪಕ ಆಕ್ರೋಶ ವ್ಯಕ್ತವಾಗಿದೆ. ಕನ್ನಡ ತಮಿಳಿನಿಂದ ಬಂದಿಲ್ಲ. ತಮಿಳಿಗಿಂತ ಕನ್ನಡ ಭಾಷೆಯೇ ಪುರಾತನವಾದದ್ದು ಎಂದು ಕನ್ನಡಿಗರು ಕ್ಲಾಸ್ ತೆಗೆದುಕೊಂಡಿದ್ದಾರೆ. 'ಥಗ್ ಲೈಫ್ ಸಿನಿಮಾದಲ್ಲಿ ಕಮಲ್ ಹಾಸನ್ ಜೊತೆ ತ್ರಿಷಾ ಕೃಷ್ಣನ್, ಅಭಿರಾಮಿ ಸೇರಿದಂತೆ ಅನೇಕರು ನಟಿಸಿದ್ದಾರೆ. ಮಣಿರತ್ನಂ ಈ ಚಿತ್ರದ ನಿರ್ದೇಶನ ಮಾಡಿದ್ದಾರೆ.





# ಓಜಿ ಚಿತ್ರದ ರಿಲೀಸ್ ಡೇಟ್ ಅನೌನ್ಸ್

ಪವನ್ ಕಲ್ಯಾಣ್ ಆಂಧ್ರಪ್ರದೇಶದ ಡಿಸಿಎಂ ಆಗಿ ರಾಜಕೀಯದಲ್ಲಿ ತೊಡಗಿಸಿಕೊಂಡಿದ್ದಾರೆ. ಆದರೆ ಅವರು ಒಪ್ಪಿಕೊಂಡಿದ್ದ ಸಿನಿಮಾಗಳನ್ನು ಬೆಳ್ಳಿಪರದೆಯಲ್ಲಿ ನೋಡೋದು ಯಾವಾಗ ಎಂಬ ಅಭಿಮಾನಿಗಳ ಕಾತರಕ್ಕೆ ಈಗ ಉತ್ತರ ಸಿಕ್ಕಿದೆ. ಪವನ್ ನಟನೆಯ 'ಓಜಿ ಚಿತ್ರದ ರಿಲೀಸ್ ಡೇಟ್ ಅನೌನ್ಸ್ ಆಗಿದೆ. ರಾಜಕೀಯದ ಕೆಲಸ ನಡುವೆಯೇ ಕಮಿಟ್ ಆಗಿರೋ ಚಿತ್ರದ ಶೂಟಿಂಗ್ ಅನ್ನು ನಟ ಮುಗಿಸಿಕೊಡ್ತಿದ್ದಾರೆ. ಈ ವರ್ಷ ಸೆ.25ರಂದು ಸಿನಿಮಾ ರಿಲೀಸ್ ಮಾಡೋದಾಗಿ ಚಿತ್ರತಂಡ ತಿಳಿಸಿದೆ. ಗ್ಯಾಂಗ್‌ಸ್ಟರ್ ಕಥೆ ಹೊಂದಿರುವ ಈ ಸಿನಿಮಾಗೆ ಸುರ್ಜಿತ್ ಡೈರೆಕ್ಷನ್ ಮಾಡಿದ್ದಾರೆ.

ಬಾಲಿವುಡ್ ನಟ ಇಮ್ರಾನ್ ಹಶ್ಮಿ ಅವರು ಪವನ್ ಕಲ್ಯಾಣ್ ಮುಂದೆ ವಿಲನ್ ಆಗಿ ಅಬ್ಬರಿಸಿದ್ದಾರೆ. ಇಬ್ಬರದ್ದು ಜಬರ್‌ದಸ್ತ್ ಆಯಕ್ಷನ್ ಸೀಕ್ವೆನ್ಸ್ ಚಿತ್ರದಲ್ಲಿದೆ. ಈ ಚಿತ್ರದ ಮೂಲಕ ತೆಲುಗಿಗೆ ಇಮ್ರಾನ್ ಪದಾರ್ಪಣೆ ಮಾಡ್ತಿದ್ದಾರೆ.

ಈ ಚಿತ್ರದಲ್ಲಿ ನಾಯಕಿಯಾಗಿ ಕನ್ನಡತಿ ಪ್ರಿಯಾಂಕಾ ಮೋಹನ್ ನಟಿಸಿದ್ದಾರೆ.

ಪವನ್ ಕಲ್ಯಾಣ್ ನಟನೆಯ 'ಹರಿ ಹರ ವೀರ ಮಲ್ಲು ಚಿತ್ರವು ಜೂನ್ 12ರಂದು ರಿಲೀಸ್‌ಗೆ ಸಿದ್ಧವಾಗಿದೆ.



# ನೆಗೆಟಿವ್ ಕಾಮೆಂಟ್‌ಗಳ ಬಗ್ಗೆ ತಲೆಕೆಡಿಸಿಕೊಳ್ಳಲ್ಲ

ಡಿವೋರ್ಸ್ ಬಗ್ಗೆ ಮೌನ ಮುರಿದ ಧನಶ್ರೀ

ನಟಿ ಧನಶ್ರೀ ವರ್ಮಾ ಅವರು ಮೊದಲ ಬಾರಿಗೆ ಯಜುವೇಂದ್ರ ಚಹಲ್ ಜೊತೆಗಿನ ಡಿವೋರ್ಸ್ ಬಗ್ಗೆ ಮಾತನಾಡಿದ್ದಾರೆ. ಡಿವೋರ್ಸ್ ಬಳಿಕ ತಮಗಾದ ಕೆಟ್ಟ ಟ್ರೋಲ್ ಹಾಗೂ ನೆಗೆಟಿವ್ ಕಾಮೆಂಟ್‌ಗಳ ಬಗ್ಗೆ ಪ್ರತಿಕ್ರಿಯಿಸಿದ್ದಾರೆ. ಸಂದರ್ಶನವೊಂದರಲ್ಲಿ ಧನಶ್ರೀ ಮಾತನಾಡಿ, ಟ್ರೋಲ್ ಹಾಗೂ ಕೆಟ್ಟ ಕಾಮೆಂಟ್‌ಗಳ ಬಗ್ಗೆ ನಾನು ಎಂದಿಗೂ ತಲೆ ಕೆಡಿಸಿಕೊಳ್ಳುವುದಿಲ್ಲ ಎಂದಿದ್ದಾರೆ. ನನ್ನ ಗಮನ ಯಾವಾಗಲೂ ಕೆಲಸದ ಮೇಲೆಯೇ ಇರುತ್ತದೆ. ವೃತ್ತಿಪರವಾಗಿ ನನ್ನ ಗುರಿಯೇನು ಎಂಬುದರ ಬಗ್ಗೆ ಅರಿವಿದೆ. ನಾನು ಅದರ ಕಡೆ ಗಮನ ಹರಿಸುತ್ತಿದ್ದೇನೆ. ನಾನು ಮಾನಸಿಕವಾಗಿ ಸ್ಟ್ರಾಂಗ್ ಆಗಿರೋದ್ರಿಂದ ನೆಗೆಟಿವ್ ಟೀಕೆಗಳ ಬಗ್ಗೆ ತಲೆಕೆಡಿಸಿಕೊಳ್ಳುವುದಿಲ್ಲ. ನನ್ನ ಬೆಳವಣಿಗೆಗೆ ಸಹಾಯವಾಗ ವಿಚಾರಗಳಿಂದ ತಾವು ದೂರವಿರೋದಾಗಿ ನಟಿ ಹೇಳಿದ್ದಾರೆ. ಪ್ರಸ್ತುತ ಧನಶ್ರೀ ಅವರು ಟಾಲಿವುಡ್ ಮತ್ತು ಬಾಲಿವುಡ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಸಿನಿಮಾವೊಂದರಲ್ಲಿ ಐಟಂ ಡ್ಯಾನ್ಸ್ ಸೇರಿದಂತೆ ಆಲ್ಬಂ ಸಾಂಗ್‌ಗಳಲ್ಲಿ ನಟಿ ಕಾಣಿಸಿಕೊಂಡಿದ್ದಾರೆ.

# ದೀಪಿಕಾ ವಿರುದ್ಧ ಸಂದೀಪ್ ರೆಡ್ಡಿ ಆಕ್ರೋಶ

ಅರ್ಜುನ್ ರೆಡ್ಡಿ, ಅನಿಮಲ್ ಖ್ಯಾತಿಯ ಸಂದೀಪ್ ರೆಡ್ಡಿ ವಂಗಾ ಇದೀಗ ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿರುವ ಪೋಸ್ಟ್ ಚರ್ಚೆಗೆ ಗ್ರಾಸವಾಗಿದೆ.

'ಸ್ಪಿರಿಟ್ ಚಿತ್ರದ ಕಥೆ ಲೀಕ್ ಆಗಿರೋದ್ದಕ್ಕೆ ನಿರ್ದೇಶಕ ಸಿಟ್ಟಾಗಿದ್ದಾರೆ. ದೀಪಿಕಾ ಪಡುಕೋಣೆಗೆ ಪರೋಕ್ಷವಾಗಿ ನಿರ್ದೇಶಕ ಟಾಂಗ್ ಕೊಟ್ರಾ ಎಂಬ ಅನುಮಾನ ನೆಟ್ಟಿಗರಲ್ಲಿ ಮೂಡಿದೆ. ನಿರ್ದೇಶಕನ ಪೋಸ್ಟ್‌ನಲ್ಲಿ ನಾನು ಕಲಾವಿದರಿಗೆ ಕಥೆ ಹೇಳುವಾಗ 100% ನಂಬಿಕೆ ಇಡುತ್ತೇನೆ. ಯಾರಿಗೂ ಕಥೆ ಹೇಳಬಾರದು ಅಂತ ನಮ್ಮ ನಡುವೆ ಒಪ್ಪಂದ ಆಗಿರುತ್ತದೆ. ಆ ನಿಯಮವನ್ನು ಮುರಿಯುವ ಮೂಲಕ ನೀವೇನು ಎಂಬುದನ್ನು ತೋರಿಸಿದ್ದೀರಿ. ಕಿರಿಯ ಕಲಾವಿದರನ್ನು ಕೆಳಗೆ ಹಾಕಿದ್ದಲ್ಲದೇ, ನನ್ನ ಸ್ಟೋರಿಯನ್ನು ಲೀಕ್ ಮಾಡಿದ್ದೀರಿ. ಇದೇನಾ ನಿಮ್ಮ ಸ್ತ್ರೀವಾದ ಎಂದು ಅವರು ಪ್ರಶ್ನಿಸಿದ್ದಾರೆ. ಒಬ್ಬ ಫಿಲ್ಮ್ ಮೇಕರ್ ಆಗಿ, ನಾನು ನನ್ನ ಚಿತ್ರಕ್ಕಾಗಿ ವರ್ಷಗಳ ಕಠಿಣ ಪರಿಶ್ರಮ ಹಾಕಿದ್ದೇನೆ. ಫಿಲ್ಮ್ ಮೇಕಿಂಗ್ ನನಗೆ ಎಲ್ಲವೂ ಆಗಿದೆ. ಅದಕ್ಕೆ ನಾವು ಸಂಪೂರ್ಣವಾಗಿ ಕೆಲಸ ಮಾಡಿರುತ್ತೇವೆ. ಒಂದು ಕೆಲಸ ಮಾಡಿ ಮುಂದಿನ ಬಾರಿ ಸಂಪೂರ್ಣ ಕಥೆ ಹೇಳಿಬಿಡಿ, ನನಗೆ ಯಾವುದೇ ಸಮಸ್ಯೆ ಇಲ್ಲ ಎಂದು ಕೆಂಡಕಾರಿದ್ದಾರೆ. ಈ ಆಕ್ರೋಶದ ಪೋಸ್ಟ್ ಅನ್ನು ಸಂದೀಪ್ ರೆಡ್ಡಿ ದೀಪಿಕಾ ಕುರಿತಾಗಿಯೇ ಮಾಡಿದ್ದಾರೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಿನಿ ಪ್ರಿಯರು ಚರ್ಚೆ ನಡೆಸುತ್ತಿದ್ದಾರೆ. ಪ್ರಭಾಸ್‌ಗೆ ನಾಯಕಿಯಾಗಿ ದೀಪಿಕಾ ಪಡುಕೋಣೆ ಆಯ್ಕೆ ಮಾಡಿದ್ದಾರೆ ಎನ್ನಲಾಗಿತ್ತು. ಏಕಾಏಕಿ ಅದು ಏನು ಆಯ್ತೋ ಏನೋ ದಿಢೀರ್ ಅಂತ ಮೇ 24 ತೃಪ್ತಿ ದಿಮ್ರಿ ಅವರನ್ನು ಸಿನಿಮಾಗೆ ನಾಯಕಿ ಅಂತ ಚಿತ್ರತಂಡ ಘೋಷಣೆ ಮಾಡಿತ್ತು. ಇದನ್ನು ಸಹಿಸದ ದೀಪಿಕಾ ಕಥೆ ಲೀಕ್ ಮಾಡಿದ್ದಾರೆ ಎಂಬುದನ್ನು ನಿರ್ದೇಶಕ ಪರೋಕ್ಷವಾಗಿ ಹೇಳಿದ್ರಾ ಎಂಬ ಮಾತುಗಳು ಕೇಳಿ ಬರುತ್ತಿವೆ.

ಇದೇನಾ ನಿಮ್ಮ ಸ್ತ್ರೀವಾದ



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966